23 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

# ದೆಹಲಿ ವಾರ್ತೆ

www.dehalivaarthe.com

EDITION: NEW DELHI / CIRCULATION IN U.P. & HARYANA | EDITOR : K.R. RENU | RNI No. DELKAN/2003/10363 | ಪುಟ 8 | ಸಂಪುಟ 23 | ಸಂಚಿಕೆ 243 | ನವದೆಹಲಿ | ₹ಬೆಲೆ 10 | ಮಾರ್ಚ್ 8 2026, ಭಾನುವಾರ

## ಒಳಪುಟಗಳಲ್ಲಿ

ಸುದ್ದಿ ಚಾನೆಲ್‌ಗಳ ಯುದ್ಧದ ಸುಳ್ಳು ವರದಿ: 4 ವಾರ ಟಿಆರ್‌ಪಿ ಸ್ಥಗಿತಕ್ಕೆ ಆದೇಶ - ಪು.4

ರಾಜ್ಯದ ಜನರ ಮೂಗಿಗೆ ತುಪ್ಪ ಸವರುವುದು ಉಚಿತ, ಸಾಲ ಖಚಿತ: ರಾಜ್ಯ ಬಜೆಟ್‌ಗೆ ಛಲವಾದಿ ನಾರಾಯಣಸ್ವಾಮಿ ಟೀಕೆ ಪು.8

ಪ್ರತಿ ಲೀಟರ್ ಹಾಲಿಗೆ 50 ಪೈಸೆ ಹೆಚ್ಚಳ - ಚಿಮುಲ್‌ನಿಂದ ಹಾಲು ಉತ್ಪಾದಕರಿಗೆ ಯುಗಾದಿ ಕೊಡುಗೆ

# ಯುದ್ಧದ ಪರಿಣಾಮ: ಗೃಹ, ವಾಣಿಜ್ಯ ಎಲ್‌ಪಿಜಿ ದರ ಹೆಚ್ಚಳ

**ನವದೆಹಲಿ, ಮಾ. 7: ಭಾರತದಲ್ಲಿ ಮಾರ್ಚ್ 7ರ ಶನಿವಾರದಿಂದ ಜಾರಿಗೆ ಬರುವಂತೆ ದೇಶೀಯ ಎಲ್‌ಪಿಜಿ ಸಿಲಿಂಡರ್‌ಗಳ ಬೆಲೆಯನ್ನು ಹೆಚ್ಚಿಸಲಾಗಿದೆ. 14.2 ಕೆಜಿ ತೂಕದ ಗೃಹಬಳಕೆಯ ಅಡುಗೆ ಅನಿಲ ಸಿಲಿಂಡರ್‌ನ ಬೆಲೆ 60 ರೂ. ಏರಿಕೆ ಏರಿಕೆಯಾಗಿದ್ದರೆ, ವಾಣಿಜ್ಯ ಬಳಕೆಯ 19 ಕೆಜಿ ತೂಕದ ಸಿಲಿಂಡರ್ ಬೆಲೆ 115 ರೂ. ಹೆಚ್ಚಳವಾಗಿದೆ. ಗೃಹ ಬಳಕೆಯ ಸಿಲಿಂಡರ್ ಬೆಲೆ ಹೆಚ್ಚಳವು ದೇಶವಾಸಿಗಳ ಮೇಲೆ ಪರಿಣಾಮ ಬೀರಿದರೆ, ವಾಣಿಜ್ಯ ಎಲ್‌ಪಿಜಿ ಬೆಲೆ ಏರಿಕೆಯು ಹೋಟೆಲ್, ರೆಸ್ಟೋರೆಂಟ್‌ಗಳು ಮತ್ತು ಸಣ್ಣ ವಾಣಿಜ್ಯ ಸಂಸ್ಥೆಗಳಂತಹ ವ್ಯವಹಾರಗಳ ಮೇಲೆ ಪರಿಣಾಮ ಬೀರುತ್ತಿದೆ.**




ಈ ಹೆಚ್ಚಳದ ನಂತರ ರಾಷ್ಟ್ರ ರಾಜಧಾನಿ ದೆಹಲಿಯಲ್ಲಿ 14.2 ಕೆಜಿ ಗೃಹಬಳಕೆಯ ಎಲ್‌ಪಿಜಿ ಸಿಲಿಂಡರ್ ಬೆಲೆ ರೂ. 913 ಆಗಿದ್ದು, ಈ ಹಿಂದೆ ರೂ. 853 ಇತ್ತು. 11 ತಿಂಗಳಲ್ಲಿ ಎಲ್‌ಪಿಜಿ ಬೆಲೆಯಲ್ಲಿ ಇದು ಎರಡನೇ ಏರಿಕೆಯಾಗಿದೆ. ಪ್ರಮುಖ ಮೆಟ್ರೋ ನಗರಗಳಾದ ಮುಂಬೈನಲ್ಲಿ ಗೃಹಬಳಕೆಯ ಎಲ್ಪಿಜಿ ಸಿಲಿಂಡರ್ ಬೆಲೆ ರೂ. 852.50 ರಿಂದ ರೂ. 912.50ಕ್ಕೆ ಏರಿಕೆಯಾಗಿದೆ. ಕೋಲ್ಕತ್ತಾದಲ್ಲಿ ರೂ. 879 ರಿಂದ ರೂ. 930ಕ್ಕೆ ಏರಿದ್ದರೆ, ಚೆನ್ನೈನಲ್ಲಿ ರೂ.868.50 ರಿಂದ ರೂ.928.50ಕ್ಕೆ ಹೆಚ್ಚಳವಾಗಿದೆ. ಇನ್ನು ಬೆಂಗಳೂರಿನಲ್ಲಿ ರೂ.855.50 ಇದ್ದ ಬೆಲೆ ರೂ. 915.50ಕ್ಕೆ ತಲುಪಿದೆ.

ಪಶ್ಚಿಮ ಏಷ್ಯಾದಲ್ಲಿ ಅಮೆರಿಕ, ಇಸ್ರೇಲ್, ಇರಾನ್ ಮತ್ತು ಗಲ್ಫ್ ರಾಷ್ಟ್ರಗಳ ಸಂಘರ್ಷದಿಂದ ಪೂರೈಕೆಯಲ್ಲಿ ವ್ಯತ್ಯಯವಾಗಿದ್ದು, ಈ ಹಿನ್ನೆಲೆ ದೇಶದಲ್ಲಿ ಎಲ್‌ಪಿಜಿ ಉತ್ಪಾದನೆಯನ್ನು ಹೆಚ್ಚಿಸುವಂತೆ ಸರ್ಕಾರ ಶುಕ್ರವಾರ ಭಾರತೀಯ ತೈಲ ಮಾರುಕಟ್ಟೆ ಕಂಪನಿಗಳಿಗೆ ಕೇಳಿದ ನಂತರ ಬೆಲೆ ಏರಿಕೆ ಮಾಡಲಾಗಿದೆ. ಭಾರತದಲ್ಲಿ ಪ್ರಸ್ತುತ 33.08 ಕೋಟಿ ಸಕ್ರಿಯ ಎಲ್‌ಪಿಜಿ ಗ್ರಾಹಕರಿದ್ದಾರೆ.

ದೇಶೀಯ ಪೂರೈಕೆಯನ್ನು ಸುಗಮಗೊಳಿಸಲು, ಅಗತ್ಯ ವಸ್ತುಗಳ ಕಾಯ್ದೆ 1955ರ ಅಡಿಯಲ್ಲಿ ನೀಡಲಾದ ಅಧಿಕಾರವನ್ನು ಬಳಸಿಕೊಂಡು ಸರ್ಕಾರವು ತುರ್ತು ಆದೇಶವನ್ನು ಜಾರಿಗೊಳಿಸಿದೆ. ಭಾರತದಲ್ಲಿ ಕಾರ್ಯನಿರ್ವಹಿಸುತ್ತಿರುವ ಎಲ್ಲಾ ತೈಲ ಸಂಸ್ಕರಣಾ ಕಂಪನಿಗಳು ಎಲ್‌ಪಿಜಿ ಉತ್ಪಾದನೆಯನ್ನು ಗರಿಷ್ಠಗೊಳಿಸುವಂತೆ ಈ ಆದೇಶವು ನಿರ್ದೇಶಿಸುತ್ತದೆ ಎಂದು ವರದಿ ಉಲ್ಲೇಖಿಸಿದೆ.

ದೇಶದಲ್ಲಿ ಪೆಟ್ರೋಲ್ ಮತ್ತು ಡೀಸೆಲ್ ಬೆಲೆಯಲ್ಲಿ ಯಾವುದೇ ಬದಲಾವಣೆಯಾಗಿಲ್ಲ. ಪೆಟ್ರೋಲ್ ಮತ್ತು ಡೀಸೆಲ್ ಬೆಲೆಯಲ್ಲಿ ಪ್ರಮುಖ ರಾಷ್ಟ್ರವ್ಯಾಪಿ ಕಡಿತವು ಮಾರ್ಚ್ 15, 2024 ರಂದು ಮಾಡಲಾಗಿತ್ತು. ಆಗ ಕೇಂದ್ರ ಸರ್ಕಾರವು ಎರಡೂ ಇಂಧನಗಳ ಮೇಲೆ ಲೀಟರ್‌ಗೆ ರೂ. 2 ಕಡಿತವನ್ನು ಘೋಷಿಸಿತ್ತು.

ಪ್ರಧಾನಮಂತ್ರಿ ಉಜ್ವಲ ಯೋಜನೆಯ ಫಲಾನುಭವಿಗಳು, ಅಂದರೆ 2016ರಲ್ಲಿ ಯೋಜನೆ ಆರಂಭವಾದಾಗಿನಿಂದ ಉಚಿತ ಎಲ್ಪಿಜಿ ಸಂಪರ್ಕ ಪಡೆದಿರುವ 10 ಕೋಟಿಗೂ ಹೆಚ್ಚು ಬಡ ಕುಟುಂಬಗಳಿಗೆ ವರ್ಷಕ್ಕೆ 12 ರೀಫಿಲ್‌ಗಳವರೆಗೆ ಪ್ರತಿ 14.2 ಕೆಜಿ ಸಿಲಿಂಡರ್‌ಗೆ ರೂ.300 ಸಬ್ಸಿಡಿ ಪಡೆಯುವುದನ್ನು ಮುಂದುವರಿಯಲಿದೆ.

### ಮೋದಿ ದಿ ಮ್ಯಾನ್ ಆಫ್ ಇನ್‌ಫ್ಲೇಶನ್



**ಎಲ್‌ಪಿಜಿ ಸಿಲಿಂಡರ್‌ನ ಬೆಲೆ 60 ರೂ. ಹೆಚ್ಚಳ, ವಾಣಿಜ್ಯ ಎಲ್‌ಪಿಜಿ ಸಿಲಿಂಡರ್ 115 ರೂ. ಏರಿಸುವ ಮೂಲಕ ಕೇಂದ್ರ ಸರ್ಕಾರ ಅಂತರರಾಷ್ಟ್ರೀಯ ಬೆಲೆ ಇಳಿಕೆಯ ನಡುವೆಯೂ ದೇಶದ ಜನರಿಂದ ಲಾಭವನ್ನು ಕಸಿದುಕೊಂಡಿದೆ. ಕಳೆದ ಮೂರು ತಿಂಗಳಲ್ಲಿ ವಾಣಿಜ್ಯ ಬಳಕೆ ಸಿಲಿಂಡರ್ ಬೆಲೆ 307 ರೂ.ಗಳಷ್ಟು ಏರಿಕೆಯಾಗಿದೆ. ಈಗ ಹಣದುಬ್ಬರದ ಹೊರೆಯಿಂದ ಸಾರ್ವಜನಿಕರು ಬೆವರು ಹರಿಸುವಂತಾಗಿದೆ ಎಂದು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಕೇಂದ್ರ ಸರ್ಕಾರದ ವಿರುದ್ಧ ಕಿಡಿಕಾರಿದ್ದಾರೆ. ಎಲ್‌ಪಿಜಿ ದರ ಏರಿಕೆ ಬೆನ್ನಲ್ಲೇ ಕಾಂಗ್ರೆಸ್ ತೀಕ್ಷ್ಣವಾಗಿ ಪ್ರತಿಕ್ರಿಯಿಸಿದ್ದು, ಪ್ರಧಾನಮಂತ್ರಿ ನರೇಂದ್ರ ಮೋದಿ ಅವರನ್ನು 'ಮ್ಯಾನ್ ಆಫ್ ಇನ್‌ಫ್ಲೇಶನ್ ಎಂದು ಕರೆದಿದೆ.**

# ಅಡುಗೆ ಅನಿಲ ದರ ಏರಿಕೆಗೆ ಆಕ್ರೋಶ

**ಬೆಂಗಳೂರು, ಮಾ.7:** ದೇಶದ ಬಡ ಮತ್ತು ಮಧ್ಯಮ ವರ್ಗದ ಕುಟುಂಬಗಳು ಹಣದುಬ್ಬರ ಮತ್ತು ಬೆಲೆ ಏರಿಕೆಯಿಂದ ತತ್ತರಿಸಿರುವ ಸಮಯದಲ್ಲಿಯೇ ಪ್ರಧಾನಿ ನರೇಂದ್ರ ಮೋದಿ ಅವರ ಸರ್ಕಾರ ಎಲ್‌ಪಿಜಿ ಸಿಲಿಂಡರ್ ದರ ಹೆಚ್ಚಿಸಿರುವುದು ನೆಲಕ್ಕೆ ಬಿದ್ದವನನ್ನು ಒದ್ದಂತಾಗಿದೆ ಎಂದು ಸಿಎಂ ಸಿದ್ದರಾಮಯ್ಯ ಆಕ್ರೋಶ ಹೊರಹಾಕಿದ್ದಾರೆ.

ಗೃಹ ಬಳಕೆಯ ಸಿಲಿಂಡರ್‌ಗಳ ಬೆಲೆಯನ್ನು ಸುಮಾರು 60ರಷ್ಟು ಹೆಚ್ಚಿಸಿರುವುದರಿಂದ ಬಡ ಮತ್ತು ಮಧ್ಯಮ ವರ್ಗದ ಕುಟುಂಬಗಳ ಜೀವನನಿರ್ವಹಣೆಯ ವೆಚ್ಚ ದುಬಾರಿಯಾಗಲಿದೆ. ಈ ಏರಿಕೆ ಅನಿವಾರ್ಯ ಕ್ರಮವೇನಲ್ಲ, ಇದು ಶರಣಾಗತಿಯನ್ನೇ ದೇಶದ ಕಾರ್ಯತಂತ್ರವೆಂದು ತಪ್ಪಾಗಿ ತಿಳಿದುಕೊಂಡ ವಿದೇಶಾಂಗ ನೀತಿಯ ಫಲವಾಗಿದೆ ಎಂದು ಸಿಎಂ ತಮ್ಮ ಸಾಮಾಜಿಕ ಜಾಲತಾಣದಲ್ಲಿ ಬರೆದುಕೊಂಡಿದ್ದಾರೆ.



**ಹಣದುಬ್ಬರ, ಬೆಲೆಏರಿಕೆಯಿಂದ ತತ್ತರಿಸಿರುವ ನಡುವೆ ನೆಲಕ್ಕೆ ಬಿದ್ದವನನ್ನು ಒದ್ದಂತೆ**

**ದೇಶದ ಸ್ವಾತಂತ್ರ್ಯವನ್ನು ಬೇರೊಂದು ರಾಷ್ಟ್ರದ ಪಾದದಡಿ ಇಟ್ಟಿದ್ದಾರೆ:** ಪ್ರಧಾನಿ ನರೇಂದ್ರ ಮೋದಿ ಅವರು ಅಮೆರಿಕದ ಮಾತುಗಳಿಗೆ ಮೂಕರಂತೆ ತಲೆಯಾಡಿಸುವ ಮೂಲಕ ಭಾರತದ ವ್ಯೂಹಾತ್ಮಕ ಸ್ವಾತಂತ್ರ್ಯವನ್ನು ಬೇರೊಂದು ರಾಷ್ಟ್ರದ ಪಾದದಡಿ ಇಟ್ಟಿದ್ದಾರೆ ಮತ್ತು ರಷ್ಯಾ ಹಾಗೂ ಇರಾನ್‌ನಂತಹ ದೇಶಗಳೊಂದಿಗಿನ ಭಾರತದ ದೀರ್ಘಕಾಲೀನ ಇಂಧನ ಸಹಭಾಗಿತ್ವವನ್ನು ಹಾಳುಗೆಡವಿದ್ದಾರೆ. ಇವು ಹಲವು ದಶಕಗಳಿಂದ ಭಾರತೀಯರಿಗೆ ಇಂಧನ ಸ್ಥಿರತೆಯನ್ನು ಖಾತ್ರಿಪಡಿಸಿದ ರಾಷ್ಟ್ರಗಳು ಎಂಬುದನ್ನು ಪ್ರಧಾನಿಗಳು ಮರೆತಂತಿದೆ.

ಪಂಡಿತ್ ಜವಾಹರಲಾಲ್ ನೆಹರೂ ಪ್ರಕಾರ ವಿದೇಶಾಂಗ ನೀತಿಯು ಆರ್ಥಿಕ ನೀತಿಯ ಪರಿಣಾಮವಾಗಿದೆ." ನೆಹರೂ ಅವರು ಏಳೆಂಟು ದಶಕಗಳ ಹಿಂದೆಯೇ ನೀಡಿದ್ದ ಎಚ್ಚರಿಕೆ ಇಂದು ಅಕ್ಷರಶಃ ಸತ್ಯವಾಗಿದೆ. ರಾಜತಾಂತ್ರಿಕತೆ ಎನ್ನುವುದು ಕಾರ್ಯತಂತ್ರವಾಗದೆ, ಪ್ರದರ್ಶನದ ವಸ್ತುವಾಗಿ ಮಾರ್ಪಟ್ಟಾಗ, ಅದಕ್ಕೆ ಅನಿವಾರ್ಯವಾಗಿ ಬಡವರು ಮತ್ತು ಮಧ್ಯಮ ವರ್ಗದ ಜನರು ಬಲಿಯಾಗುತ್ತಾರೆ ಎಂದು ಸಿಎಂ ಅಭಿಪ್ರಾಯಪಟ್ಟಿದ್ದಾರೆ.

ಇತ್ತೀಚೆಗೆ ತಮ್ಮ ಪುಸ್ತಕದಲ್ಲಿ ಮಾಜಿ ಸೇನಾಧಿಕಾರಿ ಜನರಲ್ ಎಂ.ಎಂ. ನರವಣೆ ಅವರು ಭಾರತದ ವಿದೇಶಾಂಗ ನೀತಿ ನಿರ್ಧಾರಗಳಲ್ಲಿ ಸಾಂಸ್ಥಿಕ ಸಮಾಲೋಚನೆ ಮತ್ತು ವ್ಯೂಹಾತ್ಮಕ ತಿಳುವಳಿಕೆಯ ಕೊರತೆಯ ಬಗ್ಗೆ ಗಂಭೀರ ಆತಂಕಗಳನ್ನು ಎತ್ತಿದ್ದರು. ಇದು ಪ್ರಧಾನಮಂತ್ರಿಗೆ ರಾಜತಾಂತ್ರಿಕ ನಿಲುವು ಮತ್ತು ಅದರ ಆರ್ಥಿಕ ಪರಿಣಾಮಗಳ ಮೂಲಭೂತ ತಿಳುವಳಿಕೆಯ ಕೊರತೆ ಇದೆ ಎಂಬ ಅನುಮಾನವನ್ನು ಖಚಿತಪಡಿಸುವಂತಿದೆ. ಭಾರತದ ಇಂದಿನ ವಿದೇಶಾಂಗ ನೀತಿಯ ವೈಫಲ್ಯವು ಪ್ರಧಾನಿ ನರೇಂದ್ರ ಮೋದಿ ಅವರಿಗೆ ಎಫ್‌ಸ್ಟೀನ್ ಫೈಲ್ಸ್‌ನ ಬಗೆಗಿನ ಭಯ ಮತ್ತು ರಾಜತಾಂತ್ರಿಕ ತೀರ್ಮಾನಗಳಲ್ಲಿನ ಅಜ್ಞಾನವನ್ನು ತೋರುತ್ತದೆ.

ಪ್ರಧಾನಿಗಳು ತಮ್ಮ ರಾಜತಾಂತ್ರಿಕ ವೈಫಲ್ಯಕ್ಕೆ ಕೋಟ್ಯಂತರ ಭಾರತೀಯರು ಯಾಕೆ ಬೆಲೆ ತೆರಬೇಕು ಎನ್ನುವುದನ್ನು ತಿಳಿಸಲಿ. ಜಾಗತಿಕ ಮಟ್ಟದಲ್ಲಿ ದೇಶದ ಮಾನ ಕಳೆಯುತ್ತಿರುವ ಮೋದಿಯವರು ಬಹಿರಂಗವಾಗಿ ದೇಶದ ಜನರ ಕ್ಷಮೆಯಾಚಿಸಲಿ ಮತ್ತು ರಾಜೀನಾಮೆ ನೀಡಲಿ ಸಿದ್ದರಾಮಯ್ಯ ಅವರು ಆಗ್ರಹಿಸಿದ್ದಾರೆ.

# ಇಂದು ಡಿಕೆಶಿ ದೆಹಲಿಗೆ



**ಬೆಂಗಳೂರು, ಮಾ.7:** ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಭಾನುವಾರದಂದು ದೆಹಲಿಗೆ ಪ್ರಯಾಣ ಬೆಳೆಸಲಿದ್ದಾರೆ. ಡಿ.ಕೆ. ಶಿವಕುಮಾರ್ ಅವರು ಕಲಬುರಗಿಯ ಚಿತ್ತಾಪುರದಲ್ಲಿ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಭಾನುವಾರ ಉದ್ಘಾಟನೆ ಮಾಡಲಿದ್ದು, ನಂತರ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಜೊತೆ ಕಲಬುರಗಿಯಿಂದ ದೆಹಲಿಗೆ ಜೊತೆಯಾಗಿ ಪ್ರಯಾಣಿಸಲಿದ್ದಾರೆ. ನೀರಾವರಿ ಇಲಾಖೆ ಕೆಲವು ಕೆಲಸದ ಹಿನ್ನೆಲೆಯಲ್ಲಿ ದೆಹಲಿಗೆ ಹೋಗುತ್ತಿದ್ದಾರೆ ಎನ್ನಲಾಗುತ್ತಿದೆ. ಆದರೂ ಬಜೆಟ್ ಮಂಡನೆ ಬೆನ್ನಲ್ಲೇ, ಹಾಗೂ ರಾಜ್ಯದಲ್ಲಿ ನಾಯಕತ್ವ ಬದಲಾವಣೆ ವಿಚಾರ ಚರ್ಚೆ ಇರುವಾಗಲೇ, ಎಐಸಿಸಿ ಅಧ್ಯಕ್ಷರ ಜೊತೆ ಡಿಸಿಎಂ ಡಿ.ಕೆ.ಶಿವಕುಮಾರ್ ದೆಹಲಿಗೆ ಹೋಗುತ್ತಿರುವುದು ಸಾಕಷ್ಟು ಕುತೂಹಲ ಮೂಡಿಸಿದೆ.

## ಲೋಕಸಭೆ ಹಕ್ಕುಬಾಧ್ಯತಾ ಸಮಿತಿ ಸದಸ್ಯರಾಗಿ

# ಸಂಸದ ಜಗದೀಶ ಶೆಟ್ಟರ್ ನೇಮಕ




**ಬೆಳಗಾವಿ, ಮಾ.7:** 18ನೇ ಲೋಕಸಭೆಯ ಹಕ್ಕು ಬಾಧ್ಯತೆಗಳ ಸಮಿತಿಯ ಸದಸ್ಯರಾಗಿ ಬೆಳಗಾವಿ ಸಂಸದ ಜಗದೀಶ್ ಶೆಟ್ಟರ್ ಅವರನ್ನು ನೇಮಕ ಮಾಡಲಾಗಿದೆ.

ಲೋಕಸಭಾಧ್ಯಕ್ಷ ಓಂ ಬಿರ್ಲಾ ಅವರು ಈ ಸಮಿತಿಗೆ ಒಟ್ಟು 15 ಸದಸ್ಯರನ್ನು ನಾಮನಿರ್ದೇಶನ ಮಾಡಿದ್ದು, ಅದರಲ್ಲಿ ಶೆಟ್ಟರ್ ಅವರು ಸ್ಥಾನ ಪಡೆದಿದ್ದಾರೆ. ಈ ಮಹತ್ವದ ಸಮಿತಿಯು ಸಂಸತ್ತಿನ ಸ್ವಾತಂತ್ರ್ಯ, ಅಧಿಕಾರ ಮತ್ತು ಘನತೆಯನ್ನು ಎತ್ತಿಹಿಡಿಯುವ ಹಾಗೂ ಸಂಸದರ ಹಕ್ಕುಗಳಿಗೆ ಧಕ್ಕೆಯಾದಾಗ ಅವುಗಳ ರಕ್ಷಣೆ ಮಾಡುವ ಪ್ರಮುಖ ಜವಾಬ್ದಾರಿಯನ್ನು ಹೊಂದಿರುತ್ತದೆ.

ತಮ್ಮ ನೇಮಕದ ಕುರಿತು ಹರ್ಷ ವ್ಯಕ್ತಪಡಿಸಿರುವ ಜಗದೀಶ್ ಶೆಟ್ಟರ್, ಸಮಿತಿಯ ಆಶಯಕ್ಕೆ ತಕ್ಕಂತೆ ಪ್ರಾಮಾಣಿಕವಾಗಿ ಕಾರ್ಯನಿರ್ವಹಿಸುವುದಾಗಿ ತಿಳಿಸಿದ್ದಾರೆ.

# ಷರತ್ತುಗಳಿಲ್ಲದೆ ಶರಣಾಗತಿಗೆ ಒಪ್ಪಿದರೆ ಯುದ್ಧ ಅಂತ್ಯ



**ವಾಷಿಂಗ್ಟನ್, ಮಾ.7:** ಮಧ್ಯಪ್ರಾಚ್ಯದಲ್ಲಿ ಬಿಕ್ಕಟ್ಟು ಹೆಚ್ಚುತ್ತಿರುವ ನಡುವೆ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರು ಇರಾನ್ ಆಡಳಿತಕ್ಕೆ ಕಠಿಣ ಎಚ್ಚರಿಕೆ ನೀಡಿದ್ದಾರೆ. ಯುದ್ಧ ಅಂತ್ಯವಾಗಬೇಕೆಂದು ಬಯಸಿದರೆ ಇರಾನ್ ಯಾವುದೇ ಷರತ್ತುಗಳಿಲ್ಲದೆ ಸಂಪೂರ್ಣವಾಗಿ ಶರಣಾಗಬೇಕು ಎಂದಿದ್ದಾರೆ.

ಇಸ್ರೇಲ್ ಮತ್ತು ಇರಾನ್ ನಡುವಿನ ಸಂಘರ್ಷ ಗಂಭೀರ ಹಂತ ತಲುಪಿರುವ ನಡುವೆ ಟ್ರಂಪ್ ಹೇಳಿಕೆ ಮಹತ್ವ ಪಡೆದಿದ್ದು, ಇರಾನ್ ಯಾವುದೇ ಷರತ್ತುಗಳಿಲ್ಲದೆ ಶರಣಾಗತಿ ಒಪ್ಪಿಕೊಂಡರೆ ಮಾತ್ರ ಯುದ್ಧ ಅಂತ್ಯಗೊಳ್ಳಲಿದೆ ಎಂದು ಸ್ಪಷ್ಟಪಡಿಸಿದ್ದಾರೆ.


**ಇರಾನ್‌ಗೆ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಮತ್ತೊಮ್ಮೆ ಎಚ್ಚರಿಕೆ**

ಇರಾನ್ ಶರಣಾದರೆ ಅಮರಿಕಾ ಮತ್ತು ಅದರ ಮಿತ್ರರಾಷ್ಟ್ರಗಳು ಇರಾನ್ ಅನ್ನು ವಿನಾಶದ ಅಂಚಿನಿಂದ ಮರಳಿ ತರುವ ಕೆಲಸ ಮಾಡಲಿವೆ. ಇರಾನ್ ಅನ್ನು ಆರ್ಥಿಕವಾಗಿ ಹಿಂದೆಂದಿಗಿಂತಲೂ ದೊಡ್ಡ, ಉತ್ತಮ ಮತ್ತು ಬಲಶಾಲಿಯಾಗಿ ಮಾಡಲಾಗುವುದು ಎಂದು ಟ್ರಂಪ್ ಹೇಳಿದ್ದಾರೆ. ಇತ್ತೀಚೆಗೆ ಟೆಹರಾನ್ ಸೇರಿ ಇರಾನ್‌ನ ಹಲವು ಪ್ರದೇಶಗಳಲ್ಲಿ ಭಾರೀ ಸ್ಫೋಟಗಳು ಸಂಭವಿಸಿದ್ದು, ಇಸ್ರೇಲ್ ನಡೆಸಿದ ವಾಯುದಾಳಿಗಳ ಬಳಿಕ ಸಂಘರ್ಷ ಮತ್ತಷ್ಟು ತೀವ್ರಗೊಂಡಿದೆ. ಇದಕ್ಕೆ ಪ್ರತಿಯಾಗಿ ಇರಾನ್ ಕೂಡ ಇಸ್ರೇಲ್ ಮೇಲೆ ಕ್ಷಿಪಣಿ ಮತ್ತು ಡ್ರೋನ್ ದಾಳಿಗಳನ್ನು ನಡೆಸಿರುವುದಾಗಿ ವರದಿಯಾಗಿದೆ.

ಈ ಬೆಳವಣಿಗೆ ಹಿನ್ನೆಲೆಯಲ್ಲಿ ಅಮೆರಿಕಾ ಪರಿಸ್ಥಿತಿಯನ್ನು ನಿಕಟವಾಗಿ ಗಮನಿಸುತ್ತಿದ್ದು, ಅಗತ್ಯವಿದ್ದರೆ ಇನ್ನಷ್ಟು ಕಠಿಣ ಕ್ರಮಗಳನ್ನು ಕೈಗೊಳ್ಳಲಾಗುತ್ತದೆ ಎಂದು ಎಚ್ಚರಿಕೆ ನೀಡಿದೆ. ಇದರಿಂದ ಮಧ್ಯಪ್ರಾಚ್ಯದಲ್ಲಿ ಯುದ್ಧ ವಾತಾವರಣ ಮತ್ತಷ್ಟು ಗಂಭೀರಗೊಂಡಿದ್ದು, ಪರಿಸ್ಥಿತಿ ವಿಸ್ತಾರವಾದರೆ ಪ್ರಾದೇಶಿಕ ಮಟ್ಟದ ದೊಡ್ಡ ಸಂಘರ್ಷಕ್ಕೆ ದಾರಿ ಮಾಡಿಕೊಡುವ ಸಾಧ್ಯತೆ ಇದೆ ಎಂದು ಜಾಗತಿಕ ಸಮುದಾಯ ಆತಂಕ ವ್ಯಕ್ತಪಡಿಸಿದೆ.

# ರೆಡ್‌ಜೋನ್ ವ್ಯಾಪ್ತಿಗೆ ಸಾಂಬ್ರಾ ವಿಮಾನ ನಿಲ್ದಾಣ

- ಇಸ್ರೇಲ್–ಇರಾನ್ ಯುದ್ಧದ ಹಿನ್ನೆಲೆಯಲ್ಲಿ ಡಿಜಿಸಿಎ ಘೋಷಣೆ
- ಯಾವುದೇ ಡ್ರೋನ್, ಮಾನವರಹಿತ ವೈಮಾನಿಕ ವಾಹನಗಳ ಹಾರಾಟಕ್ಕೆ ನಿರ್ಬಂಧ




**ಬೆಳಗಾವಿ, ಮಾ.7:** ಇಸ್ರೇಲ್, ಇರಾನ್, ಅಮೆರಿಕ ಯುದ್ಧದಿಂದಾಗಿ ಮಧ್ಯಪ್ರಾಚ್ಯದಲ್ಲಿ ಉಂಟಾಗಿರುವ ಪರಿಸ್ಥಿತಿಯನ್ನು ಗಮನದಲ್ಲಿಟ್ಟುಕೊಂಡು, ಬೆಳಗಾವಿಯ ಸಾಂಬ್ರಾ ವಿಮಾನ ನಿಲ್ದಾಣವನ್ನು ರೆಡ್‌ಝೋನ್ ಎಂದು ಘೋಷಿಸಲಾಗಿದೆ.

ನಾಗರಿಕ ವಿಮಾನಯಾನ ಮಹಾ ನಿರ್ದೇಶನಾಲಯ (DGCA) ಮಾರ್ಗ ಸೂಚಿಯಂತೆ ಈ ಕ್ರಮ ಕೈಗೊಳ್ಳಲಾಗಿದೆ. ಸಾಂಬ್ರಾ ವಿಮಾನ ನಿಲ್ದಾಣದ ಸುತ್ತಮುತ್ತ 8 ಕಿಲೋಮೀಟರ್ ವ್ಯಾಪ್ತಿಯಲ್ಲಿ ಯಾವುದೇ ಡ್ರೋನ್ ಹಾಗೂ ಅನ್‌ಮ್ಯಾನ್ಡ್ ಏರಿಯಲ್ ವಾಹನಗಳ (AV) ಹಾರಾಟವನ್ನು ಸಂಪೂರ್ಣವಾಗಿ ನಿಷೇಧಿಸಲಾಗಿದೆ. ರೆಡ್ ಝೋನ್ ಮತ್ತು ಯೆಲ್ಲೋ ಝೋನ್ ವ್ಯಾಪ್ತಿಯಲ್ಲಿ ಅನುಮತಿ ಇಲ್ಲದೆ ಡ್ರೋನ್ ಹಾರಾಟ ನಡೆಸುವುದು ಕಾನೂನುಬಾಹಿರ ಎಂದು ಅಧಿಕಾರಿಗಳು ಸ್ಪಷ್ಟಪಡಿಸಿದ್ದಾರೆ.

ಈ ಸಂಬಂಧ ಬೆಳಗಾವಿ ಪೊಲೀಸ್ ಕಮಿಷನರ್ ಭೂಷಣ್ ಬೊರಸೆ ಪತ್ರಿಕಾ ಪ್ರಕಟಣೆ ಹೊರಡಿಸಿ ಸಾರ್ವಜನಿಕರಿಗೆ ಎಚ್ಚರಿಕೆ ನೀಡಿದ್ದಾರೆ. ವಿಮಾನ ನಿಲ್ದಾಣದ ಭದ್ರತೆ ದೃಷ್ಟಿಯಿಂದ ಈ ಕ್ರಮ ಅತ್ಯಾವಶ್ಯಕವಾಗಿದ್ದು, ಆದೇಶ ಉಲ್ಲಂಘನೆ ಮಾಡುವವರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ಅವರು ತಿಳಿಸಿದ್ದಾರೆ. ಪ್ರಸ್ತುತ ಜಾಗತಿಕ ಪರಿಸ್ಥಿತಿಯನ್ನು ಗಮನದಲ್ಲಿಟ್ಟುಕೊಂಡು ಭದ್ರತಾ ವ್ಯವಸ್ಥೆಯನ್ನು ಮತ್ತಷ್ಟು ಬಲಪಡಿಸಲಾಗಿದ್ದು, ಸಾರ್ವಜನಿಕರು ಸಹಕರಿಸುವಂತೆ ಪೊಲೀಸ್ ಇಲಾಖೆ ಮನವಿ ಮಾಡಿದೆ.

ಸಾರಿಗೆ ಇಲಾಖೆ
TRANSPORT DEPARTMENT



ಶ್ರೀ ಸಿದ್ದರಾಮಯ್ಯ
ಸನ್ಮಾನ್ಯ ಮುಖ್ಯಮಂತ್ರಿಗಳು
ಕರ್ನಾಟಕ ಸರ್ಕಾರ



ಶ್ರೀ ಡಿ.ಕೆ. ಶಿವಕುಮಾರ್
ಮಾನ್ಯ ಉಪ ಮುಖ್ಯಮಂತ್ರಿಗಳು
ಕರ್ನಾಟಕ ಸರ್ಕಾರ

ಕರ್ನಾಟಕ ರಾಜ್ಯದ
66 ಆರ್‌ಟಿಒ ಕಛೇರಿಗಳಲ್ಲಿ Geo-fencing ಆಧಾರಿತ
mVahan ಫಿಟ್ನೆಸ್ ಮೊಬೈಲ್ ಅಪ್ಲಿಕೇಷನ್ ಅನುಷ್ಠಾನ

1. ರಾಜ್ಯದಲ್ಲಿ ನೋಂದಣಿಯಾಗಿ ಚಾಲ್ತಿಯಲ್ಲಿರುವ ವಾಣಿಜ್ಯ (ಸಾರಿಗೆ) ವಾಹನಗಳ ಅರ್ಹತಾ (ಫಿಟ್ನೆಸ್) ಪ್ರಮಾಣ ಪತ್ರ ವಿತರಣೆಯಲ್ಲಿ ನಡೆಯುತ್ತಿದ್ದ ದೋಷಪೂರಿತ ಕ್ರಮಗಳನ್ನು ತಡೆಯುವ ಸಲುವಾಗಿ ಸಾರಿಗೆ ಇಲಾಖೆಯು Geo-fencing ಆಧಾರಿತ mVahan ಫಿಟ್ನೆಸ್ ಮೊಬೈಲ್ ಅಪ್ಲಿಕೇಷನ್‌ನನ್ನು ರಾಜ್ಯಾದ್ಯಾಂತ ಎಲ್ಲಾ 66 ಆರ್‌ಟಿಒ ಕಛೇರಿಗಳಲ್ಲಿ ಆರಂಭಿಸಲಾಗಿದೆ.
2. ಸಾರಿಗೆ ಇಲಾಖೆಯ ರಾಜ್ಯದ ಎಲ್ಲಾ ಆರ್‌ಟಿಒ ಕಛೇರಿಗಳಲ್ಲಿ mVahan ಫಿಟ್ನೆಸ್ ಮೊಬೈಲ್ ಅಪ್ಲಿಕೇಷನ್ ಎಂದು ಕರೆಯಲ್ಪಡುವ ಈ ವ್ಯವಸ್ಥೆಯು ಪಾರದರ್ಶಕತೆ ಮತ್ತು ಹೊಣೆಗಾರಿಕೆಯನ್ನು ಹೆಚ್ಚಿಸುವ ಉದ್ದೇಶವನ್ನು ಹೊಂದಿರುತ್ತದೆ ಹಾಗೂ ಈ ಮೂಲಕ ವಾಹನ ಮಾಲೀಕರು ಮತ್ತು ಸಾರ್ವಜನಿಕರ ವಿಶ್ವಾಸಾರ್ಹತೆ ಹೆಚ್ಚಾಗಲಿದೆ.
3. ವಾಹನಗಳ ಸಮರ್ಪಕ ಪರಿಶೀಲನೆಯ ನಂತರ ಮಾತ್ರ ಅರ್ಹತಾ (ಫಿಟ್ನೆಸ್) ಪ್ರಮಾಣಪತ್ರಗಳನ್ನು ನೀಡಲಾಗುವಂತೆ ಖಚಿತಪಡಿಸಿಕೊಳ್ಳಲು ಹಾಗೂ ಸಂಭವನೀಯ ಎಲ್ಲಾ ದೋಷಗಳನ್ನು ನಿವಾರಿಸುವ ಉದ್ದೇಶದಿಂದ ಈ ಹೊಸ ವ್ಯವಸ್ಥೆಯನ್ನು ಪರಿಚಯಿಸಲಾಗಿದೆ.
4. ಕರ್ನಾಟಕ ರಾಜ್ಯದಲ್ಲಿ ಸುಮಾರು 30 ಲಕ್ಷಕ್ಕೂ ಹೆಚ್ಚು ವಾಣಿಜ್ಯ (ಸಾರಿಗೆ) ವಾಹನಗಳು ನೋಂದಣಿಯಾಗಿ ಚಾಲ್ತಿಯಲ್ಲಿದ್ದು, ವಾಹನಗಳ ಅರ್ಹತಾ (ಫಿಟ್ನೆಸ್) ಪ್ರಮಾಣ ಪತ್ರ ನೀಡುವಿಕೆಯಲ್ಲಿ ಏಕರೂಪತೆ ಇಲ್ಲ, ಪಾರದರ್ಶಕ ವ್ಯವಸ್ಥೆಯಿಲ್ಲ ಎಂಬ ಆರೋಪಗಳು ಆಗಾಗ್ಗೆ ಕೇಳಿ ಬರುತ್ತಿದ್ದವು.
5. ಈ ಹಿನ್ನೆಲೆಯಲ್ಲಿ NIC ಅಭಿವೃದ್ಧಿಪಡಿಸಿರುವ ಹೊಸ mVahan ಫಿಟ್ನೆಸ್ ಮೊಬೈಲ್ ಅಪ್ಲಿಕೇಷನ್ ಅನ್ನು ಜಾರಿಗೆ ತರಲಾಗಿದೆ.
6. ಈ ಅಪ್ಲಿಕೇಷನ್ ಮೂಲಕ ಪ್ರತಿಯೊಂದು ಆರ್‌ಟಿಒ ಕಚೇರಿಗಳಿಗೆ ವಾಹನಗಳನ್ನು ಭೌತಿಕವಾಗಿ ಪರಿಶೀಲಿಸಲಾಗುವ ಪ್ರದೇಶಗಳನ್ನು ನಿಗದಿಪಡಿಸಿ Geo-fencing ಮಾಡಲಾಗಿದೆ.
7. ನಿಗದಿತ ಪ್ರದೇಶಗಳಿಗೆ ವಾಹನಗಳು ಭೌತಿಕವಾಗಿ ಹಾಜರಾದ ನಂತರವೇ ಮೋಟಾರು ವಾಹನ ಕಾಯ್ದೆ ಮತ್ತು ನಿಯಮಾನುಸಾರ ಪರಿಶೀಲನೆ ನಡೆಸಲಾಗುತ್ತದೆ.
8. ಪರಿಶೀಲನೆಯ ವೇಳೆ ವಾಹನದ ವಿವಿಧ ಆರು (6) ಛಾಯಾಚಿತ್ರಗಳನ್ನು ಕಡ್ಡಾಯವಾಗಿ ತೆಗೆದು ಅಪ್ಲಿಕೇಷನ್ನಲ್ಲಿ ಅನುಮೋದನೆಗೊಂಡ ನಂತರವೇ ವಾಹನದ ಅರ್ಹತಾ ಪ್ರಮಾಣ ಪತ್ರ ನೀಡಲಾಗುತ್ತದೆ.
9. ಈಗಾಗಲೇ ನಿಗದಿಪಡಿಸಿರುವ ನಿಗದಿತ ಪ್ರದೇಶಗಳನ್ನು ಹೊರತುಪಡಿಸಿ ಇನ್ನಿತರ ಪ್ರದೇಶಗಳಲ್ಲಿ ವಾಹನದ ಅರ್ಹತಾ ಪ್ರಮಾಣ ಪತ್ರವನ್ನು ನೀಡಲು ಸಾಧ್ಯವಿರುವುದಿಲ್ಲ.
10. ವಾಹನದ ಅರ್ಹತಾ ಪ್ರಮಾಣ ಪತ್ರ ಕೋರಿ ಬರುವ ವಾಹನಗಳ ಪೈಕಿ ಕನಿಷ್ಠ 20 % ವಾಹನಗಳನ್ನು ಮರುತಪಾಸಣೆ ಮಾಡಲು ನೋಂದಣಿ ಪ್ರಾಧಿಕಾರಗಳಿಗೆ ಸೂಚನೆಯನ್ನು ನೀಡಲಾಗಿದೆ.
11. mVahan ಫಿಟ್ನೆಸ್ ಮೊಬೈಲ್ ಅಪ್ಲಿಕೇಷನ್‌ಅನ್ನು ದೇಶದ ಕೆಲವು ರಾಜ್ಯಗಳಲ್ಲಿ ಅಳವಡಿಸಿಕೊಳ್ಳಲಾಗಿದ್ದು, ಕರ್ನಾಟಕ ರಾಜ್ಯದಲ್ಲಿಯೂ ಪ್ರಸ್ತುತ ಅಳವಡಿಸಿಕೊಳ್ಳಲಾಗುತ್ತಿದೆ.
12. ರಸ್ತೆ ಅಪಘಾತಗಳನ್ನು ಕಡಿಮೆಗೊಳಿಸಲು ಹಾಗೂ ಸಮಗ್ರ ರಸ್ತೆ ಸುರಕ್ಷತೆಯನ್ನು ಹೆಚ್ಚಿಸಲು ಈ ವ್ಯವಸ್ಥೆ ಸಹಾಯಕವಾಗಲಿದೆ.
13. ಈ ಉಪಕ್ರಮದ ಮೂಲಕ ದೀರ್ಘಕಾಲದಿಂದ ಅರ್ಹತಾ ಪ್ರಮಾಣ ಪತ್ರ ನೀಡಿಕೆಯಲ್ಲಿ ಕೇಳಿ ಬರುತ್ತಿದ್ದ ಅಪಸ್ವರಕ್ಕೆ ತೆರೆ ಬೀಳಲಿದೆ.





ಮಾನ್ಯ ಸಾರಿಗೆ ಮತ್ತು ಮುಜರಾಯಿ ಇಲಾಖೆ ಸಚಿವರಾದ
ಶ್ರೀ ರಾಮಲಿಂಗಾ ರೆಡ್ಡಿ
ಅವರು ಇಲಾಖಾ ಕಾರ್ಯಕ್ರಮದಲ್ಲಿ ಪಾಲ್ಗೊಂಡ ಸಂದರ್ಭ

ಸಹಿ/-
ಆಯುಕ್ತರು
ಸಾರಿಗೆ ಮತ್ತು ರಸ್ತೆ ಸುರಕ್ಷತೆ



## ನಿತ್ಯ ಪಂಚಾಂಗ 8.3.2026 ಭಾನುವಾರ



ಶ್ರೀ ವಿಶ್ವಾವಸು ನಾಮ ಸಂವತ್ಸರ, ದಕ್ಷಿಣಾಯಣ ಶಿಶಿರ ಹೇಮಂತ ಋತು, ಚಾಂದ್ರಮಾನ, ಪಾಲ್ಗುಣ ಬಹುಳ ಪಂಚಮಿ, ಸ್ವಾತಿ ನಕ್ಷತ್ರ ರಂಗಪಂಚಮಿ, ಅಂತರರಾಷ್ಟ್ರೀಯ ಮಹಿಳಾ ದಿನ, ಕನಕಾಚಲಪತಿ ಗರುಡೋತ್ಸವ, ಗಣಗನೂರು/ಗುಲ್ಬರ್ಗಾ/ನಂದಳಿಕೆ ರಥ

| ದಿನ | ರಾಹುಕಾಲ | ಯಮಗಂಡ | ಗುಳಿಕಕಾಲ |
|---|---|---|---|
| | ರಾಹುಕಾಲ | ಯಮಗಂಡ | ಗುಳಿಕಕಾಲ |
| ಭಾನು | 4.30 – 6.00 | 12.00 – 1.30 | 3.00 – 4.30 |
| ಸೋಮ | 7.30 – 9.00 | 10.30 – 12.00 | 1.30 – 3.00 |
| ಮಂಗಳ | 3.00 – 4.30 | 9.00 – 10.30 | 12.00 – 1.30 |
| ಬುಧ | 12.00 – 1.30 | 7.30 – 9.00 | 10.30 – 12.00 |
| ಗುರು | 1.30 – 3.00 | 6.00 – 7.30 | 9.00 – 10.30 |
| ಶುಕ್ರ | 10.30 – 12.00 | 3.00 – 4.30 | 7.30 – 9.00 |
| ಶನಿ | 9.00 – 10.30 | 1.30 – 3.00 | 6.00 – 7.30 |

# ಸಾಲದ ಪ್ರಮಾಣ ಹೆಚ್ಚಳ ಎನ್ನುವುದು ಸತ್ಯಕ್ಕೆ ದೂರ

### ಮಾನದಂಡಗಳ ಮಿತಿಯಲ್ಲಿದೆ, ಎಲ್ಲರಿಗೂ ಸಮಾನ ಅವಕಾಶ ನೀಡುವುದೇ ಬಜೆಟ್ ಉದ್ದೇಶ: ಮುಖ್ಯಮಂತ್ರಿ ಸಿದ್ದರಾಮಯ್ಯ



**ಮೈಸೂರು, ಮಾ.7:** ಇಡೀ ರಾಜ್ಯದ ಬೆಳವಣಿಗೆಯನ್ನು ಬಜೆಟ್‌ನಲ್ಲಿ ನಿರೀಕ್ಷಿಸ ಬಹುದಾಗಿದ್ದು, ಸಮಾಜದ ಎಲ್ಲ ವರ್ಗದ ಜನರಿಗೂ ಸಮಾನ ಅವಕಾಶ ನೀಡುವುದೇ ಈ ಬಾರಿಯ ಬಜೆಟ್‌ನ ಉದ್ದೇಶವಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.

ಪಿಲ್ಲಹಳ್ಳಿ ಗ್ರಾಮದ ಹೆಲಿಪ್ಯಾಡ್‌ನಲ್ಲಿ ಮಾಧ್ಯಮದವರೊಂದಿಗೆ ಮಾತನಾಡಿ, ಪ್ರಧಾನಿ ಮೋದಿಯವರ ಅವಧಿಯಲ್ಲಿ ದೇಶದ ಸಾಲ 218 ಲಕ್ಷ ಕೋಟಿಯಾಗಿದೆ. ಸಾಲ ಮಾಡದೇ ಅಭಿವೃದ್ಧಿ ಸಾಧ್ಯವಿಲ್ಲ. ಆರ್ಥಿಕ ಹೊಣೆಗಾರಿಕೆ ಕಾಯ್ದೆ ತಿಳಿಸಿರುವ ಮಾನದಂಡಗಳ ಮಿತಿಯಲ್ಲಿ ಸಾಲದ ಪ್ರಮಾಣ ಇದೆ.

ಈ ಕಾಯ್ದೆಯಂತೆ ಸಾಲವು ಶೇ.25ರಷ್ಟಿರಬೇಕಿದ್ದು, ನಮ್ಮ ಸಾಲದ ಪ್ರಮಾಣ 24.94 ಇದ್ದು, ಮಿತಿಯೊಳಗೇ ಇದೆ. ಕೇಂದ್ರದ ಸಾಲದ ಪ್ರಮಾಣ 218 ಲಕ್ಷ ಕೋಟಿ ಇದೆ. ಮೋದಿಯವರು ಅಧಿಕಾರಕ್ಕೆ ಬಂದ ನಂತರ 165 ಲಕ್ಷ ಕೋಟಿ ಸಾಲವನ್ನು ಮಾಡಿದ್ದಾರೆ. ಇದು ಸದರಿ ಕಾಯ್ದೆಯ ಪ್ರಕಾರ 55.6 % ರಷ್ಟು ಇದೆ. ಭಾರತದ ವಿತ್ತೀಯ ಕೊರತೆ 4.4 ರಷ್ಟಿದ್ದು, ಕರ್ನಾಟಕ ರಾಜ್ಯದ ವಿತ್ತೀಯ ಕೊರತೆ 2.95 ರಷ್ಟಿದ್ದು, ಕಾಯ್ದೆಯು ಸೂಚಿಸಿರುವ ಜಿಡಿಪಿಯ ಶೇ. 3ರ ಮಿತಿಯೊಳಗೆ ಇದೆ. ಕರ್ನಾಟಕದ ಜಿಡಿಪಿ 33,05,500 ಕೋಟಿ ಇದೆ. ಬಿಜೆಪಿಯವರು , ಸರ್ಕಾರ ಹೆಚ್ಚು ಸಾಲ ಮಾಡಿದೆ ಎನ್ನುವುದು ಸತ್ಯಕ್ಕೆ ದೂರವಾದ ಮಾತು. ಆರ್ಥಿಕ ಹೊಣೆಗಾರಿಕೆ ಕಾಯ್ದೆಯ ಸೂಚಿಸಿರುವ ಮಾನದಂಡದ ಮಿತಿಯೊಳಗೆ ಸಾಲ ಮಾಡಲಾಗಿದೆ ಎಂದು ಮುಖ್ಯಮಂತ್ರಿಗಳು ವಿವರಿಸಿದರು.

ಬಿಜೆಪಿಯ ಅಶೋಕ್ ಈ ಬಾರಿಯ ಬಜೆಟ್ ಒಂದು ವರ್ಗಕ್ಕೆ ಸೀಮಿತಗೊಳಿಸಿರುವ ಬಜೆಟ್ ಆಗಿದೆ ಎಂದು ಟೀಕಿಸಿರುವ ಬಗ್ಗೆ ಪ್ರತಿಕ್ರಿಯೆ ನೀಡುತ್ತಾ, ಈ ಬಾರಿಯ ಬಜೆಟ್ ಸಾಮಾಜಿಕ ನ್ಯಾಯವನ್ನು ಕೇಂದ್ರೀಕರಿಸಿ ಮಾಡಲಾಗಿದ್ದು ಇಡೀ ರಾಜ್ಯದ ಬೆಳವಣಿಗೆಯನ್ನು ಬಜೆಟ್‌ನಲ್ಲಿ ನಿರೀಕ್ಷಿಸಲಾಗುತ್ತದೆ, ಸಮಾಜದ ಎಲ್ಲ ವರ್ಗದ ಜನರಿಗೂ ಸಮಾನ ಅವಕಾಶ ನೀಡುವ ಉದ್ದೇಶವನ್ನು ಹೊಂದಿದೆ ಎಂದರು.

**ಕೇಂದ್ರದಿಂದ ರಾಜ್ಯಕ್ಕೆ 10 ಸಾವಿರ ಕೋಟಿ ನಷ್ಟ**

ಕೇಂದ್ರ ಸರ್ಕಾರ ರಾಜ್ಯಕ್ಕೆ ನ್ಯಾಯಯುತವಾಗಿ ನೀಡಬೇಕಾಗಿದ್ದ ಅನುದಾನವನ್ನು ನೀಡದಿರುವುದರಿಂದ ರಾಜ್ಯದ ಮೇಲೆ ಆರ್ಥಿಕ ಹೊರೆ ಹೆಚ್ಚಾಗಿದೆ.

ಕೇಂದ್ರದ ಜಿಎಸ್‌ಟಿ ದರ ಪರಿಷ್ಕರಣೆಯಿಂದ ರಾಜ್ಯಕ್ಕೆ 10 ಸಾವಿರ ಕೋಟಿ ನಷ್ಟವಾಗಿದೆ ಎಂದರು.

## ಹೈಕಮಾಂಡ್ ಅವಕಾಶ ಕೊಟ್ಟರೆ ಮತ್ತೆರಡು ಬಜೆಟ್ ಮಂಡನೆ: ಸಿದ್ದರಾಮಯ್ಯ ವಿಶ್ವಾಸ

ಹೈಕಮಾಂಡ್ ಇರು ಎಂದರೆ ಇರುತ್ತೇನೆ, ಮುಂದುವರಿಯಿರಿ ಎಂದರೆ ಮುಂದುವರಿಯುತ್ತೇನೆ. ಎಲ್ಲವೂ ಹೈಕಮಾಂಡ್‌ಗೆ ಬಿಟ್ಟ ವಿಚಾರ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದರು. ತಾಲ್ಲೂಕಿನ ಪಿಲ್ಲಹಳ್ಳಿ ಗ್ರಾಮದ ಹೆಲಿಪ್ಯಾಡ್‌ನಲ್ಲಿ ಶನಿವಾರ ಪತ್ರಕರ್ತರೊಂದಿಗೆ ಮಾತನಾಡಿದ ಅವರು, ಯಾರೋ ಏನೋ ಹೇಳುತ್ತಾರೆ ಎಂಬುದು ನನಗೆ ಮುಖ್ಯ ಅಲ್ಲ. ಹೈಕಮಾಂಡ್ ತೀರ್ಮಾನವಷ್ಟೇ ಮುಖ್ಯ. ಹೈಕಮಾಂಡ್ ಬಗ್ಗೆ ಸಂಪೂರ್ಣ ವಿಶ್ವಾಸ ಇದೆ ಎಂದರು. ಮೈಸೂರಿನ ಜನರಷ್ಟೇ ಅಲ್ಲ, ಇಡೀ ನಾಡಿನ ಜನರು ನಾನು ಮುಖ್ಯಮಂತ್ರಿಯಾಗಿ ಮುಂದುವರಿಯಬೇಕು ಎಂದು ಬಯಸಿದ್ದಾರೆ. ಆದರೆ, ಅಂತಿಮವಾಗಿ ತೀರ್ಮಾನ ಮಾಡುವುದು ಹೈಕಮಾಂಡ್ ಎಂದರು. ಅವಕಾಶ ಕೊಟ್ಟರೆ ಮತ್ತರೆಡು ಬಜೆಟ್ ಮಂಡಿಸುತ್ತೇನೆ. ಈ ವಿಷಯದಲ್ಲಿ ಹೈಕಮಾಂಡ್ ತೀರ್ಮಾನಕ್ಕೆ ಬದ್ಧ ಎಂದು ತಿಳಿಸಿದರು. ರಾಜ್ಯ ರಾಜಕೀಯದಲ್ಲಿ ಮುಖ್ಯಮಂತ್ರಿ ಬದಲಾವಣೆ ವಿಚಾರದ ಬಗ್ಗೆ ಚರ್ಚೆ ನಡೆಯುತ್ತಿರುವ ಬೆನ್ನಲ್ಲೇ ಸಿಎಂ ಸಿದ್ದರಾಮಯ್ಯ ಹೇಳಿಕೆ ಮಹತ್ವ ಪಡೆದುಕೊಂಡಿದೆ.

## ಫೋನ್ ಕದ್ದಾಲಿಕೆ: ಸಾಕ್ಷ್ಯ ಇದ್ದರೆ ನೀಡಿ ತನಿಖೆಗೆ ಒತ್ತಾಯಿಸಲಿ

### ಹಿಟ್ ಅಂಡ್ ರನ್ ಬೇಡ, ಎಚ್‌ಡಿಕೆಗೆ ಪ್ರಿಯಾಂಕ್ ಖರ್ಗೆ ತಿರುಗೇಟು

**ಬೀದರ್, ಮಾ.7:** ಕುಮಾರ ಸ್ವಾಮಿಯವರು ದಿನ ಬೆಳಗಾದರೆ ಅಮಿತ್‌ಶಾ ಪಕ್ಕದಲ್ಲೇ ಕೂತ್ಕೋತಾರೆ. ಫೋನ್ ಕದ್ದಾಲಿಕೆ ಆಗಿದ್ರೆ ತನಿಖೆ ಮಾಡಲಿಕ್ಕೆ ಒತ್ತಾಯ ಮಾಡಲಿ, ಸಾಕ್ಷಿಗಳನ್ನ ಕೊಡಲಿ. ಅದುಬಿಟ್ಟು ಯಾವಾಗಲೂ ಪಲಾಯನ ಮಾಡಿದಂತೆ ಮಾತನಾಡುವುದು ಅವರ ಘನತೆಗೆ ಗೌರವ ತರುವುದಿಲ್ಲ ಎಂದು ಸಚಿವ ಪ್ರಿಯಾಂಕ್ ಖರ್ಗೆ ಹೇಳಿದ್ದಾರೆ.

ಕೇಂದ್ರದ ಅನ್ಯಾಯದಿಂದ ರಾಜ್ಯಕ್ಕೆ ಇಷ್ಟೊಂದು ಸಾಲದ ಹೊರೆಯಾಗಿದೆ. ಬಜೆಟ್ ವಿಚಾರವಾಗಿ ಸಾಲರಾಮಯ್ಯ ಎಂದು ವ್ಯಂಗ್ಯ ಮಾಡಿದ್ದ ಬಿಜೆಪಿ ವಿರುದ್ಧ ಹರಿಹಾಯ್ದ ಅವರು, ಅವರಿಗೆ ದೇಶ ಮತ್ತು ರಾಜ್ಯವನ್ನ ಆರ್ಥಿಕವಾಗಿ ಹೇಗೆ ನಡೆಸಬೇಕು ಎಂದು ಗೊತ್ತಿಲ್ಲ. ಕೇಂದ್ರ ಸರ್ಕಾರದ ಅನ್ಯಾಯದಿಂದಾಗಿ ನಮಗೆ ಇಷ್ಟೊಂದು ಸಾಲದ ಹೊರೆಯಾಗಿದೆ ಎಂದು ಅಸಮಾಧಾನ ಹೊರಹಾಕಿದರು. ಕೇಂದ್ರ ಸರ್ಕಾರ ನಮ್ಮ 80 ಸಾವಿರ ಕೋಟಿ ರೂ. ಪಾಲನ್ನು ನೀಡಿಲ್ಲ. ಅದರಿಂದಾಗಿ ಸಾಲವಾಗಿದೆ. ಎಎಚ ಯೋಜನೆಯ ಕೇಂದ್ರದ ಪಾಲಾದ 15 ಸಾವಿರ ಕೋಟಿ ರೂ. ನಾವು ಕೊಟ್ಟಿದ್ದೇವೆ. ಪಂಚಾಯಿತಿಗೆ ಕೊಡಬೇಕಾದ 15ನೇ ಹಣಕಾಸಿನ ಪಾಲನ್ನು ಕೂಡಾ ಕೇಂದ್ರ ನೀಡಿಲ್ಲ. ಕೇಂದ್ರ ಸರ್ಕಾರದ ಎಲ್ಲ ಯೋಜನೆಗಳಿಗೆ ನಾವು ಅನುದಾನ ಕೊಡ್ತಿದ್ದೇವೆ. ನಾವು ಸಾಲ ಮಾಡಿದ್ದನ್ನು ಮಾತ್ರ ಹೇಳ್ತಾರೆ. ಮೋದಿಯವರು 200 ಲಕ್ಷ ಕೋಟಿ ರೂ. ಸಾಲ ಮಾಡಿದ್ದಾರೆ. ಅವರು ಕೂಡಾ ಸಾಲ ಮಾಡೇ ದೇಶ ನಡೆಸುತ್ತಿದ್ದಾರೆ. ಅದನ್ನು ನಡೆಸಲಿಕ್ಕೆ ಅವರೊಬ್ಬರೇ ಬೇಕಾ. ಬಿಜೆಪಿಯವರ ರೀತಿ ಚಿಕ್ಕಮಕ್ಕಳು ಕೂಡಾ ಮಾತನಾಡಲ್ಲ, ಅವರನ್ನು ದೇವರೇ ಕಾಪಾಡಬೇಕು ಎಂದು ವ್ಯಂಗ್ಯವಾಡಿದ್ದಾರೆ.

## ಸಿಲಿಂಡರ್ ಬೆಲೆ ಏರಿಕೆ: ಬಿಜೆಪಿಯವರನ್ನೇ ಕೇಳಿ



ಇರಾನ್ – ಇಸ್ರೇಲ್ ಯುದ್ಧದ ಪರಿಣಾಮ ಭಾರತದ ಮೇಲೂ ಬೀರಿದೆ. ದೇಶದಲ್ಲಿ ಸಿಲಿಂಡರ್ ಬೆಲೆಯಲ್ಲಿ ಏರಿಕೆಯಾಗಿದ್ದು ಈಗ ಗ್ರಾಹಕರು ಆಕ್ರೋಶ ವ್ಯಕ್ತಪಡಿಸುತ್ತಿದ್ದಾರೆ. ಈ ಬಗ್ಗೆ ಬಿಜೆಪಿಯವರನ್ನೇ ಕೇಳಿ ಎಂದು ಐಟಿಬಿಟಿ ಸಚಿವ ಪ್ರಿಯಾಂಕ ಖರ್ಗೆ ಗುಡುಗಿದ್ದಾರೆ. ಕಲಬುರಗಿಯಲ್ಲಿ ಮಾತನಾಡಿದ ಅವರು, ಇತ್ತೀಚೆಗೆ ದಾಂಪತ್ಯಕ್ಕೆ ಕಾಲಿಟ್ಟ ನಟ ವಿಜಯ್ ದೇವರಕೊಂಡ ಹಾಗೂ ನಟಿ ರಶ್ಮಿಕಾ ಭೇಟಿಯಾಗಲು ಪ್ರಧಾನಿ ಅವರಿಗೆ ಸಮಯವಿದೆ. ನಾಳೆ ಭಾರತ ಮತ್ತು ನ್ಯೂಜಿಲೆಂಡ್ ಫೈನಲ್ ಪಂದ್ಯ ವೀಕ್ಷಣೆಗೆ ಕೂಡ ಅವರು ಹೋಗಬಹುದು. ಕೇಂದ್ರ ಸರ್ಕಾರದವರು ವಿದೇಶಾಂಗ ನೀತಿಯನ್ನು ಅಡ ಇಟ್ಟಿದ್ದಾರೆ. ದೆಹಲಿಗೆ ಬಂದು ಅಮೆರಿಕ ವಿದೇಶಾಂಗ ಉಪ ಕಾರ್ಯದರ್ಶಿ ಹೇಳುತ್ತಾರೆ. ಭಾರತವನ್ನು ಚೀನಾದಷ್ಟು ಬೆಳೆಯುವುದಕ್ಕೆ ಬಿಡುವುದಿಲ್ಲ ಎನ್ನುತ್ತಾರೆ ಎಂದು ಹೇಳಿದರು. ಇದನ್ನು ಕೇಂದ್ರ ಸರ್ಕಾರದ ಒಬ್ಬರಾದರೂ ಮಂತ್ರಿ ವಿರೋಧಿಸಿದರೆ? ಯಾಕೆ ಭಾರತದ ಸಚಿವರು ವಿರೋಧ ಮಾಡುತ್ತಿಲ್ಲವೇ? ನೇರವಾಗಿ ನರೇಂದ್ರ ಮೋದಿ ಹಾಗೂ ಭಾರತದ ಮರ್ಯಾದೆ ಹಾಳಾಗುತ್ತಿದೆ. ಇವಾಗ ಆರ್‌ಎಸ್‌ಎಸ್‌ನವರು ಎಲ್ಲಿದ್ದಾರೆ, ಎಪ್‌ಸ್ಟೀನ್ ಫೈಲ್ಸ್‌ನಲ್ಲಿ ಏನಾದರೂ ವಿಡಿಯೊ ಇದೆಯಾ? ನರೇಂದ್ರ ಮೋದಿ ರಾಜಕೀಯವನ್ನು ನಾಶ ಮಾಡುತ್ತೇವೆ ಅಂತ ಹೇಳುತ್ತಾರೆ ಎಂದು ಪ್ರಿಯಾಂಕ ಖರ್ಗೆ ಹೇಳಿದರು.

## ಬೆಂಗಳೂರು ವಿ.ವಿ. ಕುಲಪತಿ ಪ್ರೊ. ಬಿ.ರಮೇಶ್‌ಗೆ ಸ್ವದೇಶಿ ವಿಜ್ಞಾನ ಆಂದೋಲನ ಪ್ರಶಸ್ತಿ ಪ್ರದಾನ



ಚಾಮರಾಜನಗರ ವಿಶ್ವವಿದ್ಯಾಲಯದಲ್ಲಿ ಏರ್ಪಟ್ಟಿರುವ 18ನೇ ಕನ್ನಡ ವಿಜ್ಞಾನ ಸಮ್ಮೇಳನದಲ್ಲಿ ಡಾ.ಮನಮೋಹನ್ ಸಿಂಗ್ ಬೆಂಗಳೂರು ನಗರ ವಿಶ್ವವಿದ್ಯಾಲಯದ ಕುಲಪತಿ ಪ್ರೊ. ಬಿ. ರಮೇಶ್ ಅವರಿಗೆ 2026ನೇ ಸಾಲಿನ ಪಂಡಿತ್ ಭೀಮಸೇನ ಜೋಶಿ ಸಾಂಸ್ಕೃತಿಕ ವಿಜ್ಞಾನ ಪುರಸ್ಕಾರ ನೀಡಿ ಗೌರವಿಸಲಾಗಿದೆ.

ಅಧ್ಯಯನ, ಅಧ್ಯಾಪನ, ಸಂಶೋಧನೆ ಮತ್ತು ಶೈಕ್ಷಣಿಕ ಆಡಳಿತ ಕ್ಷೇತ್ರದಲ್ಲಿ ಕಳೆದ 27 ವರ್ಷಗಳಿಂದ ಸೇವೆ ಸಲ್ಲಿಸುತ್ತಿರುವ ಪ್ರೊ. ಬಿ. ರಮೇಶ್ ರವರು ಸಮಾಜ ಕಾರ್ಯ ರಂಗದಲ್ಲಿ ನೀಡಿರುವ ಮಹತ್ವದ ಕೊಡುಗೆಗಾಗಿ ಸ್ವದೇಶಿ ವಿಜ್ಞಾನ ಆಂದೋಲನದ ವತಿಯಿಂದ ಈ ಪ್ರಶಸ್ತಿ ಪ್ರದಾನ ಮಾಡಲಾಗಿದೆ.

ರಾಜ್ಯದ ವಿವಿಧ ವಿಶ್ವವಿದ್ಯಾಲಯಗಳ ಅನೇಕ ಆಡಳಿತಾತ್ಮಕ ಹುದ್ದೆಗಳಲ್ಲಿ ಪ್ರೊ. ರಮೇಶ್.ಬಿ. ಸಲ್ಲಿಸಿರುವ ಅತ್ಯುತ್ತಮ ಸೇವೆಯನ್ನು ಹಾಗೂ ಶೈಕ್ಷಣಿಕ ರಂಗದ ಪ್ರಗತಿಗೆ ಅವಿರತವಾಗಿ ನಡೆಸುತ್ತಿರುವ ಪರಿಶ್ರಮವನ್ನು ಪರಿಗಣಿಸಿ ಈ ಪುರಸ್ಕಾರವನ್ನು ನೀಡಲಾಗಿದೆ ಎಂದು ಪ್ರಶಸ್ತಿ ಪತ್ರದಲ್ಲಿ ಉಲ್ಲೇಖಿಸಲಾಗಿದೆ.

# ಜಾತಿ, ಧರ್ಮದ ಹೆಸರಿನಲ್ಲಿ ಸಮಾಜ ಒಡೆಯುವ ಪ್ರಯತ್ನಗಳ ಬಗ್ಗೆ ಜಾಗೃತರಾಗಿರಿ ಜನತೆಗೆ ಸಿಎಂ ಸಿದ್ದರಾಮಯ್ಯ ಕರೆ



**ಎಚ್.ಡಿ.ಕೋಟೆ, ಮಾ.7:** ದೇವರೆಂಬ ನಂಬಿಕೆಯು ಜಾತಿಧರ್ಮಗಳನ್ನು ಮೀರಿದ್ದು. ಜಾತಿಧರ್ಮಗಳ ಹೆಸರಿನಲ್ಲಿ ಸಮಾಜವನ್ನು ಒಡೆಯುವ ಪ್ರಯತ್ನಗಳ ಬಗ್ಗೆ ಜಾಗೃತರಾಗಿರಬೇಕು ಎಂದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.

ಎಚ್.ಡಿ.ಕೋಟೆಯ ಶಿರಮಹಳ್ಳಿಯಲ್ಲಿ ಶ್ರೀ ಲಕ್ಷ್ಮೀದೇವಿ ಅಮ್ಮನವರ ನೂತನ ದೇವಾಲಯವನ್ನು ಶನಿವಾರ ಉದ್ಘಾಟಿಸಿ ಮಾತನಾಡಿ, ಶಿರಮಹಳ್ಳಿಯ ಜನರು ದೈವಭಕ್ತರು. ದೇಗುಲದಲ್ಲಿ ಸ್ಥಾಪಿಸುವ ಪ್ರತಿಮೆಯಲ್ಲಿ ದೇವರನ್ನು ಕಾಣುವುದು ನಮ್ಮ ನಂಬಿಕೆ. ಬಸವಾದಿ ಶರಣರು, ದೇವರು ಎಲ್ಲೆಡೆಯೂ , ಎಲ್ಲರಲ್ಲಿಯೂ ಇದ್ದಾನೆ ಎಂದಿದ್ದರು. ನಮ್ಮ ಪ್ರಾರ್ಥನೆಯಲ್ಲಿ ಇತರರ ಒಳಿತನ್ನೂ ಕೇಳಬೇಕಾಗಿದ್ದು, ದೇವರೆಂಬ ನಂಬಿಕೆಯು ಜಾತಿಧರ್ಮಗಳನ್ನು ಮೀರಿದಂಥದ್ದು. ಯಾವ ಜಾತಿಧರ್ಮಗಳು ಮನುಷ್ಯ ಮನುಷ್ಯನನ್ನು ಪ್ರೀತಿಸಬೇಕೆಂದೇ ತಿಳಿಸುತ್ತದೆ ಎಂದರು. ಸಮಾಜದ ಪಟ್ಟಭದ್ರ ಹಿತಾಸಕ್ತಿಗಳು, ಸಮಾಜದ ಜಾತಿವ್ಯವಸ್ಥೆ ಹಾಗೂ ಅಸಮಾನತೆಗಳನ್ನು ಬೆಂಬಲಿಸುತ್ತಾರೆ. ಜಾತಿಧರ್ಮಗಳ ಹೆಸರಿನಲ್ಲಿ ಸಮಾಜವನ್ನು ಒಡೆಯುವ ಪ್ರಯತ್ನಗಳು ನಡೆಯುತ್ತಿವೆ. ಇಂತಹ ಕುಶಕ್ತಿಗಳ ಬಗ್ಗೆ ನಾವು ಜಾಗೃತರಾಗಿರಬೇಕು. ಇಂದು ಲಕ್ಷ್ಮೀ ದೇಗುಲದ ಉದ್ಘಾಟನೆಯನ್ನು ಜಾತ್ರೆಯ ರೀತಿಯಲ್ಲಿ ಆಯೋಜಿಸಿರುವುದು ಸಂತಸದ ವಿಚಾರ. ಜಾತಿ–ಧರ್ಮಗಳ ಭೇದ ಮರೆದು ಜನರು ಒಗ್ಗಟ್ಟಾಗುವ ಅವಶ್ಯಕತೆ ಹಿಂದೆಂದಿಗಿಂತಲೂ ಹೆಚ್ಚಿದೆ ಎಂದರು.

# ರಷ್ಯಾ ತೈಲ ಖರೀದಿಗೆ ಅಮೆರಿಕದಿಂದ ಒಪ್ಪಿಗೆ ಪಡೆಯುವುದು ಗುಲಾಮಗಿರಿ

### ಪ್ರಧಾನಿ ಮೋದಿ ವಿರುದ್ಧ ಕೈ ನಾಯಕ ಬಿ.ಕೆ. ಹರಿಪ್ರಸಾದ್ ಕಿಡಿ



**ಬೆಂಗಳೂರು, ಮಾ.7:** ರಷ್ಯಾದಿಂದ ತೈಲ ಖರೀದಿಗೆ ಅಮೆರಿಕದ ಒಪ್ಪಿಗೆ ಪಡೆಯುವುದು ಗುಲಾಮಗಿರಿ ಎಂದು ವಿಧಾನ ಪರಿಷತ್ ಸದಸ್ಯ ಬಿ.ಕೆ.ಹರಿಪ್ರಸಾದ್ ಟೀಕಿಸಿದ್ದಾರೆ. ಭಾರತವು ರಷ್ಯಾದಿಂದ ತೈಲ ಖರೀದಿಸಲು ಅಮೆರಿಕದ ಒಪ್ಪಿಗೆ ಪಡೆಯುವುದು, 30 ದಿನಗಳ ವಿನಾಯಿತಿ ನೀಡುವುದು ಸಾರ್ವಭೌಮ ರಾಷ್ಟ್ರದ ಘನತೆಯನ್ನು ಗುಲಾಮಗಿರಿ ವ್ಯವಸ್ಥೆಗೆ ವಿಶ್ವಗುರು ತಳ್ಳಿರುವ ನಿದರ್ಶನಕ್ಕೆ ಸಾಕ್ಷಿ ಎಂದು ಪ್ರಧಾನಿ ಮೋದಿ ವಿರುದ್ಧ ಕಿಡಿಕಾರಿದ್ದಾರೆ.

ಈ ಬಗ್ಗೆ ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಪೋಸ್ಟ್ ಮಾಡಿರುವ ಅವರು, ಭಾರತವು ರಷ್ಯಾದಿಂದ ಕಚ್ಚಾ ತೈಲ ಖರೀದಿಸಲು 30 ದಿನಗಳ ವಿನಾಯ್ತಿ ನೀಡಲಾಗಿದೆ ಎಂದು ಅಮೆರಿಕದ ಸಚಿವರು ಬಹಿರಂಗವಾಗಿ ಹೇಳಿರುವುದು ಸ್ವಾತಂತ್ರ್ಯ ಭಾರತದ ವಿದೇಶಾಂಗ ಗೌರವಕ್ಕೆ ಬಿದ್ದಿರುವ ಅಪಮಾನಕರ ಹೊಡೆತ. ಒಂದು ಸಾರ್ವಭೌಮ ರಾಷ್ಟ್ರ ತನ್ನ ಇಂಧನ ಅವಶ್ಯಕತೆಗಳನ್ನು ಯಾವ ದೇಶದಿಂದ ಪೂರೈಸಿಕೊಳ್ಳಬೇಕು ಎಂಬ ನಿರ್ಧಾರಕ್ಕೂ ಇನ್ನೊಂದು ರಾಷ್ಟ್ರದಿಂದ ವಿನಾಯ್ತಿ ಪಡೆಯಲೇಬೇಕಾದ ಪರಿಸ್ಥಿತಿ ಉಂಟಾಗಿದೆ ಎಂದರೆ ಅದು ಕೇವಲ ರಾಜತಾಂತ್ರಿಕ ವೈಫಲ್ಯವಲ್ಲ. ಅದು ರಾಷ್ಟ್ರದ ಆತ್ಮಗೌರವವನ್ನೇ ತುತ್ತು ಮಾಡಿದ ಆಡಳಿತದ ನಗ್ನ ಸತ್ಯ ಎಂದು ಹರಿಪ್ರಸಾದ್ ಟೀಕಿಸಿದ್ದಾರೆ.

ಸ್ವಾತಂತ್ರ್ಯ ನಂತರ ಭಾರತವು ಸ್ವತಂತ್ರ ವಿದೇಶಾಂಗ ಧೋರಣೆಯ ಮೂಲಕ ವಿಶ್ವದಲ್ಲಿ ಗೌರವ ಪಡೆದಿತ್ತು. ಇಂದು ಅಮೆರಿಕ ರಾಜಕೀಯ ತಾಳಕ್ಕೆ ತಕ್ಕಂತೆ ಕುಣಿಯುವ ಸ್ಥಿತಿಗೆ ಕುಸಿದಿರುವುದು ಆತಂಕಕಾರಿ ಬೆಳವಣಿಗೆ. ನರೇಂದ್ರ ಮೋದಿ ಸರ್ಕಾರದ ವಿದೇಶಾಂಗ ದೌರ್ಬಲ್ಯ ಮತ್ತು ಆತ್ಮಗೌರವ ಕುಸಿದಿರುವುದಕ್ಕೆ ಜೀವಂತ ಸಾಕ್ಷಿ ಎಂದು ಹೇಳಿದ್ದಾರೆ.ಅಮೆರಿಕ ಸಚಿವರು ಭಾರತಕ್ಕೆ 30 ದಿನಗಳ ವಿನಾಯ್ತಿ ನೀಡಲಾಗಿದೆ ಎಂದು ಜಗತ್ತಿನ ಮುಂದೆ ಹೇಳುವ ಮಟ್ಟಿಗೆ ಪರಿಸ್ಥಿತಿ ತಲುಪಿರುವುದೇ ಮೋದಿ ಸರ್ಕಾರದ ದುರ್ಬಲತೆ ಮತ್ತು ಆತ್ಮಗೌರವ ಹೀನತೆಯ ಪರಾಕಾಷ್ಠೆ. ಇದು ಕೇವಲ ರಾಜಕೀಯ ಅಪಮಾನವಲ್ಲ. ಇದು ಭಾರತದ ಸ್ವಾಭಿಮಾನವನ್ನು ಅಂತಾರಾಷ್ಟ್ರೀಯ ವೇದಿಕೆಯಲ್ಲಿ ಹರಾಜು ಹಾಕಿದಂತಾಗಿದೆ ಎಂದು ಅವರು ಟೀಕಿಸಿದ್ದಾರೆ.ಸ್ವತಂತ್ರ ಭಾರತದ ಇತಿಹಾಸದಲ್ಲಿ ಇಷ್ಟು ಮಟ್ಟಿಗೆ ಕುಗ್ಗಿಸಿ ವಿಶ್ವಗುರುವಿನ ಘೋಷಣೆಗಳ ಹಿಂದೆ ರಾಜತಾಂತ್ರಿಕ ಧೀನತೆಯನ್ನು ಮುಚ್ಚಿಟ್ಟ ಪ್ರಧಾನಿಯನ್ನು ನೋಡಲು ಸಾಧ್ಯವಿಲ್ಲ. ಮಾತಿನಲ್ಲಿ ವಿಶ್ವಗುರು, ನಡೆಗಳಲ್ಲಿ ಪರಾಧೀನತೆ ತೋರುವುದು ನರೇಂದ್ರ ಮೋದಿಯ ವಿದೇಶಾಂಗ ನೀತಿಯ ವ್ಯಂಗ್ಯಾತ್ಮಕ ಸತ್ಯ ಎಂದು ಅವರು ಕಿಡಿಕಾರಿದ್ದಾರೆ.ವಿಶ್ವಗುರು ಎಂಬ ಘೋಷಣೆಯಿಂದ ದೇಶದ ಗೌರವ ಉಳಿಯುವುದಿಲ್ಲ. ಆತ್ಮಗೌರವದಿಂದ ಸ್ವತಂತ್ರ ರಾಜತಾಂತ್ರಿಕತೆ, ಧೈರ್ಯದಿಂದ ಮಾತ್ರ ರಾಷ್ಟ್ರದ ಮಾನ ಉಳಿಯುತ್ತದೆ. ಆ ಧೈರ್ಯವೇ ನರೇಂದ್ರ ಮೋದಿ ಆಡಳಿತದಲ್ಲಿ ಕಾಣೆಯಾಗಿರುವುದು ಇಂದಿನ ಭಾರತದ ಅತ್ಯಂತ ಕಹಿಸತ್ಯ ಎಂದು ಅವರು ಹೇಳಿದ್ದಾರೆ.

# ಮುಂದಿನ ದಿನಗಳಲ್ಲಿ ಬಜೆಟ್ ಪರಿಣಾಮ ಜನರಿಗೆ ಹೊರೆಯಾಗಲಿದೆ

### ಅಂಕಿ-ಅಂಶಗಳನ್ನು ಮರೆಮಾಚಲಾಗಿದೆ: ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ



**ಮಂಡ್ಯ, ಮಾ.7:** ಮುಖ್ಯಮಂತ್ರಿ ಸಿದ್ದರಾಮಯ್ಯ ಮಂಡಿಸಿರುವ ದಾಖಲೆ ಬಜೆಟ್‌ನ ಪರಿಣಾಮ ಮುಂದಿನ ದಿನಗಳಲ್ಲಿ ಜನರ ಮೇಲೆ ಹೊರೆ ಬೀಳಲಿದೆ ಎಂದು ಕೇಂದ್ರ ಬೃಹತ್ ಕೈಗಾರಿಕೆ ಮತ್ತು ಉಕ್ಕು ಖಾತೆ ಸಚಿವ ಎಚ್.ಡಿ.ಕುಮಾರಸ್ವಾಮಿ ತಿಳಿಸಿದರು.

ಜಿಲ್ಲೆಯ ವಿ.ಸಿ.ಫಾರ್ಮ್‌ನಲ್ಲಿ 14 ಕೋಟಿ ರೂ. ವೆಚ್ಚದಲ್ಲಿ ನಿರ್ಮಾಣವಾಗಲಿರುವ ಸುಜ್ಜಜಿತ, ಆಧುನಿಕ ಕ್ರೀಡಾಂಗಣದ ಸ್ಥಳ ಪರಿಶೀಲನೆ ನಡೆಸಿದ ನಂತರ ಸುದ್ದಿಗಾರರೊಂದಿಗೆ ಮಾತನಾಡಿ, ಬಜೆಟ್‌ನಲ್ಲಿ ಅಂಕಿಅಂಶಗಳನ್ನು ಮರೆಮಾಚಿದ್ದಾರೆ. ಜಿಡಿಪಿ ಬೆಳವಣಿಗೆ ಶೇ.25ರಷ್ಟು ಮೀರಿದೆ. ಅದರ ಪರಿಣಾಮ ಮುಂದೆ ಕಂಡುಬರುತ್ತದೆ. ಮಾತೆತ್ತಿದರೆ ಕೇಂದ್ರ ಸರ್ಕಾರವನ್ನು ದೂಷಣೆ ಮಾಡಲಾಗುತ್ತಿದೆ. ಎಲ್ಲಾ ರಂಗದಲ್ಲೂ ರಾಜ್ಯ ಸರ್ಕಾರ ವಿಫಲವಾಗಿದೆ ಎಂದು ಆರೋಪಿಸಿದರು.

ಎತ್ತಿನಹೊಳೆ ಯೋಜನೆ ಮೊದಲ ಹಂತದ ಕಾಮಗಾರಿ ಪೂರ್ಣಗೊಳಿಸಿದ್ದು, 2ನೇ ಹಂತ ಪ್ರಾರಂಭಿಸುವುದಾಗಿ ಹೇಳಿದ್ದಾರೆ. ಕೊರಟಗೆರೆ ಬಳಿ 5.5 ಟಿಎಂಸಿ ಅಡಿ ಸಾಮರ್ಥ್ಯದ ಜಲಾಶಯ ನಿರ್ಮಿಸಲು ಉದ್ದೇಶಿಸಲಾಗಿತ್ತು. ಈಗ ಅದನ್ನು 1.2 ಟಿಎಂಸಿಗೆ ಇಳಿಸಿದ್ದಾರೆ. ಪರಿಸರ ಇಲಾಖೆಯ ಅನುಮತಿ ದೊರೆತಿಲ್ಲ. ಎರಡು ವರ್ಷದಿಂದಲೂ ಯೋಜನೆ ಪೂರ್ಣಗೊಳಿಸುವುದಾಗಿ ಹೇಳುತ್ತಿದ್ದಾರೆ. ಇದರದ್ದೇ ಈ ಸ್ಥಿತಿಯಾದರೆ ಕೋಲಾರ–ಚಿಕ್ಕಬಳ್ಳಾಪುರ ಜಿಲ್ಲೆಗಳಿಗೆ ನೀರು ಹರಿಸುವುದು ಯಾವಾಗ ಎಂದು ಪ್ರಶ್ನಿಸಿದರು.

ಭರಪೂರ ಘೋಷಣೆಗಳನ್ನು ಮಾಡಿದ್ದಾರೆ. ಆದರೆ ನೀರಾವರಿ ಯೋಜನೆಗಳಿಗೆ ಸಾಕಷ್ಟು ಹಣವನ್ನು ಇಟ್ಟಿಲ್ಲ. ಮೂರು ಗಂಟೆಗಳ ಕಾಲ ಬಜೆಟ್ ಖುಷಿಯಿಂದ ಓದಲಿಲ್ಲ. ಶ್ರಮಪಟ್ಟು ಓದಿದ್ದಾರೆ. ಕನ್ನಡ ಪಾಠ ಮಾಡುವ ಅವರು ಶ್ರಮಪಟ್ಟು ಓದುವುದರಲ್ಲೇ ಬಜೆಟ್ ಏನೆಂಬುದು ಗೊತ್ತಾಗಿದೆ ಟೀಕಿಸಿದರು.

**ಸುಜ್ಜಜಿತ ಕ್ರೀಡಾಂಗಣ**

ಖೇಲೋ ಇಂಡಿಯ ಯೋಜನೆಯಡಿ ಒಂದೂವರೆ ಎಕರೆ ಪ್ರದೇಶದಲ್ಲಿ 14 ಕೋಟಿ ರೂ. ವೆಚ್ಚದಲ್ಲಿ ಸುಜ್ಜಜಿತ, ಆಧುನಿಕ ಕ್ರೀಡಾಂಗಣ ಮಾಡಲು ಶಂಕುಸ್ಥಾಪನೆ ನೆರವೇರಿಸಲಾಗುವುದು. ಕೇಂದ್ರ ಯುವ ವ್ಯವಹಾರಗಳು ಹಾಗೂ ಕ್ರೀಡಾ ಸಬಲೀಕರಣ ಸಚಿವ ಮನ್ಸುಕ್ ಮಾಂಡವಿಯಾ ಶಂಕುಸ್ಥಾಪನೆ ನೆರವೇರಿಸಲಿದ್ದಾರೆ. ಇಲ್ಲಿ ಕ್ರೀಡಾ ತರಬೇತಿ, ಹಾಸ್ಟೆಲ್ ವ್ಯವಸ್ಥೆ ಕಲ್ಪಿಸಲಾಗುವುದು. 5 ಎಕರೆ ಬೇಕಾಗಿದ್ದು, ಒಂದೂವರೆ ಎಕರೆ ಮಾತ್ರ ನೀಡಲಾಗಿದೆ. ಒಂದು ಸಾವಿರ ಕೋಟಿ ರೂ. ವೆಚ್ಚದಲ್ಲಿ ಮಂಡ್ಯ ಜಿಲ್ಲೆಯಲ್ಲಿ ಕೈಗಾರಿಕೆ ಸ್ಥಾಪನೆ ಮಾಡಲಾಗುವುದು. ಕೆಐಎಡಿಬಿ ವತಿಯಿಂದ ಮೂಲಸೌಕರ್ಯ ಸಹಿತ ಜಮೀನು ಒದಗಿಸಬೇಕು. ಆನಂತರ ನಮ್ಮ ಅಧಿಕಾರಿಗಳು ಸ್ಥಳ ಪರಿಶೀಲನೆ ನಡೆಸಲಿದ್ದಾರೆ ಎಂದು ಹೇಳಿದರು.

## ಡಿಸಿಎಂ ಅವರನ್ನು ನಾನೇಕೆ ತಡೆಯಲಿ

ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ಮುಖ್ಯಮಂತ್ರಿಯಾಗುವುದನ್ನು ನಾನೇಕೆ ತಡೆಯಲಿ. ಮುಖ್ಯಮಂತ್ರಿ ಸಿದ್ದರಾಮಯ್ಯನವರು ಸಿಎಂ ಸ್ಥಾನವನ್ನು ಡಿ.ಕೆ.ಶಿವಕುಮಾರ್‌ಗೆ ಬಿಟ್ಟು ಕೊಡುವಂತೆ ಒಂದು ವಾರದಿಂದಲೂ ಹೇಳುತ್ತಿದ್ದೇನೆ. ಶಿವಕುಮಾರ್ ಅವರು ಸಿದ್ದರಾಮಯ್ಯನವರ ಜೊತೆ ಮಾತನಾಡಲಿ. ಅದನ್ನು ಬಿಟ್ಟು ಬೇರೆಯವರ ಮೇಲೆ ಆರೋಪ ಮಾಡಿದರೆ ಪ್ರಯೋಜನವಿಲ್ಲ ಎಂದು ಹೇಳಿದರು. ಮದ್ದೂರು ಶಾಸಕ ಕದಲೂರು ಉದಯ್ ಅವರಿಗೂ ನನಗೂ ಹೋಲಿಕೆ ಮಾಡಬೇಡಿ. ನಾನೇನು ಶ್ರೀಲಂಕಾದಲ್ಲಿ ಕುಳಿತಿಲ್ಲ ಎಂದು ಖಾರವಾಗಿ ಪ್ರತಿಕ್ರಿಯಿಸಿದರು. ಅಂತಾರಾಷ್ಟ್ರೀಯ ಮಟ್ಟದಲ್ಲಿ ಆಗುತ್ತಿರುವ ಬೆಳವಣಿಗೆ ಹಿನ್ನಲೆಯಲ್ಲಿ ಅನಿಲ ದರ ಏರಿಕೆ ಸೇರಿದಂತೆ ಹಲವು ರೀತಿಯ ಹೊರೆ ಹೊರಲು ತಯಾರಾಗಬೇಕಿದೆ ಎಂದು ಅವರು ಅನಿಲ ಬೆಲೆ ಏರಿಕೆಯನ್ನು ಸಮರ್ಥಿಸಿಕೊಂಡರು.

# ಮುಂಬಯಿ: ಬಂಟರ ಭವನದಲ್ಲಿ ವಾರ್ಷಿಕ ವಿಶ್ವ ಮಹಿಳಾ ದಿನಾಚರಣೆ

### ಶ್ರೀಮತಿ ರಾಧಾಬಾಯಿ ತಿಮ್ಮಪ್ಪ ಭಂಡಾರಿ ಸ್ಮಾರಕ ಪ್ರಶಸ್ತಿ-2026 ಪ್ರದಾನ



**ಮುಂಬಯಿ, ಮಾ.07:** ಬಂಟರ ಸಂಘ ಮುಂಬಯಿ ಇದರ ಮಹಿಳಾ ವಿಭಾಗವು ಇಂದಿಲ್ಲಿ ಶನಿವಾರ ಅಪರಾಹ್ನ ಕುರ್ಲಾ ಪೂರ್ವದ ಚುನ್ನಾಭಟ್ಟಿ ಇಲ್ಲಿನ ಬಂಟರ ಭವನದ ಶ್ರೀಮತಿ ರಾಧಾಬಾಯಿ ತಿಮ್ಮಪ್ಪ ಭಂಡಾರಿ ಸಭಾಗೃಹದಲ್ಲಿ ಬಂಟರ ಸಂಘ ಮುಂಬಯಿ ಅಧ್ಯಕ್ಷ ಪ್ರವೀಣ್ ಭೋಜ ಶೆಟ್ಟಿ ಮಾರ್ಗದರ್ಶನ, ಮಹಿಳಾ ವಿಭಾಗಧ್ಯಕ್ಷೆ ಚಿತ್ರಾ ಆರ್.ಶೆಟ್ಟಿ ಮುಂದಾಳತ್ವದಲ್ಲಿ ವೈವಿಧ್ಯಮಯ ಕಾರ್ಯಕ್ರಮಗಳೊಂದಿಗೆ ವಾರ್ಷಿಕ ವಿಶ್ವ ಮಹಿಳಾ ದಿನಾಚರಣೆ ಅದ್ದೂರಿಯಾಗಿ ಸಂಭ್ರಮಿಸಿತು.

ಅಧ್ಯಕ್ಷ ಪ್ರವೀಣ್ ಬಿ.ಶೆಟ್ಟಿ ಅಧ್ಯಕ್ಷತೆಯಲ್ಲಿ ನಡೆಸಲಾದ ಸಮಾರಂಭದಲ್ಲಿ ಭಾರತ್ ಕಾಲೇಜ್ ಆಫ್ ಇಂಜಿನಿಯರಿಂಗ್ (ಬದ್ಲಾಪುರ) ಇದರ ಸ್ಥಾಪಕ ಟ್ರಸ್ಟಿ ಪ್ರೊ ಶುಭಲಕ್ಷ್ಮೀ ಸುದರ್ಶನ್ ಹೆಗ್ಡೆ, ಪನ್‌ಬಾಯ್ ಇಂಟರ್‌ನ್ಯಾಶನಲ್ ಸ್ಕೂಲ್ (ಸಾಂತಾಕ್ರೂಜ್) ಇದರ ಆಡಳಿತ ಟ್ರಸ್ಟಿ ಮೋಹಿನಿ ಪಿ.ಶೆಟ್ಟಿ ಅತಿಥಿ ಅಭ್ಯಾಗತರು ಗಳಾಗಿದ್ದರು. 2026ನೇ ಸಾಲಿನ ಶ್ರೀಮತಿ ರಾಧಾಬಾಯಿ ತಿಮ್ಮಪ್ಪ ಭಂಡಾರಿ ಸ್ಮಾರಕ ಪ್ರಶಸ್ತಿಯನ್ನು ಮುಂಬಯಿ ವಿಶ್ವವಿದ್ಯಾಲಯದ ಕನ್ನಡ ವಿಭಾಗದ ಸಹಾಯಕ ಪ್ರಾಧ್ಯಾಪಕಿ ಡಾ। ಪೂರ್ಣಿಮಾ ಎಸ್.ಶೆಟ್ಟಿ ಅವರಿಗೆ (ಪತಿ ಸುಧಾಕರ್ ಶೆಟ್ಟಿ ಅವರನ್ನೊಳಗೊಂಡು) ಪ್ರದಾನಿಸಿ ಅಭಿನಂದಿಸಲಾಯಿತು.

ಬಂಟರ ಸಂಘದ ಉಪಾಧ್ಯಕ್ಷ ಮಹೇಶ ಎಸ್.ಶೆಟ್ಟಿ, ಗೌರವ ಪ್ರಧಾನ ಕಾರ್ಯದರ್ಶಿ ಡಾ। ಆರ್.ಕೆ ಶೆಟ್ಟಿ, ಗೌ। ಪ್ರ ಕೋಶಾಧಿಕಾರಿ ಸಿಎ। ರಮೇಶ್ ಬಿ.ಶೆಟ್ಟಿ, ಜತೆ ಕಾರ್ಯದರ್ಶಿ ಗಿರೀಶ್ ಆರ್.ಶೆಟ್ಟಿ ತೆಳ್ಳಾರು, ಯುವ ವಿಭಾಗದ ಕಾರ್ಯಾಧ್ಯಕ್ಷ ಸವೀನ್ ಜೆ.ಶೆಟ್ಟಿ ಹಾಗೂ ಮಹಿಳಾ ವಿಭಾಗದ ಉಪ ಕಾರ್ಯಾಧ್ಯಕ್ಷೆ ಕವಿತಾ ಐ.ಆರ್ ಶೆಟ್ಟಿ, ಕಾರ್ಯದರ್ಶಿ ಆಶಾ ಎಸ್.ಶೆಟ್ಟಿ ಕೋಶಾಧಿಕಾರಿ ಸುಚಿತಾ ಕೆ.ಶೆಟ್ಟಿ ಜತೆ ಕಾರ್ಯದರ್ಶಿ ವನಿತಾ ವೈ.ನೋಂಡಾ, ಜತೆ ಕೋಶಾಧಿಕಾರಿ ಸರೋಜಾ ಬಿ.ಶೆಟ್ಟಿ ವೇದಿಕೆಯಲ್ಲಿದ್ದರು.

ಬಂಟರ ಸಂಘದ ಮತ್ತು ಮಹಿಳಾ ವಿಭಾಗದ ಕಾರ್ಯಕಾರಿ ಸಮಿತಿ ಸದಸ್ಯ, ಸದಸ್ಯೆಯರು, ಸಂಘದ ವಿಶ್ವಸ್ಥ ಸದಸ್ಯರು, ಹಾಲಿ–ಮಾಜಿ ಪದಾಧಿಕಾರಿಗಳು, ಉಪ ಸಮಿತಿಗಳ ಮುಖ್ಯಸ್ಥರು, ಸದಸ್ಯರನೇಕರು ಉಪಸ್ಥಿತರಿದ್ದು ಸಂಘದ ಒಂಭತ್ತು ಪ್ರಾದೇಶಿಕ ಸಮಿತಿಗಳ ಕಲಾವಿದರು ನೃತ್ಯ ವೈವಿಧ್ಯ ಪ್ರಸ್ತುತ ಪಡಿಸಿದರು. ವಿಶೇಷ ಆಕರ್ಷಣೆಯಾಗಿಸಿ ಮಹಿಳಾ ವಿಭಾಗದ ಸದಸ್ಯೆಯರು 'ಭವ ಸ್ವರೂಪಿಣಿ' ನಾಟ್ಯ ವೈಭವ ಪ್ರದರ್ಶಿಸಿದರು.

ಸಂಘದ ಶ್ರೀಮಹಾವಿಷ್ಣು ದೇವಸ್ಥಾನದಲ್ಲಿನ (ಜ್ಞಾನ ಮಂದಿರ) ಶ್ರೀಮಹಾವಿಷ್ಣು, ಶ್ರೀ ಮಹಾಗಣಪತಿ, ಕಟೀಲು ಶ್ರೀ ದುರ್ಗಾಪರಮೇಶ್ವರಿ ದೇವರಿಗೆ ಆದಿಯಲ್ಲಿ ಪೂಜೆ ನೆರವೇರಿಸಲಾಯಿತು. ಮಂದಿರದ ಅರ್ಚಕ ವೇ। ಮೂ। ನಾಗೇಂದ್ರ ಭಟ್ ಕುಡಿಯಾಳಿ ಪೂಜೈದು ಮಹಾರಾತಿಯೊಂದಿಗೆ ಪ್ರಸಾದವನ್ನಿತ್ತು ಸಂಭ್ರಮಕ್ಕೆ ಹರಸಿದರು.

ಬಂಟಗೀತೆಯೊಂದಿಗೆ ಆದಿಗೊಂಡಿದ್ದು ಗೀತಾ ಸತೀಶ್ ಶೆಟ್ಟಿ ಪ್ರಾರ್ಥನೆಯನ್ನಾಡಿದರು. ಚಿತ್ರಾ ಆರ್.ಶೆಟ್ಟಿ ಸ್ವಾಗತಿಸಿದರು. ಶಿಲ್ಪಾ ಎಸ್.ಶೆಟ್ಟಿ ಸಾಂಸ್ಕೃತಿಕ ಕಾರ್ಯಕ್ರಮ ನಿರೂಪಿಸಿದರು. ಆಶಾ ಎಸ್.ಶೆಟ್ಟಿ ಮತ್ತು ಕವಿತಾ ಐ.ಆರ್ ಶೆಟ್ಟಿ ಅತಿಥಿಗಳನ್ನು ಹಾಗೂ ಸುಚಿತಾ ಕೆ.ಶೆಟ್ಟಿ ಪುರಸ್ಕೃತರನ್ನು ಪರಿಚಯಿಸಿದರು. ಶಾಲಿನಿ ಸಂತೋಷ್ ಶೆಟ್ಟಿ ಕಾರ್ಯಕ್ರಮ ನಿರೂಪಿಸಿದರು. ಆಶಾ ಎಸ್.ಶೆಟ್ಟಿ ವಂದಿಸಿದರು.

Managing Editor : SANDEEP RENU ✆ 99728 72151 | Executive Editor : SHARAT JYOTSNA B.R ✆ 9886766483 ✉ vaarthe@gmail.com
Published from: K10,'A'/4, Khriki Extension, Malviya Nagar, New Delhi-110 017. Phone: 95-120-3917916-20
Printed at: Jyoti Printers, E-94, Sector 6, Noida, UP. Phone: 0120-4232687 Off : E-94,Sector 6, Noida,UP | RNI No. DELKAN/2003/10363

# ಐಆರ್‌ಐಎಸ್ ದೇನಾ ನೌಕೆ ಮೇಲಿನ ದಾಳಿ ದುರದೃಷ್ಟಕರ: ಜೈಶಂಕರ್



ಅಮೆರಿಕದ ಜಲಾಂತರ್ಗಾಮಿ ನೌಕೆಯ ಟಾರ್ಪೆಡೊ ಡಿಕ್ಕಿ ಹೊಡೆದ ಪರಿಣಾಮ ಇರಾನ್‌ನ ಯುದ್ಧನೌಕೆ ಐರಿಸ್ ದೇನಾ ಹಿಂದೂ ಮಹಾಸಾಗರದಲ್ಲಿ ಮುಳುಗಿತು.


**ನವದೆಹಲಿ, ಮಾ.7:** ಹಿಂದೂ ಮಹಾಸಾಗರದಲ್ಲಿದ್ದ ಇರಾನ್‌ನ ಐಆರ್‌ಐಎಸ್ ದೇನಾ ನೌಕೆ ಮೇಲಿನ ದಾಳಿಯನ್ನು ದುರದೃಷ್ಟಕರ ಎಂದು ಬಣ್ಣಿಸಿದ ಕೇಂದ್ರ ವಿದೇಶಾಂಗ ಸಚಿವ ಎಸ್ ಜೈಶಂಕರ್, ನೌಕೆಗೆ ಅನುಮತಿ ನೀಡುವ ಮೂಲಕ ನಾನು ಸರಿಯಾದದ್ದನ್ನೇ ಮಾಡಿದ್ದೇವೆ ಎಂದು ಸರ್ಕಾರದ ನಿರ್ಧಾರವನ್ನು ಸಮರ್ಥಿಸಿಕೊಂಡಿದ್ದಾರೆ.

ಅಮೆರಿಕ–ಇಸ್ರೇಲ್ ಯುದ್ಧದ ಮಧ್ಯೆ, ಇರಾನಿನ ನೌಕಾ ಹಡಗು 'ಐರಿಸ್ ಲಾವನ್' ಶುಕ್ರವಾರ ಕೇರಳದ ಕೊಚ್ಚಿಗೆ ಡಾಕಿಂಗ್‌ಗೆ ಬಂದಿತು. ತಾಂತ್ರಿಕ ಲೋಪದ ವರದಿ ಬಂದ ನಂತರ ಭಾರತ ತುರ್ತು ಅನುಮತಿ ನೀಡಿತ್ತು. ಭೌಗೋಳಿಕ ರಾಜಕೀಯ ಬದಲಾವಣೆಗಳನ್ನು ಅನುಸರಿಸಿದಾಗ ಈ ಘಟನೆ ಸಂಭವಿಸಿದೆ.

ಇತ್ತೀಚಿನ ಘಟನೆಯಲ್ಲಿ, ಇರಾನಿನ ಯುದ್ಧನೌಕೆ ಅಮೆರಿಕದ ಜಲಾಂತರ್ಗಾಮಿ ನಡೆಸಿದ ಟಾರ್ಪೆಡೊ ದಾಳಿಯಿಂದ ಮುಳುಗಿತು. ಇದೇ ವಿಚಾರವಾಗಿ ದೆಹಲಿಯಲ್ಲಿ ನಡೆದ 2026 ರ ರೈಸಿನಾ ಸಂವಾದದಲ್ಲಿ ಮಾತನಾಡಿದ ವಿದೇಶಾಂಗ ಸಚಿವ ಜೈಶಂಕರ್, ಐಆರ್ ಐಎಸ್ ದೇನಾ ನೌಕೆ ಮುಳುಗುವಿಕೆಯು ದುರದೃಷ್ಟಕರ.. ಇರಾನಿಯನ್ನರು ಮತ್ತೊಂದು ಇರಾನಿನ ಯುದ್ಧನೌಕೆ ಐಆರ್‌ಐಎಸ್ ಲವನ್‌ಗಾಗಿ ವಿನಂತಿಯನ್ನು ಕಳುಹಿಸಿದಾಗ ಭಾರತವು ಮಾನವೀಯ ಆಧಾರದ ಮೇಲೆ ಅನುಮತಿ ನೀಡಿತು ಎಂದರು. ಇರಾನ್ ಕಡೆಯವರು ತಮ್ಮ ಹಡಗುಗಳಲ್ಲಿ ಒಂದು ತಾಂತ್ರಿಕ ಸಮಸ್ಯೆಗಳನ್ನು ಎದುರಿಸುತ್ತಿದೆ. ಹೀಗಾಗಿ ದುರಸ್ತಿಗಾಗಿ ಭಾರತೀಯ ಬಂದರನ್ನು ಪ್ರವೇಶಿಸಲು ಬಯಸುತ್ತಿದೆ ಎಂದು ಭಾರತಕ್ಕೆ ಸಂದೇಶ ಕಳುಹಿಸಿದ್ದರು. ಆ ಸಮಯದಲ್ಲಿ, ಹಡಗು ಭಾರತೀಯ ಕಡಲ ಗಡಿಗೆ ಹತ್ತಿರದಲ್ಲಿತ್ತು. ಈ ವಿನಂತಿಯನ್ನು ಅನುಸರಿಸಿ, ಭಾರತವು ಪರಿಸ್ಥಿತಿಯನ್ನು ಪರಿಶೀಲಿಸಿತು ಮತ್ತು ಮಾನವೀಯ ಆಧಾರದ ಮೇಲೆ ಹಡಗಿಗೆ ಪ್ರವೇಶವನ್ನು ನೀಡಿತು. ಅನುಮತಿ ಪಡೆದ ನಂತರ, ಹಡಗು ಕೆಲವೇ ದಿನಗಳಲ್ಲಿ ಕೇರಳದ ಕೊಚ್ಚಿ ಬಂದರಿಗೆ ಬಂದಿತು ಎಂದು ಜೈಶಂಕರ್ ಹೇಳಿದರು.

# ಎನ್‌ಜಿಇಎಫ್‌ನಲ್ಲಿ ಟ್ರೀಪಾರ್ಕ್ ಜತೆಗೆ ಆರ್ಟ್ಸ್ ಉದ್ಯಾನ ನಿರ್ಮಾಣ

## ಖಾಸಗಿ ಸಹಭಾಗಿತ್ವದಲ್ಲಿ ಜಾರಿಗೆ ಸರ್ಕಾರ ಚಿಂತನೆ: ಸಚಿವ ಎಂ.ಬಿ. ಪಾಟೀಲ್



**ಬೆಂಗಳೂರು, ಮಾ.7:** ನಗರದ ಎನ್‌ಜಿಇಎಫ್‌ನಲ್ಲಿ ಟ್ರೀಪಾರ್ಕ್ ನಿರ್ಮಿಸಲಾಗುತ್ತಿದೆ. ಜೊತೆಗೆ ಆರ್ಟ್ಸ್ ಪಾರ್ಕ್ ನಿರ್ಮಾಣದ ಚಿಂತನೆಯೂ ಇದೆ. ಈ ಯೋಜನೆಯನ್ನು ಅಂಬಾನಿ, ಅದಾನಿಯಂತಹ ಉದ್ಯಮಿಗಳ ಒಡೆತನದ ಕಂಪನಿಗಳ ಖಾಸಗಿ ಸಹಭಾಗಿತ್ವದಲ್ಲಿ ಕೈಗೆತ್ತಿಕೊಳ್ಳುವುದಾಗಿ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವ ಎಂ.ಬಿ.ಪಾಟೀಲ್ ತಿಳಿಸಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬೆಂಗಳೂರು ಅಂತಾರಾಷ್ಟ್ರೀಯ ನಗರವಾಗಿದ್ದು, ನಮ್ಮಲ್ಲಿ ಒಂದು ಕನ್ವೆನ್ಷನ್ ಸೆಂಟರ್ ಇಲ್ಲ. ಅದಕ್ಕಾಗಿ ಬೆಂಗಳೂರಿನ ಮೈಸೂರು ಲ್ಯಾಂಪ್ಸ್ ಜಾಗವನ್ನು ಬಳಸಿಕೊಂಡು ಫೈವ್‌ಸ್ಟಾರ್ ಹೋಟೆಲ್, ಪ್ರದರ್ಶನ ಕೇಂದ್ರ ಸೇರಿದಂತೆ ವಿವಿಧ ಸೌಲಭ್ಯಗಳನ್ನು ನಿರ್ಮಿಸಲಾಗುವುದು. ದೇಶ ವಿದೇಶದ ಗಣ್ಯರು ಆಗಮಿಸಿದಾಗ ಅಲ್ಲಿ ಅವರಿಗೆ ತಂಗಲು ಅನುಕೂಲಕರ ವಾತಾವರಣ ಕಲ್ಪಿಸುವ ಅಗತ್ಯ ಇದೆ ಎಂದರು.

ಬೆಂಗಳೂರು–ಪುಣೆ ಎಕ್ಸ್‌ಪ್ರೆಸ್ ಕಾರಿಡಾರ್ ಯೋಜನೆ ಶೀಘ್ರಗತಿಯಲ್ಲಿ ಅನುಷ್ಠಾನಕ್ಕೆ ಬರಬೇಕು. ಕೇಂದ್ರ ಸರ್ಕಾರ ತನ್ನ ಬಜೆಟ್‌ನಲ್ಲಿ 6 ಕಾರಿಡಾರ್ ಯೋಜನೆಗಳನ್ನು ಘೋಷಿಸಿತ್ತು. ಅವುಗಳ ಜೊತೆಯಲ್ಲೇ ತಮ ಒತ್ತಡದ ಮೇಲೆ ಭರವಸೆ ದೊರೆತಿರುವ ಪುಣೆ–ಬೆಂಗಳೂರು ಕಾರಿಡಾರ್ ಯೋಜನೆಯನ್ನು ಜೊತೆಯಲ್ಲಿಯೇ ಅನುಷ್ಠಾನಕ್ಕೆ ತರಬೇಕು. ಯಾವುದೇ ಕಾರಣಕ್ಕೂ ನೆನೆಗುದಿಗೆ ಬೀಳಬಾರದು ಎಂದು ಹೇಳಿದರು.

ಕಲ್ಯಾಣ ಕರ್ನಾಟಕ ಪ್ರದೇಶದ ಮಾದರಿಯಲ್ಲೇ ಕಿತ್ತೂರು ಕರ್ನಾಟಕ ಭಾಗವನ್ನು ಅಭಿವೃದ್ಧಿ ಪಡಿಸಲು ಪ್ರತ್ಯೇಕವಾದ ಮಂಡಳಿ ರಚಿಸಬೇಕು ಎಂಬ ಬೇಡಿಕೆಯಿದೆ. ಉತ್ತರ ಕರ್ನಾಟಕ ಭಾಗದಂತೆಯೇ ಚಿತ್ರದುರ್ಗ ಸೇರಿ ಮಧ್ಯ ಕರ್ನಾಟಕ ಭಾಗದ ಹಲವು ಪ್ರದೇಶಗಳು ಹಿಂದುಳಿದಿವೆ. ಎಲ್ಲವನ್ನು ಸಮಗ್ರವಾಗಿ ಅಭಿವೃದ್ಧಿಗೊಳಿಸುವ ಅಗತ್ಯವಿದೆ ಎಂದರು.ನಂಜುಂಡಪ್ಪ ಸಮಿತಿ ವರದಿ ಆಧಾರದ ಮೇಲೆ ಹಿಂದುಳಿದ– ಅತೀ ಹಿಂದುಳಿದ ಪ್ರದೇಶಗಳಲ್ಲಿನ ಕೈಗಾರಿಕಾ ಸ್ಥಾಪನೆಗೆ ಶೇ.3 ರಿಂದ 4ರಷ್ಟು ರಿಯಾಯಿತಿ ನೀಡಬೇಕೆಂದು ನಿರ್ಧಾರ ವಾಗಿತ್ತು. ಹೊಸ ಕೈಗಾರಿಕಾ ನೀತಿಯಲ್ಲಿ ಬೆಂಗಳೂರಿನಿಂದ ಹೊರಗಡೆ ಆರಂಭ ಗೊಳ್ಳುವ ಕೈಗಾರಿಕೆಗಳಿಗೆ ಹೆಚ್ಚಿನ ಆದ್ಯತೆ ನೀಡಲು ನಿರ್ಧರಿಸಲಾಗಿದೆ. ರಿಯಾಯಿತಿಯನ್ನು ಮತ್ತಷ್ಟು ಹೆಚ್ಚಿಸಲು ಅಧ್ಯಯನ ನಡೆಸು ಸಲುವಾಗಿ ಸಮಿತಿ ರಚಿಸುವುದಾಗಿ ಹೇಳಿದರು.

ಆಲಮಟ್ಟಿ ಅಣೆಕಟ್ಟು ಎತ್ತರಕ್ಕೆ ಕೃಷ್ಣಾ ನ್ಯಾಯಧೀಕರಣ ತೀರ್ಪಿನಲ್ಲಿ ನಮಗೆ ಅವಕಾಶ ಸಿಕ್ಕಿದೆ. ತೀರ್ಪಿನಲ್ಲಿ ನೀರಿನ ಹಂಚಿಕೆಯಲ್ಲಿ ಅನ್ಯಾಯವಾಗಿದೆ. ಕರ್ನಾಟಕ ಕೂಡ ಸುಪ್ರೀಂಕೋರ್ಟ್ ಮೊರೆ ಹೋಗಿದೆ. ವಿವಾದ ಸುಪ್ರಿಂಕೋರ್ಟ್‌ನಲ್ಲಿರುವುದರಿಂದಾಗಿ ಮಹಾ ರಾಷ್ಟ್ರ, ಆಂಧ್ರಪ್ರದೇಶದ ಮುಖ್ಯಮಂತ್ರಿಗಳು ಆಕ್ಷೇಪ ವ್ಯಕ್ತಪಡಿಸುವುದು ಸರಿಯಲ್ಲ ಎಂದರು.ರಾಜ್ಯ ಸರ್ಕಾರ ಭೂ ಸ್ವಾಧೀನಕ್ಕೆ ಮುಂದಾಗಿದೆ. ನಮ ನೆಲದಲ್ಲಿ ನಾವು ಯೋಜನೆ ಕೈಗೊಂಡರೆ ಅದನ್ನು ತಡೆಯಲು ಯತ್ನಿಸುವುದು ಸರಿಯಲ್ಲ. ಬಜೆಟ್‌ನಲ್ಲಿ ಹಣ ನಿಗದಿ ಮಾಡದೇ ಇದ್ದರೂ, ನಾವು ಭೂ ಸ್ವಾಧೀನ ಪ್ರಕ್ರಿಯೆಗಳನ್ನು ಮುಂದುವರೆಸುತ್ತೇವೆ ಎಂದು ತಿಳಿಸಿದರು.16 ವರ್ಷದೊಳಗಿನ ಮಕ್ಕಳಿಗೆ ಸಾಮಾಜಿಕ ಜಾಲತಾಣಗಳಿಂದ ಬಳಕೆ ನಿಷೇಧಿಸುವುದು ಅಗತ್ಯ ಇದೆ. ಆಂಧ್ರಪ್ರದೇಶದಲ್ಲಿ ಈಗಾಗಲೇ 13 ವರ್ಷದ ಮಕ್ಕಳಿಗೆ ನಿರ್ಬಂಧ ವಿಧಿಸಲಾಗಿದೆ. ಚಿಕ್ಕ ಮಕ್ಕಳು ಮೊಬೈಲ್ ಬಳಸುವುದರಿಂದ ಕೆಟ್ಟ ಪರಿಣಾಮವಾಗುತ್ತಿದೆ ಎಂದು ಮಾನಸಿಕ ತಜ್ಞರು ಅಭಿಪ್ರಾಯ ಪಟ್ಟಿದ್ದಾರೆ. ಅದನ್ನು ಆಧರಿಸಿ ಕ್ರಮಕೈಗೊಳ್ಳಲಾಗಿದೆ ಎಂದು ಹೇಳಿದರು.ಬಜೆಟ್‌ನಲ್ಲಿ ತಾವು ಕೇಳಿದ ಯೋಜನೆಗಳನ್ನು ಮುಖ್ಯಮಂತ್ರಿ ಅವರು ಘೋಷಿಸಿದ್ದಾರೆ. ಕೈಗಾರಿಕೆ ಮತ್ತು ಮೂಲಸೌಕರ್ಯಕ್ಕೆ ಹೆಚ್ಚಿನ ಹಣ ನೀಡಿದ್ದಾರೆ. ಮೈಸೂರಿಗೆ ಏರೋಸ್ಪೇಸ್ ಕೇಳಿದ್ದೆವು. ಬೆಳಗಾವಿ, ಧಾರವಾಡದಲ್ಲಿ ಕೈಗಾರಿಕಾ ಪಾರ್ಕ್‌ಗಳಿಗೆ ಅನುಮತಿ ನೀಡಿದ್ದಾರೆ ಎಂದರು.

# ಯುವನಿಧಿ ಯೋಜನೆ ಸ್ಥಗಿತಗೊಂಡಿಲ್ಲ ಮುಂದುವರಿಯುತ್ತದೆ

## ಲೋಕೋಪಯೋಗಿ ಇಲಾಖೆಗೆ ಬಜೆಟ್‌ನಲ್ಲಿ ಅಗತ್ಯ ಅನುದಾನ ನೀಡಲಾಗಿದೆ: ಸಚಿವ ಸತೀಶ್ ಜಾರಕಿಹೊಳಿ



**ಬೆಂಗಳೂರು, ಮಾ.7:** ಪಂಚ ಗ್ಯಾರಂಟಿಗಳ ಪೈಕಿ ಒಂದಾದ ಯುವನಿಧಿ ಯೋಜನೆ ಸ್ಥಗಿತಗೊಂಡಿಲ್ಲ. ಕೆಲ ತಿಂಗಳು ವಿಳಂಬವಾದರೂ ಫಲಾನುಭವಿಗಳಿಗೆ ಹಣ ನೀಡಲಾಗುತ್ತಿದೆ. ಮುಂದೆಯೂ ಮುಂದುವರಿಯುತ್ತದೆ ಎಂದು ಸಚಿವ ಸತೀಶ್ ಜಾರಕಿಹೊಳಿ ಹೇಳಿದ್ದಾರೆ. ಯೋಜನೆಗೆ ಬಜೆಟ್‌ನಲ್ಲಿ ಅನುದಾನ ನೀಡಿಲ್ಲ ಎಂದ ಮಾತ್ರಕ್ಕೆ ಯುವನಿಧಿ ಯೋಜನೆ ಸ್ಥಗಿತವಾಗಲ್ಲ. ಇನು ಬಜೆಟ್‌ನಲ್ಲಿ ಲೋಕೋಪಯೋಗಿ ಇಲಾಖೆಗೆ ಹೆಚ್ಚುವರಿ ಹಣ ಮೀಸಲಿಟ್ಟಿರುವ ಬಗ್ಗೆ ಸಂತಸ ವ್ಯಕ್ತಪಡಿಸಿದ್ದಾರೆ. ಅನುದಾನ ಮೀಸಲಿರುವ ಹಿನ್ನೆಲೆಯಲ್ಲಿ ಕಾಮಗಾರಿಗಳನ್ನು ಸುಗಮವಾಗಿ ಮುಂದುವರಿಸಲು ಸಾಧ್ಯವಾಗಲಿದೆ. ಸೇತುವೆಗಳ ನಿರ್ಮಾಣ ಸೇರಿದಂತೆ ಹಲವು ಯೋಜನೆಗಳಿಗೆ ಈ ಬಾರಿ ಹೆಚ್ಚಿನ ಪ್ರಾಮುಖ್ಯತೆ ದೊರೆತಿದೆ ಎಂದು ಹೇಳಿದ್ದಾರೆ.

ನಮ್ಮ ಬೇಡಿಕೆಗಳನ್ನು ಪರಿಗಣಿಸಿ ಸಿಎಂ ಸಿದ್ದರಾಮಯ್ಯನವರು ಬಜೆಟ್‌ನಲ್ಲಿ ಅಗತ್ಯ ಅನುದಾನ ಒದಗಿಸಿದ್ದಾರೆ. ಹಲವು ವರ್ಷಗಳಿಂದ ನಿರ್ಲಕ್ಷ್ಯಕ್ಕೊಳಗಾಗಿದ್ದ ಸೇತುವೆ ನಿರ್ಮಾಣಕ್ಕೆ ಈ ಬಾರಿ ಎರಡು ಸಾವಿರ ಕೋಟಿ ರೂ. ಗೂ ಹೆಚ್ಚು ಹಣ ಮೀಸಲಾಗಿದ್ದು, ಇದರಿಂದ ಯೋಜನೆಗಳನ್ನು ಪರಿಣಾಮಕಾರಿಯಾಗಿ ಜಾರಿಗೆ ತರಲು ನೆರವಾಗಲಿದೆ ಎಂದಿದ್ದಾರೆ.

ಕೆ–ಶಿಪ್ ಯೋಜನೆಯಡಿ ಸುಮಾರು 60 ವಿಧಾನಸಭಾ ಕ್ಷೇತ್ರಗಳು ಒಳಪಡುವುದರಿಂದ ಹೆಚ್ಚಿನ ಅನುದಾನದಿಂದ ಅಭಿವೃದ್ಧಿಗೆ ಉತ್ತೇಜನ ಸಿಗಲಿದೆ ಎಂದು ಹೇಳಿದರು. ಬಾಕಿ ಬಿಲ್ಲುಗಳ ವಿಚಾರದಲ್ಲಿ ಗುತ್ತಿಗೆದಾರರು ಪ್ರತಿಭಟನೆ ನಡೆಸುವ ಎಚ್ಚರಿಕೆ ನೀಡಿದ ಹಿನ್ನೆಲೆಯಲ್ಲಿ, ಮುಖ್ಯಮಂತ್ರಿಗಳು ಹಣಕಾಸು ಇಲಾಖೆಯೊಂದಿಗೆ ಚರ್ಚಿಸಿ ಸಮಸ್ಯೆ ಪರಿಹರಿಸುವ ವಿಶ್ವಾಸವಿದೆ ಎಂದಿದ್ದಾರೆ.

ಇನ್ನು ಸಾಲವಿಲ್ಲದೆ ಸರ್ಕಾರ ನಡೆಸುವುದು ಕಷ್ಟಕರವಾಗಿದ್ದು, ಕೇಂದ್ರವೂ ಇದೇ ಸ್ಥಿತಿಯನ್ನು ಎದುರಿಸುತ್ತಿದೆ. ರಾಜ್ಯದ ಗ್ಯಾರಂಟಿ ಯೋಜನೆಗಳಿದ್ದರೂ ಅಭಿವೃದ್ಧಿ ಕಾರ್ಯಗಳು ನಿಂತಿಲ್ಲ ಎಂದರು.

# ಜನಾಶೀರ್ವಾದ ಇದ್ದಾಗ ಮಾತ್ರ ಮುಖ್ಯಮಂತ್ರಿಯಾಗಲು ಸಾಧ್ಯ

## ಬಡವರು, ಅಶಕ್ತರಿಗೆ ಶಕ್ತಿ ತುಂಬುವುದೇ ನನ್ನ ಕಾಯಕ: ಮುಖ್ಯಮಂತ್ರಿ ಸಿದ್ದರಾಮಯ್ಯ



**ಮೈಸೂರು, ಮಾ.7:** ಜನರ ಆಶೀರ್ವಾದವಿದ್ದರೆ ಮಾತ್ರ ಮುಖ್ಯಮಂತ್ರಿಯಾಗಲು ಸಾಧ್ಯ. ಸಮಾಜದ ಬಡವರು ಹಾಗೂ ಅಶಕ್ತರಿಗೆ ಶಕ್ತಿ ತುಂಬುವುದೇ ನನ್ನ ಕಾಯಕ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದರು.

ಪಿಲ್ಲಹಳ್ಳಿ ಗ್ರಾಮದಲ್ಲಿ ಆಯೋಜಿಸಲಾಗಿದ್ದ ಶ್ರೀ ಆದಿಶಕ್ತ್ಯಾತ್ಮಕ ದಂಡಿಮಾರಮ್ಮ ದೇವಾಲಯದ ಪ್ರತಿಷ್ಠಾಪನೆ ಮಹೋತ್ಸವ ಹಾಗೂ ಕುಂಭಕಳಶದ ಪ್ರತಿಷ್ಠಾಪನೆ ಕಾರ್ಯಕ್ರಮದಲ್ಲಿ ಮಾತನಾಡಿ, ದೇವರು ದೇಗುಲಗಳಲ್ಲಿ ಇರುತ್ತಾರೆಂಬುದು ನಮ್ಮ ನಂಬಿಕೆ. ದೇವರ ಆರಾಧನೆಯಿಂದ ಒಳಿತಾಗುತ್ತದೆ ಎಂಬ ನಂಬಿಕೆಯನ್ನು ನಾನು ವಿರೋಧಿಸುವುದಿಲ್ಲ. ಆದರೆ ದೇವರು ಎಲ್ಲೆಡೆಯೂ ಇದ್ದಾನೆ ಎಂದು ನಂಬುವವನು ಮತ್ತು ಆಚರಿಸುವವನು ನಾನು ಎಂದರು.

1978ರಲ್ಲಿ ತಾಲ್ಲೂಕು ಅಭಿವೃದ್ಧಿ ಮಂಡಳಿಯ ಪ್ರಥಮ ಬಾರಿಗೆ ಚುನಾವಣೆಯಲ್ಲಿ ಸ್ಪರ್ಧಿಸಿದಾಗ ಇಲ್ಲಿನ ಜನರ ಆಶೀರ್ವಾದ ನನಗೆ ದೊರೆತಿತ್ತು. ನಂತರ ವಿಧಾನಸಭಾ ಚುನಾವಣೆಯಲ್ಲಿ ಜನರ ಸಹಕಾರ ದೊರೆಯಿತು.

ಮೈಸೂರು ತಾಲ್ಲೂಕಿನ ಚಾಮುಂಡೇಶ್ವರಿ ಹಾಗೂ ವರುಣಾ ಕ್ಷೇತ್ರದ ಜನರ ಆಶೀರ್ವಾದ ದಿಂದ ಈವರೆಗೆ 8 ಚುನಾವಣೆಗಳಲ್ಲಿ ಗೆಲುವು ಸಾಧಿಸಿದ್ದು, ರಾಜ್ಯದ ಮುಖ್ಯಮಂತ್ರಿಯಾಗಲು ಸಾಧ್ಯವಾಗಿದೆ. ಜನರ ಆಶೀರ್ವಾದವಿದ್ದರೆ ಮಾತ್ರ ಮುಖ್ಯಮಂತ್ರಿಯಾಗಲು ಸಾಧ್ಯ. ಪಿಲ್ಲಹಳ್ಳಿ ಜನರ ಪ್ರೀತಿಯಿಂದಾಗಿ ಇಲ್ಲಿನ ದೇವಸ್ಥಾನದ ಉದ್ಘಾಟನೆಗೆ ಆಗಮಿಸಿದ್ದೇನೆ. 1978ರಿಂದ ಇಂದಿನವರೆಗೂ ಹಾಗೂ ಮುಂದೆಯೂ ಈ ಭಾಗದ ಜನರ ಸಹಕಾರ ದೊರೆಯುವ ವಿಶ್ವಾಸವಿದೆ ಎಂದರು.

ಶ್ರೀದಂಡಿಮಾರಮ್ಮ ದೇವಸ್ಥಾನಕ್ಕೆ ಬಾಲ್ಯದಿಂದಲೂ ಭೇಟಿ ನೀಡುತ್ತಿದ್ದ ನೆನಪನ್ನು ಮೆಲುಕು ಹಾಕಿದ ಮುಖ್ಯಮಂತ್ರಿಗಳು, ದೇವರನ್ನು ಕಷ್ಟ ಬಂದಾಗ ನೆನಪಿಸಿಕೊಳ್ಳದೇ, ಎಲ್ಲ ಸಂದರ್ಭದಲ್ಲಿಯೂ ಸ್ಮರಿಸಬೇಕು. ದೇವನೊಬ್ಬ ನಾಮ ಹಲವು ಎಂದು ನಂಬಿ, ದೇವರು ನಮ್ಮೊಳಗೂ ಸೇರಿದಂತೆ ಎಲ್ಲ ಕಡೆಯೂ ಇದ್ದಾನೆ. ಎಲ್ಲರಿಗೂ ಒಳಿತನ್ನು ಬಯಸುವುದೇ ಮುಖ್ಯ. ಯಾವೊಂದು ಧರ್ಮ ಜಾತಿಗಳು ಪ್ರೀತಿಯನ್ನು ಬೋಧಿಸುತ್ತದೆಯೇ ಹೊರತು ದ್ವೇಷಿಸುವುದನ್ನು ಬೋಧಿಸುವುದಿಲ್ಲ ಎಂದರು.

ಸಮಾಜದ ಅಸಮಾನತೆ ಕಡಿಮೆಯಾಗಬೇಕು. ಸಮಾನತೆಯ ಸ್ಥಾಪಿಸುವ ಉದ್ದೇಶವನ್ನು ಸರ್ಕಾರದ ಎಲ್ಲ ಯೋಜನೆಗಳು ಹೊಂದಿವೆ. ಸಮಾಜದ ಎಲ್ಲ ಜಾತಿ ಧರ್ಮ, ವರ್ಗಗಳಿಗೆ ಆರ್ಥಿಕ ಸಾಮಾಜಿಕ ಶಕ್ತಿ ದೊರೆಯಬೇಕು. ಲಿಂಗ ತಾರತಮ್ಯ ಹೋಗಲಾಡಿಸಿ, ಮಹಿಳೆಯರಿಗೆ ಶಕ್ತಿ ತುಂಬಲು ಶಕ್ತಿ ಯೋಜನೆ ಜಾರಿಗೊಳಿಸಲಾಗಿದೆ.

ಸಮಾಜದ ಬಡವರು, ಅಶಕ್ತರಿಗೆ ಶಕ್ತಿ ತುಂಬುವುದೇ ನನ್ನ ಉದ್ದೇಶ. ಸಮಾಜದ ಕಟ್ಟಕಡೆಯ ವ್ಯಕ್ತಿಗೆ ಸೌಲಭ್ಯಗಳು ದೊರೆತಾಗ ಮಾತ್ರ ಸಮಾಜಿಕ ನ್ಯಾಯ ಒದಗಿಸಲು ಸಾಧ್ಯ ಎಂದರು.

# ಸೈಬರ್ ಅಪರಾಧ ಮಟ್ಟಹಾಕಲು ಕಟ್ಟುನಿಟ್ಟಿನ ಕ್ರಮ

## ವಿಶ್ವದಲ್ಲೇ ಕರ್ನಾಟಕದಲ್ಲಿ ಅತ್ಯಂತ ಸುರಕ್ಷಿತ ಡಿಜಿಟಲ್ ವ್ಯವಸ್ಥೆ ಇದೆ: ಗೃಹ ಸಚಿವ ಡಾ. ಜಿ.ಪರಮೇಶ್ವರ್



**ಬೆಂಗಳೂರು, ಮಾ.7:** ವಿಶ್ವದಲ್ಲೇ ಕರ್ನಾಟಕವು ಅತ್ಯಂತ ಸುರಕ್ಷಿತ ಡಿಜಿಟಲ್ ವ್ಯವಸ್ಥೆ ಹೊಂದಿದೆ ಎಂದು ಗೃಹ ಸಚಿವ ಡಾ. ಜಿ.ಪರಮೇಶ್ವರ್ ಹೇಳಿದ್ದಾರೆ.

ಸಿಐಡಿ ಹಾಗೂ ಸೈಬರ್ ಅಪರಾಧ ತನಿಖಾ ತರಬೇತಿ ಮತ್ತು ಸಂಶೋಧನಾ ಕೇಂದ್ರದಿಂದ ನಗರದ ಖಾಸಗಿ ಹೋಟೆಲ್‌ನಲ್ಲಿ ಆಯೋಜಿಸಿದ್ದ 'CIDECODE' 3ನೇ ವರ್ಷದ ಸೈಬರ್ ಅಪರಾಧ ತನಿಖಾ ಶೃಂಗಸಭೆ ಉದ್ಘಾಟಿಸಿ ಮಾತನಾಡಿದರು.

ಕರ್ನಾಟಕ ಕೇವಲ ಒಂದು ರಾಜ್ಯವಲ್ಲ. ಅದು ಜಾಗತಿಕ ಬ್ರ್ಯಾಂಡ್. ಜಗತ್ತು ಬೆಂಗಳೂರಿನತ್ತ ನೋಡಿದಾಗ, ನಾವೀನ್ಯತೆಯ ಭವಿಷ್ಯ ಕಾಣಿಸುತ್ತದೆ. ಉತ್ತಮ ಮತ್ತು ಅತ್ಯಂತ ಸುರಕ್ಷಿತ ಡಿಜಿಟಲ್ ವ್ಯವಸ್ಥೆಯನ್ನು ನಾವು ಹೊಂದಿದ್ದೇವೆ ಎಂದರು.

ಸೈಬರ್ ದಾಳಿಗಳನ್ನು ತನಿಖೆ ಮಾಡಲು ಮತ್ತು ಡಿಜಿಟಲ್ ಪುರಾವೆಗಳನ್ನು ಸಂಗ್ರಹಿಸಲು ಅಗತ್ಯವಾದ ಕೌಶಲ್ಯ, ತರಬೇತಿ ಮತ್ತು ತಂತ್ರಜ್ಞಾನದೊಂದಿಗೆ ವಿಶೇಷ ಸೈಬರ್ ಅಪರಾಧ ಘಟಕಗಳನ್ನು ಸ್ಥಾಪಿಸುವ ಮೂಲಕ ಕರ್ನಾಟಕ ಸರ್ಕಾರವು ಸೈಬರ್ ಅಪರಾಧಗಳನ್ನು ಮಟ್ಟಹಾಕಲು ಕಟ್ಟುನಿಟ್ಟಿನ ಕ್ರಮಗಳನ್ನು ಕೈಗೊಂಡಿದೆ. ಕರ್ನಾಟಕದ ಎಲ್ಲ ಜಿಲ್ಲೆಗಳು ಮತ್ತು ಪ್ರಮುಖ ನಗರಗಳಲ್ಲಿ 43 ಸಿಇಎನ್ ಪೊಲೀಸ್ ಠಾಣೆಗಳನ್ನು ಸ್ಥಾಪಿಸಿದೆ. ನಮ್ಮ ನಾಗರಿಕರಿಗೆ ಸೈಬರ್ ಸುರಕ್ಷತೆ ಒದಗಿಸಲು ನಮ್ಮ ಸರ್ಕಾರ ಬದ್ಧವಾಗಿದೆ ಎಂದು ಹೇಳಿದರು.

ನಮ್ಮ ಸರ್ಕಾರವು ಕೃತಕ ಬುದ್ಧಿಮತ್ತೆ, ಸೈಬರ್ ಭದ್ರತೆ, ಕ್ಲೌಡ್ ಕಂಪ್ಯೂಟಿಂಗ್, ಸೈಬರ್ ಭದ್ರತಾ ಅನುಸರಣೆ ಮತ್ತು ಅಪಾಯ ನಿರ್ವಹಣೆಯಂತಹ ವಿವಿಧ ವಲಯಗಳಲ್ಲಿ ಪರಿಣತಿ ಹೊಂದಿರುವ ವೈವಿಧ್ಯಮಯ ಕಂಪನಿಗಳೊಂದಿಗೆ, ಸೈಬರ್ ಭದ್ರತಾ ನವೋದ್ಯಮಗಳ ಪರಿಸರ ವ್ಯವಸ್ಥೆಗೆ ಅನುಕೂಲಕರ ವಾತಾವರಣ ಸೃಷ್ಟಿಸಿದೆ ಎಂದರು.ನಾಗರಿಕರಿಗೆ ಹೆಚ್ಚಿನ ಡಿಜಿಟಲ್ ಸುರಕ್ಷತೆಯನ್ನು ನೀಡಲು ಖಾಸಗಿ ವಲಯ ಮತ್ತು ಅಂತಾರಾಷ್ಟ್ರೀಯ ಸಂಸ್ಥೆಗಳೊಂದಿಗೆ ನಿರಂತರವಾಗಿ ಕೈಜೋಡಿಸಿ ಉಪಕ್ರಮಗಳನ್ನು ಕೈಗೊಳ್ಳುವುದು ಸಹಕಾರಿ ಮತ್ತು ಉತ್ತಮ ಪ್ರಯತ್ನವಾಗಿದೆ. ವೇಗವಾಗಿ ಬದಲಾಗುತ್ತಿರುವ ಸೈಬರ್ ಬೆದರಿಕೆಯ ವ್ಯಾಪ್ತಿಯನ್ನು ಪರಿಹರಿಸಲು ಅನುಭವ ಮತ್ತು ಪರಿಣಿತಿಯ ಇಂತಹ ಸಂವಾದಗಳು ಸಹಕಾರಿಯಾಗಲಿದೆ. ಡಾರ್ಕ್‌ವೆಬ್ ಚಟುವಟಿಕೆಗಳು, ಕ್ರಿಪ್ಟೋಕರೆನ್ಸಿ ಟ್ರ್ಯಾಕಿಂಗ್, ಹಣಕಾಸು ವಂಚನೆ ತಡೆಗಟ್ಟುವಿಕೆ, ಡಿಜಿಟಲ್ ಫೋರೆನ್ಸಿಕ್ ಪ್ರಯೋಗಾಲಯಗಳನ್ನು ಬಲಪಡಿಸಲು ಹೆಚ್ಚು ಪ್ರಸ್ತುತ ಮತ್ತು ಸಮಯೋಚಿತವಾಗಿವೆ ಎಂದು ಅಭಿಪ್ರಾಯಪಟ್ಟರು.

ರಾಜ್ಯದಲ್ಲಿ ಸಿಸಿಐಟಿಆರ್ ಸ್ಥಾಪನೆಯಿಂದ ಸೈಬರ್ ಅಪರಾಧ ತನಿಖೆಯನ್ನು ಬಲಪಡಿಸುವುದು, ಸಂಶೋಧನಾ ಸಾಮರ್ಥ್ಯ ವೃದ್ಧಿಸಿಕೊಳ್ಳಲು ಮತ್ತು ನಮ್ಮ ಪೊಲೀಸ್ ಅಧಿಕಾರಿಗಳನ್ನು ಸುಧಾರಿತ ತಾಂತ್ರಿಕ ಕೌಶಲ್ಯಗಳಿಂದ ಸಜ್ಜುಗೊಳಿಸಲು ಹೆಚ್ಚಿನ ರೀತಿಯಲ್ಲಿ ಸಹಕಾರಿಯಾಗಿದೆ. ಈ ಕೇಂದ್ರದಿಂದ ಹೊರಹೊಮ್ಮುತ್ತಿರುವ ಸಂಶೋಧನಾ ಪ್ರಕಟಣೆಗಳು ಮತ್ತು ಸಾಮರ್ಥ್ಯವರ್ಧನಾ ಉಪಕ್ರಮಗಳು ಸೈಬರ್ ಪೊಲೀಸ್ ವ್ಯವಸ್ಥೆಗೆ ಅರ್ಥಪೂರ್ಣ ಕೊಡುಗೆಯನ್ನು ನೀಡುತ್ತಿದೆ ಎಂದು ಹೇಳಿದರು.ಸೈಬರ್ ಅಪರಾಧ ತನಿಖಾ ತರಬೇತಿ ಮತ್ತು ಸಂಶೋಧನಾ ಕೇಂದ್ರವು ರಾಜ್ಯದ ಪೊಲೀಸ್ ಅಧಿಕಾರಿ ಮತ್ತು ಸಿಬ್ಬಂದಿ ಹಾಗೂ ವಿವಿಧ ರಾಜ್ಯ ಮತ್ತು ಕೇಂದ್ರ ಸಂಸ್ಥೆಗಳ ಸದಸ್ಯರು ಸೇರಿದಂತೆ 62 ಸಾವಿರಕ್ಕೂ ಹೆಚ್ಚು ಜನರಿಗೆ ತರಬೇತಿ ನೀಡಿದೆ ಎಂದರು.

ಸೈಬರ್ ಅಪರಾಧವು ಯಾವುದೇ ಭೌಗೋಳಿಕ ಪ್ರದೇಶಕ್ಕೆ ಸೀಮಿತವಾಗಿಲ್ಲ. ಇದು ಮಿತಿಯಿಲ್ಲದ, ತಂತ್ರಜ್ಞಾನ ಆಧಾರಿತ ಮತ್ತು ನಿರಂತರವಾಗಿ ವಿಕಸನಗೊಳ್ಳುತ್ತಿರುವ ಅಪರಾಧ. ಹಣಕಾಸಿನ ವಂಚನೆಗಳು ಮತ್ತು ಕ್ರಿಪ್ಟೋ ಕರೆನ್ಸಿ, ಡಾರ್ಕ್‌ವೆಬ್ ಆಧಾರಿತ ಮಾದಕವಸ್ತು ಜಾಲಗಳು ಮತ್ತು ಡೇಟಾ ಉಲ್ಲಂಘನೆಯವರೆಗೆ, ಬೆದರಿಕೆಗಳ ಪ್ರಮಾಣ ವೇಗವಾಗಿ ಹೆಚ್ಚುತ್ತಿದೆ. ಈ ಸವಾಲುಗಳನ್ನು ತಾಂತ್ರಿಕ ಸಾಮರ್ಥ್ಯದಿಂದ ಮಾತ್ರವಲ್ಲದೆ ಕಾನೂನುಗಳನ್ನು ಬಲಪಡಿಸುವ ಮೂಲಕ ಸಂಘಟನಾತ್ಮಕವಾಗಿ ಎದುರಿಸಬೇಕಿದೆ ಎಂದು ಹೇಳಿದರು.

# ಹಣೆಬರಹ ಬದಲಿಸಲು ಕೈಯಲ್ಲಿನ ಗೆರೆ ಸವೆಯುವಂತೆ ದುಡಿಯಬೇಕು

## ಧರ್ಮ ಮತ್ತು ಕಾಯಕ ಬೇರೆ ಅಲ್ಲ: ಸಂಸದ ಬಸವರಾಜ ಬೊಮ್ಮಾಯಿ




**ಹಾವೇರಿ, ಮಾ.7:** ಹಣೆಬರಹ ಬದಲಿಸಲು ಕೈಯಲ್ಲಿನ ಗೆರೆ ಸವೆಯುವ ಹಾಗೆ ದುಡಿಯಬೇಕು. ನಮ್ಮದು ಹಿಂದೂ ಸನಾತನ ಧರ್ಮ, ಧರ್ಮವೇ ಕಾಯಕ ಧರ್ಮ. ಬಸವಣ್ಣನವರು ಹೇಳಿರುವುದೂ ಅದನ್ನೇ. ಧರ್ಮ ಮತ್ತು ಕಾಯಕ ಬೇರೆ ಅಲ್ಲ. ಕಾಯಕ ಮಾಡುವಾಗ ಯಾರೇ ಬಂದರೂ ತಲೆ ಕೆಡಿಸಿಕೊಳ್ಳಬಾರದು. ಕಾಯಕ ಮಾಡುವುದರಿಂದ ಕೈಲಾಸ ಕಾಣಬಹುದು ಎಂದು ಸಂಸದ ಬಸವರಾಜ ಬೊಮ್ಮಾಯಿ ಹೇಳಿದರು.

ಶಿಗ್ಗಾವಿಯ ವಿರಕ್ತಮಠದಲ್ಲಿ 33ನೆಯ ಶರಣ ಸಂಸ್ಕೃತಿ ಉತ್ಸವ –2026 ಲಿಂಗೈಕ್ಯ ಶ್ರೀ ಸಂಗನಬಸವ ಮಹಾಸ್ವಾಮಿಗಳವರ ಹಾಗೂ ಲಿಂಗೈಕ್ಯ ಶ್ರೀ ಬಸವಲಿಂಗ ಮಹಾಸ್ವಾಮಿಗಳ ಪುಣ್ಯಾರಾಧನೆ ಕಾರ್ಯಕ್ರಮದಲ್ಲಿ ಭಾಗವಹಿಸಿ ಅವರು ಮಾತನಾಡಿದರು. ಮನುಷ್ಯನ ಬದುಕು ಬಹಳ ವಿಚಿತ್ರ ಇದೆ. ಯಾಕೆ ಹುಟ್ಟಿದ್ದೇವೆ ಅನ್ನುವುದು ಗೊತ್ತಿಲ್ಲ. ಹುಟ್ಟು , ಸಾವು ನಮ ಕೈಯಲ್ಲಿಲ್ಲ. ಅದರ ಬಗ್ಗೆ ಚಿಂತೆ ಮಾಡುತ್ತೇವೆ. ಬದುಕು ನಮ ಕೈಯಲ್ಲಿದೆ. ಆದರೆ, ಅದರ ಬಗ್ಗೆ ಚಿಂತೆ ಮಾಡುವುದಿಲ್ಲ. ನಮ ಕಾಯಕದ ಬಗ್ಗೆ ಚಿಂತೆ ಮಾಡುವುದಿಲ್ಲ. ಇಲ್ಲದ ವಿಚಾರಗಳ ಬಗ್ಗೆ ಚಿಂತೆ ಮಾಡುವುದೇ ಹೆಚ್ಚು ಎಂದರು.

ಮನುಷ್ಯನಿಗೆ ಎಲ್ಲವೂ ಕೊರತೆ, ಸಿಎಂ ಸಿದ್ದರಾಮಯ್ಯ ಈ ಬಾರಿಯೂ ಕೊರತೆ ಬಜೆಟ್ ಮಾಡಿದ್ದಾರೆ. ಜಗತ್ತಲ್ಲಿ ಎಲ್ಲವೂ ಇದ್ದರೆ ಜಗತ್ತು ನಾಶವಾಗುತ್ತದೆ. ಏನಾದರೂ ಕೊರತೆ ಇದ್ದಾಗ ಮನುಷ್ಯ ದುಡಿಯುತ್ತಾನೆ. ಶಾಸಕ, ಮಂತ್ರಿ, ಡಿಸಿಎಂ, ಸಿಎಂ ಆಗಿ ನಂತರ ಪ್ರಧಾನಿ ಆಗಬೇಕೆಂಬ ಆಸೆ ಇರುತ್ತದೆ. ಪ್ರತಿಯೊಬ್ಬರ ಮನಸಲ್ಲಿ ಕೊರತೆಯ ಬಜೆಟ್ ಇದ್ದೇ ಇರುತ್ತದೆ. ಕೊರತೆ ಇದ್ದರೆ ಕೊರಗಬಾರದು ಅದನ್ನು ಅರ್ಥ ಮಾಡಿಕೊಳ್ಳಬೇಕು ಎಂದು ಹೇಳಿದರು.

ಕರ್ತವ್ಯ ಮತ್ತು ಕಾಯಕದ ನಡುವೆ ವ್ಯತ್ಯಾಸ ಇದೆ. ಕರ್ತವ್ಯಕ್ಕೆ ಸಮಯ ಇದೆ. ಕಾಯಕಕ್ಕೆ ನಿರ್ದಿಷ್ಟ ಸಮಯವಿಲ್ಲ. ಕಾಯಕದಿಂದ ಬಂದ ಫಲವನ್ನು ದಾಸೋಹಕ್ಕೆ ಕೊಡಬೇಕು. ಉತ್ತಮವಾದ ಸಮಾಜ ನಿರ್ಮಾಣ ಮಾಡುವುದು ಶಿಗ್ಗಾವಿ ವಿರಕ್ತಮಠದ ಪರಂಪರೆ, ಈ ಮಠದ ಖ್ಯಾತಿ ಇಡೀ ನಾಡಿನಾದ್ಯಂತ ಬೆಳೆಯುತ್ತಿದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಬದುಕೇ ಶಾಶ್ವತ ಅಲ್ಲ, ಇನ್ನು ಅಧಿಕಾರ ಎಲ್ಲಿ ಶಾಶ್ವತ. ನಾವು ಮಾಡಿರುವ ಕೆಲಸ ಶಾಶ್ವತವಾಗಿರುತ್ತವೆ. ಕೃಷ್ಣ ಭಗವದ್ಗೀತೆಯಲ್ಲಿ ನೀನು ನಿನ್ನ ಕಾಯಕ ಮಾಡು ಫಲಾಫಲ ನಾನು ಕೊಡುತ್ತೇನೆ ಎಂದು ಹೇಳಿದ್ದಾನೆ. ನಮ ಕೊರತೆಯ ಬಗ್ಗೆ ಕೊರಗುವುದು ಬೇಡ ಎಂದ ಅವರು, ಮುಖ್ಯಮಂತ್ರಿ ಸಿದ್ದರಾಮಯ್ಯ 16 ವರ್ಷದೊಳಗಿನ ಮಕ್ಕಳಿಗೆ ಸಾಮಾಜಿಕ ಜಾಲತಾಣ ನಿಷೇಧ ಮಾಡುವುದಾಗಿ ಹೇಳಿದ್ದಾರೆ. ಅದನ್ನು ಹೇಗೆ ನಿಯಂತ್ರಿಸುತ್ತಾರೆ ಎನ್ನುವುದು ಗೊತ್ತಿಲ್ಲ. ಒಂಬತ್ತು ತಿಂಗಳ ಮಗುವಿಗೆ ಊಟ ಮಾಡಿಸಲು ಮೊಬೈಲ್ ಬೇಕಿದೆ. ಇನ್ನು 16 ವರ್ಷದ ಮಕ್ಕಳನ್ನು ಹೇಗೆ ನಿಯಂತ್ರಣ ಮಾಡುತ್ತಾರೋ ಗೊತ್ತಿಲ್ಲ. ಆದರೆ, ಆ ಕೆಲಸ ಮಾಡಲಿ. ಅದರಿಂದ ಬಹಳಷ್ಟು ಮಕ್ಕಳಿಗೆ ಅನುಕೂಲವಾಗುತ್ತದೆ ಎಂದು ಹೇಳಿದರು. ಈ ಸಂದರ್ಭದಲ್ಲಿ ವಿರಕ್ತಮಠದ ಶ್ರೀ ಸಂಗನಬಸವ ಮಹಾಸ್ವಾಮಿಗಳು, ಬಸವಲಿಂಗ ದೇವರು, ಮರಿಸ್ವಾಮಿಗಳು, ಡಾ.ಎ.ಸಿ .ವಾಲಿ ಮಹಾರಾಜರು ಸಾನ್ನಿಧ್ಯ ವಹಿಸಿದ್ದರು. ಜಿ.ಟಿ.ಟಿ.ಸಿ.ವಲಯ ಮುಖ್ಯಸ್ಥ ಶಿವಾನಂದ ಕುಂಬಾರ, ದುಂಡಸಿ ವಲಯ ಅರಣ್ಯಾಧಿಕಾರಿ ಕೆ.ಮಲ್ಲಪ್ಪ, ವಾಗಿ ಕಗ್ಗ ನಟೇಶ, ನಿವೃತ್ತ ಪ್ರಾಚಾರ್ಯ ಜಿ.ಎನ್. ಯಲಿಗಾರ, ಮುಖಂಡ ಶಿವಾನಂದ ಮ್ಯಾಗೇರಿ ಸೇರಿದಂತೆ ಹಲವಾರು ಪ್ರಮುಖರು ಉಪಸ್ಥಿತರಿದ್ದರು.

# ಜಾತಿ ಸಂಘರ್ಷಕ್ಕೆ ಕುಮ್ಮಕ್ಕು: ಛಲವಾದಿ ನಾರಾಯಣಸ್ವಾಮಿ

## ಕೋರ್ಟ್ ಒಪ್ಪಿಗೆ ಇಲ್ಲದ ಕಾರಣ ಕಾಯ್ದೆಗೆ ರಾಜ್ಯಪಾಲರಿಂದ ಅಂಕಿತ ಪಡೆಯಬಾರದಿತ್ತು- ಛಲವಾದಿ ಆಕ್ಷೇಪ



**ಬೆಂಗಳೂರು, ಮಾ.7:** ಒಳಮೀಸಲಾತಿ ಸಂಬಂಧಿತ ಕಾಯ್ದೆಗೆ ಕೋರ್ಟ್ ಒಪ್ಪಿಗೆ ಇಲ್ಲದ ಕಾರಣ ಮಾನ್ಯ ರಾಜ್ಯಪಾಲರಿಂದ ಅಂಕಿತ ಪಡೆಯಬಾರದಿತ್ತು ಎಂದು ವಿಧಾನಪರಿಷತ್ ಪ್ರತಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ ಆಕ್ಷೇಪಿಸಿದ್ದಾರೆ.

ಮಲ್ಲೇಶ್ವರದ ಬಿಜೆಪಿ ರಾಜ್ಯ ಕಾರ್ಯಾಲಯದಲ್ಲಿ ಮಾಧ್ಯಮಗೋಷ್ಠಿಯಲ್ಲಿ ಮಾತನಾಡಿ, ಒಳಮೀಸಲಾತಿ ಶೇ.15ರಿಂದ 17ಕ್ಕೆ ಏರಿಸಲಾಗಿತ್ತು. ನ್ಯಾ.ನಾಗಮೋಹನ ದಾಸ್ ಅವರ ವರದಿಯನ್ನೂ ಪಡೆದರು. ಅದರ ಪ್ರಕಾರವೇ 6, 6, 5 ಎಂದು ಹಂಚಿಕೆ ಮಾಡಿದ್ದರು. ಕಾಯ್ದೆ ಅನುಮೋದಿಸಿ ಮಾನ್ಯ ರಾಜ್ಯಪಾಲರಿಂದ ಅಂಕಿತವನ್ನೂ ಪಡೆದಿದ್ದರು ಎಂದು ಗಮನಕ್ಕೆ ತಂದರು.

ನೀವ್ಯಾಕೆ ರಾಜ್ಯಪಾಲರ ಅಂಕಿತ ತೆಗೆದುಕೊಂಡಿರಿ, ನಿಮಗೆ ಪ್ರಜ್ಞೆ, ಬುದ್ಧಿ ಇಲ್ಲವೇ ಎಂದು ಕೇಳಿದರು. ಅಂಕಿತ ಪಡೆದ ಮೇಲೆ ಅದನ್ನೇ ಜಾರಿಗೊಳಿಸಬೇಕಿತ್ತು ಎಂದು ಆಗ್ರಹಿಸಿದರು. ಶೇ.15ರ ಮೇಲೆ ಹಂಚಿಕೆ ಮಾಡುವುದಾಗಿ ನ್ಯಾಯಾಲಯಕ್ಕೆ ತಿಳಿಸಿದ್ದೀರಿ. ಹಾಗಾಗಿ ಈ ಕಾಯ್ದೆ ಅನೂರ್ಜಿತ. ಅದು ತಿಪ್ಪೆಗುಂಡಿಗೆ ಹೋದಂತೆ ಎಂದು ನುಡಿದರು.

ನೀವು ಯಾವ ರೀತಿ 56 ಸಾವಿರ ಹುದ್ದೆಗಳನ್ನು ತುಂಬುತ್ತೀರಿ ಎಸ್‌ಸಿ, ಎಸ್‌ಟಿಗಳ ಪಾಲು ಏನು ಎಂದು ಕೇಳಿದರು. 24ರಂದು ಅಂಕಿತ ಹಾಕಿದ್ದಾರೆ. ಧಾರವಾಡ ವಿವಿ, ಬಿಡಿಎ, ಸಾರಿಗೆ ಇಲಾಖೆಯಲ್ಲಿ ಎ, ಬಿ, ಸಿ ಪ್ರವರ್ಗಗಳನ್ನು ಯಾಕೆ ಪ್ರಕಟಿಸಿದ್ದೀರಿ ಎಂದು ಕೇಳಿದರು.

ಗೊಂದಲ ಯಾಕೆ ಸೃಷ್ಟಿಸಿದ್ದೀರಿ. ಎಲ್ಲ ಹುದ್ದೆಗಳೂ ಪ್ರವರ್ಗ ಎ ಎಂದು ಬಂದಿವೆ ಎಂದರು.

ಈಗ ಜಾತಿ ಸಂಘರ್ಷಕ್ಕೆ ಸಿದ್ದರಾಮಯ್ಯನವರು ಕುಮ್ಮಕ್ಕು ಕೊಡುತ್ತಿದ್ದಾರೆ ಎಂದು ಟೀಕಿಸಿದರು. ಕಾಂಗ್ರೆಸ್ಸಿನವರು ಒಂದು ಕಡೆ ಜಾತಿಗಳನ್ನು ಒಡೆದು ತಮ್ಮ ಮತದ ಬಲ ಹೆಚ್ಚಿಸಿಕೊಂಡಿದ್ದರು. ಇನ್ನೊಂದು ಕಡೆ ಜಾತಿಗಳ ಸಂಘರ್ಷಕ್ಕೆ ಕುಮ್ಮಕ್ಕು ಕೊಡುತ್ತಿದ್ದಾರೆ. ಸರಕಾರ ಮಾಡಿದ ತಪ್ಪಿಗೆ ಜನಾಂಗಗಳು ಯಾಕೆ ತಮ್ಮ ತಮ್ಮಲ್ಲಿ ಹೋರಾಟ ಮಾಡಬೇಕು ಎಂದು ಕೇಳಿದರು. ಬಿಜೆಪಿ ಮುಖಂಡ ರುದ್ರಯ್ಯ ಅವರು ಭಾಗವಹಿಸಿದ್ದರು.

# ಸುದ್ದಿ ಚಾನೆಲ್‌ಗಳ ಯುದ್ಧದ ಸುಳ್ಳು ವರದಿ: 4 ವಾರ ಟಿಆರ್‌ಪಿ ಸ್ಥಗಿತಕ್ಕೆ ಆದೇಶ

**ನವದೆಹಲಿ, ಮಾ.7:** ಅಮೆರಿಕ, ಇಸ್ರೇಲ್, ಇರಾನ್ ಮತ್ತು ಗಲ್ಫ್ ರಾಷ್ಟ್ರಗಳ ಸಂಘರ್ಷದ ಕುರಿತು ಟಿವಿ ನ್ಯೂಸ್ ಚಾನೆಲ್‌ಗಳು ಅನಗತ್ಯ ಯುದ್ಧೋನ್ಮಾದ ಸೃಷ್ಟಿಸುತ್ತಿರುವ ಹಾಗೂ ಸುಳ್ಳು ವರದಿಗಳನ್ನು ಪ್ರಸಾರ ಮಾಡುತ್ತಿರುವ ಹಿನ್ನೆಲೆ, ಮುಂದಿನ ನಾಲ್ಕು ವಾರಗಳ ಕಾಲ ಟೆಲಿವಿಷನ್ ರೇಟಿಂಗ್ ಪಾಯಿಂಟ್‌ಗಳ (ಟಿಆರ್‌ಪಿ) ಪ್ರಕಟಣೆಯನ್ನು ಸ್ಥಗಿತಗೊಳಿಸುವಂತೆ ಮಾಹಿತಿ ಮತ್ತು ಪ್ರಸಾರ ಸಚಿವಾಲಯ ಬ್ರಾಡ್‌ಕಾಸ್ಟ್ ಆಡಿಯನ್ಸ್ ರಿಸರ್ಚ್ ಕೌನ್ಸಿಲ್‌ಗೆ (ಬಿಎಆರ್‌ಸಿ-ಬಾರ್ಕ್) ಶುಕ್ರವಾರ (ಮಾ.6) ನಿರ್ದೇಶನ ನೀಡಿದೆ.

ಇಸ್ರೇಲ್ ಮತ್ತು ಅಮೆರಿಕವು ಇರಾನ್ ಮೇಲೆ ನಡೆಸಿದ ದಾಳಿಯಿಂದ ಉಂಟಾದ ಉದ್ವಿಗ್ನತೆಯ ಕುರಿತಾದ ವರದಿಗಾರಿಕೆಯಲ್ಲಿ, ಸುದ್ದಿ ವಾಹಿನಿಗಳು ತೋರುತ್ತಿರುವ ಉದ್ರೇಕಕಾರಿ ಮತ್ತು ಊಹಾತ್ಮಕ ಧೋರಣೆಯ ಬಗ್ಗೆ ಮಾಹಿತಿ ಮತ್ತು ಪ್ರಸಾರ ಸಚಿವಾಲಯವು ತೀವ್ರ ಕಳವಳ ವ್ಯಕ್ತಪಡಿಸಿದೆ.

ಇಸ್ರೇಲ್-ಇರಾನ್ ನಡುವಿನ ಸಂಘರ್ಷದ ಸಂದರ್ಭದಲ್ಲಿ, ಕೆಲವು ಸುದ್ದಿ ವಾಹಿನಿಗಳು ಅನಗತ್ಯವಾದ ಉದ್ರೇಕಕಾರಿ ಮತ್ತು ಊಹಾತ್ಮಕ ವಿಷಯಗಳನ್ನು ಬಿತ್ತರಿಸುತ್ತಿರುವುದನ್ನು ಮಾಹಿತಿ ಮತ್ತು ಪ್ರಸಾರ ಸಚಿವಾಲಯವು ಗಮನಿಸಿದೆ. ಇದು ಸಾರ್ವಜನಿಕರಲ್ಲಿ, ವಿಶೇಷವಾಗಿ ಪೀಡಿತ ಪ್ರದೇಶಗಳಲ್ಲಿ ವಾಸಿಸುತ್ತಿರುವವರಲ್ಲಿ ಅಥವಾ ಆ ಪ್ರದೇಶಗಳಲ್ಲಿ ಸ್ನೇಹಿತರು ಮತ್ತು ಕುಟುಂಬ ಸದಸ್ಯರನ್ನು ಹೊಂದಿರುವವರಲ್ಲಿ ಭೀತಿಯನ್ನು ಉಂಟುಮಾಡುವ ಸಾಧ್ಯತೆಯಿದೆ ಎಂದು ಸಚಿವಾಲಯವು ತನ್ನ ನಿರ್ದೇಶನದಲ್ಲಿ ತಿಳಿಸಿದೆ.

ಮುಂದುವರಿದು, ಸಾರ್ವಜನಿಕ ಹಿತದೃಷ್ಟಿಯಿಂದ, ಮಾಹಿತಿ ಮತ್ತು ಪ್ರಸಾರ



ಸಚಿವಾಲಯವು ಇದೀಗ ಬಾರ್ಕ್ ಸಂಸ್ಥೆಗೆ ಸುದ್ದಿ ಉಪಗ್ರಹ ವಾಹಿನಿಗಳ ರೇಟಿಂಗ್ (ಟಿಆರ್‌ಪಿ) ವರದಿ ಮಾಡುವುದನ್ನು ತಕ್ಷಣದಿಂದ ಜಾರಿಗೆ ಬರುವಂತೆ ನಾಲ್ಕು (4) ವಾರಗಳ ಕಾಲ ಅಥವಾ ಮುಂದಿನ ಆದೇಶದವರೆಗೆ, ಇವೆರಡರಲ್ಲಿ ಯಾವುದು ಮೊದಲೋ ಅಲ್ಲಿಯವರೆಗೆ ತಡೆಹಿಡಿಯುವಂತೆ ನಿರ್ದೇಶಿಸಿದೆ? ಎಂದು ಹೇಳಿದೆ.

ಸಾಮಾಜಿಕ ಮಾಧ್ಯಮ ವೇದಿಕೆಗಳಲ್ಲಿ ಹರಿದಾಡುತ್ತಿರುವ ವಿಡಿಯೋ ಕ್ಲಿಪ್ ಒಂದರಲ್ಲಿ, ಇರಾನ್ ತನ್ನಲ್ಲಿರುವ ಅಮೆರಿಕ ರಾಯಭಾರ ಕಚೇರಿಯಲ್ಲಿ 66 ಅಮೆರಿಕನ್ ಪ್ರಜೆಗಳನ್ನು ಒತ್ತೆಯಾಳಾಗಿ ಇರಿಸಿಕೊಂಡಿದೆ ಎಂದು ವಾಹಿನಿಯೊಂದರ ನಿರೂಪಕಿ ಸುಳ್ಳು ಪ್ರತಿಪಾದನೆ ಮಾಡಿರುವುದು ಕಂಡುಬಂದಿದೆ. ಆ ಸಮಯದಲ್ಲಿ ಚರ್ಚೆಯಲ್ಲಿದ್ದ ಪ್ಯಾನಲಿಸ್ಟ್ ಒಬ್ಬರು, ಇರಾನ್‌ನಲ್ಲಿ ಅಮೆರಿಕದ ರಾಯಭಾರ ಕಚೇರಿಯೇ ಇಲ್ಲ ಎಂಬ ಸತ್ಯವನ್ನು ತಿಳಿಸುವ ಮೂಲಕ ನಿರೂಪಕಿಯನ್ನು ತಿದ್ದಿದ್ದಾರೆ. ಈ ತಪ್ಪಾದ ವರದಿಗಾಗಿ ನಿರೂಪಕಿ ನಂತರ ಕ್ಷಮೆ ಯಾಚಿಸಿದ್ದಾರೆ.

ಈ ವಾಹಿನಿಯ ಸುಳ್ಳು ವರದಿಯ ವಿಡಿಯೋ ಕ್ಲಿಪ್ ಒಂದು ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಹಂಚಿಕೊಂಡಿದ್ದಾರೆ. ಆಕಾಶದಿಂದ ಸ್ಫೋಟಕಗಳನ್ನು ಹೋಲುವ ವಸ್ತುಗಳು ಬೀಳುತ್ತಿರುವ 15 ಸೆಕೆಂಡುಗಳ ದೃಶ್ಯಾವಳಿಯು ಸಾಮಾಜಿಕ ಜಾಲತಾಣಗಳಲ್ಲಿ ವ್ಯಾಪಕವಾಗಿ ಹರಿದಾಡುತ್ತಿದೆ. ಇದು ದುಬೈ ಮೇಲೆ ಇರಾನ್ ನಡೆಸಿದ ದಾಳಿ ಎಂದು ನೆಟ್ಟಿಗರು ಪ್ರತಿಪಾದಿಸುತ್ತಿದ್ದಾರೆ. ಈ ಹಿನ್ನೆಲೆಯಲ್ಲಿ ಎಕ್ಸ್‌ನಲ್ಲಿ ಪೋಸ್ಟ್ ಹಾಕಿರುವ ದುಬೈ ಪೊಲೀಸರು, ಇಂತಹ ನಕಲಿ ವಿಡಿಯೋಗಳ ಬಗ್ಗೆ ಎಚ್ಚರಿಕೆ ನೀಡಿದ್ದಾರೆ. ಅಧಿಕೃತ ಪ್ರಕಟಣೆಗಳಿಗೆ ವಿರುದ್ಧವಾದ ಅಥವಾ ಸಾರ್ವಜನಿಕರಲ್ಲಿ ಭೀತಿ ಹುಟ್ಟಿಸುವ ವದಂತಿ ಹಾಗೂ ಸುಳ್ಳು ಮಾಹಿತಿಯನ್ನು ಹಂಚಿಕೊಳ್ಳುವುದು ಯುಎಇ ಕಾನೂನಿನ ಅಡಿಯಲ್ಲಿ ನಿಷೇಧಿಸಲಾಗಿದೆ ಎಂದು ಅವರು ಎಚ್ಚರಿಸಿದ್ದಾರೆ.

### ಮುಂಚೂಣಿಯಲ್ಲಿ ಹಲವರು, ಆಯ್ಕೆಯಾಗುವವರರು ಯಾರೆಂದು ಕಾದುನೋಡಬೇಕಿದೆ

## ನಿತೀಶ್‌ಕುಮಾರ್ ಬಳಿಕ ಬಿಹಾರ ಮುಖ್ಯಮಂತ್ರಿ ಯಾರು?

**ಪಟನಾ, ಮಾ.7:** 10 ಬಾರಿ ಬಿಹಾರದ ಮುಖ್ಯಮಂತ್ರಿಯಾಗಿದ್ದ ನಿತೀಶ್ ಕುಮಾರ್ ಅವರು ಶುಕ್ರವಾರ ರಾಜ್ಯಸಭಾ ಚುನಾವಣೆಗೆ ನಾಮಪತ್ರ ಸಲ್ಲಿಸಿದ್ದಾರೆ. ನಿತೀಶ್ ಅವರ ಮೇಲೆ ಬಿಜೆಪಿ ಒತ್ತಡ ಹಾಕಿ ಅವರನ್ನು ರಾಜ್ಯಸಭೆಗೆ ಕಳಿಸಿ, ಬಿಹಾರದ ಆಡಳಿತ ಚುಕ್ಕಾಣಿಯನ್ನು ವಶಕ್ಕೆ ತೆಗೆದುಕೊಳ್ಳುತ್ತಿದೆ ಎಂಬ ಚರ್ಚೆಗಳು ನಡೆಯುತ್ತಿವೆ. ಇದೇ ಸಮಯದಲ್ಲಿ, ನಿತೀಶ್ ರಾಜೀನಾಮೆಯಿಂದ ತೆರವಾಗುವ ಮುಖ್ಯಮಂತ್ರಿ ಹುದ್ದೆಯನ್ನು ಅಲಂಕರಿಸುವವರು ಯಾರು ಎಂಬ ಪ್ರಶ್ನೆಯೂ ಉದ್ಭವಿಸಿದೆ. ಆದಾಗ್ಯೂ, ಮುಂದಿನ ಮುಖ್ಯಮಂತ್ರಿ ಬಿಜೆಪಿಯವರೇ ಆಗಿರುತ್ತಾರೆ ಎಂಬುದು ಈಗಾಗಲೇ ಸ್ಪಷ್ಟವೂ ಆಗಿದೆ. ಊಹಾಪೋಹಗಳ ನಡುವೆ ಆರು ಹೆಸರುಗಳು ಬಿಜೆಪಿ ಪಾಳಯದಲ್ಲಿ ಚರ್ಚೆಯಾಗುತ್ತಿವೆ.

**ಸಾಮ್ರಾಟ್ ಚೌಧರಿ**

ಬಿಹಾರ ಮುಖ್ಯಮಂತ್ರಿ ಹುದ್ದೆಯ ರೇಸ್‌ನಲ್ಲಿ ಮುಂಚೂಣಿಯಲ್ಲಿರುವವರು ಹಾಲಿ ಉಪಮುಖ್ಯಮಂತ್ರಿ ಸಾಮ್ರಾಟ್ ಚೌಧರಿ. ಇವರನ್ನು ನಿತೀಶ್ ಅವರ ನೆರಳು ಎಂದೇ ನೋಡಲಾಗುತ್ತದೆ. ಚೌಧರಿ ಅವರಿಗೆ ಜಾತಿ ಅಂಶವೂ ಪೂರಕವಾಗಿದೆ. ಅವರು ಕೋಯಿರಿ ಜಾತಿಗೆ ಸೇರಿದವರಾಗಿದ್ದು, ಈ ಸಮುದಾಯವು ನಿತೀಶ್ ಅವರ ಕುರ್ಮಿ ಸಮುದಾಯದೊಂದಿಗೆ ನಿಕಟ ಸಂಬಂಧ ಹೊಂದಿದೆ. ಕೋಯಿರಿ ಸಮುದಾಯದವರು ಮುಖ್ಯಮಂತ್ರಿಯಾದರೆ ಅವರು ನಿತೀಶ್ ಕುಮಾರ್‌ಗೆ ಉತ್ತಮ ಬದಲಿಯಾಗುತ್ತಾರೆ. ಅಧಿಕಾರದ ಸಮತೋಲನವನ್ನು ಕಾಯ್ದುಕೊಳ್ಳುತ್ತಾರೆ ಎಂದು ಅನೇಕರು ಭಾವಿಸುತ್ತಾರೆ.

ನಕಾರಾತ್ಮಕ ಅಂಶವೆಂದರೆ, ಸಾಮ್ರಾಟ್ ಚೌಧರಿ ಅವರು ಮೂಲ ಬಿಜೆಪಿಗರಲ್ಲ. ಅವರು ತಮ್ಮ ರಾಜಕೀಯ ಜೀವನವನ್ನು ಲಾಲು ಪ್ರಸಾದ್ ಯಾದವ್ ಅವರ ರಾಷ್ಟ್ರೀಯ ಜನತಾ ದಳದೊಂದಿಗೆ ಪ್ರಾರಂಭಿಸಿದ್ದರು. ಕೆಲ ವರ್ಷಗಳ ಕಾಲ ಅವರು ಆರ್‌ಜೆಡಿಯ ಶಾಸಕರೂ ಆಗಿದ್ದರು ಎಂಬುದನ್ನು ಅನೇಕರು ಬೆಟ್ಟು ಮಾಡುತ್ತಾರೆ.

**ನಿತ್ಯಾನಂದ ರಾಯ್**

ಕೇಂದ್ರ ಗೃಹ ಖಾತೆ ರಾಜ್ಯ ಸಚಿವರಾಗಿರುವ ನಿತ್ಯಾನಂದ ರಾಯ್, ಕೇಂದ್ರ ಗೃಹ ಸಚಿವ ಅಮಿತ್ ಶಾ ಆಪ್ತರೂ ಆಗಿದ್ದಾರೆ. ರಾಯ್ ಅವರು ಯಾದವ ಸಮುದಾಯದವರು. ಅವರಿಗೆ ಪ್ರಮುಖ ಜವಾಬ್ದಾರಿಯನ್ನು ನೀಡಲಾಗುವುದು ಎಂದು ಅಮಿತ್ ಶಾ ಸಾರ್ವಜನಿಕವಾಗಿ ಹಲವು ಬಾರಿ ಹೇಳಿದ್ದಾರೆ. ಒಂದು ವೇಳೆ, ರಾಯ್ ಅವರು ನಿತೀಶ್ ಕುಮಾರ್ ಅವರ ಸ್ಥಾನಕ್ಕೆ ಬಂದರೆ, ಅದು ಆರ್‌ಜೆಡಿಯ ಯಾದವ ಮತಬ್ಯಾಂಕ್‌ಅನ್ನು ಅಲುಗಾಡಿಸಬಹುದು. ಆದರೆ, ಬಿಜೆಪಿ ಈಗಾಗಲೇ ಮಧ್ಯಪ್ರದೇಶದಲ್ಲಿ ಮೋಹನ್ ಯಾದವ್ ಅವರನ್ನು ಮುಖ್ಯಮಂತ್ರಿಯನ್ನಾಗಿ ಮಾಡಿದೆ. ಹೀಗಾಗಿ, ಬಿಹಾರದಲ್ಲಿಯೂ ಅದೇ ಸಮುದಾಯದವರಿಗೆ ಮಣೆ ಹಾಕುವುದಿಲ್ಲ ಎಂಬ ವಾದವೂ ಕೇಳಿಬರುತ್ತಿದೆ.

**ಸಂಜೀವ್ ಚೌರಾಸಿಯಾ**

ಪಟನಾದ ದಿಘಾ ಕ್ಷೇತ್ರದ ಶಾಸಕರಾದ ಸಂಜೀವ್ ಚೌರಾಸಿಯಾ ರಾಜಕೀಯ ಕುಟುಂಬದ ಹಿನ್ನೆಲೆ ಉಳ್ಳವರು. ಅವರ ತಂದೆ ಗಂಗಾ ಪಿ. ಚೌರಾಸಿಯಾ ಕೂಡ ಶಾಸಕರಾಗಿದ್ದರು. ಅಲ್ಲದೆ, ಬಿಹಾರದಲ್ಲಿ ಬಿಜೆಪಿಯ ಸಂಸ್ಥಾಪಕರಲ್ಲಿ ಒಬ್ಬರಾಗಿದ್ದರು. ನಂತರ ಅವರನ್ನು ಸಿಕ್ಕಿಂ ರಾಜ್ಯಪಾಲರನ್ನಾಗಿ ನೇಮಿಸಲಾಗಿತ್ತು.

ಚೌರಾಸಿಯಾ ಹಿಂದುಳಿದ ವರ್ಗಕ್ಕೆ ಸೇರಿದವರಾಗಿದ್ದು, ಉನ್ನತ ಹುದ್ದೆಗೆ ಪರಿಗಣಿಸಬಹುದಾದ ಬಿಜೆಪಿ ಪಟ್ಟಿಯಲ್ಲಿ ಸಂಜೀವ್ ಕೂಡ ಸ್ಥಾನ ಪಡೆಯುತ್ತಾರೆ. ಆದರೆ, ಇವರನ್ನು ಆರಿಸಿದರೆ ಮುಖ್ಯಮಂತ್ರಿ ಮತ್ತು ಪಕ್ಷದ ರಾಷ್ಟ್ರೀಯ ಅಧ್ಯಕ್ಷರು ಇಬ್ಬರೂ ಒಂದೇ ನಗರದಿಂದ (ಪಟನಾ) ಬಂದವರೇ ಆಗುತ್ತಾರೆ. ಇದು ಆ ನಗರಕ್ಕೆ ಅತಿಯಾದ ಪ್ರಾಮುಖ್ಯತೆ ನೀಡಿದಂತಾಗುತ್ತದೆ ಎಂಬ ಅಭಿಪ್ರಾಯವಿದೆ.

**ಜನಕ್ ರಾಮ್**

ಬಿಹಾರ ರಾಜಕೀಯದಲ್ಲಿ ಭಾರೀ ಚರ್ಚೆಯಾಗುತ್ತಿರುವ ಮತ್ತೊಂದು ಹೆಸರು ರವಿದಾಸ್ ಸಮುದಾಯಕ್ಕೆ ಸೇರಿದ ಜನಕ್ ರಾಮ್. ಬಿಜೆಪಿ ದಲಿತ ಸಮುದಾಯದವರಿಗೆ ಉನ್ನತ ಹುದ್ದೆ ನೀಡುವಷ್ಟು ವೈಶಾಲ್ಯತೆ ಹೊಂದಿದ್ದರೆ, ಜನಕ್‌ರಾಮ್ ಅಗ್ರಸ್ಥಾನದಲ್ಲಿರುತ್ತಾರೆ. ಆದಾಗ್ಯೂ, ದಲಿತ ಸಮುದಾಯಕ್ಕೆ ರಾಜ್ಯದ ಮುಖ್ಯ ಹುದ್ದೆಯನ್ನು ಬಿಜೆಪಿ ನೀಡುವುದಿಲ್ಲ ಎಂಬ ವಿಚಾರ ಜಗ್ಗಜ್ಜಾಹೀರಾಗಿದೆ. ಜೊತೆಗೆ, ಜನಕ್ ಅವರ ರವಿದಾಸ್ ಸಮುದಾಯದವರೇ ಆದ ಶಿವೇಶ್ ಕುಮಾರ್ ಅವರನ್ನು ರಾಜ್ಯಸಭೆಗೆ ಬಿಜೆಪಿ ನಾಮನಿರ್ದೇಶನ ಮಾಡಿದೆ. ಇದೇ ಕಾರಣವನ್ನು ಮುಂದಿಟ್ಟು ಜನಕ್‌ರಾಮ್ ಅವರನ್ನು ಕಡೆಗಣಿಸಬಹುದು ಎಂದೂ ಹೇಳಲಾಗುತ್ತಿದೆ.

**ದಿಲೀಪ್ ಜೈಸ್ವಾಲ್**

ರಾಜ್ಯದ ಮಾಜಿ ಸಚಿವರಾದ ದಿಲೀಪ್ ಜೈಸ್ವಾಲ್ ಅವರು ವೈಶ್ಯ ಸಮುದಾಯಕ್ಕೆ ಸೇರಿದವರು. ಒಂದು ವೇಳೆ ಬಿಜೆಪಿ ವೈಶ್ಯ ಸಮುದಾಯದವರನ್ನು ಮುಖ್ಯಮಂತ್ರಿ ಹುದ್ದೆಗೆ ಆಯ್ಕೆ ಮಾಡುವುದಾದರೆ ದಿಲೀಪ್ ಜೈಸ್ವಾಲ್ ಅವರನ್ನು ಪರಿಗಣಿಸುವ ಸಾಧ್ಯತೆ ಹೆಚ್ಚು.

**ಗಾಯತ್ರಿ ದೇವಿ**

ಬಿಹಾರದ ಸೀತಾಮರ್ಹಿಯ ಪರಿಹಾರ್ ಕ್ಷೇತ್ರದ ಶಾಸಕಿ ಹಾಗೂ ಯಾದವ ಸಮುದಾಯಕ್ಕೆ ಸೇರಿದ ಗಾಯತ್ರಿ ದೇವಿ ಅವರ ಹೆಸರೂ ಚರ್ಚೆಯಲ್ಲಿದೆ. ಇವರು ಆಯ್ಕೆಯಾದರೆ, ರಾಬ್ರಿ ದೇವಿ ನಂತರ ಬಿಹಾರದ ಎರಡನೇ ಮಹಿಳಾ ಮುಖ್ಯಮಂತ್ರಿಯಾಗಲಿದ್ದಾರೆ.

## ಅಕ್ರಮ ವಲಸಿಗರೆಂದು 2 ವರ್ಷ ಜೈಲಿನಲ್ಲಿಟ್ಟಿದ್ದ ಮಹಿಳೆಗೆ ಪೌರತ್ವ

**ಗೌಹಾತಿ, ಮಾ.7:** ವಿದೇಶಿಗನೆಂದು ಘೋಷಿಸಲ್ಪಟ್ಟ ನಂತರ ಎರಡು ವರ್ಷ ಬಂಧನದಲ್ಲಿದ್ದ ಅಸ್ಸಾಂ ನಿವಾಸಿ ದೀಪಾಲಿ ದಾಸ್ (59) ಅವರಿಗೆ ಸಿಎಎ ಅಡಿಯಲ್ಲಿ ಭಾರತೀಯ ಪೌರತ್ವ ನೀಡಲಾಗಿದೆ ಎಂದು ವರದಿಯಾಗಿದೆ. ಅಸ್ಸಾಂನ ಕ್ಯಾಚರ್ ಜಿಲ್ಲೆಯ ನಿವಾಸಿ ದೀಪಾಲಿ ದಾಸ್ ಅವರನ್ನು 2019ರ ಫೆಬ್ರವರಿಯಲ್ಲಿ ವಿದೇಶಿಗಳೆಂದು ನ್ಯಾಯಮಂಡಳಿಯು (ಎಫ್ಟಿ) ಅಕ್ರಮ ವಲಸಿಗ ಎಂದು ಘೋಷಿಸಿತ್ತು. ಅವರನ್ನು ಅದೇ ವರ್ಷದ ಮೇ 10ರಂದು ಬಂಧಿಸಿ ಸಿಲ್ಚಾರ್ ಬಂಧನ ಕೇಂದ್ರಕ್ಕೆ ಕಳುಹಿಸಲಾಗಿತ್ತು. ಬಳಿಕ, ಸುಪ್ರೀಂ ಕೋರ್ಟ್ ಆದೇಶದ ಮೇಲೆ 2021ರ ಮೇ 17ರಂದು ಅವರನ್ನು ಜಾಮೀನಿನ ಮೇಲೆ ಬಿಡಗಡೆ ಮಾಡಲಾಗಿತ್ತು. ಇದೀಗ, ಅವರಿಗೆ ಭಾರತೀಯ ಪೌರತ್ವ ನೀಡಲಾಗಿದೆ.

ದಾಸ್ ಪರವಾಗಿ ಸುಪ್ರೀಂ ಕೋರ್ಟ್‌ನಲ್ಲಿ ವಾದಿಸಿದ್ದ ವಕೀಲ ಧರ್ಮಾನಂದ ದೇಬ್ ಸುದ್ದಿಗಾರರೊಂದಿಗೆ ಮಾತನಾಡಿದ್ದು, ಸುಪ್ರೀಂ ಕೋರ್ಟ್ ಆದೇಶದ ನಂತರ ಜಾಮೀನಿನ ಮೇಲೆ ದಾಸ್ ಬಿಡುಗಡೆಯಾಗಿದ್ದರು. ಬಿಡುಗಡೆಗೂ ಮುನ್ನ ದಾಸ್ ಸುಮಾರು ಎರಡು ವರ್ಷಗಳ ಕಾಲ ಜೈಲಿನಲ್ಲಿದ್ದರು. ದಾಸ್ ಅವರು ಮೂಲತಃ ಬಾಂಗ್ಲಾದೇಶದ ಸಿಲ್ಹೆಟ್ ಜಿಲ್ಲೆಯ ದಿಪ್ಪೂರ್ ಗ್ರಾಮದ ನಿವಾಸಿ. ಅವರು 1987ರಲ್ಲಿ ಹಬಿಗಂಜ್ ಜಿಲ್ಲೆಯ ಪಾರ್ಕೈ ಗ್ರಾಮದ ಅಭಿಮನ್ಯು ದಾಸ್ ಅವರನ್ನು ವಿವಾಹವಾಗಿದ್ದರು. ಭಾರತಕ್ಕೆ ಬಂದಿದ್ದರು




ಎಂದು ತಿಳಿಸಿದ್ದಾರೆ.

2013ರಲ್ಲಿ ಅವರ ವಿರುದ್ಧ ಪೊಲೀಸ್ ತನಿಖೆ ಆರಂಭವಾಗಿತ್ತು. ಅವರ ಪೌರತ್ವದ ಕುರಿತು ಪರಿಶೀಲನೆ ನಡೆಸಲಾಗಿತ್ತು. ಅಜ್ಮಲ್ ಹುಸೇನ್ ಲಸ್ಕರ್ ಈ ಪ್ರಕರಣವನ್ನು ನಿರ್ವಹಿಸುತ್ತಿದ್ದರು. 2013ರ ಜುಲೈ 2ರಂದು ಚಾರ್ಜ್‌ಶೀಟ್ ಸಲ್ಲಿಸಿದ್ದರು. ಅದರಲ್ಲಿ ದೀಪಾಲಿ ಅವರು 1971ರ ಮಾರ್ಚ್ ನಂತರ ಅಕ್ರಮವಾಗಿ ಭಾರತಕ್ಕೆ ಪ್ರವೇಶಿಸಿದ್ದಾರೆಂದು ವಾದಿಸಲಾಗಿತ್ತು. ಭಾರತೀಯ ಕಾನೂನಿನ ಪ್ರಕಾರ, 1971ರ ಮಾರ್ಚ್ 25ರ ಕಟ್-ಆಫ್ ನಂತರ ಅಕ್ರಮವಾಗಿ ದೇಶವನ್ನು ಪ್ರವೇಶಿಸುವ ಯಾರನ್ನಾದರೂ ಅಸ್ಸಾಂನಲ್ಲಿ ಅಕ್ರಮ ವಲಸಿಗರೆಂದು ಪರಿಗಣಿಸಲಾಗುತ್ತದೆ. ಸಿಎಎ ಅಡಿಯಲ್ಲಿ ಭಾರತೀಯ ಪೌರತ್ವಕ್ಕಾಗಿ ದೀಪಾಲಿ ಪೌರತ್ವಕ್ಕಾಗಿ ಅರ್ಜಿಯನ್ನೂ ಸಲ್ಲಿಸಿದ್ದರು ಎಂದು ದೇಬ್ ವಿವರಿಸಿದ್ದಾರೆ.

## ತೈಲ ವಿಚಾರದಲ್ಲಿ ಅಮೆರಿಕದ ಒಪ್ಪಿಗೆ ಪಡೆಯುವುದು ಅತಿರೇಕದ ಸಂಗತಿ: ಕೇರಳ ಸಿಎಂ ಪಿಣರಾಯಿ

**ತಿರುವನಂತಪುರ, ಮಾ.7:** ತೈಲ ಆಮದುಗಳಂತಹ ನಿರ್ಧಾರಗಳಿಗೆ ಭಾರತವು ಅಮೆರಿಕದ ಅನುಮೋದನೆಯನ್ನು ಪಡೆಯುವಂತೆ ಬಿಂಬಿತವಾಗುತ್ತಿರುವುದು ಅತಿರೇಕದ ಸಂಗತಿ ಎಂದು ಕೇರಳ ಮುಖ್ಯಮಂತ್ರಿ ಪಿಣರಾಯಿ ವಿಜಯನ್ ಶುಕ್ರವಾರ ಹೇಳಿದ್ದಾರೆ.



ಭಾರತದ ಸಾರ್ವಭೌಮತ್ವವು ವಿದೇಶಿ ಅನುಮತಿಗೆ ಒಳಪಡುವುದಿಲ್ಲ ಎಂದು ವಿಜಯನ್ ಸಾಮಾಜಿಕ ಮಾಧ್ಯಮ ವೇದಿಕೆ ಎಕ್ಸ್‌ನಲ್ಲಿ ಮಾಹಿತಿ ಹಂಚಿಕೊಂಡಿರುವ ಅವರು, ಇರಾನ್ ಜೊತೆಗಿನ ಉದ್ವಿಗ್ನತೆ ಹೆಚ್ಚುತ್ತಿರುವ ನಡುವೆ, ಭಾರತೀಯ ಸಂಸ್ಕರಣಾಗಾರಗಳು ರಷ್ಯಾದ ತೈಲವನ್ನು ಖರೀದಿಸಲು ಅಮೆರಿಕ ತಾತ್ಕಾಲಿಕ 30 ದಿನಗಳ ವಿನಾಯಿತಿ ನೀಡಿದ ನಂತರ ಅವರ ಕಟುವಾದ ಟೀಕೆ ಬಂದಿದೆ.

ಭಾರತದಂತಹ ದೇಶವು ತೈಲ ಆಮದುಗಳಂತಹ ನಿರ್ಧಾರಗಳಿಗೆ ಅಮೆರಿಕದ ಅನುಮೋದನೆಯನ್ನು ಪಡೆಯುವಂತೆ ಕಾಣುವುದು ಅತಿರೇಕದ ಸಂಗತಿ. ಅಂತಹ ಗ್ರಹಿಕೆ ಬೇರೂರಲು ಅವಕಾಶ ನೀಡುವ ಮೂಲಕ, ಕೇಂದ್ರ ಸರ್ಕಾರವು ನಮ್ಮ ದೇಶವನ್ನು ಪ್ರಪಂಚದ ಮುಂದೆ ಅವಮಾನಿಸುತ್ತಿದೆ ಎಂದು ವಿಜಯನ್ ತಿಳಿಸಿದ್ದಾರೆ.

ಭಾರತ ಯಾರೊಂದಿಗೆ ವ್ಯಾಪಾರ ಮಾಡುತ್ತದೆ ಎಂಬುದರ ಕುರಿತು ನಿರ್ಧಾರಗಳನ್ನು ಅದರ ರಾಷ್ಟ್ರೀಯ ಹಿತಾಸಕ್ತಿಗಳಿಂದ ಮಾರ್ಗದರ್ಶನ ಪಡೆದು ದೇಶ ಮಾತ್ರ ತೆಗೆದುಕೊಳ್ಳಬೇಕು ಎಂದು ಅವರು ಹೇಳಿದರು. ನಮ್ಮ ರಾಷ್ಟ್ರೀಯ ಘನತೆ ಮತ್ತು ಇಂಧನ ಭದ್ರತೆಯು ಯಾವುದೇ ಮಹಾಶಕ್ತಿಯ ಅನುಮೋದನೆಗೆ ಒಳಪಟ್ಟಿಲ್ಲ ಎಂದು ಅವರು ಪ್ರತಿಪಾದಿಸಿದರು.

## ಇಂದು ಟಿವಿಕೆ ಪಕ್ಷದ ಪ್ರಣಾಳಿಕೆ ಪ್ರಕಟ

**ಚೆನ್ನೈ, ಮಾ.7:** ಮಹಿಳಾ ದಿನಾಚರಣೆ ಹಿನ್ನೆಲೆ ತಮಿಳುನಾಡಿನ ಮಾಮಲ್ಲಪುರಂನಲ್ಲಿ ಶನಿವಾರ ಟಿವಿಕೆಯ ಕಾರ್ಯಕ್ರಮ ನಡೆಯಲಿದೆ. ಈ ಕಾರ್ಯಕ್ರಮದಲ್ಲಿಯೇ ನಟ-ರಾಜಕಾರಣಿ ವಿಜಯ್, ಮುಂಬರುವ ತಮಿಳುನಾಡು ವಿಧಾನಸಭಾ ಚುನಾವಣೆಯ ಭರವಸೆಗಳನ್ನು ಪ್ರಕಟಿಸಲಿದ್ದಾರೆ.



ಅಲ್ಲದೆ, ಟಿವಿಕೆ ಮಾರ್ಚ್ 8ರಂದು ಪಕ್ಷದ ಎಲ್ಲಾ ಜಿಲ್ಲೆಗಳಲ್ಲಿ ಮಹಿಳಾ ದಿನವನ್ನು ಆಚರಿಸಲಿದೆ. ಮಹಿಳಾ ದಿನಾಚರಣೆಯಂದೇ ಈ ಘೋಷಣೆಗಳನ್ನು ಮಾಡಲಿರುವ ಕಾರಣ ವಿಜಯ್ ಮಹಿಳೆಯರಿಗಾಗಿ ಪ್ರಮುಖ ಕಲ್ಯಾಣ ಯೋಜನೆಗಳನ್ನು ಘೋಷಿಸುವ ಸಾಧ್ಯತೆಯಿದೆ. ಮಾಮಲ್ಲಪುರಂನ ಹೋಟೆಲ್ನಲ್ಲಿ ಮಧ್ಯಾಹ್ನ 3ರಿಂದ ಸಂಜೆ 5ರವರೆಗೆ ಪಕ್ಷದ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ ಎಂದು ವರದಿಯಾಗಿದೆ.

ಈ ಕಾರ್ಯಕ್ರಮಕ್ಕೆ ಪ್ರವೇಶವು ಕ್ಯುಆರ್ ಕೋಡ್ ಪಾಸ್‌ಗಳ ಮೂಲಕ ಮಾತ್ರ ಇರುತ್ತದೆ ಎಂದು ತಮಿಳಗಾ ವೆಟ್ರಿ ಕಳಗಂನ (ಟಿವಿಕೆ) ಪ್ರಧಾನ ಕಾರ್ಯದರ್ಶಿ ಎನ್ ಆನಂದ್ ಮಾರ್ಚ್ 6ರಂದು ಹೇಳಿಕೆಯಲ್ಲಿ ತಿಳಿಸಿದ್ದಾರೆ.

ಈ ಕಾರ್ಯಕ್ರಮದಲ್ಲಿ ಭಾಗವಹಿಸುವವರಿಗೆ ಕ್ಯುಆರ್ ಕೋಡ್ ಹೊಂದಿರುವ ಪ್ರವೇಶ ಪಾಸ್‌ಗಳನ್ನು ನೀಡಲಾಗಿದೆ. ಅವರನ್ನು ಹೊರತುಪಡಿಸಿ, ಬೇರೆ ಯಾರಿಗೂ ಕಾರ್ಯಕ್ರಮದಲ್ಲಿ ಭಾಗವಹಿಸಲು ಅವಕಾಶವಿರುವುದಿಲ್ಲ ಎಂದು ಟಿವಿಕೆ ಹೇಳಿಕೆಯಲ್ಲಿ ಮಾಹಿತಿ ನೀಡಿದೆ. ನಟ ವಿಜಯ್ ನೇತೃತ್ವದ ಟಿವಿಕೆ ಈಗಾಗಲೇ ತಮಿಳುನಾಡು ವಿಧಾನಸಭಾ ಚುನಾವಣೆಗೆ ಭರ್ಜರಿ ಪ್ರಚಾರ, ತಯಾರಿಯನ್ನು ನಡೆಸುತ್ತಿದೆ. ಚುನಾವಣಾ ಪ್ರಚಾರ ಚಟುವಟಿಕೆಗಳನ್ನು ಮುನ್ನಡೆಸಲು 10 ಸದಸ್ಯರ ವಿಶೇಷ ಸಮಿತಿಯನ್ನು ಟಿವಿಕೆ ರಚಿಸಿದೆ. ಈ ಚುನಾವಣೆಯು ಮುಖ್ಯವಾಗಿ ತಮ್ಮ ಪಕ್ಷ ಮತ್ತು ಆಡಳಿತಾರೂಢ ಡಿಎಂಕೆ ನಡುವಿನ ನೇರ ಸ್ಪರ್ಧೆಯಾಗಲಿದೆ ಎಂದು ವಿಜಯ್ ಘೋಷಿಸಿದ್ದಾರೆ.

## ಪತ್ರಕರ್ತನ ಹತ್ಯೆ ಪ್ರಕರಣ ಡೇರಾ ಮುಖ್ಯಸ್ಥ ಸಿಂಗ್ ಖುಲಾಸೆ

**ಚಂಡೀಗಢ, ಮಾ.7:** 2002ರಲ್ಲಿ ನಡೆದ ಪತ್ರಕರ್ತ ರಾಮ್ ಚಂದರ್ ಛತ್ರಪತಿ ಕೊಲೆ ಪ್ರಕರಣದಲ್ಲಿ ಡೇರಾ ಸಚ್ಚಾ ಸೌದಾ ಮುಖ್ಯಸ್ಥ ಗುರ್ಮೀತ್ ಸಿಂಗ್ ಖುಲಾಸೆಗೊಂಡಿದ್ದಾರೆ. ಏಳು ವರ್ಷಗಳ ಹಿಂದೆ ವಿಶೇಷ ಸಿಬಿಐ ಕೋರ್ಟ್ ಗುರ್ಮೀತ್ ರಾಮ್ ರಹೀಮ್ ಸಿಂಗ್ ಅವರನ್ನು ದೋಷಿ



ಎಂದು ಘೋಷಿಸಿ ಜೀವಾವಧಿ ಶಿಕ್ಷೆ ವಿಧಿಸಿತ್ತು. ಇದೀಗ ಶನಿವಾರ ಪಂಜಾಬ್ ಮತ್ತು ಹರಿಯಾಣ ಹೈಕೋರ್ಟ್ ಈ ಪ್ರಕರಣದಲ್ಲಿ ಅವರನ್ನು ಖುಲಾಸೆಗೊಳಿಸಿದೆ.

ಆದರೆ ಗುರ್ಮೀತ್ ಸಿಂಗ್ ಇನ್ನೂ ಎರಡು ಅತ್ಯಾಚಾರ ಪ್ರಕರಣದಲ್ಲಿ ಅಪರಾಧಿಯಾಗಿದ್ದು 20 ವರ್ಷಗಳ ಜೀವಾವಧಿ ಶಿಕ್ಷೆಯಿದೆ. ಆದ್ದರಿಂದ ಜೈಲಿನಲ್ಲೇ ಇರಲಿದ್ದಾರೆ.

ಸಿರ್ಸಾ ಮೂಲದ ಪತ್ರಕರ್ತ ರಾಮ್‌ಚಂದರ್ ಛತ್ರಪತಿ ಅವರ ಕೊಲೆಗೆ ಸಂಬಂಧಿಸಿದಂತೆ ಸಿಂಗ್ ಮತ್ತು ಇತರ ಮೂವರು ಕುಲದೀಪ್ ಸಿಂಗ್, ನಿರ್ಮಲ್ ಸಿಂಗ್ ಮತ್ತು ಕ್ರಿಶನ್ ಲಾಲ್‌ಗೆ 2019ರಲ್ಲಿ ವಿಶೇಷ ಸಿಬಿಐ ನ್ಯಾಯಾಲಯವು ಜೀವಾವಧಿ ಶಿಕ್ಷೆ ವಿಧಿಸಿತ್ತು. ಈ ತೀರ್ಪನ್ನು ಪ್ರಶ್ನಿಸಿ ಗುರ್ಮೀತ್ ಸಿಂಗ್ ಪಂಜಾಬ್ ಮತ್ತು ಹರಿಯಾಣ ಹೈಕೋರ್ಟ್ ಮೆಟ್ಟಿಲೇರಿದ್ದರು. ಈ ಅರ್ಜಿ ವಿಚಾರಣೆ ನಡೆಸಿದ ಹೈಕೋರ್ಟ್ ಗುರ್ಮೀತ್ ಸಿಂಗ್ ಅವರನ್ನು ಖುಲಾಸೆಗೊಳಿಸಿದೆ.

ಪೂರಾ ಸಚ್ ಪತ್ರಿಕೆಯನ್ನು ನಡೆಸುತ್ತಿದ್ದ ಛತ್ರಪತಿ ಅವರನ್ನು 2002ರ ಅಕ್ಟೋಬರ್‌ನಲ್ಲಿ ಹರಿಯಾಣದ ಸಿರ್ಸಾದಲ್ಲಿರುವ ಅವರ ಮನೆಯ ಹೊರಗೆ ಗುಂಡಿಕ್ಕಿ ಕೊಲ್ಲಲಾಗಿದೆ. ಡೇರಾ ಸಚ್ಚಾ ಸೌದಾ ಪ್ರಧಾನ ಕಚೇರಿಯಲ್ಲಿ ಮಹಿಳಾ ಅನುಯಾಯಿಗಳ ಮೇಲೆ ಲೈಂಗಿಕ ದೌರ್ಜನ್ಯ ಎಸಗಲಾಗುತ್ತಿದೆ ಎಂದು ಆರೋಪಿಸಿದ ಅನಾಮಧೇಯ ಪತ್ರವೊಂದನ್ನು ಛತ್ರಪತಿ ತಮ್ಮ ಪತ್ರಿಕೆಯಲ್ಲಿ ಪ್ರಕಟಿಸಿದ್ದರು. ಅದಾದ ಬಳಿಕ ಅವರನ್ನು ಗುಂಡಿಕ್ಕಿ ಕೊಲ್ಲಲಾಗಿತ್ತು.

## ಸುಡುತ್ತಿರುವ ಸೂರ್ಯ: ಉತ್ತರ ಭಾರತದ ಹಲವು ರಾಜ್ಯಗಳಿಗೆ ಐಎಂಡಿ ಎಚ್ಚರಿಕೆ

ನವದೆಹಲಿ, ಮಾ.7: ದೇಶಾದ್ಯಂತ ಸೂರ್ಯ ಸುಡುತ್ತಿದ್ದು, ಉರಿಯುತ್ತಿರುವ ಬೆಂಕಿಯ ಉಂಡೆಯಾಗಿ ಮಾರ್ಪಟ್ಟಿದ್ದಾನೆ. ಈ ಸಂದರ್ಭದಲ್ಲಿ, ಹವಾಮಾನ ಇಲಾಖೆ (ಐಎಂಡಿ) ಹಲವಾರು ಉತ್ತರ ರಾಜ್ಯಗಳಿಗೆ ಎಚ್ಚರಿಕೆ ನೀಡಿದ್ದು, ಮೂರು ದಿನಗಳವರೆಗೆ ಶಾಖದ ಅಲೆಗಳ ತೀವ್ರತೆ ಹೆಚ್ಚಾಗಿರುತ್ತದೆ ಎಂದು ಹೇಳಲಾಗಿದೆ.

ಕರ್ನಾಟಕದಲ್ಲೂ ಸೂರ್ಯನ ತೀವ್ರತೆ ಇದ್ದಕ್ಕಿದ್ದಂತೆ ಹೆಚ್ಚಾಗಿದೆ. ಇನ್ನೂ ಮೂರು ದಿನಗಳವರೆಗೆ ಅತ್ಯಧಿಕ ತಾಪಮಾನ ದಾಖಲಾಗಲಿದೆ ಎಂದು ಹವಾಮಾನ ಇಲಾಖೆ ಸ್ಪಷ್ಟಪಡಿಸಿದೆ. ಮಧ್ಯಾಹ್ನ 12ರಿಂದ ಮಧ್ಯಾಹ್ನ 3ರವರೆಗೆ ತುರ್ತು ಸಂದರ್ಭಗಳಲ್ಲಿ ಹೊರತುಪಡಿಸಿ ಹೊರಗೆ ಹೋಗದಂತೆ ಸೂಚಿಸಲಾಗಿದೆ. ಹೆಚ್ಚುತ್ತಿರುವ ಬಿಸಿಲಿನ ಹಿನ್ನೆಲೆಯಲ್ಲಿ, ನಿರ್ಜಲೀಕರಣವನ್ನ ತಪ್ಪಿಸಲು ಸೂಕ್ತ ಮುನ್ನೆಚ್ಚರಿಕೆಗಳನ್ನ ತೆಗೆದುಕೊಳ್ಳಬೇಕು. ವಿಶೇಷವಾಗಿ ವೃದ್ಧರು ಮತ್ತು ಮಕ್ಕಳು ಬಹಳ ಜಾಗರೂಕರಾಗಿರಬೇಕು ಎಂದಿದೆ.

ಮನೆಯಲ್ಲಿರುವಾಗ, ಎಸಿ ಅಥವಾ ಫ್ಯಾನ್'ಗಳು ಮತ್ತು ಕೂಲರ್'ಗಳ ಅಡಿಯಲ್ಲಿ ಇರಿ. ಬಿಸಿ ಗಾಳಿ



ಮನೆಯೊಳಗೆ ಬರದಂತೆ ನೋಡಿಕೊಳ್ಳಿ. ಶಾಖದ ಅಲೆಗಳು ಮನೆಗೆ ಪ್ರವೇಶಿಸದಂತೆ ಪರದೆಗಳನ್ನ ಬಳಸಿ. ಸಡಿಲವಾದ ಹತ್ತಿ ಬಟ್ಟೆಗಳನ್ನು ಮಾತ್ರ ಧರಿಸಿ. ಇವು ಬೆವರು ಹೀರಿಕೊಳ್ಳುತ್ತವೆ ಮತ್ತು ದೇಹವನ್ನು ತಂಪಾಗಿಸುತ್ತವೆ. ಬೆಳಿಗ್ಗೆ 10 ಗಂಟೆಯ ನಂತರ ಮತ್ತು ಮಧ್ಯಾಹ್ನ 3 ಗಂಟೆಯ ಮೊದಲು ಬಿಸಿಲಿನಲ್ಲಿ ಹೊರಗೆ ಹೋಗದಿರುವುದು ಉತ್ತಮ. ನೀವು ತುರ್ತು ಕೆಲಸಕ್ಕಾಗಿ ಹೊರಗೆ ಹೋಗಬೇಕಾದರೆ ಛತ್ರಿ ಬಳಸಬೇಕು. ಮನೆಯಲ್ಲಿಯೂ ಸಹ ಆಗಾಗ್ಗೆ ನೀರು ಕುಡಿಯಿರಿ. ನೀವು ನಿಂಬೆ ರಸವನ್ನು ಉಪ್ಪು ಅಥವಾ ಮಜ್ಜಿಗೆಯೊಂದಿಗೆ ಬೆರೆಸಿ ಕುಡಿದರೆ, ಎಳನೀರು ಸಾಕಷ್ಟು ಎಲೆಕ್ಟ್ರೋಲೈಟ್'ಗಳನ್ನು ಒದಗಿಸುತ್ತದೆ ಮತ್ತು ಬಿಸಿಲಿನಿಂದ ನಿಮ್ಮನ್ನು ರಕ್ಷಿಸುತ್ತದೆ. ಪ್ರತಿಯೊಬ್ಬರೂ ದಿನಕ್ಕೆ ಕನಿಷ್ಠ 4 ಲೀಟರ್ ನೀರನ್ನು ಕುಡಿಯಬೇಕು.

ಬಿಸಿಲಿನಲ್ಲಿ ಕೆಲಸ ಮಾಡುವವರು ಹೆಚ್ಚುವರಿಯಾಗಿ ಮತ್ತೊಂದು ಲೀಟರ್ ಕುಡಿಯಬೇಕು. ಬೇಸಿಗೆಯಲ್ಲಿ ಕಲುಷಿತ ನೀರಿನ ಅಪಾಯ ಹೆಚ್ಚು. ಅದು ಎಲ್ಲಿಗೆ ಬೀಳುತ್ತದೆಯೋ ಅಲ್ಲಿ ನೀರು ಕುಡಿಯುವುದು ಸೂಕ್ತವಲ್ಲ. ನೀವು ಹೊರಗೆ ಹೋಗುವಾಗ ಮನೆಯಿಂದ ನೀರಿನ ಬಾಟಲಿಯನ್ನು ಕೊಂಡೊಯ್ಯುವುದು ಉತ್ತಮ. ಹೊಸದಾಗಿ ಬೇಯಿಸಿದ ಆಹಾರವನ್ನು ತಿನ್ನುವುದರ ಜೊತೆಗೆ, ಹೊರಗೆ ತಿನ್ನು

## ಮೋದಿಯನ್ನು ದೇಶದ್ರೋಹಿ ಎಂದು ನಿಂದಿಸಿದ ವ್ಯಕ್ತಿಯ ವಿರುದ್ಧ ಪ್ರಕರಣ ದಾಖಲು

**ಕಣ್ಣೂರು,ಮಾ.7:** ಸಾಮಾಜಿಕ ಮಾಧ್ಯಮದಲ್ಲಿ ಪ್ರಧಾನಿ ನರೇಂದ್ರ ಮೋದಿಯನ್ನು ದೇಶದ್ರೋಹಿ ಎಂದು ನಿಂದಿಸಿದ ವ್ಯಕ್ತಿಯೊಬ್ಬನ ವಿರುದ್ಧ ಕೇರಳದ ಕಣ್ಣೂರಿನ ಶ್ರೀಕಂದಪುರಂ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಿಕೊಳ್ಳಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ಆರೋಪಿಯನ್ನು ಕೊಟ್ಟೂರಿನ ನಿವಾಸಿಯಾದ ರಾಜನ್ ಸಿ. ಕೊಟ್ಟೂರ್ ಎಂದು ಗುರುತಿಸಲಾಗಿದ್ದು, ಬಿಜೆಪಿ ಕಾರ್ಯಕರ್ತರೊಬ್ಬರು ನೀಡಿದ ದೂರನ್ನು ಆಧರಿಸಿ ಆತನ ವಿರುದ್ಧ ಪ್ರಕರಣ ದಾಖಲಿಸಿಕೊಳ್ಳಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ಎಫ್‌ಐಆರ್ ಪ್ರಕಾರ, ಆರೋಪಿ ರಾಜನ್ ಮಾರ್ಚ್ 3ರಂದು ಫೇಸ್ ಬುಕ್ ಪೋಸ್ಟ್ ನಲ್ಲಿ ಪ್ರಧಾನಿ ನರೇಂದ್ರ ಮೋದಿಯನ್ನು ದೇಶದ್ರೋಹಿ ಎಂದು ನಿಂದಿಸಿದ್ದ ಎಂದು ಆರೋಪಿಸಲಾಗಿದೆ.

ಆರೋಪಿ ರಾಜನ್ ಪ್ರಧಾನಿ ನರೇಂದ್ರ ಮೋದಿಯ ಹೆಸರಿಗೆ ಕಳಂಕ ತಂದಿದ್ದು, ಗಲಭೆ ಸೃಷ್ಟಿಸುವ ದುರುದ್ದೇಶದಿಂದ ಪ್ರಚೋದನಾಕಾರಿ ಕೃತ್ಯದಲ್ಲಿ ತೊಡಗಿದ್ದಾನೆ ಎಂದು ಎಫ್‌ಐಆರ್ ನಲ್ಲಿ ಆರೋಪಿಸಲಾಗಿದೆ. ಭಾರತೀಯ ವಿವಿಧ ಸೆಕ್ಷನ್ ಗಳಡಿ ಆರೋಪಿ ರಾಜನ್ ವಿರುದ್ಧ ಪ್ರಕರಣ ದಾಖಲಾಗಿದೆ. ದೂರು ಸ್ವೀಕರಿಸಿದ ಬಳಿಕ, ಶುಕ್ರವಾರ ತನಿಖೆ ಆರಂಭಿಸಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.

## ಶಿಕ್ಷಕನ ಮೇಲೆ 10ನೇ ತರಗತಿ ವಿದ್ಯಾರ್ಥಿ ಹಲ್ಲೆ; ವಿಡಿಯೋ ವೈರಲ್

**ಅಮರಾವತಿ, ಮಾ.7:** ಪ್ರೌಢಶಾಲೆಯಲ್ಲಿ ವಿದ್ಯಾರ್ಥಿ ಮತ್ತು ಶಿಕ್ಷಕರ ನಡುವೆ ವಾಗ್ವಾದ ನಡೆದಿದ್ದು, 10ನೇ ತರಗತಿ ವಿದ್ಯಾರ್ಥಿಯೊಬ್ಬ ತನ್ನ ಶಿಕ್ಷಕರ ಮೇಲೆ ಹಲ್ಲೆ ನಡೆಸಿರುವ ಘಟನೆ ಆಂಧ್ರಪ್ರದೇಶದ ಕೃಷ್ಣಾ ಜಿಲ್ಲೆಯಲ್ಲಿ ನಡೆದಿದೆ. ಘಟನೆಯ ವಿಡಿಯೋ ವೈರಲ್ ಆಗಿದ್ದು, ವಿದ್ಯಾರ್ಥಿಯ ಕೃತ್ಯದ ವಿರುದ್ಧ ಆಕ್ರೋಶ ವ್ಯಕ್ತವಾಗಿದೆ. ಜಿಲ್ಲೆಯ ವೀರವಳ್ಳಿ ಜಿಲ್ಲಾ ಪರಿಷತ್ ಪ್ರೌಢಶಾಲೆಯಲ್ಲಿ ಘಟನೆ ನಡೆದಿದೆ.

ವರದಿಗಳ ಪ್ರಕಾರ, ಶೈಕ್ಷಣಿಕ ವಿಷಯಕ್ಕೆ ಸಂಬಧಿಸಿದಂತೆ ವಿದ್ಯಾರ್ಥಿಯ ನಿರ್ಲಕ್ಷ್ಯತನವನ್ನು ಶಿಕ್ಷಕ ಖಂಡಿಸಿದ್ದಾರೆ. ಆತನಿಗೆ ವ್ಯಾಸಂಗದ ಕುರಿತು ಎಚ್ಚರಿಕೆ ನೀಡಿದ್ದಾರೆ. ಇದೇ ವಿಚಾರವು ವಿದ್ಯಾರ್ಥಿ ಮತ್ತು ಶಿಕ್ಷಕನ ನಡುವೆ ವಾಗ್ವಾದಕ್ಕೆ ತಿರುಗಿದೆ. ವಿದ್ಯಾರ್ಥಿ ಶಿಕ್ಷಕನಿಗೆ ಬಲವಾಗಿ ಗುದ್ದಿದ್ದಾನೆ ಎಂದು ಹೇಳಲಾಗಿದೆ. ಘಟನೆಯು ಶಾಲೆಯಲ್ಲಿದ್ದ ಇತರ ವಿದ್ಯಾರ್ಥಿಗಳು ಮತ್ತು ಸಿಬ್ಬಂದಿಯಲ್ಲಿ ಭೀತಿ ಉಂಟುಮಾಡಿದೆ. ಘಟನೆಯ ವೀಡಿಯೊ ಸಾಮಾಜಿಕ ಮಾಧ್ಯಮದಲ್ಲಿ ವೈರಲ್ ಆಗಿದೆ. ಆದಾಗ್ಯೂ, ಶಿಕ್ಷಕ ನನ್ನ ತಾಯಿ ವಿರುದ್ಧ ನಿಂದನೀಯ ಭಾಷೆ ಬಳಸಿಕ್ಕಾಗಿ, ನಾನು ಆ ರೀತಿ ಪ್ರತಿಕ್ರಿಯಿಸಬೇಕಾಯಿತು ಎಂದು ವಿದ್ಯಾರ್ಥಿ ಹೇಳಿಕೊಂಡಿರುವುದಾಗಿ ವರದಿಯಾಗಿದೆ. ಘಟನೆಯ ನಂತರ ಶಾಲಾ ಅಧಿಕಾರಿಗಳು ಶಿಕ್ಷಣ ಇಲಾಖೆ ಮತ್ತು ಪೊಲೀಸರಿಗೆ ಮಾಹಿತಿ ನೀಡಿದ್ದಾರೆ. ಪೊಲೀಸ್ ಅಧಿಕಾರಿಗಳು ವಿದ್ಯಾರ್ಥಿಯನ್ನು ವಿಚಾರಣೆ



ಮತ್ತು ಸಮಾಲೋಚನೆಗಾಗಿ ಕರೆದೊಯ್ದಿದ್ದಾರೆ. ವಿದ್ಯಾರ್ಥಿಯು ಅಪ್ರಾಪ್ತ ವಯಸ್ಕನಾಗಿರುವುದರಿಂದ ಮತ್ತು ಮುಂಬರುವ ಪಬ್ಲಿಕ್ ಪರೀಕ್ಷೆಗಳಿಗೆ ಹಾಜರಾಗಲು ತಯಾರಿ ನಡೆಸುತ್ತಿರುವುದರಿಂದ, ಈ ವಿಷಯವನ್ನು ಎಚ್ಚರಿಕೆಯಿಂದ ನಿರ್ವಹಿಸಲಾಗುತ್ತಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಏತನ್ಮಧ್ಯೆ, ಘರ್ಷಣೆಗೆ ಕಾರಣವಾದ ಸಂದರ್ಭಗಳನ್ನು ಅರ್ಥಮಾಡಿಕೊಳ್ಳಲು ಶಿಕ್ಷಣ ಇಲಾಖೆಯು ತನಿಖೆಗೆ ಆದೇಶಿಸಿದೆ. ಸತ್ಯಗಳನ್ನು ಪರಿಶೀಲಿಸುವುದಾಗಿ ಮತ್ತು ತನಿಖೆಯ ಆಧಾರದ ಮೇಲೆ ಸೂಕ್ತ ಕ್ರಮ ಕೈಗೊಳ್ಳುವುದಾಗಿ ಅಧಿಕಾರಿಗಳು ತಿಳಿಸಿದ್ದಾರೆ.

### ಜಿಲ್ಲಾ ಸಾಂತ್ವನ ಕೇಂದ್ರಗಳ ಸ್ಥಗಿತಕ್ಕೆ ಸರ್ಕಾರ ಸುತ್ತೋಲೆ, ಮುಂದುವರಿಸುವಂತೆ ವರದಿ ಸಲ್ಲಿಕೆಯಾಗಿದ್ದರೂ ಸ್ಥಗಿತಗೊಳಿಸುವ ನಿರ್ಧಾರಕ್ಕೆ ಆಕ್ರೋಶ

# ಮಹಿಳಾ ದಿನಾಚರಣೆ ಸಂಭ್ರಮ ನಡುವೆಯೇ ಮಹಿಳಾ ವಿರೋಧಿ ಧೋರಣೆ


ಎಲ್ಲ ಕಡೆ ಮಹಿಳಾ ದಿನಾಚರಣೆಯ ಸಂಭ್ರಮ ಮನೆ ಮಾಡಿರುವಾಗಲೇ ನೊಂದ ಮಹಿಳೆಯರ ಪರವಾಗಿ ಕೆಲಸ ಮಾಡುವ ಜನೋಪಯೋಗಿ ಯೋಜನೆಯೊಂದನ್ನು ಸದ್ದಿಲ್ಲದೆ ಸ್ಥಗಿತಗೊಳಿಸಲು ಸರ್ಕಾರ ಮುಂದಾಗಿದೆ.

2000–2001ನೇ ಇಸವಿಯಿಂದ ರಾಜ್ಯದಲ್ಲಿ ಸಾಂತ್ವನ ಕೇಂದ್ರಗಳು ಅಸ್ತಿತ್ವಕ್ಕೆ ಬಂದಿದ್ದವು. ಜಿಲ್ಲಾ ಕೇಂದ್ರದ ಮಹಿಳಾ ಸಾಂತ್ವನ ಕೇಂದ್ರಗಳನ್ನು 2026–27ನೇ ಸಾಲಿನೊಳಗೆ ಸಂಪೂರ್ಣ ಮುಚ್ಚಿಬಿಡಿ ಎಂಬ ಹಣಕಾಸು ಇಲಾಖೆ ನಿರ್ದೇಶನದನ್ವಯ ಮಹಿಳಾ ಇಲಾಖೆ ಸುತ್ತೋಲೆ ಹೊರಡಿಸಿರುವುದೇ ಮಹಿಳಾಪರ ಚಿಂತಕರು ಹಾಗೂ ಸಾಮಾಜಿಕ ಸಂಘ ಸಂಸ್ಥೆಗಳ ಅಸಮಾಧಾನಕ್ಕೆ ಕಾರಣವಾಗಿದೆ. ಜಿಲ್ಲಾ ಮಟ್ಟದಲ್ಲಿ 25 ವರ್ಷಗಳಿಂದ ಕಾರ್ಯನಿರ್ವಹಿಸುತ್ತಿರುವ ಈ ಕೇಂದ್ರಗಳ ಅಗತದ ಬಗ್ಗೆ ಹಾಗೂ ಮುಂದುವರಿಸುವ ಬಗ್ಗೆ ಆಯಾ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯ 23 ಜಿಲ್ಲಾ ಸಮಿತಿಗಳಿಂದ ವರದಿ ಸಲ್ಲಿಕೆಯಾಗಿದ್ದರೂ ಅದನ್ನು ಕಡೆಗಣಿಸಿ ಜಿಲ್ಲಾ ಕೇಂದ್ರಗಳನ್ನು ಸ್ಥಗಿತಗೊಳಿಸಲು ಹೊರಟಿರುವ ನಿರ್ಧಾರ ಆಕ್ರೋಶಕ್ಕೆ ಕಾರಣವಾಗಿದೆ.

ಕೊರೋನಾ ಸಂದರ್ಭದಲ್ಲಿ 2021ರ ಅವಧಿಯಲ್ಲಿ ಇಂತಹುದೇ ನಿರ್ಧಾರವನ್ನು ಅಂದಿನ ಸರ್ಕಾರ ತೆಗೆದುಕೊಂಡಿತ್ತು. ಹಣಕಾಸು ಕೊರತೆ ನೆಪವೊಡ್ಡಿ ಆರ್ಥಿಕ ಇಲಾಖೆಯ ಸೂಚನೆಯಂತೆ ಸಾಂತ್ವನ ಕೇಂದ್ರಗಳನ್ನು ಸ್ಥಗಿತಗೊಳಿಸಿದಾಗ ರಾಜ್ಯವ್ಯಾಪಿ ಪ್ರತಿಭಟನೆಗಳು ವ್ಯಕ್ತವಾಗಿದ್ದವು. ಅಂದು ವಿರೋಧ ಪಕ್ಷದ ನಾಯಕರಾಗಿದ್ದ ಸಿದ್ದರಾಮಯ್ಯ ಅವರೇ ಸರ್ಕಾರದ ಈ ನಿಧಾರ ವಿರೋಧಿಸಿದ್ದರು. ಮಾಜಿ ಸಿ. ಎಂ. ಎಚ್.ಡಿ. ಕುಮಾರಸ್ವಾಮಿ ಸೇರಿದಂತೆ ಇತರೆ ನಾಯಕರು, ವಿವಿಧ ಸಂಘ–ಸಂಸ್ಥೆಗಳು ಸರ್ಕಾರದ ನಿರ್ಧಾರ ವಿರೋಧಿಸಿ ಪತ್ರ ಬರೆದಿದ್ದರಿಂದ ಸ್ಥಗಿತಗೊಂಡಿದ್ದ ಸಾಂತ್ವನ ಕೇಂದ್ರಗಳಿಗೆ ಚಾಲನೆ ನೀಡಲಾಗಿತ್ತು.

2024ರ ವರ್ಷದಲ್ಲಿಯೂ ಇದೇ ರೀತಿಯ ಆದೇಶ ಹೊರಬಿದ್ದಿತು. ಗ್ಯಾರಂಟಿ ಯೋಜನೆಗಳಿಗೆ ಹಣ ಒದಗಿಸುವ ಸಲುವಾಗಿ ಸಣ್ಣ ಮೊತ್ತದಲ್ಲಿ ಕಾರ್ಯ ನಿರ್ವಹಿಸುತ್ತಿರುವ ಗೌರವಧನದ ಮೇರೆಗೆ ಕಾರ್ಯನಿರ್ವಹಿಸುತ್ತಿರುವ ಜಿಲ್ಲಾ ಸಾಂತ್ವನ ಕೇಂದ್ರಗಳನ್ನು ಸೆಪ್ಟೆಂಬರ್ 2025ರ ಒಳಗೆ ಸ್ಥಗಿತಗೊಳಿಸುವಂತೆ ಹಣಕಾಸು ಇಲಾಖೆಯು ಮಹಿಳಾ ಇಲಾಖೆಗೆ ನಿರ್ದೇಶನ ನೀಡಿದ್ದರ ವಿರುದ್ಧ ಮತ್ತೆ ಅಸಮಧಾನ ಹೊರಹೊಮ್ಮಿತ್ತು.

ಈ ಕೇಂದ್ರಗಳು ನೊಂದ ಮಹಿಳೆಯರ ಪರವಾಗಿ ಕೆಲಸ ಮಾಡುತ್ತಿದ್ದು 25 ವರ್ಷಗಳ ಅನುಭವ ಇರುವ ಕಾರಣ ಹಾಗೂ ಗೌರವ ಧನದ ಆಧಾರದ ಮೇರೆಗೆ ಸ್ವಯಂಸೇವಾ ಸಂಸ್ಥೆಗಳೇ ಈ ಕೇಂದ್ರಗಳನ್ನು ನಿರ್ವಹಿಸುತ್ತಿರುವುದರಿಂದ ಸರ್ಕಾರಕ್ಕೂ ಹೆಚ್ಚು ಹೊರೆಯಾಗದ ಕಾರಣ ಈ ಕೇಂದ್ರಗಳನ್ನು ಸ್ಥಗಿತಗೊಳಿಸದೆ ಮುಂದುವರಿಸುವಂತೆ ಸಚಿವರಾದ ಎಂ.ಬಿ.ಪಾಟೀಲ್, ರುದ್ರಪ್ಪ ಲಮಾಣಿ, ಸೇರಿದಂತೆ ಅನೇಕ ಮುಖಂಡರು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಪತ್ರ ಬರೆದ ಕಾರಣ ಇದನ್ನು ಪರಿಶೀಲಿಸಿ ಕ್ರಮ ಕೈಗೊಳ್ಳುವಂತೆ ಸಿದ್ದರಾಮಯ್ಯ ಅವರು ಮಹಿಳಾ ಇಲಾಖೆ ಸಚಿವರಾದ ಲಕ್ಷ್ಮಿ ಹೆಬ್ಬಾಳ್ಕರ್‌ಗೆ ರವಾನಿಸಿದ್ದರು. ಮುಖ್ಯಮಂತ್ರಿಗಳ ಈ ಸೂಚನೆಯಂತೆ ಮಹಿಳಾ ಇಲಾಖೆ ಸಚಿವರು ದಿನಾಂಕ 2025ರ ಅಕ್ಟೋಬರ್ 6 ರಂದು ಇಲಾಖೆ ಅಧಿಕಾರಿಗಳೊಂದಿಗೆ ವಿಶೇಷ ಸಭೆ ನಡೆಸಿ ಜಿಲ್ಲಾ ಸಾಂತ್ವನ ಕೇಂದ್ರಗಳ ಅಗತ್ಯತೆ ಬಗ್ಗೆ ಚರ್ಚಿಸಿ ಅವುಗಳನ್ನು ಮುಂದುವರಿಸುವಂತೆ ನಿರ್ಧಾರ ಕೈಗೊಂಡಿದ್ದರು.




ಇದಕ್ಕೂ ಮುನ್ನ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಪ್ರಧಾನ ಕಾರ್ಯದರ್ಶಿಗಳು, ಎಲ್ಲ ಜಿಲ್ಲೆಯ ಉಪ ನಿರ್ದೇಶಕರಿಗೆ ಸುತ್ತೋಲೆ ರವಾನಿಸಿ ಸಾಂತ್ವನ ಕೇಂದ್ರಗಳ ಅಗತ್ಯ ಇದೆಯೇ ಎಂಬ ವರದಿ ಕೇಳಿದ್ದರು. ಈ ಸೂಚನಾ ಪತ್ರದ ಅನ್ವಯ ಪ್ರತಿ ಜಿಲ್ಲೆಯಲ್ಲಿ ಜಿಲ್ಲಾಧಿಕಾರಿಗಳ ನೇತೃತ್ವದಲ್ಲಿ ಅಧಿಕಾರಿಗಳ ಸಭೆ ನಡೆಸಿ ಸಾಂತ್ವನಗಳ ಅಗತ್ಯತೆಯ ಬಗ್ಗೆ ಇಲಾಖೆಗೆ ಶಿಫಾರಸು ವರದಿ ಸಲ್ಲಿಸಿರುತ್ತಾರೆ. 8 ಜಿಲ್ಲಾ ಕೇಂದ್ರ ಹೊರತುಪಡಿಸಿ ಉಳಿದ 23 ಕೇಂದ್ರಗಳನ್ನು ಮುಂದುವರಿಸುವ ವರದಿಗಳು ಇಲಾಖೆಗೆ ತಲುಪಿರುತ್ತವೆ. ಈ ವರದಿ ಆಧಾರದ ಮೇಲೆಯೇ ಜಿಲ್ಲಾ ಸಾಂತ್ವನ ಕೇಂದ್ರಗಳನ್ನು ಮುಂದುವರಿಸಲು ಸಚಿವರು ಹಾಗೂ ಇಲಾಖಾ ಅಧಿಕಾರಿಗಳು ನಿರ್ಣಯ ತೆಗೆದುಕೊಂಡಿದ್ದರೂ ಹಣಕಾಸು ಇಲಾಖೆ ಮಾತ್ರ ಇದನ್ನು ಪರಿಗಣಿಸಿಲ್ಲ.

**2026–27ನೇ ಸಾಲಿನವರೆಗೆ ಮುಂದುವರಿಸಿ ನಂತರ ಬಂದ್**

ಇದೀಗ ಆರ್ಥಿಕ ಇಲಾಖೆಯು ಮತ್ತೊಂದು ಟಿಪ್ಪಣಿಯ ಮೂಲಕ ಮಹಿಳಾ ಇಲಾಖೆಗೆ ಒಂದು ಪತ್ರ ರವಾನಿಸಿ 23 ಸಾಂತ್ವನ ಕೇಂದ್ರಗಳನ್ನು 2026–27ನೇ ಸಾಲಿನವರೆಗೆ ಮಾತ್ರ ಮುಂದುವರಿಸಿ ನಂತರ ಸಂಪೂರ್ಣ ಮುಚ್ಚುವಂತೆ ತಿಳಿಸಿದೆ. ತಾಲ್ಲೂಕು ಕೇಂದ್ರಗಳನ್ನು ಮುಂದುವರಿಸಲು, ಖಾಲಿ ಇರುವ ತಾಲ್ಲೂಕು ಕೇಂದ್ರಗಳಿಗೆ ಜಿಲ್ಲಾ ಕೇಂದ್ರದ ಸಾಂತ್ವನ ಗಳನ್ನು ಸ್ಥಳಾಂತರಿಸಲು ಆದೇಶದಲ್ಲಿ ತಿಳಿಸಲಾಗಿದೆ. ಸಖಿ ಕೇಂದ್ರಗಳು ಇರುವುದರಿಂದ ಜಿಲ್ಲಾ ಕೇಂದ್ರಗಳಲ್ಲಿ ಸಾಂತ್ವನದ ಅಗತ್ಯತೆ ಇಲ್ಲ ಎಂಬುದು ಹಣಕಾಸು ಇಲಾಖೆ ಅಭಿಪ್ರಾಯ. ಆದರೆ ಹಲವು ತಾಲ್ಲೂಕು ಕೇಂದ್ರಗಳಲ್ಲಿ ವಿಭಾಗ ಮಟ್ಟದಲ್ಲಿ ಸಖಿ ಕೇಂದ್ರಗಳಿವೆ. ಅವುಗಳಿಗೆ ಯಾವುದೇ ಧಕ್ಕೆ ಇಲ್ಲ. ಜಿಲ್ಲಾ ಕೇಂದ್ರದ ಮೇಲೆಯೇ ಯಾಕೆ ಕಣ್ಣು ಎಂಬುದು ಹಲವರು ಕೇಳುತ್ತಿರುವ ಪ್ರಶ್ನೆ.

ಸಮಸ್ಯೆ ಎಂದರೆ ಕೌಟುಂಬಿಕ ವ್ಯಾಜ್ಯಗಳು ಹೆಚ್ಚುತ್ತಿರುವುದೇ ಜಿಲ್ಲಾ ಕೇಂದ್ರಗಳಲ್ಲಿ. ನಗರಗಳು ವಿಸ್ತಾರಗೊಳ್ಳುತ್ತಿರುವುದು. ನಗರ ಪ್ರದೇಶಗಳಲ್ಲಿ ಹೆಚ್ಚುತ್ತಿರುವ ಕೌಟುಂಬಿಕ ಸಮಸ್ಯೆ, ವಿಚ್ಛೇದನ ಪ್ರಕರಣಗಳನ್ನು ಗಮನದಲ್ಲಿರಿಸಿಕೊಂಡೇ ಕೌಟುಂಬಿಕ ನ್ಯಾಯಾಲಯಗಳನ್ನು ಹೆಚ್ಚಿಸಲಾಗುತ್ತಿದೆ.

ಮಹಿಳಾ ಪೊಲೀಸ್ ಠಾಣೆಗಳನ್ನು ತೆರೆಯಲಾಗುತ್ತಿದೆ. ಪೊಲೀಸ್ ಠಾಣೆಯಿಂದಲೂ ಆಪ್ತ ಸಮಾಲೋಚನೆಗಾಗಿ ಪ್ರಕರಣಗಳನ್ನು ಜಿಲ್ಲಾ ಸಾಂತ್ವನ ಕೇಂದ್ರಗಳಿಗೆ ಕಳುಹಿಸಿಕೊಡಲಾಗುತ್ತಿದೆ. ವರ್ಷದಿಂದ ವರ್ಷಕ್ಕೆ ಜಿಲ್ಲಾ ಕೇಂದ್ರಗಳಿಗೆ ಪ್ರಕರಣಗಳ ಸಂಖ್ಯೆಯೂ ಹೆಚ್ಚುತ್ತಿವೆ. ಇವೆಲ್ಲವನ್ನೂ ಪರಿಗಣಿಸಿದರೆ ಜಿಲ್ಲಾ ಕೇಂದ್ರಗಳಲ್ಲಿ ಸಾಂತ್ವನ ಕೇಂದ್ರಗಳ ಅಗತ್ಯತೆ ಹೆಚ್ಚಿರುತ್ತದೆ. ಈ ವರದಿ ಜಿಲ್ಲಾಧಿಕಾರಿಗಳ ಸಮಿತಿಯಿಂದಲೇ ವ್ಯಕ್ತವಾಗಿದೆ.


ಸಾಂತ್ವನ ಕೇಂದ್ರಕ್ಕೂ ಕೇಂದ್ರ ಸರ್ಕಾರದ ಸಖಿ ಯೋಜನೆಗೂ ಸಾಕಷ್ಟು ವ್ಯತ್ಯಾಸವಿದೆ. ಪೋಕ್ಸೋ ಪ್ರಕರಣ ಹಾಗೂ ಆಸ್ಪತ್ರೆಗೆ ದಾಖಲಾಗುವ ಮಹಿಳಾ ದೌರ್ಜನ್ಯ ಪ್ರಕರಣಗಳನ್ನು ಸಖಿ ಕೇಂದ್ರಗಳು ನಿರ್ವಹಿಸುತ್ತಿದ್ದು ಜಿಲ್ಲಾಸ್ಪತ್ರೆಯಲ್ಲಿರುವ ಈ ಕೇಂದ್ರಗಳು ತನ್ನದೇ ಆದ ಚೌಕಟ್ಟಿನಲ್ಲಿ ಕಾರ್ಯನಿರ್ವಹಿಸುತ್ತಿವೆ. ಕಳೆದ 25 ವರ್ಷಗಳಿಂದ ಸ್ವಯಂಸೇವಾ ಸಂಸ್ಥೆಗಳ ಮೂಲಕ ಸಾಂತ್ವನ ನಡೆದುಕೊಂಡು ಬಂದಿರುವ ಸ್ವಯಂ ಸೇವಾ ಸಂಸ್ಥೆಯ ಸಾಂತ್ವನ ಕೇಂದ್ರಗಳು ನೊಂದ ಮಹಿಳೆಯರಿಗೆ ಸುಲಭ ಹಾಗೂ ಸರಳವಾಗಿ ಲಭ್ಯವಾಗುವುದರಿಂದ ಜಿಲ್ಲಾ ಕೇಂದ್ರಗಳು ಹೆಚ್ಚು ಅನಿವಾರ್ಯ ಎಂಬುದನ್ನು ಈಗಾಗಲೇ ವಿವಿಧ ಸಂಘ ಸಂಸ್ಥೆಗಳು, ಮುಖಂಡರು ವ್ಯಕ್ತಪಡಿಸಿದ್ದಾರೆ. ಗೌರವಧನದ ಆಧಾರದಲ್ಲಿ ಸಿಬ್ಬಂದಿ ಕಾರ್ಯನಿರ್ವಹಿಸುತ್ತಿದ್ದು, ಈ ಕೇಂದ್ರಗಳಿಂದ ಸರ್ಕಾರಕ್ಕೂ ಹೊರೆಯಲ್ಲ. ಕೌಟುಂಬಿಕ ಸಮಸ್ಯೆಗಳನ್ನು ಸೌಹಾರ್ದಯುತವಾಗಿ ಇತ್ಯರ್ಥ ಪಡಿಸುತ್ತಾ, ಕುಟುಂಬ ಸಾಮರಸ್ಯ ಕಾಪಾಡುವಲ್ಲಿ ಜಿಲ್ಲಾ ಕೇಂದ್ರಗಳು ಯಶಸ್ವಿಯಾಗಿವೆ. ಹೆಚ್ಚುತ್ತಿರುವ ವಿಚ್ಛೇದನ ಪ್ರಕರಣಗಳು ಮತ್ತು ಕೌಟುಂಬಿಕ ಅಸಮತೋಲನದ ಈ ಸಂದರ್ಭದಲ್ಲಿ ಸಾಂತ್ವನ ಕೇಂದ್ರಗಳ ಪಾತ್ರ ಹೆಚ್ಚು ಮುಖ್ಯವಾಗುತ್ತಿದೆ. ಪೊಲೀಸ್ ಠಾಣೆಯ ಮೆಟ್ಟಿಲು ಹತ್ತಲಾಗದ, ನ್ಯಾಯಾಲಯಗಳಿಗೆ ಹೋಗಲು ಸಾಧ್ಯವಾಗದ ನೊಂದ, ಅಶಕ್ತ ಮಹಿಳೆಯರಿಗೆ ಈ ಜಿಲ್ಲಾ ಕೇಂದ್ರಗಳು ಆಸರೆಯ ಕೇಂದ್ರಗಳಾಗಿವೆ. ಮಹಿಳಾ ಪೊಲೀಸ್ ಠಾಣೆಗಳಿಂದಲೂ ನೆರವು ಕೇಳಲಾಗುತ್ತಿದ್ದು, ಬಹಳಷ್ಟು ಪ್ರಕರಣಗಳ ಸೌಹಾರ್ದಯುತ ಇತ್ಯರ್ಥಕ್ಕೆ ಆಪ್ತ ಸಮಾಲೋಚನೆ ನಡೆಸಲಾಗುತ್ತಿದೆ. ಪೊಲೀಸ್ ಇಲಾಖೆಗೂ ಈ ಕೇಂದ್ರಗಳಿಂದ ಪ್ರಕರಣಗಳ ಹೊರೆ ಕಡಿಮೆಯಾಗುತ್ತಿವೆ.

ಗೌರವಧನದ ಆಧಾರದಲ್ಲಿ 4 ಸಿಬ್ಬಂದಿಗಳು ಈ ಕೇಂದ್ರದಲ್ಲಿ ಕಾರ್ಯನಿರ್ವಹಿಸುತ್ತಿದ್ದು ಹೆಚ್ಚುವರಿ ಖರ್ಚುಗಳನ್ನು ಸಂಸ್ಥೆಗಳೇ ಭರಿಸುತ್ತಿವೆ. ಈ ಯೋಜನೆಯ ಯಶಸ್ವಿ ಅನುಷ್ಠಾನ ಹಾಗೂ ಈ ಕೇಂದ್ರಗಳಿಗೆ ಪ್ರಕರಣಗಳು ಹೆಚ್ಚುತ್ತಿರುವುದನ್ನು ಮನಗಂಡು ಇದೊಂದು ಪರಿಣಾಮಕಾರಿ ಯೋಜನೆ ಎಂದು ಪರಿಗಣಿಸಿ 2007–08 ರಿಂದ ತಾಲ್ಲೂಕು ಕೇಂದ್ರಗಳಿಗೂ ವಿಸ್ತರಿಸಲಾಯಿತು. ಪ್ರಸ್ತುತ ರಾಜ್ಯದಲ್ಲಿ 176 ಸಾಂತ್ವನ ಕೇಂದ್ರಗಳು ಕಾರ್ಯನಿರ್ವಹಿಸುತ್ತಿವೆ.

### 300 ಚ.ಕಿ.ಮೀ. ಹೆಚ್ಚಿಸಿ ಹೊಸ ಅಧಿಸೂಚನೆ ಹೊರಡಿಸುವಂತೆ ಸರ್ಕಾರಕ್ಕೆ ಹೈಕೋರ್ಟ್ ನಿರ್ದೇಶನ

## ಕಪ್ಪತ್ತಗುಡ್ಡ: ಅಭಯಾರಣ್ಯ ವಿಸ್ತೀರ್ಣ ಕಡಿತಗೊಳಿಸುವುದು ವಿವೇಚನಾರಹಿತ ನಿರ್ಧಾರ

**ಬೆಂಗಳೂರು, ಮಾ.7:** ಕಪ್ಪತ್ತಗುಡ್ಡ ವನ್ಯಜೀವಿ ಅಭಯಾರಣ್ಯವನ್ನು 2019ರ ಜನವರಿಯಲ್ಲಿ ಕರ್ನಾಟಕ ರಾಜ್ಯ ವನ್ಯಜೀವಿ ಮಂಡಳಿಯ (ಕೆಎಸ್‌ಡಬ್ಲ್ಯುಬಿ) 11ನೇ ಸಭೆಯಲ್ಲಿ ಅಂಗೀಕರಿಸಿದ ನಿರ್ಣಯದಂತೆ 300 ಚದರ ಕಿಲೋ ಮೀಟರ್‌ಗೆ ಹೆಚ್ಚಿಸ ಮಾಡಿ ಹೊಸದಾಗಿ ಅಧಿಸೂಚನೆ ಹೊರಡಿಸುವಂತೆ ರಾಜ್ಯ ಸರ್ಕಾರಕ್ಕೆ ಹೈಕೋರ್ಟ್ ನಿರ್ದೇಶನ ನೀಡಿದೆ.



ಕಪ್ಪತ್ತಗುಡ್ಡ ಅರಣ್ಯದಲ್ಲಿನ 244.15 ಚದರ ಕಿಲೋಮೀಟರ್ ಪ್ರದೇಶವನ್ನು ಸೂಕ್ಷ್ಮ ಪ್ರದೇಶ ಎಂಬುದಾಗಿ ಘೋಷಣೆ ಮಾಡಿದ್ದ ಕ್ರಮ ಪ್ರಶ್ನಿಸಿ ಅರಣ್ಯದ ಪರಿಸರ ಸೂಕ್ಷ್ಮ ವಲಯದ ಪಟ್ಟಾ ಭೂಮಿಯಲ್ಲಿ ಕ್ರಷಿಂಗ್ ನಡೆಸುತ್ತಿದ್ದ ಶಿವಗಂಗಾ ಸ್ಟೋನ್ ಕ್ರಷಿಂಗ್ ಇಂಡಸ್ಟ್ರೀಸ್ ಮತ್ತಿತರರು ಸಲ್ಲಿಸಿದ್ದ ಅರ್ಜಿಗಳ ವಿಚಾರಣೆ ನಡೆಸಿದ ಮುಖ್ಯ ನ್ಯಾಯಮೂರ್ತಿ ವಿಭು ಬಖ್ರು ಮತ್ತು ನ್ಯಾಯಮೂರ್ತಿ ಸಿ. ಎಂ.ಪೂಣಚ್ಚ ಅವರಿದ್ದ ನ್ಯಾಯಪೀಠ, ಅರ್ಜಿಯನ್ನು ವಜಾಗೊಳಿಸಿದ್ದು, ಈ ಆದೇಶ ನೀಡಿದೆ.ಅಲ್ಲದೇ, ಕಪ್ಪತ್ತಗುಡ್ಡ ಸಂಪೂರ್ಣ 300 ಚದರ ಕಿಲೋಮೀಟರ್ ವನ್ಯಜೀವಿ ಅಭಯಾರಣ್ಯ ಎಂದು ಘೋಷಣೆ ಮಾಡಲು ಕೆಎಸ್‌ಡಬ್ಲ್ಯುಬಿಯು ಸರ್ವಾನುಮತದಿಂದ ನಿರ್ಣಯಿಸಿದೆ. ಆದರೂ, 2019ರ ಮೇ 16ರಂದು ಹೊರಡಿಸಿರುವ ಅಧಿಸೂಚನೆಯಲ್ಲಿ ಕೇವಲ 244.15 ಚದರ ಕಿಲೋಮೀಟರ್ ಪ್ರದೇಶವನ್ನು ವನ್ಯಜೀವಿ ಮಂಡಳಿ ಎಂದು ಘೋಷಣೆ ಮಾಡಲಾಗಿದೆ.

ಮುಖ್ಯಮಂತ್ರಿಗಳ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ಕೈಗೊಂಡ ನಿರ್ಧಾರಕ್ಕೆ ವಿರುದ್ಧವಾಗಿ ರಾಜ್ಯ ಸರ್ಕಾರ ಈ ಕ್ರಮ ಕೈಗೊಂಡಿದ್ದು, ಅಭಯಾರಣ್ಯ ವಿಸ್ತೀರ್ಣವನ್ನು ಕಡಿತಗೊಳಿಸಿರುವುದು ಮೇಲ್ನೋಟಕ್ಕೆ ವಿವೇಚನಾರಹಿತ ನಿರ್ಧಾರವಾಗಿದೆ. ಅಭಯಾರಣ್ಯಕ್ಕೆ 55 ಚದರ ಕಿಲೋಮೀಟರ್ ಎಡ ಹೊರಪ್ರದೇಶವನ್ನು ಸೇರಿಸಿ 300 ಚದರ ಕಿಲೋಮೀಟರ್ ಪ್ರದೇಶವನ್ನು ಅಭಯಾರಣ್ಯ ಎಂಬುದಾಗಿ ಅಧಿಸೂಚನೆ ಹೊರಡಿಸಬೇಕು ಎಂದು ಆದೇಶಿಸಿದೆ.

ವಿಚಾರಣೆ ವೇಳೆ ಅರ್ಜಿದಾರರ ಪರ ವಕೀಲರು, ಕಪ್ಪತ್ತಗುಡ್ಡ ವನ್ಯಜೀವಿ ಅಭಯಾರಣ್ಯದ ಸುತ್ತಮುತ್ತಲಿನ 244.15 ಚದರ ಕಿಲೋಮೀಟರ್ ಪ್ರದೇಶವನ್ನು ಪರಿಸರ ಸೂಕ್ಷ್ಮ ವಲಯ ಎಂದು ಘೋಷಣೆ ಮಾಡಲಾಗಿದೆ. ರಾಷ್ಟ್ರೀಯ ವನ್ಯಜೀವಿ ಮಂಡಳಿ ಅನುಮತಿ ಪಡೆಯದೇ ಈ ಘೋಷಣೆ ಮಾಡಲಾಗಿದೆ. ಈ ಪರಿಸರ ಸೂಕ್ಷ್ಮ ವಲಯದಲ್ಲಿ ತಮ್ಮ ಜಮೀನು ಬರಲಿದ್ದು, ತಮ್ಮ ವ್ಯವಹಾರಕ್ಕೆ ಅಡ್ಡಿಯಾಗಿದೆ. ಅಲ್ಲದೇ, ಪ್ರಭಾವಿ ವ್ಯಕ್ತಿಗಳ ಒಡೆತನದಲ್ಲಿರುವ ಕೆಲವು ಘಟಕಗಳಿಗೆ ಅನುಕೂಲವಾಗುವಂತೆ ಅಧಿಸೂಚನೆ ಹೊರಡಿಸಲಾಗಿದೆ. ಆದ್ದರಿಂದ 2017ರಲ್ಲಿ ಕಪ್ಪತ್ತಗುಡ್ಡ ವನ್ಯಜೀವಿ ಅಭಯಾರಣ್ಯದ ಗಡಿಯನ್ನು ಕೇವಲ 178 ಚದರ ಕಿಲೋಮೀಟರ್‌ಗೆ ಸೀಮಿತಗೊಳಿಸಲು ಸರ್ಕಾರಕ್ಕೆ ನಿರ್ದೇಶನ ನೀಡಬೇಕು ಎಂದು ಕೋರಿದ್ದರು.




ಬೆಂಗಳೂರಿನಲ್ಲಿ ಶನಿವಾರ ಕಾಂಗ್ರೆಸ್ ಕಾರ್ಯಕರ್ತರು ಎಲ್‌ಪಿಜಿ ಬೆಲೆ ಏರಿಕೆ ವಿರೋಧಿಸಿ ಪ್ರತಿಭಟನೆ ನಡೆಸಿದರು.

### ಧೈರ್ಯದಿಂದ ಚುನಾವಣೆ ಎದುರಿಸಿ: ಕಾರ್ಯಕರ್ತರಿಗೆ ಬೈರತಿ ಸುರೇಶ್ ಕರೆ

## ಜಿಬಿಎ ಚುನಾವಣೆಯಲ್ಲಿ ಬಿಜೆಪಿಯಿಂದ ವೋಟ್‌ಚೋರಿ ಭಯ ಬೇಡ

**ಬೆಂಗಳೂರು, ಮಾ.7:** ಮುಂಬರುವ ಜಿಬಿಎ ಚುನಾವಣೆಯಲ್ಲಿ ಬಿಜೆಪಿಯವರು ಮತ ಚೋರಿ ಮಾಡುತ್ತಾರೆ ಎಂಬ ಭಯ ಯಾರಿಗೂ ಬೇಡ. ಧೈರ್ಯದಿಂದ ಚುನಾವಣೆ ಎದುರಿಸಿ ಮತ್ತು ಹೆಚ್ಚಿನ ಸಂಖ್ಯೆಯಲ್ಲಿ ಮತ ಚಲಾಯಿಸುವಂತೆ ಮತದಾರರನ್ನು ಓಲೈಸಬೇಕೆಂದು ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವ ಹಾಗೂ ಹೆಬ್ಬಾಳ ಕ್ಷೇತ್ರದ ಶಾಸಕ ಬೈರತಿ ಸುರೇಶ್ ಅವರು ಕಾಂಗ್ರೆಸ್ ಕಾರ್ಯಕರ್ತರಿಗೆ ಕರೆ ನೀಡಿದ್ದಾರೆ.



ಯುಗಾದಿ ಮತ್ತು ರಂಜಾನ್ ಹಬ್ಬದ ಪ್ರಯುಕ್ತ ಗಂಗಾನಗರ ಮತ್ತು ಚಾಮುಂಡಿ ನಗರದಲ್ಲಿ ನಾಗರಿಕರಿಗೆ ಶನಿವಾರ ಉಚಿತ ರೇಷನ್ ಕಿಟ್ ವಿತರಣೆ ಮಾಡಿ ಮಾತನಾಡಿ, ಈ ಬಾರಿ ಬಜೆಟ್‌ನಲ್ಲಿ ಗ್ಯಾರಂಟಿ ಯೋಜನೆಗಳನ್ನು ಮುಂದುವರಿಸುವುದರ ಜೊತೆಗೆ ದೀನದಲಿತರು, ಹಿಂದುಳಿದವರು, ಅಲ್ಪಸಂಖ್ಯಾತರ ಕಲ್ಯಾಣಕ್ಕಾಗಿ ಹಲವಾರು ಹೊಸ ಕ್ರಮಗಳನ್ನು ಪ್ರಕಟಿಸಿದ್ದು, ಹೆಚ್ಚಿನ ಅನುದಾನವನ್ನೂ ಮೀಸಲಿಟ್ಟಿರುವುದು ಎಲ್ಲರಿಗೂ ಸಂತಸದ ವಿಚಾರವಾಗಿದೆ.

ಒಟ್ಟಾರೆ ಬೆಂಗಳೂರು ನಗರಕ್ಕೆ 7 ಸಾವಿರ ಕೋಟಿ ರೂಪಾಯಿಗಳ ಅನುದಾನವನ್ನು ಮೀಸಲಿಟ್ಟಿರುವುದು ನಗರದ ಅಭಿವೃದ್ಧಿಗೆ ಸಹಕಾರಿಯಾಗಲಿದೆ ಎಂದರು.

ಕೇಂದ್ರದ ಬಿಜೆಪಿ ಸರ್ಕಾರ ಎಸ್‌ಐಆರ್‌ಗೆ ಮುಂದಾಗಿದೆ. ಆದರೆ, ಕೇವಲ ಅಲ್ಪಸಂಖ್ಯಾತರ ಹೆಸರುಗಳನ್ನು ಮತ ಪಟ್ಟಿಯಿಂದ ತೆಗೆದು ಹಾಕುವ ಹುನ್ನಾರ ಇದರ ಹಿಂದೆ ಅಡಗಿದೆ ಎಂದು ಆರೋಪಿಸಿದ ಸಚಿವರು, ಬಿಜೆಪಿ ನಡೆಸುತ್ತಿರುವ ಈ ಹುನ್ನಾರಕ್ಕೆ ಯಶಸ್ಸು ಸಿಗುವುದಿಲ್ಲ. ಹೀಗಾಗಿ ಯಾರೂ ಆತಂಕಪಡುವ ಅಗತ್ಯವಿಲ್ಲ ಎಂದು ಧೈರ್ಯ ತುಂಬಿದರು.

ಸಿದ್ದರಾಮಯ್ಯ ಮತ್ತು ಕಾಂಗ್ರೆಸ್ ಸರ್ಕಾರ ಕರ್ನಾಟಕವನ್ನು ಸರ್ವ ಜನಾಂಗದ ಶಾಂತಿಯ ತೋಟ ವನ್ನಾಗಿಸುವ ನಿಟ್ಟಿನಲ್ಲಿ ಮುನ್ನಡಿ ಇಟ್ಟಿದೆ. ನಮಗೆ ರಂಜಾನ್, ಯುಗಾದಿ, ಕ್ರಿಸ್ಮಸ್ ಎಲ್ಲವೂ ಒಂದೇ. ಎಲ್ಲಾ ಧರ್ಮದವರೂ ನಮ್ಮ ಅಣ್ಣ ತಮ್ಮಂದಿರು ಇದ್ದಂತೆ. ಎಲ್ಲರೂ ಸಹಬಾಳ್ವೆಯಿಂದ ಜೀವನ ನಡೆಸುವುದು ಅತ್ಯಗತ್ಯ ಎಂದು ಬೈರತಿ ಸುರೇಶ್ ಕರೆ ನೀಡಿದರು.

## ರಾಜ್ಯದ ಜನರ ಮೂಗಿಗೆ ತುಪ್ಪ ಸವರುವುದು ಉಚಿತ, ಸಾಲ ಖಚಿತ: ರಾಜ್ಯ ಬಜೆಟ್‌ಗೆ ಛಲವಾದಿ ನಾರಾಯಣಸ್ವಾಮಿ ಟೀಕೆ

**ಬೆಂಗಳೂರು: ಮಾ. 7:** ರಾಜ್ಯ ಬಜೆಟ್‌ನ ಮೂಲಕ ಇಡೀ ರಾಜ್ಯದ ಜನರಿಗೆ ಮೂಗಿಗೆ ತುಪ್ಪ ಸವರುವುದು ಉಚಿತ, ಎಲ್ಲರ ತಲೆ ಮೇಲೆ ಸಾಲ ಖಚಿತ, ರಾಜ್ಯದ ಜನರಿಗೆ ಸಂಕಷ್ಟ ನಿಶ್ಚಿತ ಎಂದು ವಿಧಾನಪರಿಷತ್ ಪ್ರತಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ ಟೀಕಿಸಿದ್ದಾರೆ.

ಸುದ್ದಿಗೋಷ್ಠಿಯಲ್ಲಿ, ರಾಜ್ಯ ಸರ್ಕಾರದ 2026–27ರ ಆಯವ್ಯಯ ಪತ್ರವನ್ನು ನಿನ್ನೆ ಮುಖ್ಯಮಂತ್ರಿಗಳು ಮತ್ತು ಹಣಕಾಸು ಸಚಿವ ಸಿದ್ದರಾಮಯ್ಯ ಮಂಡಿಸಿದ್ದಾರೆ ಎಂದ ಅವರು, ರಾಜ್ಯ ಸರ್ಕಾರದ್ದು ಉಚಿತ, ಖಚಿತ, ನಿಶ್ಚಿತ ಎಂಬ ಘೋಷವಾಕ್ಯದ ಅಧಿಕಾರಕ್ಕೆ ಬಂದಿತ್ತು ಎಂದು ಗಮನ ಸೆಳೆದರು.

ಪರಿಶಿಷ್ಟ ಜಾತಿ–ವರ್ಗಗಳಿಗೆ ವಿಶೇಷವಾಗಿವೆ. ಅವರಿಗೆ ಘೋಷಣೆಗಳು ಉಚಿತ, ದೋಖಾ ಖಚಿತ, ನಂಬಿದವರ ಸರ್ವನಾಶ ನಿಶ್ಚಿತ ಎಂದು ವಿಶ್ಲೇಷಿಸಿದರು. ಈ ಸರ್ಕಾರ ಅಧಿಕಾರಕ್ಕೆ ಬಂದ ಬಳಿಕ ಪರಿಶಿಷ್ಟ ಜಾತಿ–ವರ್ಗಗಳಿಗೆ ಎಸ್‌ಇಪಿ, ಟಿಎಸ್‌ಪಿ ಅಡಿ ಎಷ್ಟು ಹಣ ಮೀಸಲಿಟ್ಟಿದ್ದರೋ, ಅದರ ವಿವರ ನೀಡುವುದಾಗಿ ಹೇಳಿದರು. 2023–24ರಲ್ಲಿ 30,930 ಕೋಟಿ ಹಣ ಮೀಸಲಿಟ್ಟಿದ್ದರು. 2024–25ರಲ್ಲಿ 39,122 ಕೋಟಿ ಇಟ್ಟಿದ್ದರು. 2025–26ರಲ್ಲಿ 42,017 ಕೋಟಿ, ಈ ಬಾರಿ 44,632 ಕೋಟಿ ಇಟ್ಟಿದ್ದಾಗಿ ಘೋಷಿಸಿದ್ದಾರೆ. 4 ವರ್ಷಗಳಲ್ಲಿ 1,56,701 ಕೋಟಿ ರೂ. ಕೊಟ್ಟ ಘೋಷಣೆ ಮಾಡಿದ್ದಾರೆ. ಜನರು ಬಹಳ ಖುಷಿ ಆಗಬಹುದು. ಇದರಲ್ಲಿ ಶೇ 50 ಹಣವನ್ನು, 7 ಸಿ ಅಡಿಯಲ್ಲಿ 78,350 ಕೋಟಿ ರೂಪಾಯಿಯನ್ನು ಪಿಡಬ್ಲ್ಯುಡಿ, ನೀರಾವರಿ ಮತ್ತಿತರ ಇಲಾಖೆಗಳಿಗೆ ಹಂಚಿದ್ದಾರೆ. ಉಳಿದ 78,350 ಕೋಟಿ ರೂಪಾಯಿಯಡಿ ಗ್ಯಾರಂಟಿಗಳಿಗೆ 53,059 ಕೋಟಿ ಹಣವನ್ನು ಇತ್ತೀಚಿನವರೆಗೆ ತೆಗೆದಿದ್ದಾರೆ ಎಂದು ಟೀಕಿಸಿದರು.

**ಎಸ್ಸಿ, ಎಸ್ಟಿ ಕಲ್ಯಾಣ ಕಾರ್ಯಕ್ರಮಗಳಿಗೆ 25,291 ಕೋಟಿ:** 4 ವರ್ಷಗಳಲ್ಲಿ 1,56,701 ಕೋಟಿ ರೂ. ಪೈಕಿ ಎಸ್ಸಿ, ಎಸ್ಟಿ ಕಲ್ಯಾಣ ಕಾರ್ಯಕ್ರಮಗಳಿಗೆ 25,291 ಕೋಟಿ ಮಾತ್ರ ಉಳಿದಿದೆ. 1,56,701 ಕೋಟಿ ರೂ. ಘೋಷಿಸಿ ಈ ಜನಾಂಗಗಳ ಅಭಿವೃದ್ಧಿಗೆ ನೀವು ಕೊಟ್ಟಿದ್ದು ಕೇವಲ 25,291 ಕೋಟಿ ಆಗಿದ್ದರೆ, ಎಸ್‌ಇಪಿ ಟಿಎಸ್‌ಪಿ ಹಣವನ್ನು 1,56,701 ಕೋಟಿ ರೂ. ಎಂದು ಮುಖ್ಯಮಂತ್ರಿಗಳು ಹೇಳುವುದು ಸರಿಯೇ ಎಂದು ಪ್ರಶ್ನಿಸಿದರು.

**ದಲಿತ ಹೋರಾಟಗಾರರು, ದಲಿತ ಸಂಘಟನೆಗಳು ಪ್ರಶ್ನಿಸಲು ಸಲಹೆ:** ದಲಿತ ಹೋರಾಟಗಾರರು, ದಲಿತ ಸಂಘಟನೆಗಳು ಇದನ್ನು ಅರ್ಥ ಮಾಡಿಕೊಂಡು ಸರಕಾರದ ವಿರುದ್ಧ, ಮುಖ್ಯಮಂತ್ರಿಗಳ ವಿರುದ್ಧ ಪ್ರಶ್ನೆ ಕೇಳದೇ ಇದ್ದಲ್ಲಿ ನಿಮ್ಮ ತಲೆಯ ಮೇಲೆ ನೀವೇ ಬಂಡೆ ಹಾಕಿಕೊಂಡಂತೆ ಎಂದು ತಿಳಿಸಿದರು. 2025–26ರಲ್ಲಿ ಅಂಬೇಡ್ಕರ್ ನಿಗಮಕ್ಕೆ 125 ಕೋಟಿ, ತಾಂಡಾ ನಿಗಮ– 75 ಕೋಟಿ, ಆದಿ ಜಾಂಬವ ನಿಗಮ– 62 ಕೋಟಿ, ಭೋವಿ ನಿಗಮ– 68 ಕೋಟಿ, ಸಫಾಯಿ ಕರ್ಮಚಾರಿ ನಿಗಮ– 31 ಕೋಟಿ, ವಾಲ್ಮೀಕಿ ನಿಗಮ– 156 ಕೋಟಿ, ಲಿಡ್ಕರ್ ನಿಗಮ– 43 ಕೋಟಿ ಸೇರಿ 562 ಕೋಟಿ ಕೊಡುವುದಾಗಿ ತಿಳಿಸಿದ್ದರು. 2025–26ರಲ್ಲಿ 42,017 ಕೋಟಿ ಪೈಕಿ 14 ಸಾವಿರ ಕೋಟಿ ಗ್ಯಾರಂಟಿಗೆ ಹೋಗಿದೆ. ಕೇವಲ 7 ಸಾವಿರ ಕೋಟಿ ಸಮಾಜ ಕಲ್ಯಾಣಕ್ಕೆ ಕೊಟ್ಟಿದ್ದೀರಿ. ಅದರಲ್ಲಿ ನಿಗಮಗಳಿಗೆ ನೀವು ಕೊಟ್ಟಿದ್ದು ಕೇವಲ 562 ಕೋಟಿ ಎಂದು ಗಮನ ಸೆಳೆದರು. ಅಂಬೇಡ್ಕರ್ ನಿಗಮಕ್ಕೆ 50 ಕೋಟಿಯೂ ತಲುಪಿಲ್ಲ ಎಂದು ವಿವರಿಸಿದರು. ಶೇ 50ರಷ್ಟು ಹಣವೂ ತಲುಪಿಲ್ಲ ಎಂದು ಆಕ್ಷೇಪ ವ್ಯಕ್ತಪಡಿಸಿದರು. ಎಷ್ಟು ವಂಚನೆ ಮಾಡುತ್ತೀರಿ, ಎಷ್ಟು ಮೋಸ ಮಾಡುತ್ತೀರಿ ಎಂದು ಕೇಳಿದರು.



**ದಲಿತರನ್ನು ಬಿಟ್ಟು ಗ್ಯಾರಂಟಿಗೆ ಹಣ ಇಟ್ಟಿದ್ದೀರಾ?:** ಮೊದಲ 3 ವರ್ಷ ಎಸ್‌ಇಪಿ, ಟಿಎಸ್‌ಪಿ ಹಣ ತೆಗೆದಿದ್ದೀರಿ. ಕಾಂಗ್ರೆಸ್ಸಿನ ಒಬ್ಬ ನಾಯಕರೂ ಅದನ್ನು ಪ್ರಶ್ನೆ ಮಾಡಿಲ್ಲ ಎಂದು ಛಲವಾದಿ ನಾರಾಯಣಸ್ವಾಮಿ ದೂರಿದರು. ಕೇವಲ ಬಿಜೆಪಿ ನಾಯಕರು ಮಾತ್ರ ಆರಂಭದಿಂದಲೇ ಹೋರಾಟ ಮಾಡುತ್ತ ಬಂದಿದ್ದಾರೆ. ಈ ಬಜೆಟ್ ಮಂಡಿಸುವುದಕ್ಕೆ ಮುಂಚೆ ಕ್ಯಾಬಿನೆಟ್‌ನಲ್ಲಿ ದಲಿತ ಸಮುದಾಯದ ಸಚಿವರು, ಶಾಸಕರು ಎಲ್ಲರೂ ಮುಖ್ಯಮಂತ್ರಿಗಳ ಗಮನ ಸೆಳೆದು ಯಾವುದೇ ಕಾರಣಕ್ಕೂ ಎಸ್‌ಇಪಿ, ಟಿಎಸ್‌ಪಿ ಹಣವನ್ನು ಗ್ಯಾರಂಟಿಗೆ ಬಳಸಬಾರದು; ಇದು ತಪ್ಪಾಗುತ್ತಿದೆ, ಜನರು ಛೀಮಾರಿ ಹಾಕುತ್ತಿದ್ದಾರೆ. ಇದನ್ನು ತಪ್ಪಿಸಿ ಎಂದು ಕೇಳಿಕೊಂಡರು. ಅವರ ಮಾತಿಗೆ ಬೆಲೆ ಕೊಟ್ಟು ಹಣ ವರ್ಗಾವಣೆ ನಿಲ್ಲಿಸಬಹುದೆಂದು ಭಾವಿಸಿದ್ದೆವು ಎಂದರು. ಬಜೆಟ್‌ನಲ್ಲೇ 52 ಸಾವಿರ ಕೋಟಿಯನ್ನು ಗ್ಯಾರಂಟಿಗೆ ತೋರಿಸಿದ್ದಾರೆ. ಈ 52 ಸಾವಿರ ಕೋಟಿ ಯಾವ ಜಾತಿಗೆ, ಯಾವ ಧರ್ಮಕ್ಕೆ ಎಂಬುದಿಲ್ಲ; ಹಾಗಿದ್ದರೆ ದಲಿತರಿಗೆ ಅದರಲ್ಲಿ ಯಾಕೆ ಪಾಲಿರಲಿಲ್ಲ. ನೀವು ದಲಿತರನ್ನು ಬಿಟ್ಟು ಗ್ಯಾರಂಟಿಗೆ ಹಣ ಇಟ್ಟಿದ್ದೀರಾ ಎಂದು ಪ್ರಶ್ನೆ ಮಾಡಿದರು. 52 ಸಾವಿರ ಕೋಟಿ ಹಣ ಪ್ರತ್ಯೇಕವಾಗಿ ನೀಡಿದ ಮೇಲೆ 14 ಸಾವಿರ ಕೋಟಿ ಮತ್ತೆ ಎಸ್ಸಿ, ಎಸ್ಟಿ ಮೊತ್ತದಿಂದ ಯಾಕೆ ತೆಗೆದಿರಿ? ಈ ಹಣ ಎಲ್ಲಿ ಹೋಗಿದೆ ಎಂದು ಕೇಳಿದರು. ಏನು ಕೇಳಿದರೂ ಉತ್ತರ ಇಲ್ಲವೆಂದರೆ, ನೀವೆಲ್ಲ ಲೂಟಿ ಮಾಡಿ ತಿಂದಿದ್ದೀರಿ ಎನ್ನಬೇಕೇ ಎಂದು ಪ್ರಶ್ನಿಸಿದರು.

### ಶುಕ್ರವಾರ ಒಂದೇದಿನ 100ಕ್ಕೂ ಹೆಚ್ಚು ವಿದೇಶಿ ಪ್ರಜೆಗಳ ಪತ್ತೆ

## ಬೆಂಗಳೂರಿನಲ್ಲಿ ಅಕ್ರಮ ವಲಸಿಗರ ವಿರುದ್ಧ ಕಾರ್ಯಾಚರಣೆ ತೀವ್ರಗೊಳಿಸಿದ ಪೊಲೀಸರು

**ಬೆಂಗಳೂರು, ಮಾ.7:** ನಗರದಲ್ಲಿ ಅಕ್ರಮವಾಗಿ ನೆಲೆಸಿರುವ ವಿದೇಶಿ ಪ್ರಜೆಗಳ ವಿರುದ್ಧ ಪೊಲೀಸರು ವ್ಯಾಪಕ ಕಾರ್ಯಾಚರಣೆ ನಡೆಸುತ್ತಿ ದ್ದಾರೆ. ನಗರ ಪೊಲೀಸ್ ಆಯುಕ್ತ ಸೀಮಂತ್ ಕುಮಾರ್ ನೇತೃತ್ವದಲ್ಲಿ ನಡೆಯುತ್ತಿರುವ ಈ ವಿಶೇಷ ಕಾರ್ಯಾಚರಣೆಯಲ್ಲಿ ಸಿಸಿಬಿ ಅಧಿಕಾರಿಗಳು ಹಾಗೂ ನಗರದ 11 ಡಿಸಿಪಿ ವ್ಯಾಪ್ತಿಯ ಪೊಲೀಸ್ ಸಿಬ್ಬಂದಿ ಭಾಗವಹಿಸಿದ್ದಾರೆ.

ಕಳೆದ ಒಂದು ವಾರದಿಂದ ನಿರಂತರವಾಗಿ ನಡೆಯುತ್ತಿರುವ ಈ ಕಾರ್ಯಾಚರಣೆಯಲ್ಲಿ ನಗರದ ವಿವಿಧ ಪ್ರದೇಶಗಳಲ್ಲಿ ತಪಾಸಣೆ ನಡೆಸಿ ಅಕ್ರಮವಾಗಿ ವಾಸಿಸುತ್ತಿದ್ದ ವಿದೇಶಿ ಪ್ರಜೆಗಳನ್ನು ಪತ್ತೆಹಚ್ಚಲಾಗುತ್ತಿದೆ.

ನಗರದಲ್ಲಿ ಒಟ್ಟು 200ಕ್ಕೂ ಅಧಿಕ ಅಕ್ರಮ ವಲಸಿಗರನ್ನು ಗುರುತಿಸಲಾಗಿದ್ದು, ಶುಕ್ರವಾರ ಒಂದೇ ದಿನ 100ಕ್ಕೂ ಹೆಚ್ಚು ವಿದೇಶಿ ಪ್ರಜೆಗಳನ್ನು ಪತ್ತೆಹಚ್ಚಲಾಗಿದೆ. ಬೆಂಗಳೂರು ನಗರದ ವಿವಿಧ ಭಾಗಗಳಲ್ಲಿ ತಂಗಿದ್ದ ಈ ವಲಸಿಗರು ಅಗತ್ಯ ದಾಖಲೆಗಳಿಲ್ಲದೆ ಅಕ್ರಮವಾಗಿ ವಾಸಿಸುತ್ತಿದ್ದರು ಎಂದು ತಿಳಿದು ಬಂದಿದೆ. ಇವರಲ್ಲಿ ಹೆಚ್ಚಿನವರು ಬಾಂಗ್ಲಾದೇಶ ಮೂಲದವರಾಗಿದ್ದು, ಆಫ್ರಿಕಾ ಸೇರಿ ಇನ್ನೂ ಕೆಲವು ದೇಶಗಳಿಂದ ಬಂದವರೂ ಪತ್ತೆಯಾಗಿದ್ದಾರೆ. ಪತ್ತೆಯಾದ ಅಕ್ರಮ ವಲಸಿಗರನ್ನು ವಿದೇಶಿ ಪ್ರಾದೇಶಿಕ ನೋಂದಣಿ ಕಚೇರಿ ಅಧಿಕಾರಿಗಳ ವಶಕ್ಕೆ ಒಪ್ಪಿಸಲಾಗಿದೆ. ಅವರ ವಿರುದ್ಧ ಕಾನೂನು ಕ್ರಮ ಕೈಗೊಳ್ಳುವ ಪ್ರಕ್ರಿಯೆ ಈಗಾಗಲೇ ಆರಂಭವಾಗಿದೆ. ಕಾರ್ಯಾಚರಣೆಯಲ್ಲಿ ಸಮಾಜ ಕಲ್ಯಾಣ ಇಲಾಖೆ ಹಾಗೂ FRRO ಅಧಿಕಾರಿಗಳು ಪೊಲೀಸರಿಗೆ ಸಹಕಾರ ನೀಡುತ್ತಿದ್ದಾರೆ. ಪೊಲೀಸರು ನಡೆಸಿದ ಪರಿಶೀಲನೆ ವೇಳೆ ಕೆಲವರ ಬಳಿ ಆಧಾರ್ ಕಾರ್ಡ್ ಸೇರಿದಂತೆ ಸ್ಥಳೀಯ ದಾಖಲೆಗಳು ಕೂಡ ಪತ್ತೆಯಾಗಿವೆ. ಅವುಗಳ ನೈಜತೆ ಕುರಿತು ಪರಿಶೀಲನೆ ನಡೆಯುತ್ತಿದೆ. ಪತ್ತೆಯಾದ ವಿದೇಶಿ ಪ್ರಜೆಗಳ ವಿವರಗಳನ್ನು ಸಂಬಂಧಿತ ದೇಶಗಳ ಅಧಿಕಾರಿಗಳಿಗೆ ರವಾನಿಸಲಾಗುತ್ತಿದ್ದು, ಅವರ ಗುರುತು ಮತ್ತು ದಾಖಲೆಗಳ ಬಗ್ಗೆ ಮಾಹಿತಿ ಸಂಗ್ರಹಿಸಲಾಗುತ್ತಿದೆ.

ಈ ಹಿಂದೆ ಪೊಲೀಸ್ ಆಯುಕ್ತರ ಸೂಚನೆಯಂತೆ ವಿವಿಧ ವಿಭಾಗಗಳ ಪೊಲೀಸರು ಅನುಮಾನಾಸ್ಪದ ಪ್ರದೇಶಗಳಲ್ಲಿ ಶೋಧನೆ ನಡೆಸಿ ದಾಖಲೆಗಳ ಪರಿಶೀಲನೆ ವೇಳೆ ಫೆಬ್ರವರಿ 26ರ ಒಂದೇ ದಿನ ಸುಮಾರು 2,000ಕ್ಕೂ ಹೆಚ್ಚು ವಿದೇಶಿ ಗರು ಪತ್ತೆಯಾಗಿದ್ದರು. ಇದರಲ್ಲಿ ಬಹುತೇಕರು ಸರಿಯಾದ ದಾಖಲೆಗಳಿಲ್ಲದೆ ಅಥವಾ ವೀಸಾ ಅವಧಿ ಮೀರಿಸಿ ನಗರದಲ್ಲಿ ವಾಸಿಸುತ್ತಿರುವುದು ಎಂದು ತಿಳಿದು ಬಂದಿತ್ತು.

## ರೇಣುಕಾಸ್ವಾಮಿ ಹತ್ಯೆ ಪ್ರಕರಣ: ಜಾಮೀನು ರದ್ದು ಕೋರಿ ಸರ್ಕಾರದ ಅರ್ಜಿಗೆ ಆಕ್ಷೇಪಣೆ ಸಲ್ಲಿಸಲು ಆರೋಪಿಗಳಿಗೆ ಹೈಕೋರ್ಟ್ ನಿರ್ದೇಶನ

**ಬೆಂಗಳೂರು, ಮಾ.7:** ಚಿತ್ರದುರ್ಗದ ರೇಣುಕಾಸ್ವಾಮಿ ಕೊಲೆ ಪ್ರಕರಣದಲ್ಲಿ ನಾಲ್ವರು ಆರೋಪಿಗಳಿಗೆ ವಿಚಾರಣಾ ನ್ಯಾಯಾಲಯ ಮಂಜೂರು ಮಾಡಿರುವ ಜಾಮೀನು ರದ್ದುಪಡಿಸುವಂತೆ ಕೋರಿ ರಾಜ್ಯ ಸರ್ಕಾರ ಸಲ್ಲಿಸಿರುವ ಅರ್ಜಿಗೆ ಆಕ್ಷೇಪಣೆ ಸಲ್ಲಿಸುವಂತೆ ಆರೋಪಿಗಳಿಗೆ ಕರ್ನಾಟಕ ಹೈಕೋರ್ಟ್ ಶುಕ್ರವಾರ ನಿರ್ದೇಶಿಸಿದೆ.

ಆರೋಪಿಗಳಾದ ಪುಟ್ಟಸ್ವಾಮಿ ಅಲಿಯಾಸ್ ಪವನ್, ಧನರಾಜ್, ನಂದೀಶ್ ಮತ್ತು ವಿ ವಿನಯ್‌ಗೆ ಜಾಮೀನು ಮಂಜೂರು ಮಾಡಿ ಬೆಂಗಳೂರಿನ 56ನೇ ಸಿಟಿ ಸಿವಿಲ್ ಮತ್ತು ಸತ್ರ ನ್ಯಾಯಾಲಯವು 2024ರ ಡಿಸೆಂಬರ್ 23ರಂದು ಆದೇಶ ಹೊರಡಿಸಿತ್ತು. ಈ ಆದೇಶ ಪ್ರಶ್ನಿಸಿರುವ ಕಾಮಾಕ್ಷಿಪಾಳ್ಯ ಠಾಣೆಯ ಪೊಲೀಸರು (ರಾಜ್ಯ ಸರ್ಕಾರ) ಈ ನಾಲ್ವರು ಆರೋಪಿಗೆ ಮಂಜೂರು ಮಾಡಿರುವ ಜಾಮೀನು ರದ್ದತಿ ಕೋರಿರುವ ಅರ್ಜಿಯ ವಿಚಾರಣೆಯನ್ನು ನ್ಯಾಯಮೂರ್ತಿ ಎಸ್ ರಾಚಯ್ಯ ಅವರ ಏಕಸದಸ್ಯ ಪೀಠ ನಡೆಸಿತು.


ವಿಶೇಷ ಸರ್ಕಾರಿ ಅಭಿಯೋಜಕ ಪಿ ಪ್ರಸನ್ನ ಕುಮಾರ್ ಅವರು ಪ್ರಕರಣವು ಅತ್ಯಂತ ಹೀನವಾಗಿದೆ. ನಟ ದರ್ಶನ್, ಪವಿತ್ರಾಗೌಡ ಸೇರಿದಂತೆ ಪ್ರಕರಣದ ಏಳು ಆರೋಪಿಗಳಿಗೆ ಹೈಕೋರ್ಟ್ ಮಂಜೂರು ಮಾಡಿದ್ದ ಜಾಮೀನನ್ನು ಸುಪ್ರೀಂ ಕೋರ್ಟ್ ರದ್ದುಪಡಿಸಿದೆ. ಇದರಿಂದ ಆ ಏಳು ಮಂದಿ ಆರೋಪಿಗಳು ಮರಳಿ ಜೈಲು ಸೇರಿದ್ದಾರೆ. ಸುಪ್ರೀಂ ಕೋರ್ಟ್ ತೀರ್ಪು ಆಧರಿಸಿ ಈ ನಾಲ್ವರು ಆರೋಪಿಗಳಿಗೆ ಮಂಜೂರಾಗಿರುವ ಜಾಮೀನು ರದ್ದುಪಡಿಸಬೇಕು ಎಂದು ಕೋರಿದರು.



ಅದಕ್ಕೆ ಪ್ರತಿಕ್ರಿಯಿಸಿದ ಪೀಠವು, ಸುಪ್ರೀಂ ಕೋರ್ಟ್ ಆದೇಶವಿರುವುದು ನಿಜ. ಆದರೆ, ಅರ್ಜಿದಾರರಿಗೆ ಜಾಮೀನು ರದ್ದುಪಡಿಸಬೇಕು ಎಂಬ ಪ್ರಾಸಿಕ್ಯೂಷನ್ ಮನವಿಯನ್ನು ಕುರಿತಂತೆ ಪರಿಶೀಲನೆ ನಡೆಸಬೇಕಿದೆ. ಅರ್ಜಿ ಸಂಬಂಧ ಆರೋಪಿಗಳ ಪರ ವಕೀಲರು ತಮ್ಮ ಆಕ್ಷೇಪಣೆ ಸಲ್ಲಿಸಲಿ ಎಂದಿತು.

ಅಂತಿಮವಾಗಿ ಅರ್ಜಿ ಕುರಿತು ಲಿಖಿತ ಆಕ್ಷೇಪಣೆ/ವಾದಾಂಶ ಸಲ್ಲಿಸುವಂತೆ ಪ್ರತಿವಾದಿಯಾಗಿರುವ ಪವನ್ ಹಾಗೂ ಇತರೆ ಮೂವರು ಆರೋಪಿಗಳಿಗೆ ನಿರ್ದೇಶಿಸಿ ವಿಚಾರಣೆಯನ್ನು ಮಾರ್ಚ್ 17ಕ್ಕೆ ಮುಂದೂಡಿತು.

## ಆಸ್ತಿ ಕಬಳಿಕೆ ಪ್ರಕರಣ: ಉದ್ಯಮಿ ಆದಿಕೇಶವುಲು ಪುತ್ರನಿಗೆ ಜಾಮೀನು



**ಬೆಂಗಳೂರು, ಮಾ.7:** ಆತ್ಮಹತ್ಯೆ ಗೊಳಗಾಗಿದ್ದಾರೆ ಎನ್ನಲಾದ ಉದ್ಯಮಿ ಕೆ. ರಘುನಾಥ್ ಅವರ ನಕಲಿ ಸಹಿ ಮಾಡಿ ಆಸ್ತಿ ಕಬಳಿಸಿರುವ ಆರೋಪದಲ್ಲಿ ಬಂಧಿತರಾಗಿ ರುವ ತಿರುಮಲ– ತಿರುಪತಿ ದೇವಸ್ಥಾನ ಆಡಳಿತ ಮಂಡಳಿಯ ಮಾಜಿ ಅಧ್ಯಕ್ಷ ಡಿ.ಕೆ. ಆದಿಕೇಶವುಲು ನಾಯ್ಡು ಪುತ್ರ ಡಿ.ಎ. ಶ್ರೀನಿವಾಸ್ ಅವರಿಗೆ ಹೈಕೋರ್ಟ್ ಈಚೆಗೆ ಜಾಮೀನು ನೀಡಿದೆ. ಕೇಂದ್ರೀಯ ತನಿಖಾ ದಳದ ವಿಚಾರಣೆಯಲ್ಲಿರುವ ಪ್ರಕರಣದಲ್ಲಿ ಒಂಭತ್ತನೇ ಆರೋಪಿಯಾಗಿರುವ ಶ್ರೀನಿವಾಸ್‌ಗೆ ನ್ಯಾಯಮೂರ್ತಿ ಶಿವಶಂಕರ್ ಅಮರಣ್ಣವರ್ ಅವರ ಏಕಸದಸ್ಯ ಪೀಠ ಜಾಮೀನು ಮಂಜೂರು ಮಾಡಿದೆ. ಐದು ಲಕ್ಷ ರೂಪಾಯಿ ಮೌಲ್ಯದ ವೈಯಕ್ತಿಕ ಬಾಂಡ್ ಮತ್ತು ಇಬ್ಬರ ಭದ್ರತೆ ಒದಗಿಸಬೇಕು. ಹೆಚ್ಚಿನ ತನಿಖೆಗೆ ಕೈಜೋಡಿಸುವಂತೆ ಸೂಚಿಸಿದಾಗ ತನಿಖಾ ಸಂಸ್ಥೆಯ ಮುಂದೆ ಹಾಜರಾಗಬೇಕು. ಸಾಕ್ಷಿಗಳನ್ನು ತಿರುಚಲು ಪ್ರತ್ಯಕ್ಷ ಅಥವಾ ಪರೋಕ್ಷವಾಗಿ ಪ್ರಯತ್ನಿಸಬಾರದು. ಜೈಲಿನಿಂದ ಬಿಡುಗಡೆಯಾದ ಒಂದು ವಾರದೊಳಗೆ ಪಾಸ್‌ಪೋರ್ಟ್ ಅನ್ನು ನ್ಯಾಯಾಲಯಕ್ಕೆ ಸಲ್ಲಿಸಬೇಕು. ವಿಚಾರಣೆಗೆ ಭಾಗಿಯಾಗುವುದನ್ನು ಹೊರತುಪಡಿಸಿ ಪ್ರಕರಣದಲ್ಲಿ ಅಂತಿಮ ವರದಿ ಸಲ್ಲಿಸುವವರೆಗೆ ಕರ್ನಾಟಕ ರಾಜ್ಯ ಪ್ರವೇಶಿಸಬಾರದು. ಸಕ್ಷಮ ನ್ಯಾಯಾಲಯದ ಮುಂದೆ ವಿಚಾರಣೆಗೆ ತಪ್ಪದೇ ಹಾಜರಾಗಬೇಕು ಮತ್ತು ಯಾವುದೇ ಅಪರಾಧ ಚಟುವಟಿಕೆಗಳಲ್ಲಿ ಭಾಗಿಯಾಗ ಕೂಡದು ಎಂಬ ಷರತ್ತುಗಳನ್ನು ಹೈಕೋರ್ಟ್ ಶ್ರೀನಿವಾಸ್‌ಗೆ ವಿಧಿಸಿದೆ.


ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ಶನಿವಾರ ತ್ಯಾಜ್ಯ ಶ್ರಮಿಕರ ಸಂಘದ ಸದಸ್ಯರು ಅಂತರರಾಷ್ಟ್ರೀಯ ತ್ಯಾಜ್ಯ ಆಯುವವರ ದಿನವನ್ನು ಆಚರಿಸಿದರು.

# ಆಯುರ್ವೇದದಿಂದಲೂ ರೋಗ ತ್ವರಿತ ಗುಣ: ಸಚಿವ ಖಂಡ್ರೆ

**ಬೀದರ, ಮಾ.7:** ಆಯುರ್ವೇದದ ಇತ್ತೀಚಿನ ಆಧುನಿಕ ಚಿಕಿತ್ಸಾ ಪದ್ಧತಿ ಯಿಂದ ಬಹುತೇಕ ರೋಗಗಳನ್ನು ತ್ವರಿತವಾಗಿ ಗುಣಪಡಿಸಬಹುದು ಮತ್ತು ರೋಗಗಳನ್ನು ಶಾಶ್ವತವಾಗಿ ಬೇರುಸಹಿತ ಕಿತ್ತು ಹಾಕಬಹುದು ಎಂದು ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಹೇಳಿದರು.

ಆಯುರ್ವೇದ ಚಿಕಿತ್ಸೆಯಿಂದ ಅಡ್ಡ ಪರಿಣಾಮವಿಲ್ಲದೇ ಎಂಥ ರೋಗಗಳಿಗೂ ಚಿಕಿತ್ಸೆ ಪಡೆಯಬಹುದು. ಮನುಷ್ಯನ ಆಯುಷ್ಯವನ್ನೂ ಹೆಚ್ಚಿಸಿಕೊಳ್ಳುವುದು ಆಯುರ್ವೇದದಿಂದ ಸಧ್ಯ. ಆಯುರ್ವೇದ ಚಿಕಿತ್ಸಾ ಪದ್ಧತಿಯನ್ನು ಕಂಡು ಹಿಡಿದದ್ದು ನಮ್ಮ ಋಷಿಮುನಿಗಳು. ಅವರ ತಪಸ್ಸು ಮತ್ತು ಸಂಶೋಧನೆಯ ಫಲವೇ ಆಯುರ್ವೇದ. ಈ ಚಿಕಿತ್ಸಾ ಪದ್ಧತಿ ಪ್ರಾಚೀನ ಕಾಲದಿಂದಲೂ ನಡೆದು ಕೊಂಡು ಬಂದಿದೆ ಎಂದು ಹೇಳಿದರು.



ಜಗತ್ತಿನ ಆಧುನಿಕತೆಯಲ್ಲಿ ಸಿಲುಕಿದ ಭಾರತದಲ್ಲೂ ಕೂಡ ಅಲೋಪತಿಯಿಂದಾಗಿ ಆಯುರ್ವೇದ ನೇಪಥ್ಯಕ್ಕೆ ಸರಿದಿತ್ತು. ಕೋವಿಡ್ ಸಂದರ್ಭದಲ್ಲಿ ಸೋಂಕಿಗೆ ಅತ್ಯಂತ ಪರಿಣಾಮಕಾರಿಯಾಗಿ ಚಿಕಿತ್ಸೆ ನಿಡಿದ್ದು ಆಯುರ್ವೇದ. ಹೀಗಾಗಿ ಜಗತ್ತೇ ಇಂದು ಆಯುರ್ವೇದದ ಬಗ್ಗೆ ಅತ್ಯಂತ ವಿಶ್ವಾಸ ಹೊಂದುವಂತೆ ಮಾಡಿದೆ. ಇಂದಿನ ಬದಲಾದ ಜೀವನ ಶೈಲಿ ಹಾಗೂ ಆಹಾರ ಪದ್ಧತಿಯ ಕಾರಣ ಬಹುತೇಕ ಮನುಷ್ಯರು ಒಂದಿಲ್ಲೊಂದು ರೀತಿಯ ಆರೋಗ್ಯ ಸಮಸ್ಯೆ ಎದುರಿಸುತ್ತಿದ್ದಾರೆ. ಆಯುರ್ವೇದ ಆಹಾರ ಪದ್ಧತಿ ಮತ್ತು ಚಿಕಿತ್ಸೆ ಮೂಲಕ ಉತ್ತಮ ಆರೋಗ್ಯ ಕಾಪಾಡಿಕೊಳ್ಳ ಬಹುದು ಎಂದು ತಿಳಿಸಿದರು.

ಜ್ಞಾನ ಸುಧಾ ಶಿಕ್ಷಣ ಸಂಸ್ಥೆಯ ಅಧ್ಯಕ್ಷೆ ಪೂರ್ಣಿಮಾ ಜಿ. ಅಧ್ಯಕ್ಷತೆ ವಹಿಸಿ ಮಾತನಾಡಿ, ಜ್ಞಾನಸುಧಾ ಎ.ಕೆ. ಆಯುರ್ವೇದ ಆಸ್ಪತ್ರೆಯಲ್ಲಿ ಉಚಿತ ಸಹಜ ಹೆರಿಗೆ ಮಾಡಿಸಲಾಗುತ್ತಿದೆ. ಚಿಕಿತ್ಸೆಗೆ ಬರುವವರಿಗೆ ಬೀದರ್‌ನ ಕೇಂದ್ರ ಬಸ್ ನಿಲ್ದಾಣದಿಂದ ಆಸ್ಪತ್ರೆವರೆಗೆ ಪ್ರತಿದಿನ ಮಧ್ಯಾಹ್ನ 1ಕ್ಕೆ ಉಚಿತ ಬಸ್ ವ್ಯವಸ್ಥೆ ಮಾಡಲಾಗಿದೆ. ರೋಗಿಗಳು ಅದರ ಪ್ರಯೋಜನ ಪಡೆಯಬೇಕು ಎಂದು ಹೇಳಿದರು.

ಜ್ಞಾನಸುಧಾ ಶಿಕ್ಷಣ ಸಂಸ್ಥೆಗಳ ಸಮೂಹದ ನಿರ್ದೇಶಕ ಮುನೇಶ್ವರ ಲಾಖಾ ಮಾತನಾಡಿ, ಜ್ಞಾನಸುಧಾ ಶಿಕ್ಷಣ ಸಂಸ್ಥೆ ಶಿಕ್ಷಣ ಕ್ಷೇತ್ರಕ್ಕೆ ತನ್ನದೇ ಕೊಡುಗೆ ನೀಡುತ್ತಿದೆ. ಇದೀಗ ಆರೋಗ್ಯ ಕ್ಷೇತ್ರದಲ್ಲೂ ಸೇವೆ ಸಲ್ಲಿಸಲು ಮುಂದಾಗಿದ್ದು, ಆಸ್ಪತ್ರೆ ಆರಂಭಿಸಿದೆ ಎಂದು ತಿಳಿಸಿದರು.

# ಬಡವರ ಅನುಕೂಲಕ್ಕಾಗಿ ಹಾವೇರಿ ಜಿಲ್ಲಾಸ್ಪತ್ರೆಯಲ್ಲಿ ಜನೌಷಧಿ ಕೇಂದ್ರ ಆರಂಭಿಸಿ: ಸಂಸದ ಬೊಮ್ಮಾಯಿ ಒತ್ತಾಯ

**ಹಾವೇರಿ(ಸವಣೂರು), ಮಾ. 4–** ಆಯುಷ್ಮಾನ್ ಯೋಜನೆ ಅಡಿ ಬಡವರಿಗೆ 5 ಲಕ್ಷದ ವರೆಗೆ ಎಲ್ಲ ರೀತಿಯ ಆರೋಗ್ಯ ಸೇವೆ ಉಚಿತವಾಗಿ ದೊರೆಯುತ್ತವೆ. ಅದರ ಜೊತೆಗೆ ಜನೌಷಧಿ ಕೇಂದ್ರಗಳಲ್ಲಿ ಕಡಿಮೆ ದರದಲ್ಲಿ ಔಷಧಿಗಳು ದೊರೆಯುತ್ತವೆ. ಹಾವೇರಿ ಜಿಲ್ಲಾಸ್ಪತ್ರೆಯಲ್ಲಿ ಬಡವರ ಅನುಕೂಲಕ್ಕಾಗಿ ರಾಜ್ಯ ಸರ್ಕಾರ ಜನೌಷಧಿ ಕೇಂದ್ರವನ್ನು ಪ್ರಾರಂಭ ಮಾಡಬೇಕು ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ ಬೊಮ್ಮಾಯಿ ಆಗ್ರಹಿಸಿದರು.



ಸವಣೂರ ತಾಲೂಕಿನ ಹಿರೇಮುಗದೂರ ಗ್ರಾಮದಲ್ಲಿ ಆಯುಷ್ಮಾನ್ ಆರೋಗ್ಯ ಕೇಂದ್ರದ ನಿರ್ಮಾಣ ಕಾಮಗಾರಿಯ ಶಂಕುಸ್ಥಾಪನೆಯನ್ನು ನೆರವೇರಿಸಿ, ಆಯುಷ್ಮಾನ ಯೋಜನೆ 2017 ರಲ್ಲಿ ಪ್ರಧಾನಿ ನರೇಂದ್ರ ಮೋದಿಯವರ ನೇತೃತ್ವದಲ್ಲಿ ಆರಂಭವಾಗಿದೆ. 5 ಲಕ್ಷ ರೂ. ವರೆಗೂ ಯಾವುದೇ ರೀತಿಯ ಚಿಕಿತ್ಸೆಗೆ ಕೇಂದ್ರ ಸರ್ಕಾರ ಹಣ ನೀಡುತ್ತದೆ. ಬಡವರಿಗೆ ಆರೋಗ್ಯ ಸೇವೆ ನಿಲುಕುತ್ತಿಲ್ಲ ಎನ್ನುವ ಕಾರಣಕ್ಕೆ ಅವರಿಗಾಗಿ ಪ್ರಧಾನಿ ನರೇಂದ್ರ ಮೋದಿಯವರು ಈ ಯೋಜನೆ ಮಾಡಿದ್ದಾರೆ. ಇದರ ಜೊತೆಗೆ ಜನೌಷಧಿ ಕೇಂದ್ರವನ್ನು ಪ್ರಾರಂಭ ಮಾಡಿದ್ದಾರೆ. ಬೇರೆ ಔಷಧ ಮಳಿಗೆಗಳಲ್ಲಿ ಔಷಧದ ಬೆಲೆ ನೂರು ರೂ. ಇದ್ದರೆ ಜನೌಷಧಿ ಕೇಂದ್ರಗಳಲ್ಲಿ 20 ರೂ.ಗೆ ಸಿಗುತ್ತದೆ. ರಾಜ್ಯ ಸರ್ಕಾರ ಹಾವೇರಿ ಜಿಲ್ಲಾಸತ್ರೆಯಲ್ಲಿದ್ದ ಜನೌಷಧಿ ಕೇಂದ್ರ ಬಂದ್ ಮಾಡಿಸಿದ್ದಾರೆ ಇದರಿಂದ ಬಡವರಿಗೆ ತೊಂದರೆಯಾಗಿದೆ. ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಅವರು ಹಾವೇರಿ ಜಿಲ್ಲಾ ಆಸ್ಪತೆಯಲ್ಲಿ ಜನೌಷಧಿ ಕೇಂದ್ರ ಸ್ಥಾಪನೆ ಮಾಡಬೇಕು ಎಂದು ಹೇಳಿದರು.

1960 ರ ದಶಕದಲ್ಲಿ ಪ್ರವಾಹ ಬಂದಿತ್ತು. ಹಿರೆಮುಗದೂರು, ಕರ್ಜಗಿ, ಕುಣಿಮೆಳ ಹಳ್ಳಿಯಲ್ಲಿ ಸೇರಿ ಅನೇಕ ಗ್ರಾಮಗಳಲ್ಲಿ ಪ್ರವಾಹ ಬಂದು ಜನರು ಮರಗಳ ಮೇಲೆ ಹತ್ತಿ ಕುಳಿತಿದ್ದರು. ಆ ಸಂದರ್ಭದಲ್ಲಿ ಹಿರೆಮುಗದೂರು ಗ್ರಾಮ ಸ್ಥಳಾಂತರ ಆಗಿದೆ. ಉತ್ತಮ ರೀತಿಯಲ್ಲಿ ಗ್ರಾಮ ನಿರ್ಮಾಣ ಆಗಿದೆ. 2019 ರಲ್ಲಿ ಪ್ರವಾಹ ಬಂದಾಗ ನಾನು ಬಂದಿದ್ದೆ. ಗ್ರಾಮಗಳ ಅಭಿವೃದ್ಧಿಗೆ ಐದು ಹಂತದ ಸಂಸ್ಥೆಗಳು ಗ್ರಾಮ ಪಂಚಾಯತಿ, ತಾಲೂಕು, ಜಿಲ್ಲಾ, ಶಾಸಕರು ಹಾಗೂ ಸಂಸದರು ಐದು ಹಂತದ ಸಂಸ್ಥೆಗಳು ಒಟ್ಟಿಗೆ ಕೆಲಸ ಮಾಡಬೇಕು. 60 ತಿಂಗಳಲ್ಲಿ 59 ತಿಂಗಳು ಅಭಿವೃದ್ಧಿ ಕೆಲಸ ಮಾಡಿ ಒಂದು ತಿಂಗಳು ರಾಜಕಾರಣ ಮಾಡೋಣ ಎಂದರು.

ವಿಧಾನಸಭೆಯ ಉಪಾಧ್ಯಕ್ಷ ರುದಪ್ಪ ಲಮಾಣಿ ಹಾಗೂ ಬಿಜೆಪಿ ಅಭ್ಯರ್ಥಿಯಾಗಿದ್ದ ಗವಿಸಿದ್ದಪ್ಪ ಅವರು ಇಬ್ಬರೂ ಸೇರಿಯೇ ಒಂದೇ ವೇದಿಕೆಯ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವುದು ಅಪರೂಪ, ಇದು ಒಳ್ಳೆಯ ವೇದಿಕೆ ಅಭಿವೃದ್ಧಿಯ ವೇದಿಕೆ. ಜನರ ಕಲ್ಯಾಣ ಮಾಡುವ ವೇದಿಕೆ ಎಂದರು. ಆಯುಷ್ಕಾನ್ ಆರೋಗ್ಯ ಕೇಂದ್ರದಲ್ಲಿ ಓಪಿಡಿ, ಲ್ಯಾಬ್ ಇದೆ. ಇಲ್ಲಿ ರಾಷ್ಟ್ರೀಯ ಮತ್ತು ರಾಜ್ಯಮಟ್ಟದ ಆರೋಗ್ಯ ಕಾರ್ಯಕ್ರಮಗಳನ್ನು ಮಾಡುತ್ತಾರೆ. ಎಲ್ಲರೂ ಇದರ ಸದುಪಯೋಗ ಪಡೆಸಿಕೊಳ್ಳಬೇಕು ಎಂದು ಹೇಳಿದರು.

ಈ ಸಂದರ್ಭದಲ್ಲಿ ವಿಧಾನಸಭೆಯ ಉಪಸಭಾಧ್ಯಕ್ಷ ರುದ್ರಪ್ಪ ಲಮಾಣಿ ಮುಖಂಡ ಗವಿಸಿದ್ದಪ್ಪ ದ್ಯಾಮಣ್ಣವರ ಸೇರಿದಂತೆ ಆರೋಗ್ಯ ಇಲಾಖೆಯ ಸಿಬ್ಬಂದಿ ಹಾಗೂ ಪ್ರಮುಖರು ಉಪಸ್ಥಿತರಿದ್ದರು.

# ಎಲ್ಲ ನಿಟ್ಟಿನಲ್ಲಿ ಅವಲೋಕಿಸಿ ಕಾಲೇಜುಗಳಲ್ಲಿ ವಿದ್ಯಾರ್ಥಿ ಸಂಘ ಚುನಾವಣೆ: ಪ್ರಿಯಾಂಕ್ ಖರ್ಗೆ

**ಕಲಬುರಗಿ, ಮಾ.7:** ಎಲ್ಲ ನಿಟ್ಟಿನಲ್ಲಿ ಅವಲೋಕಿಸಿ ಕಾಲೇಜುಗಳಲ್ಲಿ ವಿದ್ಯಾರ್ಥಿ ಸಂಘದ ಚುನಾವಣೆ ನಡೆಸಲು ಮುಂದಿನ ಹೆಜ್ಜೆ ಇಡಲಾಗುವುದು ಎಂದು ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದರು.



ಶನಿವಾರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಚುನಾವಣೆ ಅಂದ ತಕ್ಷಣ ಸಂಘರ್ಷ ಎನ್ನಲಾಗದು.

ಇದು ಪ್ರಜಾಪ್ರಭುತ್ವ ಬಲಪಡಿಸುವುದಾಗಿದೆ. ಅನೇಕ ನಾಯಕರು ವಿದ್ಯಾರ್ಥಿ ಸಂಘದ ಮುಖಾಂತರ ರಾಜಕೀಯಕ್ಕೆ ಬಂದು ಉತ್ತಮ ಸ್ಥಾನಮಾನ ಹಾಗೂ ಜತೆಗೆ ಅತ್ಯುತ್ತಮ ವ್ಯಕ್ತಿತ್ವ ರೂಪಿಸಿಕೊಂಡಿದ್ದಾರೆ ಎಂದು ಹೇಳಿದರು. ದೇಶದ ಅನೇಕ ರಾಜ್ಯಗಳಲ್ಲಿ ವಿದ್ಯಾರ್ಥಿ ಸಂಘದ ಚುನಾವಣೆಗೆ ಅವಕಾಶ ಇಲ್ಲವಾದರೂ ರಾಜ್ಯದಲ್ಲಿ ವಿದ್ಯಾರ್ಥಿ ಸಂಘದ ಚುನಾವಣೆ ಅಸ್ತಿತ್ವಕ್ಕೆ ತರಲಾಗುತ್ತಿದೆ. ಆದರೆ ಚುನಾವಣೆ ಸಂಬಂಧ ಸಚಿವರ ನೇತೃತ್ವದಲ್ಲಿ ಸಮಿತಿ ರಚನೆಯಾಗಿದ್ದು, ಈ ಸಮಿತಿ ಚುನಾವಣೆ ನಡೆಸುವ ನಿಟ್ಟಿನಲ್ಲಿ ಸಾಧಕ–ಬಾಧಕಗಳನ್ನು ಅವಲೋಕಿಸಲಿದೆ. ಸಮಿತಿಯ ವರದಿ ಆಧಾರದ ಮೇಲೆ ಚುನಾವಣೆಗೆ ಮುಂದಾಗಲಾಗುವುದು ಎಂದು ಸಚಿವ ಖರ್ಗೆ ಹೇಳಿದರು.

ಮಾ.8 ರಂದು ಚಿತ್ತಾಪುರದಲ್ಲಿ 1069 ಕೋ.ರೂ ವೆಚ್ಚದ ವಿವಿಧ ಅಭಿವೃದ್ಧಿ ಕಾರ್ಯಕ್ರಮಗಳಿಗೆ ಚಾಲನೆ ನೀಡಲಾಗುತ್ತಿದೆ. ಸಿಎಂ ಆಗಮಿಸುತ್ತಿದ್ದು, ರಾಜ್ಯಸಭೆ ವಿರೋಧ ಪಕ್ಷದ ನಾಯಕ ಮಲ್ಲಿಕಾರ್ಜುನ ಖರ್ಗೆ ಹಾಗೂ ಡಿಸಿಎಂ ಡಿ.ಕೆ.ಶಿವಕುಮಾರ ಹಾಗೂ ಇತರ ಗಣ್ಯರು ಪಾಲ್ಗೊಳ್ಳಲಿದ್ದಾರೆ ಎಂದು ಇದೆ ಸಂದರ್ಭದಲ್ಲಿ ತಿಳಿಸಿದರು.

# ಗಿರಿ ಜಿಲ್ಲೆಗೆ ಗರಿ ಮೂಡಿಸಿದ ಯುಪಿಎಸ್ಸಿ ಸಾಧಕರು ವೆಂಕಟೇಶ್ ಕಡೇಚೂರ್ ಅಭಿನಂದನೆ

**ಕಲಬುರಗಿ, ಮಾ.7–** ಎಸ್ ಎಸ್ ಎಲ್ ಸಿ ಮತ್ತು ಪಿಯುಸಿ ಫಲಿತಾಂಶದ ಪಟ್ಟಿಯಲ್ಲಿ ಕೊನೆಯ ಸ್ಥಾನದಲ್ಲಿರುವ ಗಿರಿ ಜಿಲ್ಲೆ ಎಂದೇ ಖ್ಯಾತಿ ಪಡೆದ ಯಾದಗಿರಿ ಜಿಲ್ಲೆಯ ನಾಲ್ವರು ಇದೀಗ ಯುಪಿಎಸ್ಸಿ ಪರೀಕ್ಷೆಯಲ್ಲಿ ತೇರ್ಗಡೆ ಹೊಂದಿ ಎಲ್ಲರನ್ನೂ ಆಶ್ಚರ್ಯಚಕಿತರನ್ನಾಗಿಸಿದ್ದಾರೆ. ಅಂತಹ ಸಾಧಕರಿಗೆ ಕಲಬುರಗಿ ಬ್ರಹ್ಮಶ್ರೀ ನಾರಾಯಣ ಗುರು ಚಾರಿಟೇಬಲ್ ಟ್ರಸ್ಟ್ ನ ಅಧ್ಯಕ್ಷ ಹಾಗೂ ಉದ್ಯಮಿಗಳಾದ ವೆಂಕಟೇಶ ಎಂ ಕಡೇಚೂರ್ ಅಭಿನಂದನೆ ಸಲ್ಲಿಸಿದ್ದಾರೆ.




ಯಾದಗಿರಿಯ ಸಂದೀಪ್ ಬಾಡದ್ ರಾಜ್ಯದಲ್ಲಿ ಎರಡನೇ ಹಾಗೂ ಅಖಿಲ ಭಾರತ ಮಟ್ಟದಲ್ಲಿ 82 ನೇ ಸ್ಥಾನ , ಡಾ.ನಿವೇದಿತಾ ಬಾವಿಮನಿ ರಾಷ್ಟ್ರೀಯ ಮಟ್ಟದಲ್ಲಿ 469ನೇ ಸ್ಥಾನ, ಬಸವರಾಜ್ ಜವಳಿ ರಾಷ್ಟ್ರೀಯ ಮಟ್ಟದಲ್ಲಿ 664ನೇ ಸ್ಥಾನ ಹಾಗೂ ಚಂದ್ರಶೇಖರ್ 880ನೇ ಸ್ಥಾನ ಪಡೆದು ಕಲ್ಯಾಣ ಕರ್ನಾಟಕಕ್ಕೆ ಹೆಮ್ಮೆ ತಂದಿದ್ದಾರೆ. ತನ್ನ ತವರು ಜಿಲ್ಲೆಯಾದ ಯಾದಗಿರಿಯ ಈ ಹೆಮ್ಮೆಯ ಸಾಧಕರು ಆಡಳಿತ ಕ್ಷೇತ್ರದಲ್ಲಿ ಕೀರ್ತಿ ಪಡೆದು ನಾಡಿನ ಹಾಗೂ ರಾಷ್ಟ್ರದ ಹೆಸರನ್ನು ಇನ್ನಷ್ಟು ಎತ್ತರಕ್ಕೆ ಏರಿಸಲಿ.

ಈ ಸಾಧಕರ ಸಾಧನೆಯು ಇತರರಿಗೆ ಪ್ರೇರಣೆಯಾಗಲಿ ಮತ್ತು ಮುಂದಿನ ದಿನಗಳಲ್ಲಿ ಇನ್ನಷ್ಟು ಐಎಎಸ್ ಐಪಿಎಸ್, ಐಆರ್ ಎಸ್ ಮುಂತಾದ ಹುದ್ದೆ ಅಲಂಕರಿಸಲಿ ಎಂದು ವೆಂಕಟೇಶ ಕಡೇಚೂರ್ ಅಭಿನಂದನೆ ವ್ಯಕ್ತಪಡಿಸಿದ್ದಾರೆ.

# ಕಾಡಾನೆ ದಾಳಿಗೆ ಕಂಗಾಲು: ಆನೆಗುಡ್ಡ ಗಣಪತಿ ಮೊರೆಹೋದ ಶಾಸಕ ರಾಜೇಗೌಡ

**ಚಿಕ್ಕಮಗಳೂರು, ಮಾ.7:** ಶೃಂಗೇರಿ ವಿಧಾನಸಭಾ ಕ್ಷೇತ್ರದಲ್ಲಿ ಮಿತಿಮೀರಿದ ಕಾಡಾನೆ ಹಾವಳಿಯಿಂದ ಕಂಗಾಲಾಗಿರುವ ಶಾಸಕ ಟಿ.ಡಿ. ರಾಜೇಗೌಡ ಅವರು ಆನೆಗುಡ್ಡೆ ಗಣಪತಿ ದೇವರ ಮೊರೆಹೋಗಿದ್ದಾರೆ. ಕಳೆದ ಒಂದು ವರ್ಷದಲ್ಲಿ ಕಾಡಾನೆ ದಾಳಿಗೆ 9 ಜನ ಬಲಿಯಾಗಿರುವ ಹಿನ್ನೆಲೆಯಲ್ಲಿ ಕಂಗಾಲಾದ ಶಾಸಕ ಪತ್ನಿ ಸಮೇತ ಉಡುಪಿ ಜಿಲ್ಲೆ ಕುಂದಾಪುರ ತಾಲೂಕಿನ ಆನೆಗುಡ್ಡೆ ಗಣಪತಿ ದೇವಸ್ಥಾನಕ್ಕೆ ಭೇಟಿ ನೀಡಿ ಕ್ಷೇತ್ರದಲ್ಲಿ ಕಾಡಾನೆ ದಾಳಿಯಿಂದ ಭಾರೀ ಪ್ರಮಾಣದ ಬೆಳೆ ಹಾನಿ, ಪ್ರಾಣ ಹಾನಿಯಾಗಿದ್ದು, ಇನ್ನು ಮುಂದಿನ ದಿನಗಳಲ್ಲಿ ಕಾಡಾನೆ ಹಾವಳಿ ಆಗದಂತೆ ದೇವರಲ್ಲಿ ವಿಶೇಷ ಪ್ರಾರ್ಥನೆ ಸಲ್ಲಿಸಿದರು.ದೇವಸ್ಥಾನ ಭೇಟಿ ವೇಳೆ ಶಾಸಕರ ಜೊತೆ ಕೈ ಕಾರ್ಯಕರ್ತರು ಜೊತೆಗಿದ್ದರು.



# ಉತ್ತರ ಕರ್ನಾಟಕಕ್ಕೆ ಸಂಚಾರ ಕ್ರಾಂತಿ, ವಿಜಯಪುರ–ಹುಬ್ಬಳ್ಳಿ ರಾಷ್ಟ್ರೀಯ ಹೆದ್ದಾರಿ–52 ದ್ವಿಪಥ ಅಭಿವೃದ್ಧಿ ಆರಂಭ!

**ವಿಜಯಪುರ, ಮಾ. 7:** ಹುಬ್ಬಳ್ಳಿ ಮತ್ತು ವಿಜಯಪುರವನ್ನು ಸಂಪರ್ಕಿಸುವ ರಾಷ್ಟ್ರೀಯ ಹೆದ್ದಾರಿ (ಎನ್‌ಎಚ್–52) ಈಗ ದ್ವಿಪಥವಾಗುತ್ತಿದೆ. ಅಂದರೆ ಚತುಷ್ಪಥ ರಸ್ತೆ ರೂಪದಲ್ಲಿ ಅಭಿವೃದ್ಧಿ ಪಡಲಾಗುತ್ತಿದೆ. ಈ ಯೋಜನೆಯನ್ನು ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರ (ಎನ್‌ಎಚ್‌ಎಐ) ಪ್ರಾರಂಭಿಸಿದ್ದು, ಕೇಂದ್ರ ಸರ್ಕಾರದ ಭೂಸಾರಿಗೆ ಮತ್ತು ರಸ್ತೆ ಸಾರಿಗೆ ಮಂತ್ರಾಲಯ ಇದರ ಮೇಲ್ವಿಚಾರಣೆಯನ್ನು ನಿಭಾಯಿಸುತ್ತಿದೆ. ಈ ಯೋಜನೆಯ ಅಡಿಯಲ್ಲಿ ನರಗುಂದ ಮತ್ತು ನವಲಗುಂದ ಬೈಪಾಸ್‌ಗಳ ನಿರ್ಮಾಣವೂ ಸೇರಿದೆ. ಯೋಜನೆಗೆ ಸಂಬಂಧಿಸಿದ ವಿವರವಾದ ವರದಿ (ಡಿಪಿಆರ್) ಸಿದ್ಧಪಡಿಸಿ ಟೆಂಡರ್ ಕರೆದಿದೆ.



ಹುಬ್ಬಳ್ಳಿ–ವಿಜಯಪುರ ದ್ವಿಪಥ ಹೆದ್ದಾರಿ ಧಾರವಾಡ, ಗದಗ, ಬಾಗಲಕೋಟೆ ಮತ್ತು ವಿಜಯಪುರ ಜಿಲ್ಲೆಗಳ ಮೂಲಕ 199 ಕಿ.ಮೀ ದೂರವನ್ನು ವಿಸ್ತರಿಸುತ್ತದೆ. ಹುಬ್ಬಳ್ಳಿ, ನವಲಗುಂದ, ನರಗುಂದ, ಕೊಣ್ಣೂರು, ಕುಳಗೇರಿ, ಕೆರೂರು, ಗದ್ದನಕೇರಿ, ಬೀಳಗಿ, ಕೊರ್ತಿ, ಕೊಲ್ಹಾರ ಮೂಲಕ ಉತ್ತರ ಕರ್ನಾಟಕವನ್ನು ದಕ್ಷಿಣ ಮಹಾರಾಷ್ಟ್ರದ ಪ್ರಮುಖ ನಗರಗಳೊಂದಿಗೆ ಸಂಪರ್ಕಿಸುತ್ತದೆ. ಇದು 2,317 ಕಿ.ಮೀ ಉದ್ದದ ಎನ್‌ಎಚ್–52 ಉತ್ತರ–ದಕ್ಷಿಣ ಕಾರಿಡಾರ್‌ನ ಪ್ರಮುಖ ಭಾಗವಾಗಿ ಅಭಿವೃದ್ಧಿ ಹೊಂದಲಿದೆ.

ಕೊವಿಡ್–19 ನಂತರ ಈ ಹೆದ್ದಾರಿಯಲ್ಲಿ ವಾಹನಗಳ ಸಂಚಾರವು ಗಮನಾರ್ಹವಾಗಿ ಹೆಚ್ಚಾಗಿದೆ. 2023 ರ ಟ್ರಾಫಿಕ್ ಗಣನೆ ಪ್ರಕಾರ ಬೀಳಗಿ ಕ್ರಾಸ್‌ನಲ್ಲಿ 35,663, ಗದ್ದನ ಕೇರಿ–74,878, ಕೆರೂರು–29,029, ಕುಳಗೇರಿ ಕ್ರಾಸ್–52,648 ಮತ್ತು ನರಗುಂದ–36,998 ವಾಹನಗಳು ಸಂಚರಿಸುತ್ತಿದ್ದವು. 2024 ರ ಜನವರಿ ವರದಿ ಪ್ರಕಾರ, ಈ ಸಂಖ್ಯೆಯಲ್ಲಿ ಇನ್ನೂ ಹೆಚ್ಚಳ ಕಂಡು ಬಂದಿದೆ. ಬೀಳಗಿ–35,786, ಗದ್ದನ ಕೇರಿ–82,691, ಕೆರೂರು–35,796, ಕುಳಗೇರಿ ಕ್ರಾಸ್–57,412 ಮತ್ತು ನರ ಗುಂದ–44,240 ವಾಹನಗಳು ದಿನನಿತ್ಯ ಸಂಚರಿಸುತ್ತಿವೆ. ಈ ಕಾರಣಕ್ಕಾಗಿ ಹೆದ್ದಾರಿ ಮೂಲ ಸೌಕರ್ಯವನ್ನು ಸುಧಾರಿಸಲು ಎನ್‌ಎಚ್‌ಎಐ ಚತುಷ್ಪಥ ಅಭಿವೃದ್ಧಿ ಕೆಲಸವನ್ನು ಕೈಗೆದು ಕೊಂಡಿದೆ. ದ್ವಿಪಥ ರಸ್ತೆ ನಿರ್ಮಾಣವು ವಾಹನ ಸಂಚಾರದ ತೀವ್ರತೆಯನ್ನು ಕಡಿಮೆ ಮಾಡುವುದರೊಂದಿಗೆ, ಪ್ರಯಾಣ ಸಮಯವನ್ನು ಕಡಿಮೆ ಮಾಡುವುದು, ರಸ್ತೆಯ ಸುರಕ್ಷತೆ ಹೆಚ್ಚಿಸುವುದು ಮತ್ತು ವ್ಯಾಪಾರ/ಟಠಝುಣಭಿ ಚಟುವಟಿಕೆಯನ್ನು ಸುಗಮಗೊಳಿಸುವುದಕ್ಕೆ ಸಹಾಯ ಮಾಡುತ್ತದೆ. ನರಗುಂದ ರಾಷ್ಟ್ರೀಯ ಹೆದ್ದಾರಿ ಉಪ ವಿಭಾಗವು ಕೊರ್ತಿ–ಕೊಲ್ಹಾರದಿಂದ ನವಲಗುಂದ ತಾಲ್ಲೂಕಿನ ಬೆಳವಟಿಗಿ ಕ್ರಾಸ್ ವರೆಗಿನ 98 ಕಿ.ಮೀ ರಸ್ತೆಯನ್ನು ಒಳಗೊಂಡಿದೆ.

2024 ರಲ್ಲಿ ಈ ಹೆದ್ದಾರಿಯನ್ನು ಅಧಿಕೃತವಾಗಿ ಎನ್‌ಎಚ್–52 ಎಂದು ಮರುನಾಮಕರಣ ಮಾಡಲಾಗಿದೆ. ಈ ಚತುಷ್ಪಥ ರಸ್ತೆ ಅಭಿವೃದ್ಧಿಯೊಂದಿಗೆ, ಉತ್ತರ ಕರ್ನಾಟಕದಿಂದ ದಕ್ಷಿಣ ಮಹಾರಾಷ್ಟ್ರಕ್ಕೆ ಸಂಪರ್ಕವು ಮತ್ತಷ್ಟು ಸುಗಮವಾಗಲಿದೆ. ಯೋಜನೆಯ ಪೂರ್ಣಗೊಂಡ ಬಳಿಕ, ಕಾರು, ಬಸ್, ಟ್ರಕ್, ಟ್ರ್ಯಾಕ್ಟರ್ ಮತ್ತು ವಿವಿಧ ಭಾರಿ ವಾಹನಗಳ ಸಂಚಾರವು ತ್ವರಿತಗೊಳ್ಳುವುದಲ್ಲದೆ, ರಸ್ತೆಯ ಸುರಕ್ಷತೆ ಮತ್ತು ಪ್ರಯಾಣದ ಅನುಭವವೂ ಹೆಚ್ಚು ಸುಧಾರಿತವಾಗಲಿದೆ.

ಹುಬ್ಬಳ್ಳಿ–ವಿಜಯಪುರ ದ್ವಿಪಥ ರಾಷ್ಟ್ರೀಯ ಹೆದ್ದಾರಿ ಅಭಿವೃದ್ಧಿ ಯೋಜನೆ ಪ್ರಗತಿಯಲ್ಲಿ, ಸ್ಥಳೀಯ ಜನತೆ, ವ್ಯಾಪಾರಸ್ಥರು ಮತ್ತು ಪ್ರಯಾಣಿಕರು ಇದರ ಲಾಭವನ್ನು ಶೀಘ್ರದಲ್ಲಿ ಅನುಭವಿಸಬಹುದು. ಈ ಯೋಜನೆಯಿಂದ ಉತ್ತರ ಕರ್ನಾಟಕದ ವಿವಿಧ ತಾಲ್ಲೂಕುಗಳು ಮತ್ತು ಪ್ರಮುಖ ನಗರಗಳು ಒಟ್ಟುಗೂಡಿ, ರಾಜ್ಯಗಳ ನಡುವಿನ ಸಂಪರ್ಕದ ದೃಷ್ಟಿಯಿಂದ ಪ್ರಮುಖ ಮಾರ್ಗವನ್ನಾಗಿ ಹೊರಹೊಮ್ಮಲಿದೆ.

## ಪ್ರತಿ ಲೀಟರ್ ಹಾಲಿಗೆ 50 ಪೈಸೆ ಹೆಚ್ಚಳ

# ಚಿಮುಲ್‌ನಿಂದ ಹಾಲು ಉತ್ಪಾದಕರಿಗೆ ಯುಗಾದಿ ಕೊಡುಗೆ

**ಚಿಕ್ಕಬಳ್ಳಾಪುರ, ಮಾ.7:** ಜಿಲ್ಲೆಯ ಹಾಲು ಉತ್ಪಾದಕರಿಗೆ ಚಿಕ್ಕಬಳ್ಳಾಪುರ ಜಿಲ್ಲಾ ಹಾಲು ಒಕ್ಕೂಟ ಯುಗಾದಿ ಹಬ್ಬದ ಕೊಡುಗೆಯಾಗಿ ಪ್ರತಿ ಲೀಟರ್‌ಗೆ 50 ಪೈಸೆ ದರ ಹೆಚ್ಚಳ ಮಾಡುವ ಮಹತ್ವದ ನಿರ್ಧಾರ ಕೈಗೊಂಡಿದೆ.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಚಿಮುಲ್ ಅಧ್ಯಕ್ಷ ವಿ.ಮಂಜುನಾಥ್ ರೆಡ್ಡಿ ದರ ಏರಿಕೆಯ ಕುರಿತು ಕೈಗೊಂಡಿರುವ ಆಡಳಿತ ಮಂಡಳಿಯ ನಿರ್ಧಾರವನ್ನು ಪ್ರಕಟಿಸಿದರು. ಕಳೆದ ಜನವರಿಯಿಂದ ಒಂದು ಧರ ಹೆಚ್ಚಳ ಮಾಡಿದ್ದ ಚೀಮುಲ್ ಇದೀಗ ಯುಗಾದಿ ಹಬ್ಬದ ಕೊಡುಗೆಯಾಗಿ ಮುಂದಿನ ಮೇ ತಿಂಗಳ ವರೆಗೂ 50 ಪೈಸೆ ದರ ಹೆಚ್ಚಳ ಮಾಡಿ ಹಾಲು ಉತ್ಪಾದಕರ ನೆರವಿಗೆ ಧಾವಿಸಿದೆ.ಅಲ್ಲದೆ ಚಿಮುಲ್ ಯುಗಾದಿ ಹಬ್ಬದ ಪ್ರಯುಕ್ತ ತನ್ನ ಅಧಿಕಾರಿ ಮತ್ತು ಸಿಬ್ಬಂದಿಗೆ ಬೋನಸ್ ಪ್ರಕಟಿಸಿದೆ.

ಈ ವೇಳೆ ಸುದ್ದಿಗೋಷ್ಠಿಯಲ್ಲಿ ಚೀಮು ನಿರ್ದೇಶಕರಾದ ಕೆ ವಿ ನಾಗರಾಜ್, ಕಾಂತರಾಜ್, ದಿನೇಶ್, ಸುಧಾ, ಕೃಷ್ಣಾರೆಡ್ಡಿ, ಆದಿ ನಾರಾಯಣ್ ರೆಡ್ಡಿ, ಕೈವಾರ ಆವಲಪ್ಪ ಚಿಮುಲ್ ಎಂಡಿ ಡಾ.ಎಸಿ ಶ್ರೀನಿವಾಸ ಗೌಡ ಸೇರಿದಂತೆ ಇದ್ದರು.



# ಕ್ರೀಡಾಂಗಣ ವಿಚಾರವಾಗಿ ರೇಷ್ಮೆ ಕಾರ್ಖಾನೆ ಮುಚ್ಚಲ್ಲ: ಎಂಎಲ್‌ಸಿ ಯತೀಂದ್ರ

**ಮೈಸೂರು, ಮಾ.7:** ಮೈಸೂರು ಜಿಲ್ಲೆ ಟಿ. ನರಸೀಪುರದಲ್ಲಿ ಕ್ರೀಡಾಂಗಣ ನಿರ್ಮಾಣ ವಿಚಾರವಾಗಿ ಯಾವುದೇ ಕಾರಣಕ್ಕೂ ರೇಷ್ಮೆ ಕಾರ್ಖಾನೆಯನ್ನು ಮುಚ್ಚುವುದಿಲ್ಲ ಎಂದು ಮೈಸೂರಿನಲ್ಲಿ ಎಂಎಲ್‌ಸಿ ಯತೀಂದ್ರ ಸಿದ್ದರಾಮಯ್ಯ ಹೇಳಿಕೆ ನೀಡಿದರು.



ರೇಷ್ಮೆ ಕಾರ್ಖಾನೆಯಲ್ಲಿ ನಮ್ಮ ಕ್ಷೇತ್ರದ ಜನರೇ ಕೆಲಸ ಮಾಡುತ್ತಿದ್ದಾರೆ. ನಾವು ಯಾಕೆ ರೇಷ್ಮೆ ಕಾರ್ಖಾನೆ ಮುಚ್ಚುತ್ತೇವೆ. ಸುಮ್ಮನೆ ಕೆಲವರು ಸುಳ್ಳು ಹೇಳಿ ಗೊಂದಲ ಸೃಷ್ಟಿ ಮಾಡುತ್ತಿದ್ದಾರೆ. ಈ ವಿಚಾರವಾಗಿ ಅಧಿಕಾರಿಗಳಿಂದ ತಾಂತ್ರಿಕ ವರದಿ ಕೇಳಿದ್ದೇವೆ. ಕ್ರೀಡಾಂಗಣದಿಂದ ತೊಂದರೆಯಾದರೆ ಬೇರೆ ಜಾಗ ಹುಡುಕುತ್ತೇವೆ. ನಮಗೆ ಕಾರ್ಖಾನೆಯೂ ಮುಖ್ಯ ಕ್ರೀಡಾಂಗಣವು ಮುಖ್ಯವಾಗಿದೆ. ಕ್ರೀಡಾಂಗಣಕ್ಕಾಗಿ ಕಾರ್ಖಾನೆಯನ್ನು ಎಂದಿಗೂ ಮುಚ್ಚುವುದಿಲ್ಲ ಎಂದು ಮೈಸೂರಿನಲ್ಲಿ ಯತಿಂದ್ರ ಸಿದ್ಧರಾಮಯ್ಯ ಹೇಳಿಕೆ ನೀಡಿದರು.

## ಸಂಕಷ್ಟಕ್ಕೆ ಸಿಲುಕಿದ ಕಬ್ಬು ಬೆಳೆಗಾರರು,

# ಕಾರ್ಖಾನೆಗಳಿಗೆ ಸಿಹಿಕೊಟ್ಟ ಅನ್ನದಾತರ ಬಾಯಿಗೆ ಕಹಿ

**ಬೀದರ್, ಮಾ.7:** ಕಬ್ಬು ಬೆಳೆದು ಖುಷಿಯಿಂದ ಸಕ್ಕರೆ ಕಾರ್ಖಾನೆಗೆ ರೈತರು ಕಬ್ಬು ಹಾಕುತ್ತಿದ್ದಾರೆ. ಆದರೆ ಸಕ್ಕರೆ ಕಾರ್ಖಾನೆಯಿಂದ ಬರಬೇಕಾದ ಹಣ ಮಾತ್ರ ರೈತರ ಕೈ ಸೇರುತ್ತಿಲ್ಲ. ವರ್ಷವಿಡೀ ಕಷ್ಟಪಟ್ಟು ಬೆಳೆದ ಕಬ್ಬನ್ನ ಕಾರ್ಖಾನೆಗೆ ಹಾಕಿದರೆ ಕಾರ್ಖಾನೆ ಮಾಲೀಕರು ಮಾತ್ರ ರೈತರಿಗೆ ಹಣ ಕೊಡದೆ ಸತಾಯಿಸು ತ್ತಿದ್ದಾರೆ. ಕಬ್ಬು ಹಾಕಿದ ರೈತರಿಗೆ ಹಣ ಜಮೆ ಮಾಡಿ ಎಂದು ಜಿಲ್ಲಾಧಿಕಾರಿಗಳು ನೋಟಿಸ್ ಕೊಟ್ಟರೂ ಸಕ್ಕರೆ ಕಾರ್ಖಾನೆಯವರು ಮಾತ್ರ ಹಣ ಹಾಕುತ್ತಿಲ್ಲ. ಹೀಗಾಗಿ ಅನ್ನದಾತರು ಹಣಕ್ಕಾಗಿ ಪರದಾಡುವಂತಾಗಿದೆ.



ಬೀದರ್ ಜಿಲ್ಲೆಯಲ್ಲಿ ಐದು ಸಕ್ಕರೆ ಕಾರ್ಖಾನೆಗಳಿದ್ದು, ಈವರೆಗೆ ಐದು ಸಕ್ಕರೆ ಕಾರ್ಖಾನೆಗಳಿಂದ 15 ಲಕ್ಷ 44 ಸಾವಿರ ರೂ ಮ್ಯಾಟ್ರಿಕ್ ಟನ್ ಕಬ್ಬು ನುರಿಸಲಾಗಿದೆ. 594 ಕೋಟಿ 63 ಲಕ್ಷ ರೂ ರೈತರ ಬ್ಯಾಂಕ್ ಖಾತೆಗೆ ಸಕ್ಕರೆ ಕಾರ್ಖಾನೆಯವರು ಹಾಕಬೇಕಾಗಿದೆ. ಆದರೆ 375 ಕೋಟಿ 72 ರೂ ಮಾತ್ರ ರೈತರ ಖಾತೆಗೆ ಜಮೆ ಆಗಿದೆ. ಉಳಿದ 252 ಕೋಟಿ 90 ಲಕ್ಷ ರೂ ಹಣವನ್ನು ರೈತರ ಬ್ಯಾಂಕ್ ಖಾತೆಗೆ ಹಾಕದೆ ಸಕ್ಕರೆ ಕಾರ್ಖಾನೆಯವರು ಮೀನಾಮೇಷ ಎಣಿಸುತ್ತಿದ್ದಾರೆ.

ಸಾಲ–ಸೋಲಾ ಮಾಡಿ ಬೆಳೆದ ಕಬ್ಬನ್ನ ಮಾರಾಟ ಮಾಡಿದರೇ ಅದರ ಹಣವನ್ನ ಮಾತ್ರ ರೈತರಿಗೆ ಕೊಡುತ್ತಿಲ್ಲ. ಇತ್ತ ರೈತರು ಮತ್ತೆ ಸಾಲದ ಮೊರೆ ಹೋಗುವ ಮೂಲಕ ಹೊಟ್ಟೆತುಂಬಿಸಿಕೊಳ್ಳುತ್ತಿದ್ದಾರೆ. ವರ್ಷವಿಡೀ ಕಬ್ಬನ್ನ ಬೆಳೆದಿದ್ದೇವೆ. ಗೊಬ್ಬರ, ಬೀಜ ಹೀಗೆ ಹತ್ತಾರು ಕಡೆಗಳಲ್ಲಿ ಸಾಲ ಮಾಡಿಕೊಂಡಿದ್ದೇವೆ. ಕಬ್ಬು ಮಾರಾಟ ಮಾಡಿದ ಹಣದಲ್ಲಿ ಸಾಲ ತೀರಿಸಬೇಕು ಎಂದುಕೊಂಡು ಸಾಲ ಮಾಡಿದ್ದೇವೆ, ಆದರೆ ಸಕ್ಕರೆ ಕಾರ್ಖಾನೆಯವರು ಮಾತ್ರ ರೈತರಿಗೆ ಕೊಡಬೇಕಾದ ಹಣ ಕೊಡುತ್ತಿಲ್ಲ. ಹೀಗಾಗಿ ರೈತರು ಕಾರ್ಖಾನೆಗೆ ಅಲೆದಾಡುವ ಪರಿಸ್ಥಿತಿ ನಿರ್ಮಾಣವಾಗಿದೆ ಎಂದು ರೈತ ಮಲ್ಲಿಕಾರ್ಜುನ್ ಅಳಲು ತೋಡಿ ಕೊಂಡಿದ್ದಾರೆ.

ಇನ್ನು ಯಾವುದೇ ಸಕ್ಕರೆ ಕಾರ್ಖಾನೆಗೆ ರೈತರು ಕಬ್ಬು ಹಾಕಿದರೆ ಎರಡು ವಾರದಲ್ಲಿ ರೈತರಿಗೆ ಕೊಡಬೇಕಾದ ಹಣವನ್ನ ಪಾವತಿ ಮಾಡಬೇಕು ಎಂಬ ನಿಯಮವಿದೆ, ಆದರೆ ಕಾರ್ಖಾನೆಗೆ ಹಣ ಹಾಕಿ ತಿಂಗಳು ಕಳೆದರೂ ರೈತರಿಗೆ ಕೊಡಬೇಕಾದ ಹಣ ಕೊಡುತ್ತಿಲ್ಲ. ಹೀಗಾಗಿ ರೈತರು ಸಾಲ ತಂದು ಕಡಲೆ, ಕುಸುಬಿ, ಜೋಳವನ್ನ ನಾಟಿ ಮಾಡಿದ್ದಾರೆ. ರಸಗೊಬ್ಬರ ಕೊಳ್ಳಲು ಹಣವಿಲ್ಲ,

ಹೀಗಾಗಿ ಬೇಗ ರೈತರಿಗೆ ಕೊಡಬೇಕಾದ ಹಣವನ್ನ ಎರಡು ದಿನದಲ್ಲಿ ಕೊಡದೆ ಹೋದರೆ ಪ್ರತಿಭಟನೆ ಮಾಡುವ ಎಚ್ಚರಿಕೆಯನ್ನು ನೀಡಿದ್ದಾರೆ.

## ರೈತರ ಬೆನ್ನಿಗೆ ನಿಂತ ಬೀದರ್ ಜಿಲ್ಲಾಧಿಕಾರಿ

ರೈತರ ಬೆನ್ನಿಗೆ ಬೀದರ್ ಜಿಲ್ಲಾಧಿಕಾರಿ ನಿಂತುಕೊಂಡಿದ್ದು, ಎರಡು ವಾರದೊಳಗಾಗಿ ರೈತರಿಗೆ ಬಾಕಿ ಹಣ ಕೊಡದಿದ್ದರೇ ತಕ್ಕ ಬೆಲೆ ತೆರಬೇಕಾಗುತ್ತದೆ ಎಂದು ಎಚ್ಚರಿಕೆ ನೀಡಿದ್ದಾರೆ. ಜಿಲ್ಲಾಧಿಕಾರಿಯ ಈ ನಡೆಯಿಂದ ರೈತರು ಖುಷಿ ಪಟ್ಟಿದ್ದಾರೆ. ಇದರ ಜೊತೆಗೆ ಜಿಲ್ಲಾಡಳಿತ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಕೂಡ ರೈತರಿಗೆ ಹಣ ಪಾವತಿಸುವಂತೆ ಒತ್ತಡ ಹೇರಿದ್ದಾರೆ.

ಇಷ್ಟೆಲ್ಲಾ ಆದರೂ ಇನ್ನು ರೈತರಿಗೆ ಹಣ ಮಾತ್ರ ಸಂದಾಯ ಮಾಡಲು ಕಾರ್ಖಾನೆಯ ಮಾಲೀಕರು ತಯಾರಿಲ್ಲ. ಇದು ಸಹಜವಾಗಿಯೇ ರೈತರ ಆಕ್ರೋಶಕ್ಕೆ ಕಾರಣವಾಗಿದ್ದು, ಶೀಘ್ರದಲ್ಲಿ ರೈತರ ಹಣ ಜಿಲ್ಲಾಡಳಿತ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರು ಕಾಳಜಿವಹಿಸಿ ನಮಗೆ ಸೇರಬೇಕಾದ ಹಣವನ್ನ ಕೊಡಿಸಿ ಎಂದು ಮನವಿ ಮಾಡುತ್ತಿದ್ದಾರೆ.

ಈ ಬಗ್ಗೆ ಆಹಾರ ಇಲಾಖೆಯ ಅಧಿಕಾರಿ ಪ್ರವೀಣ್ ಬರಗಲ್ ಪ್ರತಿಕ್ರಿಯಿಸಿದ್ದು, ಈಗಾಗಲೇ ಜಿಲ್ಲಾಧಿಕಾರಿಗಳು ಎಲ್ಲಾ ಸಕ್ಕರೆ ಕಾರ್ಖಾನೆಗಳ ಆಡಳಿತ ಮಂಡಳಿಯವರ ಜೊತೆಗೆ ಸಭೆ ಮಾಡಿದ್ದು, ರೈತರಿಗೆ ಆದಷ್ಟು ಬೇಗ ಹಣ ಹಾಕಿ ಎಂದು ಸೂಚನೆ ಕೊಟ್ಟಿದ್ದಾರೆ ಎಂದು ಮಾಹಿತಿ ನೀಡಿದ್ದಾರೆ.

ಬೀದರ್ ಜಿಲ್ಲೆಯಲ್ಲಿ ಸಾವಿರಾರು ರೈತರು ಕಬ್ಬು ಬೆಳೆದು ಸಕ್ಕರೆ ಕಾರ್ಖಾನೆಯವರಿಗೆ ಕೊಟ್ಟು ಹಣ ಪಡೆಯಲಾಗದೆ ಕೈಕೈ ಹಿಚಿಕಿಕೊಳ್ಳುವಂತಹ ಸ್ಥಿತಿ ನಿರ್ಮಾಣವಾಗಿದೆ. ಇತ್ತ ಕಬ್ಬು ಬಿತ್ತನೆಯ ಸಮಯದಲ್ಲಿ ಕಬ್ಬು ಹಾಕಲು ಸಾವಿರಾರು ರೂ ಸಾಲ ಮಾಡಿದ ಹಣವನ್ನ ಕೂಡ ರೈತರು ಸಾಲಗಾರರಿಗೆ ಕೊಡಲು ಸಾಧ್ಯವಾಗುತ್ತಿಲ್ಲ. ಇತ್ತ ಕಬ್ಬು ತೆಗೆದುಕೊಂಡು ಹೋದ ಕಾರ್ಖಾನೆಯವರು ರೈತರಿಗೆ ಕೊಡಬೇಕಾದ ಹಣ ಕೊಡುತ್ತಿಲ್ಲ. ಇದು ಸಹಜವಾಗಿಯೇ ರೈತರನ್ನ ಸಂಕಷ್ಟಕ್ಕೆ ತಳ್ಳಿದಂತಾಗಿದೆ.

# ಹಿರಿಯ ಪತ್ರಕರ್ತ ವಿನಾಯಕ ದೇಶಪಾಂಡೆ ವಿಧಿವಶ

**ಬೆಂಗಳೂರು, ಮಾ.7:** ನಾಡಿನ ಹಿರಿಯ ದಿನಪತ್ರಿಕೆ ಸಂಯುಕ್ತ ಕರ್ನಾಟಕದಲ್ಲಿ ಕ್ರೀಡಾ ವಿಭಾಗದಲ್ಲಿ ಸುದೀರ್ಘ ಕಾಲ ಸೇವೆ ಸಲ್ಲಿಸಿದ್ದ ವಿನಾಯಕ ದೇಶಪಾಂಡೆ ಅವರು ಹೃದಯಘಾತದಿಂದ ಗುರುವಾರ ನಿಧನರಾಗಿದ್ದಾರೆ. ಅವರಿಗೆ 71 ವರ್ಷ ವಯಸ್ಸಾಗಿತ್ತು.



ಅನಾರೋಗ್ಯದಿಂದ ಚೇತರಿಸಿಕೊಂಡಿದ್ದ ವಿನಾಯಕ್, ಬೆಂಗಳೂರಿನಲ್ಲಿ ಪುತ್ರನೊಂದಿಗೆ ನೆಲೆಸಿದ್ದರು. ಅವರಿಗೆ ಪತ್ನಿ, ಪುತ್ರ ಹಾಗೂ ಅಪಾರ ಬಂಧು– ಬಳಗ ಇದ್ದಾರೆ.

ನವನಾಡು, ವಿಶಾಲ ಕರ್ನಾಟಕ, ಪತ್ರಿಕೋದ್ಯಮದ ದಿಗ್ಗಜ ಪಾಟೀಲ ಪುಟ್ಟಪ್ಪ ಅವರ ವಿಶ್ವವಾಣಿ(ಹುಬ್ಬಳ್ಳಿ) ಯಲ್ಲಿ ಕಾರ್ಯ ನಿರ್ವಹಿಸಿ, 2 0 ವರ್ಷಗಳ ಹಿಂದೆ ಸಂಯುಕ್ತ ಕರ್ನಾಟಕ ಸೇರಿ, ಪ್ರಬುದ್ಧ ವರದಿಗಳು, ವಿಶೇಷ ಲೇಖನಗಳ ಮೂಲಕ ಕ್ರೀಡಾ ಪುಟದ ಅಂದ ಹೆಚ್ಚಿಸಿದ್ದರು. ಕ್ರಿಕೆಟ್ ವಿಶ್ವಕಪ್ ಸಂದರ್ಭಗಳಲ್ಲಿ ವಿಶೇಷ ಪುಟಗಳನ್ನು ರೂಪಿಸುವುದರಲ್ಲಿ ವಿನಾಯಕ್ ದೇಶಪಾಂಡೆ ಸಿದ್ಧಹಸ್ತರಾಗಿದ್ದರು.

ಎರಡು ವರ್ಷಗಳ ಹಿಂದೆಯಷ್ಟೇ ಸೇವೆಯಿಂದ ನಿವೃತ್ತರಾಗಿದ್ದರು. ಬನ್ನೇರುಘಟ್ಟದ ಚಿತಾಗಾರದಲ್ಲಿ ಗುರುವಾರ ದುಃಖತಪ್ತ ಬಂಧು– ಮಿತ್ರರ ಸಮ್ಮುಖದಲ್ಲಿ ಅಂತಿಮ ಸಂಸ್ಕಾರ ನಡೆಯಿತು.

# ಅಮೆರಿಕ, ಇಸ್ರೇಲ್ ಯುದ್ಧೋನ್ಮಾದ: ಸಂಘರ್ಷಕ್ಕೆ ಒಂದು ವಾರ ಪೂರ್ಣ

**ನವದೆಹಲಿ,ಮಾ.7:** ಇರಾನ್ ವಿರುದ್ಧ ಇಸ್ರೇಲ್ ಮತ್ತು ಅಮೆರಿಕ ನಡುವೆ ನಡೆಯುತ್ತಿರುವ ಸಂಘರ್ಷಕ್ಕೆ ಒಂದು ವಾರ ಪೂರ್ಣವಾಗಿದೆ. ಕಳೆದ ಶನಿವಾರ ಶುರುವಾದ ಮೂರು ರಾಷ್ಟ್ರಗಳ ನಡುವಿನ ದಾಳಿ-ಪ್ರತಿದಾಳಿ ಮೂರನೇ ಮಹಾಯುದ್ಧದ ಸಂಘರ್ಷದತ್ತ ವಿಶ್ವವನ್ನು ಕೊಂಡಯ್ಯುತ್ತಿದೆ. ಯುದ್ಧೋನ್ಮಾದ ಸ್ಥಿತಿಯಲ್ಲಿರುವ ಅಮೆರಿಕಾ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಮತ್ತು ಇಸ್ರೇಲ್ ಪ್ರಧಾನಿ ಬೆಂಜಮಿನ್ ನೆತನ್ಯಾವು ಪಟ್ಟು ಸಡಿಲಿಸುತ್ತಿಲ್ಲ, ಪರಿಣಾಮ ಇನ್ನಷ್ಟು ಸುಧೀರ್ಘ ಈ ಸಂಘರ್ಷ ಮುಂದುವರಿಯುವ ಲಕ್ಷಣ ಕಂಡುಬರುತ್ತಿದೆ.

ತನ್ನ ವಿರುದ್ಧ ದಾಳಿಗಳನ್ನು ನಡೆಸುತ್ತಿರುವ ಅಮೇರಿಕಾರ ವಿರುದ್ಧ ಪ್ರತಿಕಾರ ತೀರಿಸಿಕೊಳ್ಳುವ ಕಿಚ್ಚಿನಲ್ಲಿರುವ ಇರಾನ್ ಸೌದಿ ಮತ್ತು ಇರಾಕ್‌ನ ಕಚ್ಚಾತೈಲ ನಿಕ್ಷೇಪ ಗುರಿ ಮಾಡಿ ದಾಳಿ ನಡೆಸಿದೆ. ಸೌದಿಯ ಎಂಪ್ಟಿ ಕ್ವಾರ್ಟರ್ ಮರುಭೂಮಿಯಲ್ಲಿರುವ ಶೈಬಾ ತೈಲ ನಿಕ್ಷೇಪದ ನಾಲ್ಕು ಡ್ರೋನ್‌ಗಳ ಹಾರಿಸಿದೆ. ಆದರೆ ಈ ದಾಳಿಯ ಯತ್ನವನ್ನು ಸೌದಿ ವಿಫಲಗೊಳಿಸಿದೆ.

ಸೌದಿ ಮಾದರಿಯಲ್ಲೇ ಇರಾಕ್ನ ದಕ್ಷಿಣ ಬಸ್ರಾ ಪ್ರಾಂತ್ಯದಲ್ಲಿರುವ ತೈಲ ನಿಕ್ಷೇಪಗಳು ಮೇಲೂ ಇರಾನ್ ದಾಳಿ ನಡೆಸಿದೆ. ಇಲ್ಲಿ ಅಮೇರಿಕಾ ಗುತ್ತಿಗೆ ಆಧಾರದ ಮೇಲೆ ಕಚ್ಚಾತೈಲ ತೆಗೆಯುತ್ತಿರುವ ಹಿನ್ನಲೆ ತೈಲ ನಿಕ್ಷೇಪ ಗುರಿಯಾಗಿಸಿಕೊಂಡು ಇರಾನ್ ದಾಳಿ ನಡೆಸಿದೆ.

ಒಂದು ಕಡೆ ಇರಾನ್ ದಾಳಿ ಮಾಡುತ್ತಿದ್ದರೆ ಅಮೆರಿಕಾ ಏನು ಹಿಂದೆ ಬಿದ್ದಿಲ್ಲ ಅಮೆರಿಕಾ ಕಳೆದೊಂದು ವಾರದಲ್ಲಿ ಇರಾನ್ನ 3,000 ಗುರಿಗಳ ಮೇಲೆ ದಾಳಿ ನಡೆಸಿದೆ, ಅಲ್ಲದೇ ಇರಾನ್ನ ಇರಾನ್ ನ 43 ಯುದ್ಧನೌಕೆಗಳ ನಾಶ ಮಾಡಿದೆ. ಈ ಬಗ್ಗೆ ಯುಎಸ್ ಸೆಂಟ್ರಲ್ ಕಮಾಂಡ್ ನಿಂದ ವಿಡಿಯೋ ಬಿಡುಗಡೆ ಮಾಡಿದ್ದು ಇನ್ನಷ್ಟು ದಾಳಿ ಹೆಚ್ಚಿಸುವ ಎಚ್ಚರಿಕೆ ನೀಡಿದೆ.

### ಶಸ್ತ್ರಾಸ್ತ್ರಗಳ ಉತ್ಪಾದನೆ ನಾಲ್ಕು ಪಟ್ಟು ಹೆಚ್ಚಳ

ಇರಾನ್ ಜೊತೆಗಿನ ಯುದ್ಧದ ನಡುವೆ ಅಮೇರಿಕಾ ನಾಲ್ಕು ಪಟ್ಟು ಹೆಚ್ಚು ಶಸ್ತ್ರಾಸ್ತ್ರಗಳ ಉತ್ಪಾದನೆಗೆ ಮುಂದಾಗಿದೆ. ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅಮೆರಿಕದ ಪ್ರಮುಖ ರಕ್ಷಣಾ ತಯಾರಕರು



ಶಸ್ತ್ರಾಸ್ತ್ರ ಉತ್ಪಾದಕರಿಗೆ ನಿರ್ದೇಶನ ನೀಡಿದೆ. ಇದರ ಜೊತೆಗೆ ಉತ್ಪಾದನೆ ಹೆಚ್ಚಿಸುವುದಲ್ಲದೇ ಇಸ್ರೇಲ್‌ಗೂ ಶಸ್ತ್ರಾಸ್ತ್ರಗಳನ್ನು ಪೂರೈಸಲು ಅಮೆರಿಕಾ ಮುಂದಾಗಿದೆ. ಸುಮಾರು 151.8 ದಶಲಕ್ಷ ಡಾಲರ್ ಮೌಲ್ಯದ ಶಸ್ತ್ರಾಸ್ತ್ರಗಳನ್ನು ಮತ್ತು ಮಿಲಿಟರಿ ನೆರವಿನ ಮಾರಾಟಕ್ಕೆ ಅಮೆರಿಕ ಅನುಮೋದನೆ ನೀಡಿದೆ. ಅಮೆರಿಕದ ವಿದೇಶಾಂಗ ಇಲಾಖೆ ನೀಡಿದ ಅನುಮೋದನೆಯನ್ನು ತುರ್ತು ಮಾರಾಟ ಎಂದು ವರ್ಗೀಕರಿಸಲಾಗಿದೆ. ಅಮೆರಿಕದ ವಿದೇಶಾಂಗ ಕಾರ್ಯದರ್ಶಿ ಮಾರ್ಕೊ ರುಬಿಯೊ ಮಾರಾಟದ ತುರ್ತುಸ್ಥಿತಿಯನ್ನು ವಿವರಿಸಿದ್ದಾರೆ. ಇದರಿಂದ ಈ ಯುದ್ಧದ ಸನ್ನಿವೇಶ ಇನ್ನಷ್ಟು ದಿನಗಳ ಮುಂದುವರಿಯುವ ಸಾಧ್ಯತೆಗಳಿದೆ.

### 1500ಕ್ಕೂ ಅಧಿಕ ಜನರು ಸಾವು

**ಕಳೆದ ಎಂಟು ದಿನಗಳಿಂದ ನಡೆಯುತ್ತಿರುವ ದಾಳಿಗಳಲ್ಲಿ ಇರಾನ್ ಮತ್ತು ಲೆಬನಾನ್ ನಲ್ಲಿ ಅತಿಹೆಚ್ಚು ಪ್ರಾಣಹಾನಿಯಾಗಿದೆ. ಎಂಟು ದಿನಗಳಲ್ಲಿ ಇರಾನ್ನಲ್ಲಿ ಕನಿಷ್ಠ 1,332 ಜನರು ಸಾವನ್ನಪ್ಪಿದ್ದಾರೆ. ಇರಾನ್‌ನ ಡ್ರೋನ್ ಸಂಗ್ರಹಣಾ ಕೇಂದ್ರಗಳು ಸೇರಿದಂತೆ 400 ಕ್ಕೂ ಹೆಚ್ಚು ಗುರಿಗಳ ಮೇಲೆ ಇಸ್ರೇಲ್ ದಾಳಿ ನಡೆಸಿದೆ. ಇರಾನ್ನ ಕ್ರಾಂತಿಕಾರಿ ಪಡೆಗಳಿಂದ 23 ಹಂತದ ಪ್ರತಿದಾಳಿ ನಡೆದಿದೆ. ಲೆಬನಾನ್‌ನಲ್ಲಿ ಸೋಮವಾರದಿಂದ 217 ಜನರು ಸಾವನ್ನಪ್ಪಿದ್ದಾರೆ ಮತ್ತು 798 ಜನರು ಗಾಯಗೊಂಡಿದ್ದಾರೆ. ಕಳೆದ ನೂರು ಗಂಟೆಗಳಲ್ಲಿ ಲೆಬನಾನ್ ಗಡಿಯಲ್ಲಿ 30,000 ಜನರು ಸ್ಥಳಾಂತರಗೊಂಡಿದ್ದಾರೆ.**

### ತಲೆನೋವಾದ ಇರಾನ್ ಡ್ರೋನ್

ಇರಾನ್ ಅತಂತ್ಯ ಕಡಿಮೆ ಬಜೆಟ್ ನಲ್ಲಿ ತಯಾರಿಸಿರುವ ಡ್ರೋನ್ ಗಳು ಅಮೆರಿಕಾಗೆ ದೊಡ್ಡಹಾನಿ ಮಾಡುತ್ತಿವೆ. ಇರಾನ್ ಡ್ರೋನ್ ಗಳನ್ನು ಭೇದಿಸಲು ಅಮೆರಿಕಾ ಸೇನೆಗೆ ಸಾಧ್ಯವಾಗುತ್ತಿಲ್ಲ.. ಡ್ರೋನ್ ದಾಳಿಯಿಂದ ಸಮಸ್ಯೆ ಎದುರಿಸುತ್ತಿರುವ ಅಮೆರಿಕಾ ಡ್ರೋನ್ ದಾಳಿ ತಡೆಯಲು ಉಕ್ರೇನ್ ಮೊರೆ ಹೋಗಿದೆ. ಅಲ್ಲದೇ ಮಧ್ಯಪ್ರಾಚ್ಯದಲ್ಲಿ ಸುಧಾರಿತ ಡ್ರೋನ್ ವಿರೋಧಿ ರಕ್ಷಣಾ ವ್ಯವಸ್ಥೆ ಅಳವಡಿಕೆಗೂ ಅಮೇರಿಕಾ ಮುಂದಾಗಿದೆ.

ಇದರ ಜೊತೆಗೆ ಇರಾನ್ ವಿರುದ್ಧ ದಾಳಿಗೆ ಅಮೇರಿಕಾ ಎಐ ಬಳಸ್ತಿದೆ ಎನ್ನಲಾಗುತ್ತಿದೆ. ಮಾವೆನ್ ಸ್ಮಾರ್ಟ್ ಸಿಸ್ಟಮ್ ತಂತ್ರಜ್ಞಾನ ಬಳಕೆ ಮಾಡುತ್ತಿದ್ದು ಇದು ಅಮೆರಿಕಾದ ಸಶಸ್ತ್ರ ಪಡೆಗಳಿಗೆ ನಿರ್ಣಾಯಕ ಸಾಧನವಾಗಿದೆ. ಮೇ 2025 ರ ಹೊತ್ತಿಗೆ 20,000 ಕ್ಕೂ ಹೆಚ್ಚು ಅಮೆರಿಕಾ ಮಿಲಿಟರಿ ಸಿಬ್ಬಂದಿ ಬಳಕೆ ಮಾಡಲಾಗುತ್ತಿದ್ದು ಉಪಗ್ರಹಗಳು ಮತ್ತು ಕಣ್ಗಾವಲು ವ್ಯವಸ್ಥೆಗಳಿಂದ ಸಂಗ್ರಹಿಸಿದ ಗುಪ್ತಚರ ಮಾಹಿತಿ ಬಳಸಿಕೊಂಡು ದಾಳಿ ಮಾಡಲಾಗುತ್ತಿದೆ.

---

## ಗಲ್ಫ್ ದೇಶಗಳ ಕ್ಷಮೆಯಾಚಿಸಿದ ಇರಾನ್ ಅಧ್ಯಕ್ಷ ಮಸೌದ್ ಪೆಜೆಶ್ಕಿಯಾನ್

# ದುಬೈ ವಿಮಾನ ನಿಲ್ದಾಣ ಗುರಿಯಾಗಿಸಿ ಇಸ್ರೇಲ್ ದಾಳಿ

**ಅಬುಧಾಬಿ,ಮಾ.7:** ದುಬೈ ವಿಮಾನ ನಿಲ್ದಾಣವನ್ನು ಗುರಿಯಾಗಿಸಿಕೊಂಡು ಇಸ್ರೇಲ್ ದಾಳಿ ನಡೆಸಿದೆ. ವಿಮಾನ ನಿಲ್ದಾಣದ ಮೇಲ್ಭಾಗದಲ್ಲಿ ಸ್ಫೋಟದ ಶಬ್ದ ಕೇಳಿಬಂದಿದ್ದು, ಬಳಿಕ ಆಕಾಶದಲ್ಲಿ ಹೊಗೆಯ ಮೋಡ ಕಾಣಿಸಿಕೊಂಡಿದೆ.

ಈ ಮಧ್ಯೆ ಯುನೈಟೆಡ್ ಅರಬ್ ಎಮಿರೇಟ್ಸ್ ಕಡೆಗೆ ಬರುತ್ತಿರುವ ಕ್ಷಿಪಣಿ ಹಾಗೂ ಡ್ರೋನ್ ದಾಳಿಗಳಿಗೆ ತನ್ನ ವಾಯು ರಕ್ಷಣಾ ಪಡೆಗಳು ಪ್ರತಿಕ್ರಿಯಿಸುತ್ತಿವೆ ಎಂದು ಯುಎಇ ರಕ್ಷಣಾ ಸಚಿವಾಲಯ ತಿಳಿಸಿದೆ. ಇರಾನ್ ನಿಂದ ಉಡಾಯಿಸಲ್ಪಟ್ಟ ಕ್ಷಿಪಣಿಗಳು ಮತ್ತು ಡ್ರೋನ್‌ಗಳನ್ನು ತಡೆಯುವ ಕಾರ್ಯಾಚರಣೆ ನಡೆಯುತ್ತಿದ್ದು, ಎಮಿರೇಟ್ ನ ವಿವಿಧ ಭಾಗಗಳಲ್ಲಿ ಕೇಳಿಬರುತ್ತಿರುವ ಶಬ್ದಗಳು ಬ್ಯಾಲಿಸ್ಟಿಕ್ ಕ್ಷಿಪಣಿಗಳು ಮತ್ತು ಡ್ರೋನ್‌ಗಳನ್ನು ತಡೆಯುವ ವೇಳೆ ಉಂಟಾಗಿವೆ ಎಂದು ಸಚಿವಾಲಯ ಹೇಳಿದೆ.



ಯುನೈಟೆಡ್ ಅರಬ್ ಎಮಿರೇಟ್ಸ್‌ನಲ್ಲಿ ನೆಲೆಗಳ ಮೇಲೆ ನಡೆಯುತ್ತಿರುವ ದೈನಂದಿನ ಡ್ರೋನ್ ದಾಳಿಗಳ ನಡುವೆಯೂ, ಸೋಮವಾರದಿಂದ ಅಂತರರಾಷ್ಟ್ರೀಯ ಸಂಚಾರಕ್ಕೆ ವಿಶ್ವದ ಅತ್ಯಂತ ಜನನಿಬಿಡ ವಿಮಾನ ನಿಲ್ದಾಣಗಳಲ್ಲಿ ಒಂದಾದ ದುಬೈ ಅಂತರರಾಷ್ಟ್ರೀಯ ವಿಮಾನ ನಿಲ್ದಾಣದಿಂದ ಸೀಮಿತ ಸಂಖ್ಯೆಯ ವಿಮಾನಗಳ ಕಾರ್ಯಾಚರಣೆ ಪುನರಾರಂಭಗೊಂಡಿತ್ತು.

ಮಧ್ಯಪ್ರಾಚ್ಯದಲ್ಲಿ ನಡೆಯುತ್ತಿರುವ ಸಂಘರ್ಷ ಮತ್ತೆ ತೀವ್ರಗೊಂಡ ಬೆನ್ನಲ್ಲೆ ಎಮಿರೇಟ್ಸ್ ವಿಮಾನಗಳ ಹಾರಾಟ ಬಂದ್ ಆಗಿದೆ. ಮುಂದಿನ ಸೂಚನೆ ಬರುವವರೆಗೆ ಯುನೈಟೆಡ್ ಅರಬ್ ಎಮಿರೇಟ್ಸ್ ಹಾರಾಟ ಸ್ಥಗಿತವಾಗಿದ್ದು ದುಬೈಗೆ ಬರುವ, ತೆರಳುವ ವಿಮಾನಗಳ ಹಾರಾಟ ಬಂದ್ ಆಗಿದೆ.

ಇದರ ನಡುವೆ ನೆರೆಯ ರಾಷ್ಟ್ರಗಳಿಂದ ನೇರವಾಗಿ ಇರಾನ್ ಮೇಲ್ ದಾಳಿಯಾಗದ ಹೊರತು, ಆ ರಾಷ್ಟ್ರಗಳನ್ನು ಗುರಿಯಾಗಿಸಿ ದಾಳಿ ನಡೆಸುವುದಿಲ್ಲ ಎಂದು ಇರಾನ್ ಅಧ್ಯಕ್ಷ ಮಸೌದ್ ಪೆಜೆಶ್ಕಿಯಾನ್ ಹೇಳಿದ್ದಾರೆ. ಇಂತಹ ನಿಲುವಿಗೆ ಇರಾನ್ ನ ಮಧ್ಯಂತರ ನಾಯಕತ್ವ ಮಂಡಳಿ ನಿನ್ನೆ ಅನುಮೋದನೆ ನೀಡಿದೆ ಎಂದು ಅವರು ತಿಳಿಸಿದ್ದಾರೆ.

ಇತ್ತೀಚಿನ ದಿನಗಳಲ್ಲಿ ನಡೆದ ದಾಳಿಗಳ ಹಿನ್ನೆಲೆಯಲ್ಲಿ ನೆರೆಯ ರಾಷ್ಟ್ರಗಳಿಗೆ ಉಂಟಾದ ಆತಂಕಕ್ಕೆ, ಅವರಿಗುಂಟಾದ ಅನಾನುಕೂಲದ ಬಗ್ಗೆ ಅಧ್ಯಕ್ಷರು ಕ್ಷಮೆಯಾಚಿಸಿದ್ದಾರೆ.

---

# ಕತಾರ್‌ನಲ್ಲಿ ಭಾರತೀಯರು ಸುರಕ್ಷಿತ: ಆತಂಕ ಬೇಡ

**ದೋಹಾ, ಮಾ.7:** ಶನಿವಾರ 28 ಫೆಬ್ರವರಿ 2026ರ ಮಧ್ಯಾಹ್ನದಿಂದ ಅಮೆರಿಕ ಹಾಗೂ ಇಸ್ರೇಲ್ ದೇಶಗಳು ಇರಾನ್ ದೇಶದ ಮೇಲೆ ಯುದ್ಧ ಪ್ರಾರಂಭಿಸಿದ ಪರಿಣಾಮವಾಗಿ ಇರಾನ್ ದೇಶವು ಕೊಲ್ಲಿದೇಶಗಳಲ್ಲಿರುವ ಅಮೆರಿಕದ ವಾಯುನೆಲೆಗಳ ಮೇಲೆ ಪ್ರತಿ ದಾಳಿ ನಡೆಸುತ್ತಿರುವುದು ತಮಗೆಲ್ಲರಿಗೂ ತಿಳಿದ ವಿಚಾರ.

ಕತಾರಿನ ದೋಹಾದಲ್ಲಿರುವ ಜನಸಾಮಾನ್ಯರಿಗೆ, ಸ್ಥಳೀಯ ಸಂಘ-ಸಂಸ್ಥೆಗಳು ಹಾಗೂ ಕತಾರ್ ದೇಶದ ಆಂತರಿಕ ಮಂತ್ರಾಲಯಗಳು ಸೂಚನೆಗಳನ್ನು ನೀಡುತ್ತಿವೆ. ಭಾನುವಾರ 01ಮಾರ್ಚ್ 2026ರಿಂದ ವೈದ್ಯಕೀಯ ಹಾಗೂ ನಾಗರೀಕ ಸರಬರಾಜು ಸೇವೆಗಳನ್ನು ಹೊರತುಪಡಿಸಿ ಇನ್ನು ಯಾವುದೇ ಮತ್ತಿತರ ಸಂಸ್ಥೆಗಳು ಹಾಗೂ ಶಾಲೆಗಳು ಮುಖಾಮುಖಿ ಚಟುವಟಿಕೆಗಳನ್ನು ನಡೆಸುತ್ತಿಲ್ಲ. ಕರೋನ ಮಹಾಮಾರಿಯು ತಾಡವವಾಡುತ್ತಿದ್ದ ಕಾಲಾದಂತೆ, ಅಂತಹುದೇ ವಾತಾವರಣವು ಮರು ಸೃಷ್ಟಿಯಾಗಿ ಶಾಲೆಗಳು ಹಾಗೂ ಸಂಸ್ಥೆಗಳ ಕೆಲಸಗಳು ಮನೆಯಿಂದಲೇ ನಡೆಯುತ್ತಿವೆ. ಸ್ಥಳೀಯ ಮಂತ್ರಾಲಯಗಳು ದಿನನಿತ್ಯ ಸೂಚನೆಗಳನ್ನು ಎಲ್ಲರ ಜಂಗಮವಾಣಿಗೆ ಕಳಿಸುತ್ತಿರುವುದು ಎಲ್ಲರ ಸುರಕ್ಷತೆಹೆ ಸಹಾಯಕಾರಿಯಾಗಿದೆ.



ಮೂಲಭೂತ ಸೌಕರ್ಯಗಳು, ವಿದ್ಯುತ್ ಸರಬರಾಜು, ನೀರಿನ ಸರಬರಾಜು, ಅನ್ನಹಾರಗಳು ,ತರಕಾರಿಗಳು ದವಸ-ಧಾನ್ಯ ಹಾಗೂ ಮತ್ತಿತರ ದಿನನಿತ್ಯದ ಬಳಕೆಗೆ ಬೇಕಾಗುವ ವಸ್ತುಗಳು ಲಭ್ಯವಿರುತ್ತದೆ. ಹಾಲು-ಮೊಸರು ಎಂದಿನಂತೆ ಎಲ್ಲ ಕಡೆಯೂ ದೊರೆಯುತ್ತಿದೆ. ಯಾವುದೇ ಪದಾರ್ಥಗಳ ಅಭಾವ ಇದುವರೆಗೂ ಕಂಡುಬಂದಿಲ್ಲ.

ಕತಾರಿನಲ್ಲಿ ನೆಲೆಸಿರುವ ಭಾರತೀಯರಲ್ಲಿ, ಕನ್ನಡಿಗರಾಗಲಿ ಹಾಗೂ ಅವರ ಕುಟುಂಬದ ಸದಸ್ಯರು ಭಾರತದಲ್ಲಿರುವ ಸಂಬಂಧಿಕರು ಸ್ನೇಹಿತರು ಇವರಲ್ಲಿ ವಿನಂತಿಸಿಕೊಳ್ಳುವುದೇನೆಂದರೆ, ಯಾವುದೇ ರೀತಿಯ ಆತಂಕಕ್ಕೊಳಗಾಗದೆ, ಅಂತರರಾಷ್ಟ್ರೀಯ ಮಟ್ಟದಲ್ಲಿ ಪರಿಸ್ಥಿತಿಯು ಸಾಮಾನ್ಯ ರೀತಿ ಬರುವವರೆಗೆ ತಾಳ್ಮೆಯಿಂದ ಇರಲು ಕೋರಲಾಗುತ್ತಿದೆ.

ಭಯ, ಉದ್ವೇಗ, ಆತಂಕಕ್ಕೆ ಮನಸ್ಸನ್ನು ಒಳಪಡಿಸದೆ ಎಂದಿನಂತೆ ತಮ್ಮ ಕೆಲಸ ಕಾರ್ಯಗಳಲ್ಲಿ ನಿರತರಾಗಬೇಕಾಗಿ ವಿನಯಪೂರ್ವಕ ವಿನಂತಿ. ಯಾವುದೇ ರೀತಿಯಲ್ಲಿ ಅನವಶ್ಯಕವಾಗಿ ಹೊರಗಡೆ ನಡೆದಾಡುವುದು, ತಮ್ಮ ಕಟ್ಟಡಗಳ ಹತ್ತಿರದಲ್ಲಿ ಕ್ಷಿಪಣಿಗಳ ತುಣುಕುಗಳು ಬಿದ್ದಿರುವುದರ ಭಾವಚಿತ್ರಗಳನ್ನು ಸಾಮಾಜಿಕ ಜಾಲತಾಣದಲ್ಲಿ ಕಳುಹಿಸುವುದನ್ನು ಮಾಡಬಾರದೆಂದು ಕೋರಿಕೆ. ಸ್ಥಳೀಯ ಸಚಿವಾಲಯಗಳಿಗೆ ತಿಳಿದುಬಂದಲ್ಲಿ ಸೂಕ್ತ ಕ್ರಮವನ್ನು ಜರಗಿಸಲಾಗುತ್ತದೆ.

ಆರೋಗ್ಯದ ಕಾರಣ ಅಥವಾ ಇನ್ನಿತರ ವಿಶೇಷ ಕಾರಣಾಂತರಗಳಿಂದ ಮಾತೃಭೂಮಿಗೆ ತೆರಳಲು ಇಚ್ಛಿಸುವವರು ಭಾರತೀಯ ದೂತವಾಸದ ಪ್ರತಿನಿಧಿಗಳನ್ನು ಸಂಪರ್ಕಿಸಬೇಕಾಗಿ ವಿನಂತಿ. ಇಂತಹವರಿಗೆ ಸೌದಿ ಅರೇಬಿಯಾದ ರಿಯಾದ್ ಅಥವ ಜೆಡ್ಡಾ ನಗರಗಳಿಗೆ ನೆಲಮಾರ್ಗದಲ್ಲಿ ಕಳುಹಿಸಿ ಅಲ್ಲಿಂದ ವಾಯುಮಾರ್ಗದಲ್ಲಿ ಭಾರತಕ್ಕೆ ಹಿಂದಿರುಗಲು ವ್ಯವಸ್ಥೆಯನ್ನು ಕಲ್ಪಿಸಿಕೊಡಲಾಗುತ್ತಿದೆ. ಇಂತಹ ಸತ್ವ ಪರೀಕ್ಷೆಯ ಸಮಯದಲ್ಲಿ ತಮ್ಮೆಲ್ಲರ ಸಹಾಯ, ಸಹಕಾರ ಹಾಗೂ ನಿರ್ಭಯ ಚಿತ್ತ ಅತ್ಯವಶ್ಯಕ ಒಬ್ಬರಿಗೊಬ್ಬರು ಭುಜಕೊಟ್ಟು ನಿಲ್ಲಲು ಒಂದು ಸದಾವಕಾಶ. ಆತ್ಮಸ್ಥೈರ್ಯವನ್ನು ಎತ್ತು ಹಿಡಿಯಲು ಒಂದು ಸುಸಂದರ್ಭ.

---

# ಭಾರತೀಯರು ಒಳ್ಳೆಯ ನಟರು: ಅಣಕಿಸಿದ ಅಮೆರಿಕ

**ವಾಷಿಂಗ್ಟನ್, ಮಾ.7:** ಇರಾನ್ ಮತ್ತು ಅಮೆರಿಕ-ಇಸ್ರೇಲ್ ನಡುವಿನ ಯುದ್ಧವು ಪಶ್ಚಿಮ ಏಷ್ಯಾವನ್ನು ಉದ್ವಿಗ್ನ ಪರಿಸ್ಥಿತಿಗೆ ದೂಡಿದೆ. ಜಾಗತಿಕ ವ್ಯಾಪಾರ ವಹಿವಾಟುಗಳ ಮೇಲೆ ಗಂಭೀರ ಪರಿಣಾಮ ಬೀರಿದೆ. ಅದರಲ್ಲೂ, ತೈಲ ಮಾರುಕಟ್ಟೆ ಅಸ್ತವ್ಯಸ್ತಗೊಂಡಿದೆ. ಈ ನಡುವೆ, ಭಾರತವು ರಷ್ಯಾದಿಂದ ಒಂದು ತಿಂಗಳ ಅವಧಿಗೆ ತೈಲ ಖರೀದಿಸಲು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಸಮ್ಮತಿ ಸೂಚಿಸಿದ್ದಾರೆ. ಭಾರತದ ವಹಿವಾಟನ್ನು ಟ್ರಂಪ್ ನಿರ್ಧರಿಸುತ್ತಿರುವುದು ಮೋದಿ ಸರ್ಕಾರವನ್ನು ಜಾಗತಿಕ ಮಟ್ಟದಲ್ಲಿ ಅಪಹಾಸ್ಯಕ್ಕೀಡು ಮಾಡಿದೆ. ಇದೀಗ, ಅಮೆರಿಕ ಹಣಕಾಸು ಸಚಿವ ಸ್ಕಾಟ್ ಬೆಸೆಂಟ್ ಭಾರತವನ್ನು ಅಪಹಾಸ್ಯ ಮಾಡಿದ್ದು, ಭಾರತೀಯರು ಒಳ್ಳೆಯ ನಟರು. ರಷ್ಯಾದಿಂದ ತೈಲ ಖರೀದಿ ನಿಲ್ಲಿಸಿ ಎಂದೆವು ನಿಲ್ಲಿಸಿದರು, ಈಗ ಖರೀದಿಸಿ ಎಂದೆವು ಖರೀದಿಸುತ್ತಾರೆ ಎಂದು ಹೇಳಿದ್ದಾರೆ.



ಫಾಕ್ಸ್ ಬಿಸಿನೆಸ್‌ಗೆ ನೀಡಿದ ಸಂದರ್ಶನದಲ್ಲಿ, ವಿಶ್ವದಲ್ಲಿ ತೈಲ ಪೂರೈಕೆ ಉತ್ತಮವಾಗಿದೆ. ಈಗಾಗಲೇ ಹಡಗುಗಳಲ್ಲಿರುವ ರಷ್ಯಾದ ತೈಲವನ್ನು ನಮ್ಮ ಮಿತ್ರರಾಷ್ಟ್ರವಾದ ಭಾರತ ಖರೀದಿಸಲು ಅಮೆರಿಕ ಹಣಕಾಸು ಇಲಾಖೆಯು ನಿನ್ನೆ ಒಪ್ಪಿಗೆ ನೀಡಿದೆ. ಭಾರತೀಯರು ಒಳ್ಳೆಯ ನಟರು. ಈ ಶರತ್ಕಾಲದಲ್ಲಿ ನಿರ್ಬಂಧಿತ ರಷ್ಯಾದ ತೈಲ ಖರೀದಿಸುವುದನ್ನು ನಿಲ್ಲಿಸುವಂತೆ ನಾವು ಅವರಿಗೆ ಕೇಳಿದ್ದೆವು. ಅವರು ಹಾಗೆಯೇ ಮಾಡಿದರು. ಅವರು ಅದರ ಬದಲಿಗೆ ಅಮೆರಿಕದ ತೈಲ ಬಳಸಲಿದ್ದರು. ಆದರೆ, ವಿಶ್ವದಾದ್ಯಂತ ಉಂಟಾಗಿರುವ ತೈಲದ ತಾತ್ಕಾಲಿಕ ಕೊರತೆಯನ್ನು ನೀಗಿಸಲು, ರಷ್ಯಾದ ತೈಲ ಖರೀದಿಸಲು ನಾವು ಅವರಿಗೆ ಅನುಮತಿ ನೀಡಿದ್ದೇವೆ ಎಂದು ಹೇಳಿದ್ದಾರೆ.

ಸಮುದ್ರದ ಮೇಲೆ (ಹಡಗು) ನೂರಾರು ದಶಲಕ್ಷ ಬ್ಯಾರೆಲ್‌ಗಳಷ್ಟು ನಿರ್ಬಂಧಿತ ರಷ್ಯಾದ ಕಚ್ಚಾ ತೈಲವಿದೆ. ಅವುಗಳ ಮೇಲಿನ ನಿರ್ಬಂಧ ತೆರವುಗೊಳಿಸುವ ಮೂಲಕ ಅಮೆರಿಕ ಹಣಕಾಸು ಇಲಾಖೆಯು ತೈಲ ಪೂರೈಕೆಗೆ ಅವಕಾಶ ನೀಡಬಹುದು. ನಾವು ಆ ಬಗ್ಗೆ ಪರಿಶೀಲಿಸುತ್ತಿದ್ದೇವೆ. ಈ ಸಂಘರ್ಷದ ಸಮಯದಲ್ಲಿ ಮಾರುಕಟ್ಟೆಯನ್ನು ನಿಭಾಯಿಸಲು ನಾನಾ ಕ್ರಮಗಳನ್ನು ಘೋಷಿಸುತ್ತಲೇ ಇರುತ್ತೇವೆ ಎಂದಿದ್ದಾರೆ.

ಗಮನಾರ್ಹವಾಗಿ, ಭಾರತವು ರಷ್ಯಾದಿಂದ ತೈಲ ಖರೀದಿಸುತ್ತಿದ್ದಕ್ಕಾಗಿ ಟ್ರಂಪ್ ಭಾರತದ ಮೇಲೆ 25% ದಂಡನಾತ್ಮಕ ಸುಂಕ ಹೇರಿದ್ದರು. ಆದಾಗ್ಯೂ, ರಷ್ಯಾದಿಂದ ತೈಲ ಖರೀಸುವುದನ್ನು ಭಾರತ ಮುಂದುವರೆಸಿತ್ತು. ಆದರೆ, ಇತ್ತೀಚೆಗೆ ಎಪ್‌ಸ್ಟೀನ್ ಫೈಲ್ ಹೊರಬಂದ ಬಳಿಕ ಪರಿಸ್ಥಿತಿಗಳು ಬದಲಾಗಿವೆ. ಎಪ್‌ಸ್ಟೀನ್ ಫೈಲ್‌ನಲ್ಲಿ ಮೋದಿ ಅವರ 2017ರ ಇಸ್ರೇಲ್ ಭೇಟಿ ಸೇರಿದಂತೆ ನಾನಾ ವಿಚಾರಗಳಿವೆ ಎಂದು ಹೇಳಲಾಗುತ್ತಿದೆ. ಅದೇ ಕಾರಣಕ್ಕೆ, ಮೋದಿ ಅವರು ಟ್ರಂಪ್‌ಗೆ ಹೆದರುತ್ತಿದ್ದಾರೆ ಎಂಬ ಆರೋಪಗಳೂ ದಟ್ಟವಾಗಿವೆ. ಈ ಆರೋಪಗಳಿಗೆ ಪೂರಕ ಎನ್ನುವಂತೆ, ಪ್ರಧಾನಿ ಮೋದಿ ಅವರು ದಿಢೀರನೆ ಟ್ರಂಪ್ ಜೊತೆ ಮುಕ್ತ ವ್ಯಾಪಾರ ಒಪ್ಪಂದ ಮಾಡಿಕೊಂಡರು. ಈ ಬೆನ್ನಲ್ಲೇ, ರಷ್ಯಾದ ತೈಲ ಖರೀದಿಯನ್ನೂ ಭಾರತ ನಿಲ್ಲಿಸಿತು. ಇದೀಗ, ಏಪ್ರಿಲ್ 4ರವರೆಗೆ ರಷ್ಯಾದ ತೈಲ ಖರೀದಿ ಮಾಡಲು ಭಾರತಕ್ಕೆ ಅಮೆರಿಕ ಅನುಮತಿ ನೀಡಿದೆ.


---

## ಬೆಂಗಳೂರಿನಲ್ಲಿ ಪದವಿ ಪಡೆದಿದ್ದ ಬಲೇಂದ್ರ ಶಾಗೆ ಪ್ರಧಾನಿ ಪಟ್ಟ ನಿರೀಕ್ಷೆ

# ನೇಪಾಳ ಚುನಾವಣೆ: ಪ್ರಚಂಡ ಗೆಲುವಿನತ್ತ ಆರ್‌ಎಸ್‌ಪಿ

**ಕಾಠ್ಮಂಡು, ಮಾ.7:** ನೇಪಾಳದಲ್ಲಿ ನಡೆದ ಚುನಾವಣೆಯಲ್ಲಿ ಆರ್‌ಎಸ್‌ಪಿ ಪಕ್ಷ 165 ಕ್ಷೇತ್ರಗಳ ಪೈಕಿ 47 ಸ್ಥಾನಗಳನ್ನು ವಶಪಡಿಸಿಕೊಂಡಿದ್ದು, 72 ಕ್ಷೇತ್ರಗಳಲ್ಲಿ ಮುನ್ನಡೆ ಸಾಧಿಸಿದೆ. ಬ್ಯಾಲೆನ್ ಎಂದೇ ಹೆಸರಾಗಿರುವ 35 ವರ್ಷದ ರ‍್ಯಾಪರ್, ಶಿಕ್ಷಣದಲ್ಲಿ ಇಂಜಿನಿಯರಿಂಗ್ ಪದವಿ ಪಡೆದಿರುವ ಬಲೇನ್‌ಶಾ ಪ್ರಧಾನಿಯಾಗುವ ನಿರೀಕ್ಷೆಯಿದೆ. ಇವರು ಕರ್ನಾಟಕದ ಬೆಂಗಳೂರಿನಲ್ಲಿ ಪದವಿ ಪಡೆದಿರುವುದು ವಿಶೇಷ.

ಬಲೇಂದ್ರ ಶಾ ನೇತೃತ್ವದ ರಾಷ್ಟ್ರೀಯ ಸ್ವತಂತ್ರ ಪಕ್ಷ ನೇಪಾಳದ ಸಾರ್ವತ್ರಿಕ ಚುನಾವಣೆಯಲ್ಲಿ ಪ್ರಚಂಡ ಗೆಲುವು ಪಡೆಯಲಿದೆ. ದೀರ್ಘಕಾಲ ರಾಜಕೀಯವಾಗಿ ಅಸ್ಥಿರವಾಗಿರುವ ಈ ದೇಶದಲ್ಲಿ ಸಾಂಪ್ರದಾಯಿಕ ಪಕ್ಷಗಳ ಪ್ರಾಬಲ್ಯವನ್ನು ಪ್ರಶ್ನಿಸುವ ಮೂಲಕ ಆರ್‌ಎಸ್‌ಪಿ ಅತಿದೊಡ್ಡ ಪಕ್ಷವಾಗಿ ಹೊರಹೊಮ್ಮುವ ನಿರೀಕ್ಷೆಯಿದೆ. ನೇಪಾಳದ ಚುನಾವಣಾ ಆಯೋಗದ 2025ರ ಸೆಪ್ಟೆಂಬರ್ 8-9ರಂದು ನೇಪಾಳದಲ್ಲಿ Gen Z ಪ್ರತಿಭಟನೆಗಳ ನಡೆದಿದ್ದು ಇದಾದ ನಂತರ ಚುನಾವಣೆಗಳು ನಡೆಯಿತು. ಭ್ರಷ್ಟಾಚಾರ, ಸ್ವಜನಪಕ್ಷಪಾತ ಮತ್ತು ಹಳತಾದ ನಾಯಕತ್ವವನ್ನು ಕೊನೆಗೊಳಿಸಬೇಕೆಂದು ಒತ್ತಾಯಿಸಿ Gen Z ನೇತೃತ್ವದ ಪ್ರತಿಭಟನೆಗಳು ಪ್ರಧಾನಿ ಕೆ.ಪಿ. ಶರ್ಮಾ ಓಲಿ ಅವರ ಸಮ್ಮಿಶ್ರ



ಸರ್ಕಾರವನ್ನು ಉರುಳಿಸಿತ್ತು. ಅದು ಸುಮಾರು ಮೂರನೇ ಎರಡರಷ್ಟು ಬೆಂಬಲವನ್ನು ಹೊಂದಿತ್ತು. ನೇಪಾಳಿ ಕಾಂಗ್ರೆಸ್, ನೇಪಾಳಿ ಕಮ್ಯುನಿಸ್ಟ್ ಪಕ್ಷ ಮತ್ತು ಸಿಪಿಎನ್-ಯುಎಂಎಲ್ ತಲಾ 10 ಸ್ಥಾನಗಳಲ್ಲಿ ಮುನ್ನಡೆ ಸಾಧಿಸಿವೆ. ಶ್ರಮಿಕ್ ಸಂಸ್ಕೃತಿ ಪಕ್ಷ ಐದು ಸ್ಥಾನಗಳಲ್ಲಿ ಮುನ್ನಡೆ ಸಾಧಿಸುತ್ತಿದ್ದರೆ, ಇತರ ಪಕ್ಷಗಳು ತಲಾ ಎರಡು ಸ್ಥಾನಗಳಲ್ಲಿ ಮುಂದಿವೆ. ಕಠ್ಮಂಡುವಿನ ಮಾಜಿ ಮೇಯರ್ ಬಲೇಂದ್ರ ಶಾ, ಝಾಪಾ-5ರಿಂದ ಸ್ಪರ್ಧಿಸುತ್ತಿದ್ದಾರೆ. ಇಲ್ಲಿ, ಅವರು ನಾಲ್ಕು ಬಾರಿ ಪ್ರಧಾನಿ ಮತ್ತು ಸಿಪಿಎನ್-ಯುಎಂಎಲ್ ಅಧ್ಯಕ್ಷ ಕೆ.ಪಿ. ಶರ್ಮಾ ಓಲಿ ಅವರ ಭದ್ರಕೋಟೆಯಲ್ಲಿ ಬಲವಾದ ಮುನ್ನಡೆ ಸಾಧಿಸಿದ್ದಾರೆ. ಇಲ್ಲಿಯವರೆಗೆ ಶಾ 39,284 ಮತಗಳನ್ನು ಪಡೆದಿದ್ದರೆ, ಓಲಿ 10,293 ಮತಗಳನ್ನು ಪಡೆದಿದ್ದಾರೆ. 165 ಸದಸ್ಯರನ್ನು ನೇರ ಮತದಾನದ ಮೂಲಕ ಆಯ್ಕೆ ಮಾಡಲಾಗುತ್ತದೆ.

ನೇಪಾಳದ ಸಂಸತ್ತಿನಲ್ಲಿ ಒಟ್ಟು 275 ಸದಸ್ಯರು ಇದ್ದಾರೆ. ಇವರಲ್ಲಿ 165 ಜನರು ನೇರ ಮತದಾನ ವ್ಯವಸ್ಥೆಯ ಮೂಲಕ ಆಯ್ಕೆಯಾಗುತ್ತಾರೆ. ಉಳಿದ 110 ಜನರು ಅನುಪಾತದ ಪ್ರಾತಿನಿಧ್ಯ ವ್ಯವಸ್ಥೆಯ ಮೂಲಕ ಆಯ್ಕೆಯಾಗುತ್ತಾರೆ. ಈ ಸಾರ್ವತ್ರಿಕ ಚುನಾವಣೆಯಲ್ಲಿ ಸುಮಾರು 18.9 ಮಿಲಿಯನ್ ಮತದಾರರು ಪ್ರತಿನಿಧಿ ಸಭೆಯ 275 ಸದಸ್ಯರನ್ನು ಆಯ್ಕೆ ಮಾಡಲು ಅರ್ಹರಾಗಿದ್ದರು. ಗುರುವಾರದ ಮತದಾನದಲ್ಲಿ ಸುಮಾರು 60 ಪ್ರತಿಶತ ಮತದಾರರು ತಮ್ಮ ಮತದಾನವನ್ನು ಚಲಾಯಿಸಿದರು. 165 ನೇರ ಸ್ಥಾನಗಳಿಗೆ ಸುಮಾರು 3,400 ಅಭ್ಯರ್ಥಿಗಳು ಸ್ಪರ್ಧಿಸುತ್ತಿದ್ದರೆ, ಅನುಪಾತದ ಪ್ರಾತಿನಿಧ್ಯ ವ್ಯವಸ್ಥೆಯಡಿಯಲ್ಲಿ 110 ಸ್ಥಾನಗಳಿಗೆ 3,135 ಅಭ್ಯರ್ಥಿಗಳು ಸ್ಪರ್ಧಿಸುತ್ತಿದ್ದಾರೆ.

ಈ ಬಲೇನ್ ಶಾ ಬೆಂಗಳೂರಿನ ಯಲಹಂಕದ ನಿಟ್ಟೆ ಮೀನಾಕ್ಷಿ ಕಾಲೇಜಿನಲ್ಲಿ 2016 ರಿಂದ 2018ರ ಅವಧಿಯಲ್ಲಿ ಎರಡು ವರ್ಷ ಎಂಟೆಕ್ ವ್ಯಾಸಂಗ ಮಾಡಿದ್ದರು. 2018 ರಲ್ಲಿ ಎಂಟೆಕ್ ಕೋರ್ಸ್ ಮುಗಿಸಿ ನೇಪಾಳಕ್ಕೆ ತೆರಳಿದ್ದು ಅವರು 2022ರಲ್ಲಿ ಕಾಠ್ಮಂಡು ಮೇಯರ್ ಆಗಿ ಆಯ್ಕೆಯಾಗಿದರು. ಅದಾದ ನಂತರ 2025ರ Gen Z ಪ್ರತಿಭಟನೆಗಳ ನೇತೃತ್ವದ ವಹಿಸಿದ್ದರು.

---

# ಒಂದು ಬಾರಿಯಾದರೂ ಭಾರತೀಯ ಅಭಿಮಾನಿಗಳ ಹೃದಯ ಒಡೆದು ಟ್ರೋಫಿ ಗೆಲ್ಲಬೇಕು: ಫೈನಲ್ ಪಂದ್ಯಕ್ಕೂ ಮುನ್ನ ಮಿಚೆಲ್ ಸ್ಯಾಂಟ್ನರ್!

**ಅಹಮದಾಬಾದ್, ಮಾ.7:** ಇಲ್ಲಿನ ನರೇಂದ್ರ ಮೋದಿ ಕ್ರೀಡಾಂಗಣದಲ್ಲಿ ಟಿ20 ವಿಶ್ವಕಪ್ ಫೈನಲ್ ಪಂದ್ಯ ಭಾನುವಾರ ನಡೆಯಲಿದೆ. ಈ ಮೈದಾನವು 2023ರ ನಂತರ ಮತ್ತೊಂದು ಮಹಾಕಾವ್ಯದ ಯುದ್ಧಕ್ಕೆ ಸಾಕ್ಷಿಯಾಗಲಿದೆ. ಮೂರು ವರ್ಷಗಳ ಹಿಂದೆ ಭಾರತವು ಏಕದಿನ ವಿಶ್ವಕಪ್ ಫೈನಲ್‌ನಲ್ಲಿ ಆಸ್ಟ್ರೇಲಿಯಾ ವಿರುದ್ಧ ಸೋತಿತ್ತು. ಅಹಮದಾಬಾದ್‌ನಲ್ಲಿ ಈಗ ಮತ್ತೊಂದು ಫೈನಲ್ ಪಂದ್ಯವು ಮತ್ತೊಮ್ಮೆ ನಡೆಯಲಿದೆ. ಈ ಬಾರಿ ಭಾರತ ತಂಡವು ನ್ಯೂಜಿಲೆಂಡ್ ಅನ್ನು ಸೋಲಿಸುವ ಮೂಲಕ ಟಿ20 ವಿಶ್ವಕಪ್ ಗೆಲ್ಲುವ ಗುರಿಯನ್ನು ಹೊಂದಿದೆ. ಈ ಗೆಲುವಿನೊಂದಿಗೆ, ಸೂರ್ಯಕುಮಾರ್ ಯಾದವ್ ಪಡೆ ಆಸ್ಟ್ರೇಲಿಯಾ ವಿರುದ್ಧದ ಮರೆಯಲಾಗದ ಸೋಲಿನ ಗಾಯಗಳನ್ನು ಈ ಮೈದಾನದಲ್ಲಿಯೇ ಗುಣಪಡಿಸಲು ಪ್ರಯತ್ನಿಸುತ್ತದೆ. 100,000ಕ್ಕೂ ಹೆಚ್ಚು ಪ್ರೇಕ್ಷಕರು ಮತ್ತೊಮ್ಮೆ ಕ್ರೀಡಾಂಗಣದಲ್ಲಿ ಹಾಜರಿರುತ್ತಾರೆ. ಈ ಬಾರಿ ಅಭಿಮಾನಿಗಳು ವಿಜಯೋತ್ಸವ ಆಚರಿಸಲು ಬಯಸುತ್ತಾರೆ.

ಫೈನಲ್ ಪಂದ್ಯಕ್ಕೂ ಮುನ್ನ ಮಾತನಾಡಿದ ನ್ಯೂಜಿಲೆಂಡ್ ತಂಡದ ನಾಯಕ ಮಿಚೆಲ್ ಸ್ಯಾಂಟ್ನರ್, ಫೈನಲ್ ಪಂದ್ಯದಲ್ಲಿ ಆತಿಥೇಯರನ್ನು ಎದುರಿಸುವ ಅಪಾರ ಒತ್ತಡದ ಹೊರತಾಗಿಯೂ, ಅವರ ತಂಡವು ಸಂಪೂರ್ಣ ಹಿಡಿತವನ್ನು ಕಾಯ್ದುಕೊಳ್ಳುವ ಮತ್ತು ಆಟದ ನಿರ್ಣಾಯಕ ಕ್ಷಣಗಳನ್ನು ಬಳಸಿಕೊಳ್ಳುವತ್ತ ಗಮನಹರಿಸಲಿಸಿದೆ ಎಂದು ಸ್ಪಷ್ಟಪಡಿಸಿದರು. ಒತ್ತಡವು ಭಾರತೀಯ ತಂಡದ ಮೇಲೆ ಮಾತ್ರವಲ್ಲದೆ ತಮ್ಮ ತಂಡದ ಮೇಲೂ ಇರುತ್ತದೆ ಎಂದು ಹೇಳಿದರು.



ಟ್ರೋಫಿಗಳ ಮೇಲಿನ ತಮ್ಮ ಹಸಿವಿನ ಬಗ್ಗೆ ಮಾತನಾಡಿದ ಸ್ಯಾಂಟ್ನರ್, ಟ್ರೋಫಿಗಳನ್ನು ಗೆಲ್ಲುವುದರಲ್ಲಿ ಅಭ್ಯಂತರವಿಲ್ಲ. ಪ್ರಸ್ತುತ ತಂಡದ ಬಗ್ಗೆ ಹೇಳಬೇಕೆಂದರೆ ದೊಡ್ಡ ಪಂದ್ಯಾವಳಿಗಾಗಿ ಆಟಗಾರರು ಸ್ಥಿರವಾಗಿದ್ದಾರೆ. ತಂಡದ ಯಶಸ್ಸಿನ ರಹಸ್ಯವೆಂದರೆ ಅವರು ಪರಿಸ್ಥಿತಿಗಳು ಅಥವಾ ಎದುರಾಳಿಗಳ ಬಲಕ್ಕೆ ಹೆದರುವುದಿಲ್ಲ ಎಂದರು. ಸಂಪೂರ್ಣ ಪ್ರಾಮಾಣಿಕತೆಯಿಂದ ತಂಡವಾಗಿ ಆಟವಾಡುವುದು ಏಕೈಕ ಗುರಿಯಾಗಿದೆ. ಅಲ್ಲದೆ ಭಾರತೀಯ ಅಭಿಮಾನಿಗಳ ಹೃದಯಗಳನ್ನು ಒಮ್ಮೆ ಮುರಿದು ವಿಶ್ವಕಪ್ ಟ್ರೋಫಿಯನ್ನು ಎತ್ತುವುದರಲ್ಲಿ ಸಂತೋಷವಾಗುತ್ತದೆ ಎಂದು ಸ್ಯಾಂಟ್ನರ್ ಆದರೆ ಸ್ಪಷ್ಟವಾಗಿ ಹೇಳಿದ್ದಾರೆ.

### ಸ್ಯಾಂಟ್ನರ್ ನಂಬುತ್ತಾರೆ ಗದ್ದಲ ಕಡಿಮೆಯಾಗುತ್ತದೆಯೇ?

ಅಹಮದಾಬಾದ್ನ ನರೇಂದ್ರ ಮೋದಿ ಕ್ರೀಡಾಂಗಣದಲ್ಲಿ ನಡೆಯುವ ಪಂದ್ಯದಲ್ಲಿ ಬೃಹತ್ ಜನಸಮೂಹದ ಮುಂದೆ ಆಡುವುದು ಒಂದು ದೊಡ್ಡ ಸವಾಲು. ಸ್ಯಾಂಟ್ನರ್ ಇದನ್ನು ಒಪ್ಪಿಕೊಂಡರು. ಆದರೆ ತಮ್ಮ ತಂಡವು ವಾತಾವರಣಕ್ಕೆ ಸಂಪೂರ್ಣವಾಗಿ ಸಿದ್ಧವಾಗಿದೆ ಎಂದು ಹೇಳಿದರು. ನಮ್ಮ ಗುರಿ ಪ್ರೇಕ್ಷಕರನ್ನು ಮೌನಗೊಳಿಸುವುದು ಎಂದು ನಾನು ಭಾವಿಸುತ್ತೇನೆ. ಕೆಲವು ಹೃದಯಗಳನ್ನು ಮುರಿಯುವುದು ಒಳ್ಳೆಯದು ಎಂದರು. 2023ರ ಏಕದಿನ ವಿಶ್ವಕಪ್ ಫೈನಲ್‌ಗೆ ಮೊದಲು, ಆಸ್ಟ್ರೇಲಿಯಾ ನಾಯಕ ಪ್ಯಾಟ್ ಕಮ್ಮಿನ್ಸ್ ಭಾರತೀಯ ಅಭಿಮಾನಿಗಳನ್ನು ಮೌನಗೊಳಿಸಲು ಸಂತೋಷಪಡುತ್ತೇನೆ ಎಂದು ಹೇಳಿದ್ದರು. ಅವರ ತಂಡವು ಅದನ್ನೇ ಮಾಡಿತ್ತು. ಈಗ, ಸ್ಯಾಂಟ್ನರ್ ಇದೇ ರೀತಿಯ ಹೇಳಿಕೆ ನೀಡಿದ್ದಾರೆ.

ಈ ಫೈನಲ್‌ಗೆ 100,000ಕ್ಕೂ ಹೆಚ್ಚು ಪ್ರೇಕ್ಷಕರು ಸೇರುವ ನಿರೀಕ್ಷೆಯಿದೆ, ಇದು ಸೂರ್ಯಕುಮಾರ್ ಯಾದವ್ ಮತ್ತು ಅವರ ತಂಡದ ಆಟಗಾರರಿಗೆ ಇಡೀ ಮೈದಾನವನ್ನು ಘರ್ಜಿಸುವ ನೀಲಿಸಾಗರವನ್ನಾಗಿ ಮಾಡುತ್ತದೆ. ಆದಾಗ್ಯೂ, ಕ್ರಿಕೆಟ್ ಇತಿಹಾಸವು ಭಾರತ ಮತ್ತು ನ್ಯೂಜಿಲೆಂಡ್ ನಡುವಿನ ಪೈಪೋಟಿ ಎಷ್ಟು ತೀವ್ರವಾಗಿತ್ತು ಎಂಬುದನ್ನು ನಮಗೆ ನೆನಪಿಸುತ್ತದೆ. ಕೊನೆಯ ಬಾರಿಗೆ ಈ ಎರಡೂ ತಂಡಗಳು ಐಸಿಸಿ ಟೂರ್ನಮೆಂಟ್ ಫೈನಲ್‌ನಲ್ಲಿ ಮುಖಾಮುಖಿಯಾದಾಗ, ನ್ಯೂಜಿಲೆಂಡ್ ಗೆದ್ದಿತ್ತು. 2021ರ ಐಸಿಸಿ ವಿಶ್ವ ಟೆಸ್ಟ್ ಚಾಂಪಿಯನ್ಶಿಪ್ ಫೈನಲ್‌ನಲ್ಲಿ ಭಾರತವನ್ನು ನ್ಯೂಜಿಲೆಂಡ್ ಸೋಲಿಸಿತ್ತು.

---

# ಸತತ 2ನೇ ಬಾರಿಗೆ ಫೈನಲ್‌ಗೇರಿ ದಾಖಲೆ ಬರೆದ ಭಾರತ: ಎಲೈಟ್ ಗ್ರೂಪ್‌ಗೆ ಸೇರ್ಪಡೆ

**ಮುಂಬೈ, ಮಾ.7:** ಐಸಿಸಿ ಟಿ20 ವಿಶ್ವಕಪ್ 2026 ಟೂರ್ನಿಯಲ್ಲಿ 2ನೇ ಸೆಮಿಫೈನಲ್‌ನಲ್ಲಿ ಇಂಗ್ಲೆಂಡ್ ತಂಡವನ್ನು ಮಣಿಸಿ ಫೈನಲ್‌ಗೆ ಲಗ್ಗೆ ಇಟ್ಟ ಭಾರತ ಇದರೊಂದಿಗೆ ಅಪರೂಪದ ದಾಖಲೆ ಬರೆದಿದ್ದು ಮಾತ್ರವಲ್ಲದೇ ಎಲೈಟ್ ಗ್ರೂಪ್‌ಗೆ ಸೇರ್ಪಡೆಯಾಗಿದೆ. ಮುಂಬೈನ ವಾಂಖೆಡೆ ಕ್ರೀಡಾಂಗಣದಲ್ಲಿ ನಡೆದ ಭಾರತ-ಇಂಗ್ಲೆಂಡ್ ನಡುವಿನ 2ನೇ ಸೆಮಿಫೈನಲ್ ಪಂದ್ಯದಲ್ಲಿ ಭಾರತ 7 ರನ್ ಗಳ ವಿರೋಚಿತ ಗೆಲುವು ಸಾಧಿಸಿತು. ಭಾರತ ನೀಡಿದ್ದ 254 ರನ್ ಗಳ ಬೃಹತ್ ಗುರಿಯನ್ನು ಬೆನ್ನು ಹತ್ತಿದ್ದ ಇಂಗ್ಲೆಂಡ್ ತಂಡ ಜೇಕಬ್ ಬೆಥಲ್ ಅವರ ಅಮೋಘ ಶತಕದ ನೆರವಿನಿಂದ ಗೆಲುನಂಚಿಗೆ ಬಂದು ತಲುಪಿತ್ತು. ಆದರೆ ಭಾರತದ ಅನುಭವಿ ಬೌಲರ್ ಗಳ ಕರಾರುವಕ್ಕಾದ ಬೌಲಿಂಗ್ ದಾಳಿ ನೆರವಿನಿಂದ ಭಾರತ ಸೋಲಿನಿಂದ ಪಾರಾಯಿತು.

ಇನ್ನು ಈ ಪಂದ್ಯ ಸಿಡಿಲಬ್ಬರದ ಬ್ಯಾಟಿಂಗ್ ಗೆ ವೇದಿಕೆಯಾಗಿತ್ತು. ಈ ಪಂದ್ಯದಲ್ಲಿ ಮೊದಲು ಬ್ಯಾಟಿಂಗ್ ಮಾಡಿದ್ದ ಭಾರತ ನಿಗದಿತ 20 ಓವರ್ ನಲ್ಲಿ ಸಂಜು ಸ್ಯಾಮ್ಸನ್ ಅರ್ಧಶತಕ (89 ರನ್)ದ ನೆರವಿನಿಂದ 253 ರನ್ ಪೇರಿಸಿತು.

ಇದಕ್ಕೆ ಉತ್ತರವಾಗಿ ಇಂಗ್ಲೆಂಡ್ ತಂಡ ಕೂಡ ನಿಗಧಿತ 20 ಓವರ್ ನಲ್ಲಿ ಜೇಕಬ್ ಬೆಥೆಲ್ ಸ್ಫೋಟಕ ಶತಕದ ನೆರವಿನಿಂದ 246 ರನ್ ಗಳಿಸಿ ಕೇವಲ 7 ರನ್ ಅಂತರದಲ್ಲಿ ವಿರೋಚಿತ ಸೋಲು ಕಂಡಿತು. ಆ ಮೂಲಕ ಟಿ20 ವಿಶ್ವಕಪ್ ಟೂರ್ನಿಯಲ್ಲಿ ಭಾರತ ಸತತ 2ನೇ ಬಾರಿಗೆ ಫೈನಲ್ ಗೇರಿತು.

ಸತತ 2ನೇ ಬಾರಿಗೆ ಫೈನಲ್ ಗೇರಿದ 3ನೇ ತಂಡ

2ನೇ ಸೆಮಿ ಫೈನಲ್ ನಲ್ಲಿ ಇಂಗ್ಲೆಂಡ್ ತಂಡವನ್ನು 7 ರನ್ ಗಳ ಅಂತರದಲ್ಲಿ ಮಣಿಸಿದ ಭಾರತ ಆ ಮೂಲಕ ಸತತ 2ನೇ ಬಾರಿಗೆ ಐಸಿಸಿ ಟಿ20 ವಿಶ್ವಕಪ್ ಟೂರ್ನಿ ಫೈನಲ್ ಗೇರಿದ 3ನೇ ತಂಡ ಎಂಬ ಕೀರ್ತಿಗೆ ಭಾಜನವಾಯಿತು. ಇದಕ್ಕೂ ಮೊದಲು ಪಾಕಿಸ್ತಾನ 2007 ಮತ್ತು 2009ರಲ್ಲಿ ಈ ಸಾಧನೆ ಮಾಡಿತ್ತು. ಬಳಿಕ 2012ರಲ್ಲಿ ಮತ್ತು 2014ರಲ್ಲಿ ಶ್ರೀಲಂಕಾ ತಂಡ ಕೂಡ ಈ ಸಾಧನೆ ಮಾಡಿತ್ತು. ಇದೀಗ ಭಾರತ ಕೂಡ ಈ ಸಾಧನೆ ಮಾಡಿದೆ. 2024ರಲ್ಲಿ ದಕ್ಷಿಣ ಆಫ್ರಿಕಾ ತಂಡವನ್ನು ಸೋಲಿಸಿ ಚಾಂಪಿಯನ್ ಆಗಿದ್ದ ಭಾರತ ಇದೀಗ 2026ರಲ್ಲಿ ಮತ್ತೆ ಫೈನಲ್ ಗೇರಿದೆ.

